ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಫೆಬ್ರವರಿ 17 ಶನಿವಾರ 2024

ಸಂಪುಟ: 44 | ಸಂಚಿಕೆ: 300 | ಪುಟಗಳು: 12 | ₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com ಜಾಹೀರಾತು: ad@mysurumithra.com





ಮೈಸೂರು ಮಿತ್ರ ಶನಿವಾರ 17 ಫೆಬ್ರವರಿ 2024

ಮೂವರಿಗೆ ಭಾರತರತ್ನ ಅರ್ಥಪೂರ್ಣ: ಸುತ್ತೂರು ಶ್ರೀಗಳು



ಡಾ.ಎಂ.ಎಸ್. ಸ್ವಾಮಿನಾಥನ್ ಅವರೊಂದಿಗೆ ಸುತ್ತೂರು ಶ್ರೀಗಳು

ಮೈಸೂರು, ಫೆ. 16–ಭಾರತ ಸರ್ಕಾರವು ರಾಷ್ಟ್ರದ ಅತ್ಯುನ್ನತ ನಾಗರಿಕ ಗೌರವವಾದ 'ಭಾರತರತ್ನ' ಪುರಸ್ಕಾರವನ್ನು ಮೂವರು ಪ್ರಾತಃಸ್ಮರಣೀಯರಿಗೆ ನೀಡಿರುವುದು ಅತ್ಯಂತ ಸಂತೋಷ ಮತ್ತು ಅರ್ಥಪೂರ್ಣ ಸಂಗತಿ ಎಂದು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ತಿಳಿಸಿದ್ದಾರೆ.

ಪಿ.ವಿ. ನರಸಿಂಹರಾವ್‌ರವರು ಭಾರತವನ್ನು ಹೊಸ ಆರ್ಥಿಕತೆಯ ಯುಗಕ್ಕೆ ಕೊಂಡೊಯ್ದ ಧೀಮಂತರು. ಸುಮಾರು ಹದಿನಾಲ್ಕು ಭಾಷೆಗಳ ಮೇಲೆ ಪ್ರಭುತ್ವ ಹೊಂದಿದ್ದರು, ಮುತ್ಸದ್ದಿಗಳಾಗಿದ್ದರು. ಡಾ. ಮನಮೋಹನ ಸಿಂಗ್‌ರಂಥ ಆರ್ಥಿಕ ತಜ್ಞರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವಂಥ ದೂರದೃಷ್ಟಿ ಉಳ್ಳವರಾಗಿದ್ದವರು. ಚೌಧರಿ ಚರಣ್‌ಸಿಂಗ್ ಅವರು ಕೃಷಿ ಸಮುದಾಯದ ಜನತೆಯನ್ನು ಒಟ್ಟುಗೂಡಿಸಿ ಒಂದು ಹೊಸ ರಾಜಕೀಯ ಸಮೀಕರಣವನ್ನು ಸಾಧಿಸಿದ್ದರು. ಅನಂತರ ಕೆಲವು ಕಾಲ ಭಾರತದ ಪ್ರಧಾನಮಂತ್ರಿಗಳೂ ಆಗಿ ನವ ಮನ್ವಂತರಕ್ಕೆ ನಾಂದಿ ಹಾಡಿದ್ದರು. ಡಾ. ಎಂ.ಎಸ್. ಸ್ವಾಮಿನಾಥನ್‌ರವರು ಆಧುನಿಕ ಭಾರತದ ಹಸಿರು ಕ್ರಾಂತಿಯ ಹರಿಕಾರರೆಂದೇ ಖ್ಯಾತರಾಗಿದ್ದರು. ಅಂತಾರಾಷ್ಟ್ರೀಯ ಮಟ್ಟದ ಕೃಷಿ ವಿಜ್ಞಾನಿಗಳಾಗಿದ್ದ ಅವರ ಸಂಶೋಧನೆಗಳ ಫಲವಾಗಿ ಇಂದು ಭಾರತ ಆಹಾರ ಕ್ಷೇತ್ರದಲ್ಲಿ ಸ್ವಾವಲಂಬನೆಯನ್ನು ಸಾಧಿಸುವಂತಾಗಿದೆ. ಅವರು ಕೊನೆಯ ದಿನಗಳಲ್ಲಿ ಸಮಾರಂಭವೊಂದರಲ್ಲಿ "ಮುಂದಿನ ದಿನಗಳಲ್ಲಿ ಆಹಾರ ಧಾನ್ಯಗಳನ್ನು ಬೆಳೆಯುವ ದೇಶಗಳಿಗೆ ಉತ್ತಮ ಭವಿಷ್ಯವಿದೆಯೇ ಹೊರತು ಬಂದೂಕುಗಳನ್ನು ತಯಾರಿಸುವ ದೇಶಗಳಿಗಲ್ಲ. ನಮ್ಮ ಯುವಕರು ಶ್ರಮದಾಯಕವೆಂದು, ಲಾಭದಾಯಕವಲ್ಲವೆಂದು ಕೃಷಿಯಲ್ಲಿ ತೊಡಗಿಸಿಕೊಳ್ಳಲು ಉತ್ಸಾಹ ತೋರುತ್ತಿಲ್ಲ. ಬಂದೂಕುಗಳನ್ನು ಕೊಳ್ಳಬಹುದು ಆದರೆ ಆಹಾರಧಾನ್ಯಗಳನ್ನು ಕೊಳ್ಳಲಾಗುವುದಿಲ್ಲ" ಎಂದು ಹೇಳಿದ್ದ ಈ ಮಾತುಗಳು ಇಡೀ ಜಗತ್ತೇ ಗಮನಿಸಬೇಕಾದುದಾಗಿದೆ. ಡಾ.ಎಂ.ಎಸ್. ಸ್ವಾಮಿನಾಥನ್‌ರವರು ಶ್ರೀ ಸುತ್ತೂರು ಮಠಕ್ಕೆ ಹಾಗೂ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿದ್ದುದು ನಮ್ಮ ಮನಸ್ಸಿನಲ್ಲಿ ಇನ್ನೂ ಹಸಿರಾಗಿಯೇ ಇದೆ ಭಾರತದ ಈ ಮೂವರು ಸಾಧಕರಿಗೆ ಅವರ ಅಭೂತಪೂರ್ವ ಸಾಧನೆಗಳಿಗಾಗಿ 'ಭಾರತ ರತ್ನ' ಪುರಸ್ಕಾರ ನೀಡಿರುವುದು ದೇಶದ ಕೃತಜ್ಞತೆಯ ಸಂಕೇತವಾಗಿದೆ. ನಿಜವಾದ ಸಾಧಕರಿಗೆ ಗೌರವ ತಲುಪಿರುವುದು ಅಭಿಮಾನದ ಸಂಗತಿ. ಈ ಹಿರಿಯರಿಗೆ ಗೌರವ ನೀಡಿದ ಭಾರತ ಸರ್ಕಾರಕ್ಕೆ ಅಭಿನಂದನೆಗಳು ಸಲ್ಲಬೇಕು ಎಂದು ಶ್ರೀಗಳು ಸಂತಸ ವ್ಯಕ್ತಪಡಿಸಿದ್ದಾರೆ.

ಮೈಸೂರಲ್ಲಿ ಸಾಮೂಹಿಕ ಸೂರ್ಯ ನಮಸ್ಕಾರ



ಮೈಸೂರು, ಫೆ. 16 (ಆರ್‌ಕೆ)– ಮೈಸೂರು ಯೋಗ ಒಕ್ಕೂಟದಿಂದ ಮೈಸೂರಿನ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಇಂದು ಬೆಳಗ್ಗೆ ಸಾಮೂಹಿಕ 108 ಸೂರ್ಯ ನಮಸ್ಕಾರ ನಡೆಯಿತು.

ಒಕ್ಕೂಟದ 23ನೇ ವಾರ್ಷಿಕೋತ್ಸವ ಮತ್ತು ರಥಸಪ್ತಮಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾರುತಿ ಯೋಗ ಕೇಂದ್ರ, ಚೈತನ್ಯ, ಪರಮಹಂಸ, ಮೈಸೂರು ಅಕಾಡೆಮಿ ಆಫ್ ಯೋಗ, ವೇದಿಕ್ ಹಾಗೂ ಚಿರಂಜೀವಿ ಸೇರಿದಂತೆ ಮೈಸೂರಿನ ಹಲವು ಯೋಗ ತರಬೇತಿ ಸಂಸ್ಥೆಗಳ 500ಕ್ಕೂ ಹೆಚ್ಚು ಯೋಗ ಪಟುಗಳು ಪಾಲ್ಗೊಂಡು 108 ಸೂರ್ಯ ನಮಸ್ಕಾರ ಮಾಡುವ ಮೂಲಕ ವಿವಿಧ ಆಯಾಮದ ಯೋಗ ಪ್ರದರ್ಶಿಸಿದರು.

ಶಾಲಾ–ಕಾಲೇಜು ವಿದ್ಯಾರ್ಥಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರಮುಖರು, ಯೋಗಾಸಕ್ತರು, ಸಾರ್ವಜನಿಕರು ಸೂರ್ಯ ನಮಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್. ಸುಬ್ರಮಣ್ಯ, ಮೈಸೂರು ಯೋಗ ಒಕ್ಕೂಟದ ಡಾ.ಎ.ಎಸ್. ಚಂದ್ರಶೇಖರ್, ಟಿ.ಜಲೇಂದ್ರಕುಮಾರ್, ಶಾಂತಾರಾಂ, ಡಾ. ಬಿ.ಪಿ. ಮೂರ್ತಿ, ಎಂ.ಎಸ್. ರಮೇಶ್‌ಕುಮಾರ್, ಕೆ.ಜಿ. ದೇವರಾಜು, ಶಿವಪ್ರಸಾದ್ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಸೂರ್ಯ ನಮಸ್ಕಾರದ ನಂತರ ಉಪಹಾರ ವಿತರಿಸಿದರು.

ನನ್ನ ಜೀವಮಾನದಲ್ಲೇ ಇಂತಹ ಕಳಪೆ ಬಜೆಟ್ ನೋಡಿಲ್ಲ

ಬೆಂಗಳೂರು, ಫೆ.16– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 2024–25ನೇ ಸಾಲಿಗೆ 3,71,383 ಕೋಟಿ ರೂಪಾಯಿ ಗಾತ್ರದ ಬಜೆಟ್ ಮಂಡಿಸಿದ್ದಾರೆ. ಈ ಬಜೆಟ್‌ಗೆ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ ಅವರು ಕಿಡಿಕಾರಿದ್ದಾರೆ.




ಸಿದ್ದರಾಮಯ್ಯ ಅವರು ಕಳಪೆ ಬಜೆಟ್ ಮಂಡಿಸಿದ್ದಾರೆ. ನನ್ನ ಜೀವಮಾನದಲ್ಲೇ ಇಂತಹ ಕಳಪೆ ಬಜೆಟ್ ನೋಡಿಲ್ಲ. ಹದಿನಾಲ್ಕು ಬಜೆಟ್‌ಗಳನ್ನು ಮಂಡಿಸಿರುವ ಸಿದ್ದರಾಮಯ್ಯರಿಂದ ಇಂತಹ ಕಳಪೆ ಬಜೆಟ್ ನಿರೀಕ್ಷಿಸಿರಲಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಾರಿ ಬಜೆಟ್‌ನ ಬಹುತೇಕ ಅಂಶ ಕೇಂದ್ರ ಸರ್ಕಾರವನ್ನು ದೂರಲು ಮೀಸಲಿಡಲಾಗಿದೆ. ದೆಹಲಿ ಪ್ರತಿಭಟನೆಯ ಮುಂದುವರೆದ ಭಾಗವಾಗಿರುವ ಈ ಆಯವ್ಯಯ ಮಾಡಲಾಗಿದೆ. ವಾಸ್ತವಿಕ ಅಂಕಿ ಸಂಖ್ಯೆ ನೀಡದೇ ಕಾಲ್ಪನಿಕ ಅಂಕಿ ಸಂಖ್ಯೆ ನೀಡಿದ್ದು, ಈ ಬಜೆಟ್ ರಾಜ್ಯದ ಜನರಿಗೆ ಮಾಡಿರುವ ಮೋಸದಂತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಜೆಟ್‌ನಲ್ಲಿ ಜಲಸಂಪನ್ಮೂಲ ಖಾತೆಗೆ ಯಾವುದೇ ಅನುದಾನ ನೀಡದೇ, ಡಿ.ಕೆ ಶಿವಕುಮಾರ್ ಅವರಿಗೂ ಮೋಸ ಮಾಡಲಾಗಿದೆ. ಅವರು ಮೇಕೆದಾಟು ಪಾದಯಾತ್ರೆ ಮಾಡಿದ್ದೇ ಸಾಧನೆಯಾಗಿದೆ. ಅದರಂತೆ ಕೃಷ್ಣಾ ಕೊಳ್ಳ, ಮಹದಾಯಿ, ನವಿಲೆ ಯೋಜನೆಗೆ ಅನುದಾನ ನಿಗದಿಪಡಿಸಿಲ್ಲ. ಬೆಂಗಳೂರು ಅಭಿವೃದ್ಧಿಗೆ ಯಾವುದೇ ಅನುದಾನ ನಿಗದಿಯಿಲ್ಲ. ಏಳನೇ ವೇತನ ಆಯೋಗದ ಅನುಷ್ಠಾನಕ್ಕೆ ಸ್ಪಷ್ಟ ಘೋಷಣೆಯಿಲ್ಲ. ಓಪಿಎಸ್ ಪುನರ್ ಜಾರಿ ಬಗ್ಗೆ ಚಕಾರ ಎತ್ತಿಲ್ಲ. ವರುಣ ಕ್ಷೇತ್ರಕ್ಕೆ ಎರಡು ಸಾವಿರ ಕೋಟಿ ಕೊಟ್ಟು, ಬೇರೆ ಕ್ಷೇತ್ರಗಳಿಗೆ ಅನುದಾನ ನೀಡಿಲ್ಲ. 27,353 ಸಾವಿರ ಕೋಟಿ ರಾಜಸ್ವ ಕೊರತೆ ಬಜೆಟ್ ಮಂಡಿಸಿರುವುದು, ರಾಜ್ಯ ಆರ್ಥಿಕ ದಿವಾಳಿಯಾಗುತ್ತಿರುವುದರ ಸ್ಪಷ್ಟ ಸೂಚನೆಯಾಗಿದೆ. ಕಾಂಗ್ರೆಸ್ ಆಡಳಿತದಿಂದ ರಾಜ್ಯ ದಿವಾಳಿ ಆಗುವುದರಲ್ಲಿ ಯಾವುದೇ ಸಂಶಯವಿಲ್ಲ. ಹಣಕಾಸು ಪರಿಸ್ಥಿತಿಯನ್ನು ದಿವಾಳಿಯಂಚಿಗೆ ತಂದು ನಿಲ್ಲಿಸುವ ಅತ್ಯಂತ ಕಳಪೆ ಬಜೆಟ್ ಇದಾಗಿದೆ ಎಂದು ಮಾಜಿ ಯಡಿಯೂರಪ್ಪ ಹೇಳಿದ್ದಾರೆ.

ಅತೀ ಹೆಚ್ಚು ಸಾಲ ಮಾಡಿರುವುದೇ ಸಿದ್ದರಾಮಯ್ಯ ಬಜೆಟ್ ದಾಖಲೆ: ಬೊಮ್ಮಾಯಿ

ಬೆಂಗಳೂರು, ಫೆ16– 15 ಬಾರಿ ಬಜೆಟ್ ಮಂಡಿಸಿ, 1.5 ಲಕ್ಷ ಕೋಟಿ ಸಾಲ ಮಾಡಿರುವ ದಾಖಲೆ ಸೃಷ್ಟಿಸಿರುವ ಸಿದ್ದರಾಮಯ್ಯ ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಸುಳ್ಳಿನ ಕಂತೆಯ ರಾಜಕೀಯ ಬಜೆಟ್ ಮಂಡಿಸಿದ್ದಾರೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.



ಬಜೆಟ್‌ಗೆ ಪ್ರತಿಕ್ರಿಯೆ ನೀಡಿದ ಅವರು, ಕೇಂದ್ರ ಸರ್ಕಾರವನ್ನು ವಿರೋಧಿಸಲು ಬಜೆಟ್ ಅನ್ನು ಬಳಸಿಕೊಂಡಿದ್ದಾರೆ. ಬಜೆಟ್‌ನ ಪಾವಿತ್ರ್ಯತೆಯನ್ನು ಸಿದ್ದರಾಮಯ್ಯ ಹಾಳು ಮಾಡಿದ್ದಾರೆ. ಕೇಂದ್ರ ಸರ್ಕಾರದ ಅನುದಾನ ಪಡೆಯಲು ಅನೇಕ ವೇದಿಕೆಗಳಿವೆ. ಜಿಎಸ್‌ಟಿ ಕೌನ್ಸಿಲ್ ಇದೆ. ನೀತಿ ಆಯೋಗ ಇದೆ. ಒಂದು ಬಾರಿಯೂ ನೀತಿ ಆಯೋಗದ ಸಭೆಗೆ ಹಾಜರಾಗದೇ, ಆ ಸಂದರ್ಭದಲ್ಲಿ ಮಾತನಾಡದೇ ಬಜೆಟ್‌ನಲ್ಲಿ ಕೇಂದ್ರ ಸರ್ಕಾರವನ್ನು ವಿರೋಧಿಸುತ್ತಿರುವುದು ರಾಜಕೀಯ ಕಾರಣಕ್ಕೆ ರಾಜಕೀಯಕ್ಕಾಗಿ ಬಜೆಟ್ ಬಳಸಿಕೊಂಡಿರುವುದು ಖಂಡನೀಯ ಎಂದು ಹೇಳಿದರು.

ಜನರ ಮೇಲೆ ಸಿದ್ದರಾಮಯ್ಯಗೆ ಸಿಟ್ಟಿದೆ, ಬಜೆಟ್‌ನಲ್ಲಿ ಅದು ಕಾಣುತ್ತಿದೆ

ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಕಿಡಿ

ಬೆಂಗಳೂರು, ಫೆ16– ಇದು ಡಿಪಿಆರ್ ಬಜೆಟ್, ಈ ಬಜೆಟ್ ಮೂಲಕ ಸಿದ್ದರಾಮಯ್ಯ ರಾಜ್ಯದ ವಿನಾಶಕ್ಕೆ ಬುನಾದಿ ಹಾಕಿದ್ದಾರೆ. ಬಿಜೆಪಿ ಬಜೆಟ್ ವೇಳೆ ಸಿದ್ದರಾಮಯ್ಯ ಕಿವಿಗೆ ಹೂವು ಇಟ್ಟುಕೊಂಡಿದ್ದರು. ಈಗ 7 ಕೋಟಿ ಕನ್ನಡಿಗರ ಕಿವಿಗೆ ಹೂವು ಇಟ್ಟಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿ ಕಿಡಿಕಾರಿದ್ದಾರೆ.



ಬಜೆಟ್ ಬಗ್ಗೆ ಮಾತನಾಡಿದ ಅವರು, ಸರ್ಕಾರದಿಂದ ಯಾವುದಾದರೂ ಯೋಜನೆ ಜಾರಿ ಮಾಡುವ ಮುನ್ನ ಸಮಗ್ರ ಯೋಜನಾ ವರದಿ ಅಂತ ಮಾಡುತ್ತಾರೆ. ಆ ಡಿಪಿಆರ್ ಆದ ಮೇಲೆ ಏನೆಲ್ಲಾ ಆಗುತ್ತದೆ ಎನ್ನುವುದು ಎಲ್ಲರಿಗೂ ಗೊತ್ತಿರುವ ವಿಷಯ. ಈ ಬಜೆಟ್ ಕೂಡ ಹಾಗೆಯೇ ಇದೆ. ಈ ಬಜೆಟ್ ಅನ್ನು ನೋಡಿದರೆ ಇದು ನಾಳೆ ಬಾ ಸರಕಾರದಂತೆ ಇದೆ ಎಂದು ಟೀಕಿಸಿದರು.

ಬಜೆಟ್ ಓದುವಾಗಲೇ ನನಗೆ ಅನಿಸಿದ್ದು ಅವರಲ್ಲಿ ವಿಶ್ವಾಸದ ಕೊರತೆ ಎದ್ದು ಕಾಣುತ್ತಿದೆ ಎಂದು. ಅವರು ಗ್ಯಾರಂಟಿಯ ಗುಂಗಿನಿಂದ ಇನ್ನೂ ಹೊರಗೇ ಬಂದಿಲ್ಲ. 10 ತಿಂಗಳು ಕಳೆದರೂ ಇನ್ನೂ ಗ್ಯಾರಂಟಿಗಳ ಬಗ್ಗೆಯೇ ಕನವರಿಕೆ ಮಾಡುತ್ತಿದ್ದಾರೆ. ಸಿದ್ದರಾಮಯ್ಯ ಅವರ 15ನೇ ಬಜೆಟ್ ಇದು. ರಾಜ್ಯದ ಇತಿಹಾಸದಲ್ಲಿ 15 ಬಜೆಟ್ ಗಳನ್ನು ಮಂಡಿಸುವವರು ಮುಂದೆ ಬರುತ್ತಾರೋ ಇಲ್ಲವೋ ಗೊತ್ತಿಲ್ಲ. ಸಿದ್ದರಾಮಯ್ಯ ಅವರಿಗೆ ಆಡಳಿತದಲ್ಲಿ ಸಾಕಷ್ಟು ಅನುಭವ ಇದೆ. ಆದರೆ, ಬಜೆಟ್ ನೋಡಿದರೆ ಯಾವುದೇ ರೀತಿಯ ವಿಶ್ವಾಸ ಮೂಡುತ್ತಿಲ್ಲ ಈ ಎಂದು ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು.

ಬಜೆಟ್ 10 ಪುಟ ದಾಟೋ ಮೊದಲೇ ಸಭಾತ್ಯಾಗ ಮಾಡಿದ್ದು ರಾಜಕೀಯ ಅಲ್ವಾ?: ಬಿಜೆಪಿ ವಿರುದ್ಧ ಪ್ರಿಯಾಂಕ್ ಖರ್ಗೆ ಕಿಡಿ

ಬೆಂಗಳೂರು, ಫೆ.16– ಕರ್ನಾಟಕ ಬಜೆಟ್‌ನ 10 ಪುಟಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಓದುವ ಮೊದಲೇ ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿರುವುದು ರಾಜಕೀಯ ಅಲ್ಲವೇ ಎಂದು ಐಟಿ–ಬಿಟಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.



ವಿಧಾನಸೌಧ'ದಲ್ಲಿ ಶುಕ್ರವಾರ ಮಾಧ್ಯಮಗಳ ಜತೆ ಮಾತನಾಡಿದ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ನಾವು ಸಂಪೂರ್ಣ ಬಜೆಟ್ ಆಲಿಸಿದ ಬಳಿಕ ವಿರೋಧ ಮಾಡಿದ್ದೇವೆ. ಆದರೆ ಬಿಜೆಪಿ ಸದಸ್ಯರು ಬಜೆಟ್ ಪ್ರತಿ ಹತ್ತು ಪುಟ ದಾಟುವ ಮೊದಲೇ ಬಹಿಷ್ಕಾರ ಮಾಡಿದ್ದಾರೆ, ಇದು ರಾಜಕೀಯ ಅಲ್ಲದೆ ಮತ್ತೇನು ಎಂದು ಪ್ರಶ್ನಿಸಿದರು.

ನೀವು ಜನರಿಗೆ ಉತ್ತರ ಕೊಡಲು ಕಲಿಯಿರಿ. ಬದಲಾಗಿ ಸಭಾತ್ಯಾಗ ಮಾಡಬೇಡಿ. ಸಾಲ ಮಾಡಿ ತುಪ್ಪ ತಿಂದಿದ್ದೀರಿ ಎಂದು ಹೇಳೋದು ತಪ್ಪಾ? ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಆರ್ಥಿಕ ಹಾಗೂ ಸಾಮಾಜಿಕ ಸಮಾನತೆ ಕೊಡುವ ನಿಟ್ಟಿನಲ್ಲಿ ಬಜೆಟ್ ಮಂಡಿಸಲಾಗಿದೆ. ಬಿಜೆಪಿಗರೇ ಮೊಸರಲ್ಲಿ ಕಲ್ಲು ಹುಡುಕೋದು ಬಿಟ್ಟು ಕನ್ನಡಿಗರ ಏಳಿಗೆಗಾಗಿ ಕೆಲಸ ಮಾಡಿ ಎಂದು ಪ್ರಿಯಾಂಕ್ ಖರ್ಗೆ ಸಲಹೆ ನೀಡಿದರು.

ಪ್ರಿಯಾಂಕಾ ಗಾಂಧಿ ಆಸ್ಪತ್ರೆಗೆ ದಾಖಲು

ನವದೆಹಲಿ:ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ವಾದ್ರಾ ಅವರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಈ ಹಿನ್ನೆಲೆ ಶುಕ್ರವಾರ ಉತ್ತರಪ್ರದೇಶದ ಚಂದೌಲಿಯಲ್ಲಿ ನಡೆಯುತ್ತಿರುವ ಭಾರತ್ ಜೋಡೋ ಯಾತ್ರೆಯಲ್ಲಿ ಭಾಗಿಯಾಗುವುದಿಲ್ಲ ಎಂದು ಪ್ರಿಯಾಂಕಾ ಗಾಂಧಿ ಸ್ಪಷ್ಟಪಡಿಸಿದ್ದಾರೆ.



ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿರುವ ಕುರಿತು ಸ್ವತಃ ಪ್ರಿಯಾಂಕ ಗಾಂಧಿ ಟ್ವಿಟ್ಟರ್ ಮೂಲಕ ತಿಳಿಸಿದ್ದಾರೆ.

ದೆಹಲಿಯಲ್ಲಿ ರೈತರ ಬಂಧನ ಖಂಡಿಸಿ ಮೈಸೂರಲ್ಲಿ ಪ್ರತಿಭಟನೆ



ಪ್ರತಿಭಟನಾನಿರತ ರೈತರನ್ನು ಪೊಲೀಸರು ವಶಕ್ಕೆ ಪಡೆಯುತ್ತಿರುವುದು.

ಮೈಸೂರು, ಫೆ.16(ಜಿಎ)–ದೆಹಲಿ, ರಾಜಸ್ಥಾನದ ಗಡಿಯಲ್ಲಿ ರೈತರನ್ನು ಬಂಧಿಸಿರುವುದನ್ನು ಖಂಡಿಸಿ ಕೇಂದ್ರ ಸರ್ಕಾರದ ವಿರುದ್ಧ ರಾಜ್ಯ ರೈತ ಸಂಘಟನೆ ಹಾಗೂ ಕಬ್ಬು ಬೆಳೆಗಾರರ ಸಂಘವು ಮೈಸೂರು–ನಂಜನಗೂಡು ರಸ್ತೆಯಲ್ಲಿರುವ ಎಪಿಎಂಸಿ ಜಂಕ್ಷನ್ ಬಳಿ ಶುಕ್ರವಾರ ಮಾನವ ಸರಪಳಿ ನಿರ್ಮಿಸಿ, ಪ್ರತಿಭಟನೆ ನಡೆಸಿತು.

ಮೈಸೂರು ಜಿಲ್ಲೆಯ ವಿವಿಧ ಭಾಗದಿಂದ ಆಗಮಿಸಿದ ನೂರಾರು ರೈತರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ರಸ್ತೆಗೆ ಅಡ್ಡಲಾಗಿ ಕುಳಿತು ರಸ್ತೆ ತಡೆ ಮಾಡಿದರು. ದೇಶದ ಎಲ್ಲಾ ರೈತರು, ಕೂಲಿಕಾರರು, ಕಾರ್ಮಿಕರು ಒಂದಾಗಿ ದೆಹಲಿ ಚಲೋ ಚಳವಳಿ ನಡೆಸುತ್ತಿದ್ದು, ಅವರ ಮೇಲೆ ಪೊಲೀಸರು ದಬ್ಬಾಳಿಕೆ ನಡೆಸುತ್ತಿರುವುದು ಸರಿಯಲ್ಲ ಎಂದು ಅವರು ಖಂಡಿಸಿದರು. ರಾಜಸ್ಥಾನದ ಗಡಿಯಲ್ಲಿ ರೈತರ ಮೇಲೆ ಹಲ್ಲೆ ಮಾಡಿರುವುದು ಖಂಡನೀಯ. ಪ್ರಧಾನಿ ಮೋದಿ ಮಾತುಕತೆ ನಡೆಸಿ ರೈತರ ಸಮಸ್ಯೆ ಬಗೆಹರಿಸಬೇಕು. ದೇಶದ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ಡಾ. ಎಂ.ಎಸ್.ಸ್ವಾಮಿ ನಾಥನ್ ವರದಿಯಂತೆ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆ ಹಿನ್ನೆಲೆಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಗಿ, ನೂರಾರು ವಾಹನಗಳು ಸಾಲುಗಟ್ಟಿ ನಿಂತವು. ಪ್ರತಿಭಟನೆ ಕೈಬಿಡುವಂತೆ ಪೊಲೀಸ್ ಅಧಿಕಾರಿಗಳು ಮನವಿ ಮಾಡಿದರೂ ಲೆಕ್ಕಿಸದೆ ನೂರಾರು ರೈತರು ಸುಮಾರು ಒಂದು ತಾಸು ರಸ್ತೆ ತಡೆ ನಡೆಸಿದರು. ಮನವಿಗೆ ಪ್ರತಿಭಟನಾಕಾರರು ಸ್ಪಂದಿಸದಿದ್ದಾಗ ಪೊಲೀಸರು ಅವರನ್ನು ಬಂಧಿಸಿ, ಸಂಚಾರಕ್ಕೆ ಅವಕಾಶ ಮಾಡಿಕೊಟ್ಟರು. ನಂತರ ರೈತರನ್ನು ಬಿಡುಗಡೆಗೊಳಿಸಲಾಯಿತು.

ಪ್ರತಿಭಟನೆಯಲ್ಲಿ ಮುಖಂಡರಾದ ಅತ್ತಹಳ್ಳಿ ದೇವರಾಜ್, ಕಿರಗಸೂರು ಶಂಕರ್, ಪಿ.ಸೋಮಶೇಖರ್, ಪರಶಿವಮೂರ್ತಿ, ಮಾರ್ಬಳ್ಳಿ ನೀಲಕಂಠಪ್ಪ, ಕಾಟೂರು ಮಹದೇವಸ್ವಾಮಿ, ಎಚ್.ಡಿ ಕೋಟೆ ಸುನಿಲ್, ಬನ್ನೂರು ಸೂರಿ, ಲಕ್ಷ್ಮೀಪುರ ವೆಂಕಟೇಶ್, ಮಾದೇವ್ರ, ಶಿವಸ್ವಾಮಿ ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದರು.

ನಿಧನ



ಎಂ.ಎಸ್. ವೇಣುಗೋಪಾಲ್

ಮೈಸೂರು, ಫೆ. 16–ಮೈಸೂರಿನ ಕುವೆಂಪುನಗರದ ಜೆಎಸ್‌ಎಸ್ ಕಾನೂನು ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಎಂ.ಎಸ್.ವೇಣುಗೋಪಾಲ್ ಶುಕ್ರವಾರ (ಫೆ.16) ನಿಧನರಾದರು. ಇವರ ಆತ್ಮಕ್ಕೆ ಶಾಂತಿಯನ್ನು, ಕುಟುಂಬ ವರ್ಗಕ್ಕೆ ದುಃಖ ಭರಿಸುವ ಶಕ್ತಿಯನ್ನು ಭಗವಂತನು ನೀಡಲಿ ಎಂದು ಕಾಲೇಜಿನ ಬೋಧಕ, ಬೋಧಕೇತರ ಮತ್ತು ವಿದ್ಯಾರ್ಥಿಗಳು ಜೆಎಸ್‌ಎಸ್ ಕಾನೂನು ಕಾಲೇಜಿನಲ್ಲಿ ಒಂದು ನಿಮಿಷ ಮೌನಾಚರಣೆ ಮೂಲಕ ಸಂತಾಪ ಸೂಚಿಸಲಾಯಿತು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.2.2024 ಶನಿವಾರ, ಮಳೆ ನಕ್ಷತ್ರ: ಭರಣಿ 6.2.2024 ರಿಂದ 19.02.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಶುಕ್ಲ ಪಕ್ಷ,
ತಿಥಿ: ಅಷ್ಟಮಿ, ನಕ್ಷತ್ರ: ಕೃತ್ತಿಕ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಅರ್ಕಧಾಮ :** ಶ್ರೀ ಅರ್ಕ ಮಹಾ ಗಣಪತಿ ಪ್ರತಿಷ್ಠಾಪನೆ ಹಾಗೂ ಬ್ರಹ್ಮ ಕಲಶೋತ್ಸವ, ಬೆಳಗ್ಗೆ 8 ಗಂಟೆಗೆ ಚಂಡಿಕಾಯಾಗ, ಮ. 12ಕ್ಕೆ ಮಹಾ ಪೂರ್ಣಾಹುತಿ, ಶ್ರೀ ಯೋಗಿ ಶ್ರೀನಿವಾಸ ಅರ್ಕ ಅವರಿಂದ ಅನುಗ್ರಹ ಭಾಷಣ, ಮ. 1.30ಕ್ಕೆ ಪ್ರಸಾದ ವಿನಿಯೋಗ, ಸ್ಥಳ: ಕಣಿಯನಹುಂಡಿ ಗೇಟ್, ಗದ್ದಿಗೆ ಮುಖ್ಯ ರಸ್ತೆ.

■ **ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚ್ಯ ವಿದ್ಯಾ ಸಂಶೋಧನಾಲಯ :** 'ಶ್ರೀಮದ್ರಾಮಾಯಣ ಚಿಂತನಮ್' ವಿಷಯ ಕುರಿತು ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣ, ಮುಖ್ಯ ಅತಿಥಿಗಳು: ಸೋಸಲೆ ಶ್ರೀ ವ್ಯಾಸರಾಜ ಮಠದ ಪೀಠಾಧಿಪತಿಗಳಾದ ಶ್ರೀ 108 ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮಿಗಳು, ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಪ್ರಾಚ್ಯವಿದ್ಯಾ ಸಂಶೋಧನಾಲಯದ ನಿರ್ದೇಶಕ ಡಾ. ವಿ.ಪಿ. ಮಧುಸೂಚನಾಚಾರ್ಯ, ಸ್ಥಳ: ವಿಜ್ಞಾನ ಭವನದ ಸೆಮಿನಾರ್ ಹಾಲ್, ಮಾನಸ ಗಂಗೋತ್ರಿ, ಬೆಳಗ್ಗೆ 10 ಗಂಟೆಗೆ.

■ **ತ್ರಯೀನ್ಯಾಸ್ ಶ್ರೀವಿದ್ಯಾ ಫೌಂಡೇಷನ್ :** ಶ್ರೀ ಶ್ಯಾಮಲಾ ನವರಾತ್ರಿ ಮಹೋತ್ಸವ, ಬೆಳಗ್ಗೆ 8.30ಕ್ಕೆ ಮಹಾಭಿಷೇಕ, ಸಪ್ತಶತಿ ಪಾರಾಯಣ, ಶ್ರೀಚಕ್ರಾರ್ಚನೆ, ನವಾವರಣ ಪೂಜಾ, ಸಂಜೆ 5.30ಕ್ಕೆ ಶ್ರೀ ದಶಶ್ಯಾಮಲಾ ಹೋಮ, ಶ್ರೀ ಹಯಗ್ರೀವ, ಶ್ರೀ ವಾಗ್ವಾದಿನಿ, ಶ್ರೀ ವಾಗೀಶ್ವರಿ, ಶ್ರೀಶುಕ ಶ್ಯಾಮಲಾ, ಶ್ರೀ ವೀಣಾ ಶ್ಯಾಮಲಾ, ಶ್ರೀ ವೇಣು ಶ್ಯಾಮಲಾ, ಶ್ರೀ ಶಾರಿಕಾ ಶ್ಯಾಮಲಾ, ಶ್ರೀ ಲಘು ಶ್ಯಾಮಲಾ ಶ್ರೀ ನಕುಲಿ ಶ್ಯಾಮಲಾ, ಶ್ರೀ ಹಸಂತಿ ಶ್ಯಾಮಲಾ, ಶ್ರೀ ರಾಜಶ್ಯಾಮಲಾ ಆವರಣಾಂಗ ಹೋಮ, ಪೂರ್ಣಾಹುತಿ, ಪ್ರಸಾದ ವಿನಿಯೋಗ, ಸ್ಥಳ: ತ್ರಯೀನ್ಯಾಸ್ ಫೌಂಡೇಷನ್ ಆವರಣ, ಜಯಲಕ್ಷ್ಮಿಪುರಂ.

■ **ರಾಮಸನ್ಸ್ ಬೊಂಬೆ ಮನೆ :** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಧಾರ್ಮಿಕ ದತ್ತಿ ಇಲಾಖೆ :** ಮೈಸೂರು ಅರಮನೆ ಕೋಟೆ ಆವರಣದಲ್ಲಿರುವ ಶ್ರೀ ತ್ರಿಣೇಶ್ವರಸ್ವಾಮಿಯವರ ಬ್ರಹ್ಮೋತ್ಸವ, ಬೆಳಗ್ಗೆ 9.30ಕ್ಕೆ ಧ್ವಜಾರೋಹಣ, ರಾತ್ರಿ 7ಕ್ಕೆ ಬೇರಿತಾಡನ, ದೇವತಾಹ್ವಾನ, ಬಲಿಪ್ರಧಾನ ವೃಷಭ ವಾಹನೋತ್ಸವ, ಸ್ಥಳ: ಶ್ರೀ ತ್ರಿಣೇಶ್ವರಸ್ವಾಮಿ ದೇವಸ್ಥಾನ, ಅರಮನೆ ಆವರಣ.

■ **ಜೆಎಸ್‌ಎಸ್ ಕಾನೂನು ಕಾಲೇಜು :** ರಾಜ್ಯ ಮಟ್ಟದ ಮಾದರಿ ವಿಧಾನಸಭಾ ಮತ್ತು ಶಾಸನಗಳ ಕರಡು ರಚನಾ ಸ್ಪರ್ಧೆ, ಅಧ್ಯಕ್ಷತೆ : ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್, ಉಪಸ್ಥಿತರು : ಎಲ್.ಕೆ. ಅತಿಕ್, ನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10ಕ್ಕೆ

■ **ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಭಾಗೀಯ ಪತ್ರಗಾರ ಕಚೇರಿ ಹಾಗೂ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು :** ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ –50 ಹಾಗೂ ಕರ್ನಾಟಕ ನಾಮಕರಣ 50ರ ಸಂಭ್ರಮಾಚರಣೆ ಮಹೋತ್ಸವದ ಅಂಗವಾಗಿ 'ಕರ್ನಾಟಕ ಏಕೀಕರಣ ಮತ್ತು ಕನ್ನಡ ಅಸ್ಮಿತೆ' ಕುರಿತ ಎರಡು ದಿನಗಳ ವಿಚಾರ ಸಂಕಿರಣ ಮತ್ತು ಚಾರಿತ್ರಿಕ ದಾಖಲೆಗಳ ಹಾಗೂ ಛಾಯಾಚಿತ್ರ ಪ್ರದರ್ಶನ, ಉಪಸ್ಥಿತರು : ಮುಖ್ಯಮಂತ್ರಿ ಸಿದ್ದರಾಮಯ್ಯ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಅಧ್ಯಕ್ಷತೆ : ಚಾಮರಾಜ ಕ್ಷೇತ್ರದ ವಿಧಾನಸಭಾ ಸದಸ್ಯ ಕೆ.ಹರೀಶ್‌ಗೌಡ, ಮುಖ್ಯ ಅತಿಥಿಗಳು : ಪಶುಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಸಂಗಪ್ಪ ತಂಗಡಗಿ, ಉನ್ನತ ಶಿಕ್ಷಣ ಸಚಿವ ಸಚಿವ ಡಾ. ಎಂ.ಸಿ.ಸುಧಾಕರ ಹಾಗೂ ಅರಣ್ಯ ವಸತಿ ಮತ್ತು ವಿಹಾರಧಾಮಗಳ ನಿಗಮದ ಅಧ್ಯಕ್ಷ ಅನಿಲ್‌ಕುಮಾರ್, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸ್ ಪ್ರಸಾದ್, ಸುಮಲತಾ ಅಂಬರೀಶ್, ಶಾಸಕರಾದ ತನ್ವೀರ್ ಸೇಠ್, ಜಿ.ಟಿ ದೇವೇಗೌಡ, ರವಿಶಂಕರ್.ಡಿ, ಜಿ.ಡಿ ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ, ಟಿ.ಎಸ್ ಶ್ರೀವತ್ಸ ಹಾಗೂ ವಿಧಾನ ಪರಿಷತ್‌ನ ಸದಸ್ಯರಾದ ಮರಿತಿಬ್ಬೇಗೌಡ, ಎಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು.ಜಿ. ಮಾದೇಗೌಡ, ಸ್ಥಳ: ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು ಆವರಣ, ಶೇಷಾದ್ರಿ ಅಯ್ಯರ್ ರಸ್ತೆ, ಬೆಳಗ್ಗೆ 10ಕ್ಕೆ

■ **ರಾಹುಲ್ ನರ್ಸರಿ ಹಾಗೂ ಹಿರಿಯ ಪ್ರಾಥಮಿಕ ಶಾಲೆ :** ಸಂಸದ ವಿ. ಶ್ರೀನಿವಾಸಪ್ರಸಾದ್ ಅವರ ಅನುದಾನದ ಅಡಿಯಲ್ಲಿ ನಿರ್ಮಾಣಗೊಂಡಿರುವ ಶಾಲಾ ಕೊಠಡಿಗಳ ಉದ್ಘಾಟನೆ ಹಾಗೂ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ, ಸಾನ್ನಿಧ್ಯ: ಅಮೃತಾನಂದಮಯಿ ಮಠದ ಶ್ರೀ ಪ್ರಸಾದಾಮೃತ ಚೈತನ್ಯ, ಉದ್ಘಾಟನೆ: ಸಂಸದ ವಿ. ಶ್ರೀನಿವಾಸಪ್ರಸಾದ್, ಅಧ್ಯಕ್ಷತೆ: ಸಂಸ್ಥೆಯ ಅಧ್ಯಕ್ಷ ಮ. ವೆಂಕಟರಾಮ್‌ಜೀ, ಮುಖ್ಯ ಅತಿಥಿ: ಶಾಸಕ ಜಿ.ಟಿ. ದೇವೇಗೌಡ, ಹಿರಿಯ ನ್ಯಾಯವಾದಿ ಓ. ಶಾಂ ಭಟ್, ಸ್ಥಳ: ಶಾಲಾ ಆವರಣ, ಮಹದೇವಪುರ, ಬೆಳಗ್ಗೆ 11 ಗಂಟೆಗೆ.

■ **ವ್ಯವಸ್ಥಾಪಕರು :** 'ಮೈಸೂರು ಫ್ಯಾಷನ್ ವೀಕ್' ಏಳನೇ ಆವೃತ್ತಿ, ಸ್ಥಳ: ಮೈಸೂರು ಯೂನಿಯನ್ ಆವರಣ, ಸಂಜೆ 4 ರಿಂದ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು (ಮೈಸೂರು) ಹಾಗೂ ಹಿಮಾಲಯ ಪ್ರತಿಷ್ಠಾನ (ಮೈಸೂರು) :** ಮಹರ್ಷಿ ಪತಂಜಲಿಯ ಸಂಸ್ಮರಣೋತ್ಸವ ಹಾಗೂ ಯೋಗ ಸಾಧಕರಿಗೆ ಮಹರ್ಷಿ ಪತಂಜಲಿ ಸದ್ಭಾವನೆ, ಯೋಗ ವಿಭೂಷಣ, ಯೋಗ ಭೂಷಣ ಪ್ರಶಸ್ತಿ ಪ್ರದಾನ–2024, ಸ್ಥಳ: ಕನ್ನಡ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಸಂಜೆ 5 ಗಂಟೆಗೆ.

■ **ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿ ಸಂಘ :** ಸಂಘದ ಸಂಸ್ಥಾಪಕ ಸದಸ್ಯರಾದ ದಿವಂಗತ ಪ್ರೊ. ಜಿ.ಹೆಚ್. ನಾಯಕ್ ಅವರ ಸ್ಮರಣಾರ್ಥ 'ನೆನಪಿನಂಗಳದೊಳಗಿನ ಇಣುಕು ನೋಟ' ಭಾವಸ್ಮೃತಿ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಬೆಂಗಳೂರು ಉತ್ತರ ವಿವಿ ಕುಲಪತಿ ಡಾ. ನಿರಂಜನ ವಾನಳ್ಳಿ, ಮಹಾಜನ ಕಾಲೇಜು ವಿಶ್ರಾಂತ ಪ್ರಾಂಶುಪಾಲ ಡಾ. ತಿಮ್ಮೇಗೌಡ, ಸಂಘದ ಕಾರ್ಯದರ್ಶಿ ತೇಜಸ್ವಿ ನಾಯಕ್, ಸ್ಥಳ: ಸಂಘದ ಆವರಣ, ಜಿ ಅಂಡ್ ಹೆಚ್ ಬ್ಲಾಕ್ ಕುವೆಂಪುನಗರ, ಸಂಜೆ 5 ಗಂಟೆಗೆ.

■ **ಕಲಾಸುರುಚಿ :** ಡಾ.ಶಿವರಾಮ ಕಾರಂತ ಅವರ ಕಾದಂಬರಿ ಆಧಾರಿತ, ಶಶಿಧರ ಡೋಂಗ್ರೆ ಅವರು ರೂಪಾಂತರಿಸಿದ 'ಅಳಿದ ಮೇಲೆ' ನಾಟಕ ಪ್ರದರ್ಶನ, ಸ್ಥಳ: ಕಿರು ರಂಗಮಂದಿರ, ರಂಗಾಯಣ ಆವರಣ, ಸಂಜೆ 6.30ಕ್ಕೆ.

■ **ಕಲಾ ಸುರುಚಿ :** 'ಕಥೆ ಕೇಳೋಣ ಬನ್ನಿ ಕಾರ್ಯಕ್ರಮ – 815, ಕಥೆ ಹೇಳುವವರು: ಶ್ರೀಮತಿ ಸೌಮ್ಯ ಕೋಟಿ, ಗೃಹಿಣಿ, ಮೈಸೂರು, ಸ್ಥಳ: ಸುರುಚಿ ರಂಗಮನೆ, 476, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ

■ **ನಾದವಿದ್ಯಾಲಯ ಅಕಾಡೆಮಿ ಆಫ್ ಮ್ಯೂಸಿಕ್ ಅಂಡ್ ಡ್ಯಾನ್ಸ್ :** ಗುರು ವಿದುಷಿ ಶ್ರೀಮತಿ ಮಿತ್ರಾ ನವೀನ್ ಅವರ ಶಿಷ್ಯೆ ಕು. ಅರ್ಪಿತಾ ಉದಯ ನಾಯಕ ಅವರ ಭರತನಾಟ್ಯ ರಂಗ ಪ್ರವೇಶ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ನೃತ್ಯಗಂಗಾ ಪ್ರದರ್ಶನ ಕಲಾ ಕೇಂದ್ರದ ನಿರ್ದೇಶಕರಾದ ವಿದುಷಿ ರೂಪಶ್ರೀ ಮಧುಸೂದನ್, ಸ್ಥಳ: ಜಗನ್ಮೋಹನ ಅರಮನೆ, ಸಂಜೆ 5 ರಿಂದ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ವಿಪ್ರಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಇನ್ಫೋಸಿಸ್ ಪ್ರತಿಷ್ಠಾನ, ಬೆಂಗಳೂರು, ಭಾರತೀಯ ವಿದ್ಯಾಭವನ, ಬೆಂಗಳೂರು–ಮೈಸೂರು :** 124ನೇ ಸಾಂಸ್ಕೃತಿಕ ಕಾರ್ಯಕ್ರಮ, ವಿದ್ವಾನ್ ಅನಂತ ಕುಲಕರ್ಣಿ ಅವರಿಂದ ದಾಸಸೌರಭ, ವಿಷ್ಣು ಜೋಷಿ–ತಬಲ, ಅಶ್ವಿನ್ ವಾಲವಾಲ್‌ಕರ್–ಹಾರ್ಮೋನಿಯಂ, ಸುಧನ್ವ ಕಮಲಾಪುರ್–ತಾಳ, ಸಥಳ: ಭಾರತೀಯ ವಿದ್ಯಾಭವನ, ವಿಜಯನಗರ 1ನೇ ಹಂತ, ಸಂಜೆ 6ಕ್ಕೆ.

■ **ಎನ್.ಆರ್. ಮೊಹಲ್ಲಾ ಸಂಗೀತ ಸಭಾ ಚಾರಿಟೆಬಲ್ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಶ್ರೀ ತ್ಯಾಗರಾಜರ ಹಾಗೂ ಶ್ರೀ ಪುರಂದರದಾಸರ ಆರಾಧನಾ ಮಹೋತ್ಸವ, ವಿದ್ವಾನ್ ಸಂದೀಪ್ ನಾರಾಯಣ್ ಅವರಿಂದ ಗಾಯನ, ವಿದ್ವಾನ್ ಬಿ. ಅನಂತಕೃಷ್ಣನ್–ಪಿಟೀಲು, ವಿದ್ವಾನ್ ತುಮಕೂರು ಬಿ. ರವಿಶಂಕರ್–ಮೃದಂಗ, ವಿದ್ವಾನ್ ಜಿ.ಎಸ್. ರಾಮಾನುಜನ್–ಘಟಂ, ಸ್ಥಳ: ಶ್ರೀ ಪ್ರಸನ್ನ ಗಣಪತಿ ದೇವಸ್ಥಾನ, ಎನ್.ಆರ್. ಮೊಹಲ್ಲಾ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಸಿ.ಎಫ್.ಟಿ.ಆರ್.ಐ ಶೋಧ ಅನುಶೋಧ–ಪ್ರಾಯೋಜಿತ ಕಾರ್ಯಕ್ರಮ, 6.40 ಪದ ಸಂಸ್ಕೃತಿ–ಕನ್ನಡ ಪದಗಳ ಬಳಕೆ–ಕಲಿಕೆಯ ವಿಶಿಷ್ಟ ಬಾನುಲಿ ಸರಣಿ –ಡಾ. ಸಂಗಮೇಶ್ ಸವದತ್ತಿಮಠ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಸಿ.ಅಶ್ವಥ್, ಶ್ರೀನಿವಾಸ ಉಡುಪ, 8.30 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಸ್ಕೂಟರ್‌ನಲ್ಲಿಯೇ ತಾಯಿಗೆ ಭಾರತ ಯಾತ್ರೆ ಮಾಡಿಸಿದ ಮೈಸೂರಿನ ಡಿ. ಕೃಷ್ಣಕುಮಾರ್ ಅವರೊಂದಿಗೆ ಸಂವಾದ. ನಡೆಸಿಕೊಡುತ್ತಾರೆ ದಿವಾಕರ ಹೆಗಡೆ, 10.00 ಸುಮಂತ್ ಮಂಜುನಾಥ್–ವಯೋಲಿನ್ ವಾದನ

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆ–ಎಸ್. ಪ್ರವೀಣ್, 3.30 ಮಕ್ಕಳ ಮಂಟಪ–ಮೈಸೂರಿನ ಸದ್ವಿದ್ಯಾ ಶಾಲೆಯ ಮಕ್ಕಳಿಂದ ಕಾಯಕ್ರಮ ವೈವಿಧ್ಯ, 4.00 ನಾಟಕ, 4.30 ನೆನಪಿನಂಗಳ–ಕನ್ನಡದ ಖ್ಯಾತ ವಿದ್ವಾಂಸರು, ಗೀತ ನಾಟಕಕಾರರಾದ ಪು.ತಿ.ನರಸಿಂಹಾಚಾರ್ ಅವರೊಂದಿಗೆ ಸುಜನಾ ಅವರು ನಡೆಸಿದ್ದ ಸಂವಾದ, 6.50 ಕೃಷಿರಂಗ–ತೋರಣ ಹೂರಣ–ವಾರದ ಗ್ರಾಮೀಣ ಕಾರ್ಯಕ್ರಮ, ಪ್ರಸ್ತುತಿ– ಎನ್. ಕೇಶವಮೂರ್ತಿ, ಆರ್. ಲೋಕೇಶ್ವರಿ, ಡಾ. ಮೈಸೂರ್ ಉಮೇಶ್, ಪರಾಗ–ಬೇಸಾಯದ ಬದುಕು ಸರಾಗ– ಬಾನುಲಿ ಸರಣಿ, 8.00 ಯುವವಾಣಿ, 9.30 ನೆಮ್ಮದಿಯ ಸೂಚ್ಯಂಕ–ಮಾತನಾಡುತ್ತಾರೆ ಮೈಸೂರಿನ ಡಾ.ಜಿ.ಅಚ್ಯುತರಾವ್, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಯಶ್ವಂತ್ ವೈಷ್ಣವ್– ತಬಲ, ಮೃಣಾಲ್ ಮೋಹನ್ ಉಪಾಧ್ಯಾಯ್ – ಪಖವಾಜ್



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಫೆಬ್ರವರಿ 17 ಶನಿವಾರ 2024

ಸಂಪುಟ: 44 | ಸಂಚಿಕೆ: 300 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಚಾಮರಾಜನಗರದಲ್ಲಿ ವಿಜ್ಞಾನ ತಾರಾಲಯ

- 40 ಕೋಟಿ ರೂ. ವೆಚ್ಚದಲ್ಲಿ ಯಳಂದೂರಿನಲ್ಲಿ 100 ಹಾಸಿಗೆ ಸಾಮರ್ಥ್ಯದ ತಾಲೂಕು ಆಸ್ಪತ್ರೆ
- ಜಿಲ್ಲೆಯಲ್ಲಿ ಐಪಿಎಚ್ಎಲ್ ಪ್ರಯೋಗಾಲಯ ಸ್ಥಾಪನೆ.
- ಸಿಮ್ಸ್ ಆಸ್ಪತ್ರೆಗೆ ವೈದ್ಯಕೀಯ ಉಪಕರಣ, ಪರೋಪಕರಣ ಖರೀದಿಗೆ 50 ಕೋಟಿ ರೂ.
- ಚಾಮರಾಜನಗರದಲ್ಲಿ ವಿಜ್ಞಾನ ಕೇಂದ್ರದ ತಾರಾಲಯ ಕಾರ್ಯಾರಂಭ.
- ಬಂಡೀಪುರ, ಕಬಿನಿಯಲ್ಲಿ ಇಂಟರ್ ಪ್ರಿಟೇಷನ್ ಸೆಂಟರ್.
- ಬಂಡೀಪುರದಲ್ಲಿ ಹೊಸ ಕಾರ್ಯಪಡೆ ರಚನೆ.

ಕೊಡಗಲ್ಲಿ ಆರೋಗ್ಯ, ಕ್ರೀಡೆ, ಪ್ರವಾಸೋದ್ಯಮಕ್ಕೆ ಕೊಡುಗೆ

- ಕೊಡಗು ಮೆಡಿಕಲ್ ಕಾಲೇಜಿನಲ್ಲಿ ಸಾಂಕ್ರಾಮಿಕ ರೋಗ ಮತ್ತು ಸೋಂಕು ಪತ್ತೆ ಹಚ್ಚಲು ಪ್ರಯೋಗಾಲಯ.
- ಜಿಲ್ಲಾ ಕೇಂದ್ರದಲ್ಲಿ 'ಡೇ ಕೇರ್ ಕಿಮೋಥೆರಫಿ' ಕೇಂದ್ರ ಸ್ಥಾಪನೆ.
- ಪೊನ್ನಂಪೇಟೆಯಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಕ್ರೀಡಾ ವಸತಿ ನಿಲಯ.
- ವಿರಾಜಪೇಟೆಯಲ್ಲಿ 12 ಕೋಟಿ ರೂ. ವೆಚ್ಚದಲ್ಲಿ ನ್ಯಾಯಾಲಯ ಸಂಕೀರ್ಣ.
- ಹಾರಂಗಿ ಹಿನ್ನೀರಿನ ಸಾಹಸಿ ಪ್ರವಾಸೋದ್ಯಮ ಮತ್ತಷ್ಟು ಅಭಿವೃದ್ಧಿ.
- ಮಡಿಕೇರಿಯಲ್ಲಿ ತಾರಾಲಯ ಸ್ಥಾಪನೆ.
- ಸ್ವಯಂ ಚಾಲಿತ ಪರೀಕ್ಷಾ ಪಥ ಸ್ಥಾಪನೆ.
- ಕೊಡವ ಭಾಷೆ ಅಭಿವೃದ್ಧಿಗೆ ಅಕಾಡೆಮಿ ಮೂಲಕ ಕ್ರಮ.

ಸಿದ್ದರಾಮಯ್ಯ ಬಜೆಟ್ ಆದ್ಯತೆ

ಗ್ಯಾರಂಟಿ, ಅಭಿವೃದ್ಧಿ

● ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ 2024–25ನೇ ಸಾಲಿನ ಬಜೆಟ್ ಮಂಡನೆ; ಜನರ ಮೇಲೆ ತೆರಿಗೆ ಹಾಕದೆ, ವಿವಿಧ ಮೂಲದಿಂದ ಆದಾಯ ಸಂಗ್ರಹ ಘೋಷಣೆ ● ನೋಂದಣಿ–ಮುದ್ರಾಂಕದಿಂದ 10,000, ಅಬಕಾರಿಯಿಂದ 3,000, ಸಾರಿಗೆಯಿಂದ 13,000, ಗಣಿ–ಭೂವಿಜ್ಞಾನದಿಂದ 9,000, ವಾಣಿಜ್ಯ, ತೆರಿಗೆ ಇಲಾಖೆಯಿಂದ 1,10,000 ಕೋಟಿ ಆದಾಯ ಸಂಗ್ರಹ ನಿರೀಕ್ಷೆ

ಬೆಂಗಳೂರು, ಫೆ.16(ಕೆಎಂಶಿ)–ಗ್ಯಾರಂಟಿ ಯೋಜನೆಗಳನ್ನು ಮುಂದುವರೆಸುವುದು, ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳುವ ಸಲುವಾಗಿ 1,05,246 ಲಕ್ಷ ಕೋಟಿ ಸಾಲ ಪಡೆಯುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಮುಂಗಡಪತ್ರದಲ್ಲಿ ಪ್ರಸ್ತಾಪಿಸಿದ್ದಾರೆ.

ವಿಧಾನಸಭೆಯಲ್ಲಿಂದು 2024–25ನೇ ಸಾಲಿನ ಬಜೆಟ್ ಮಂಡಿಸಿ, ಜನರ ಮೇಲೆ ಯಾವುದೇ ಭಾರ ಹೇರದಿದ್ದರೂ ವಿವಿಧ ಮೂಲಗಳಿಂದ ಅಲ್ಪ ಪ್ರಮಾಣದಲ್ಲಿ ಸಂಪನ್ಮೂಲ ಕ್ರೂಢೀಕರಣ ಮಾಡುವುದಾಗಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಯೋಜನೆಗಳ ಅಡಿಯಲ್ಲೇ ಅಭಿವೃದ್ಧಿಗೆ ಒತ್ತು ನೀಡಿರುವ ಮುಖ್ಯಮಂತ್ರಿ ಅವರು, ಯಾವುದೇ ಹೊಸ ಜನಪರ ಯೋಜನೆಗಳನ್ನು ಪ್ರಕಟಿಸಿಲ್ಲ. ಕೃಷಿ, ನೀರಾವರಿ, ನಗರಾಭಿವೃದ್ಧಿ, ಆರೋಗ್ಯ ಮತ್ತು ಸಮಾಜ ಕಲ್ಯಾಣ ಇಲಾಖೆಗೆ ಒತ್ತು ನೀಡಿರುವ ಮುಖ್ಯಮಂತ್ರಿ ಅವರು, ಕೆಲವು ಹಳೆಯ ಯೋಜನೆಗಳಿಗೆ ಮರುಜೀವ ನೀಡುವುದರ ಜೊತೆಗೆ ಹೊಸ ಕಾರ್ಯಕ್ರಮಗಳನ್ನು ಕೈಗೆತ್ತಿಕೊಂಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ 3,71,383 ಕೋಟಿ ರೂ.ಗಳ ಗಾತ್ರದ ಮುಂಗಡಪತ್ರ ಮಂಡಿಸಿ, ಪೂರ್ಣ ಆಯ–ವ್ಯಯ ಅಂಗೀಕಾರಕ್ಕೆ ಮನವಿ ಮಾಡಿಕೊಂಡಿದ್ದಾರೆ. ಮುಂಗಡ ಪತ್ರದಲ್ಲಿ ಘೋಷಿಸಿರುವ ಸರ್ಕಾರದ ಎಲ್ಲಾ ಕಾರ್ಯಕ್ರಮಗಳನ್ನು ಜಾರಿಗೆ ತರಲು ಇಷ್ಟು ಹಣದ ಅಗತ್ಯವಿದೆ. ನಮ್ಮ ಸಂಪನ್ಮೂಲ ಕ್ರೂಢೀಕರಣ ಅಗತ್ಯ ಪ್ರಮಾಣದಲ್ಲಿ ಇರದ ಕಾರಣ ನಮ್ಮ ಇತಿಮಿತಿಯೊಳಗೆ ಸಾಲ ಪಡೆಯುವುದಾಗಿ ಸಮರ್ಥನೆ ಮಾಡಿಕೊಂಡಿದ್ದಾರೆ.

ವಿತ್ತೀಯ ಕೊರತೆಯನ್ನು ಜಿಎಸ್‌ಡಿಪಿಯ ಶೇಕಡ 3ರೊಳಗೆ ಮತ್ತು ಒಟ್ಟು ಹೊಣೆಗಾರಿಕೆಗಳನ್ನು ಜಿಎಸ್‌ಡಿಪಿಯ ಶೇಕಡ 25ರೊಳಗೆ ಕಾಯ್ದುಕೊಳ್ಳುವ ಮೂಲಕ ವಿತ್ತೀಯ ಶಿಸ್ತನ್ನು ಪಾಲಿಸಿರುವುದಾಗಿ ಹೇಳಿಕೊಂಡಿದ್ದಾರೆ. ನೋಂದಣಿ ಮತ್ತು ಮುದ್ರಾಂಕದಿಂದ ಹೆಚ್ಚುವರಿಯಾಗಿ 10,000 ಕೋಟಿ ರೂ., ಅಬಕಾರಿ ಬಾಬ್ತಿನಿಂದ 3,000 ಕೋಟಿ ರೂ., ಸಾರಿಗೆ ಇಲಾಖೆಯಿಂದ 13,000, ಗಣಿ ಮತ್ತು ಭೂವಿಜ್ಞಾನದಿಂದ 9,000, ವಾಣಿಜ್ಯ ಮತ್ತು ತೆರಿಗೆ ಇಲಾಖೆಯಿಂದ 1,10,000 ಕೋಟಿ ರೂ. ಆದಾಯ ಸಂಗ್ರಹ ಗುರಿ ನಿಗದಿ ಪಡಿಸಲಾಗಿದೆ ಎಂದರು. ಮದ್ಯ ಘೋಷಿತ ಸ್ಲ್ಯಾಬ್‌ಗಳನ್ನು ತರ್ಕಬದ್ಧಗೊಳಿಸುವ ಮೂಲಕ ನೆರೆ ರಾಜ್ಯದ ಮದ್ಯದ ದರಗಳಿಗೆ ಅನುಗುಣವಾಗಿ ಐಎಂಎಲ್ ಹಾಗೂ ಬಿಯರ್ ಸ್ಲ್ಯಾಬ್‌ಗಳನ್ನು ಪರಿಷ್ಕರಿಸುವುದಾಗಿ ತಿಳಿಸಿದ್ದಾರೆ.



ಬಜೆಟ್ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

ಹಿರಿಯ ನಾಗರಿಕರಿಗೆ 'ಅನ್ನ–ಸುವಿಧ'; ಮನೆ ಬಾಗಿಲಿಗೆ ಆಹಾರಧಾನ್ಯ

ಹಸಿವು ಮುಕ್ತ ಕರ್ನಾಟಕ ನಿರ್ಮಾಣಕ್ಕಾಗಿ 'ಅನ್ನ–ಸುವಿಧ' ಎಂಬ ಹೊಸ ಯೋಜನೆಯನ್ನು ಘೋಷಣೆ ಮಾಡಿರುವ ಮುಖ್ಯಮಂತ್ರಿ ಅವರು, ಇದರಡಿ 80 ವರ್ಷ ದಾಟಿದ ಹಿರಿಯ ನಾಗರಿಕರು ಮಾತ್ರ ಇರುವ ಮನೆಯ ಬಾಗಿಲಿಗೆ ಆಹಾರಧಾನ್ಯಗಳನ್ನು ಪೂರೈಸಲಾಗುವುದು. ಸರ್ಕಾರದ ವತಿಯಿಂದಲೇ 50 'ಕೆಫೆ ಹೋಟೆಲ್'ಗಳನ್ನು ಸ್ಥಾಪಿಸಲಾಗುವುದು, ಇದಕ್ಕಾಗಿ 7.5 ಕೋಟಿ ರೂ. ಮೀಸಲಿರಿಸಿದ್ದು, ಈ ಹೋಟೆಲ್‌ಗಳಲ್ಲಿ ಸ್ಥಳೀಯ ಆಹಾರಕ್ಕೆ ಒತ್ತು ನೀಡಲಾಗುವುದು.

ಸಮಗ್ರ ಕೃಷಿ ಉತ್ತೇಜಿಸುವ 'ರೈತ ಸಮೃದ್ಧಿ' ಯೋಜನೆ ಘೋಷಿಸಿರುವ ಮುಖ್ಯಮಂತ್ರಿ ಅವರು, ಇದರನ್ವಯ ಕೃಷಿ ಮತ್ತು ಪೂರಕ ಚಟುವಟಿಕೆಗಳ ನೀತಿ ಮತ್ತು ಯೋಜನೆಗಳ ಸಂಯೋಜನೆ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕಾಗಿ 'ಮುಖ್ಯಮಂತ್ರಿ ಅಭಿವೃದ್ಧಿ ಪ್ರಾಧಿಕಾರ' ರಚಿಸುವುದಾಗಿ ಘೋಷಿಸಿದ್ದಾರೆ. ಕೈಗೆಟಕುವ ದರದಲ್ಲಿ ಸಂಸ್ಕರಿಸಿದ ಸಿರಿಧಾನ್ಯಗಳು ಹಾಗೂ ಮೌಲ್ಯವರ್ಧಿತ ಸಿರಿಧಾನ್ಯ ಉತ್ಪನ್ನಗಳನ್ನು ಒದಗಿಸಲು ನಮ್ಮ ಮಿಲೆಟ್ ಎಂಬ ಹೊಸ ಕಾರ್ಯಕ್ರಮ ಪ್ರಕಟಿಸಿದ್ದಾರೆ. ಕೇಂದ್ರ ಸರ್ಕಾರದ ಜನ ವಿರೋಧಿ ನಿಲುವುಗಳಿಂದಾಗಿ ಅಸಮಾನತೆ ಹೆಚ್ಚಳ, ಕೆಲವೇ ಜನರ ಬಳಿ ಸಂಪತ್ತಿನ ಶೇಖರಣೆ ಹಾಗೂ ಪಟ್ಟಭದ್ರ ಹಿತಾಸಕ್ತಿಗಳ ಹೆಚ್ಚುತ್ತಿರುವ ಪ್ರಭಾವ ಮುಂತಾದ ಅನಪೇಕ್ಷಿತ ಬೆಳವಣಿಗೆಗೆ ಎಡೆ ಮಾಡಿದೆ ಎಂದು ಮುಖ್ಯಮಂತ್ರಿ ತಮ್ಮ ಬಜೆಟ್‌ನಲ್ಲಿ ದಾಖಲಿಸಿದ್ದಾರೆ. ಕೇಂದ್ರದ ವಿರುದ್ಧ ತಮ್ಮ ● 6ನೇ ಪುಟಕ್ಕೆ

ಪ್ರಸಕ್ತ ಸಾಲಿನಲ್ಲಿ 36 ಲಕ್ಷ ರೈತರಿಗೆ 27 ಸಾವಿರ ಕೋಟಿ ಸಾಲ ನೀಡುವ ಗುರಿ

● ಸಹಕಾರಿ ವಲಯ ಬಲಪಡಿಸಲು ಆದ್ಯತೆ; ಡಿಸಿಸಿ ಬ್ಯಾಂಕ್‌ಗಳ ಬಾಕಿ 132 ಕೋಟಿ ಬಿಡುಗಡೆ ● ಸಹಕಾರಿ ಸಂಘಗಳ ಆಡಳಿತ ಮಂಡಳಿಯಲ್ಲಿ ಮೀಸಲಾತಿ ● ರೈತ ವಿರೋಧಿ ಎಪಿಎಂಸಿ ತಿದ್ದುಪಡಿ ಕಾಯ್ದೆ ಹಿಂಪಡೆಯಲು ತೀರ್ಮಾನ




ಬೆಂಗಳೂರು, ಫೆ.16(ಕೆಎಂಶಿ)– ಪ್ರಸಕ್ತ ಸಾಲಿನಲ್ಲಿ ರಾಜ್ಯದ 36 ಲಕ್ಷಕ್ಕಿಂತ ಹೆಚ್ಚು ರೈತರಿಗೆ ದಾಖಲೆಯ 27,000 ಕೋಟಿ ರೂ.ಗಳಷ್ಟು ಸಾಲ ವಿತರಿಸುವ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ 2024–25ನೇ ಸಾಲಿನ ಮುಂಗಡಪತ್ರದಲ್ಲಿ ಘೋಷಿಸಿದ್ದಾರೆ. ಗ್ರಾಮೀಣ ಆರ್ಥಿಕತೆಯ ಜೀವನಾಡಿಯಾಗಿರುವ ಸಹಕಾರ ವಲಯ ಬಲಪಡಿಸುವುದು ಸರ್ಕಾರದ ಆದ್ಯತೆಯಾಗಿದೆ. ಸಹಕಾರಿ ಬ್ಯಾಂಕುಗಳ ಆರ್ಥಿಕ ಸ್ಥಿರತೆಯನ್ನು ಕಾಪಾಡಲು ಡಿಸಿಸಿ ಬ್ಯಾಂಕುಗಳಿಗೆ ಬಾಕಿ ಇರುವ 132 ಕೋಟಿ ರೂ. ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಡಿಸಿಸಿ ಮತ್ತು ಪಿಕಾರ್ಡ್ ಬ್ಯಾಂಕುಗಳ ಮಧ್ಯಮಾವಧಿ ಮತ್ತು ದೀರ್ಘಾವಧಿ ಸುಸ್ತಿ ಸಾಲಗಳ ಬಡ್ಡಿ ಮನ್ನಾ ಮಾಡಲು ಸರ್ಕಾರ ತೀರ್ಮಾನಿಸಿದ್ದು, ಇದರಿಂದ ಸುಮಾರು 57,000 ರೈತರಿಗೆ ಅನುಕೂಲವಾಗಲಿದೆ. ಇದರಿಂದ ಡಿಸಿಸಿ/ಪಿಕಾರ್ಡ್ ಬ್ಯಾಂಕುಗಳಿಗೆ 496 ಕೋಟಿ ರೂ.ಗಳಷ್ಟು ಸಾಲ ಮರುಪಾವತಿಯಾಗುವ ನಿರೀಕ್ಷೆ ಇರುವುದರಿಂದ ಬ್ಯಾಂಕುಗಳ ಆರ್ಥಿಕ ಪರಿಸ್ಥಿತಿಯಲ್ಲಿ ಗಣನೀಯ ಸುಧಾರಣೆಯಾಗಲಿದೆ. ಈ ಉದ್ದೇಶಕ್ಕಾಗಿ 450 ಕೋಟಿ ರೂ. ಅನುದಾನ ಒದಗಿಸಲಾಗುವುದು ಎಂದರು. ಕರ್ನಾಟಕ ರಾಜ್ಯದ ಇತರ ಪ್ರಮುಖ ● 6ನೇ ಪುಟಕ್ಕೆ

1 ಬಜೆಟ್‌ನಲ್ಲಿ ಮೇಕೆದಾಟು ಅಣೆಕಟ್ಟೆ ನಿರ್ಮಾಣದ ದಿಟ್ಟತನ ಘೋಷಣೆ

- ಇದರ ಜೊತೆಗೆ ಪ್ರಮುಖ ನೀರಾವರಿ ಯೋಜನೆಗಳ ಪ್ರಸ್ತಾಪ
- ಕುಡಿಯುವ ನೀರು, ಕೃಷಿ, ಕೈಗಾರಿಕೆಗಳಿಗೆ ನೀರು ಪೂರೈಸಲು 200 ಕೋಟಿ ವೆಚ್ಚದಲ್ಲಿ ಸಣ್ಣಪುಟ್ಟ 115 ಕಾಮಗಾರಿ ಪ್ರಕಟ

ಪುಟ 5



2 ರೈತಪರ ಯೋಜನೆಗಳ ಒಗ್ಗೂಡಿಸಿ 'ಕರ್ನಾಟಕ ರೈತ ಸಮೃದ್ಧಿ' ಯೋಜನೆ

- ರೈತರ ಆದಾಯದಲ್ಲಿ ಸುಸ್ಥಿರತೆ ಕಾಯ್ದುಕೊಳ್ಳಲು ಬೆಂಬಲ
- ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಪಶು ಸಂಗೋಪನೆ ಸಮನ್ವಯಕ್ಕಾಗಿ ಸಿಎಂ ಅಧ್ಯಕ್ಷತೆಯಲ್ಲಿ ಕೃಷಿ ಅಭಿವೃದ್ಧಿ ಪ್ರಾಧಿಕಾರ

ಪುಟ 5



3 ತೀವ್ರ ಅಸ್ವಸ್ಥ ರೋಗಿಗಳಿಗೆ ಚಿಕಿತ್ಸೆಗಾಗಿ ಆಧುನಿಕ ಕ್ರಿಟಿಕಲ್ ಕೇರ್ ಘಟಕ ಸ್ಥಾಪನೆ

- ಪ್ರತಿ ಜಿಲ್ಲೆಯಲ್ಲಿ ಸ್ಥಾಪಿಸಲು ಕ್ರಮ; ಪ್ರಸಕ್ತ ಸಾಲಿನಲ್ಲಿ 15 ಜಿಲ್ಲೆಯಲ್ಲಿ ನಿರ್ಮಾಣ ಪ್ರಾರಂಭ
- ಯಳಂದೂರು ಸೇರಿ ಹಲವು ತಾಲೂಕಲ್ಲಿ ಆಸ್ಪತ್ರೆ ನಿರ್ಮಾಣ
- 2025ರೊಳಗೆ ಕ್ಷಯ ರೋಗ ನಿರ್ಮೂಲನೆ

ಪುಟ 5



3,71,383 ಕೋಟಿ ಬಜೆಟ್

ತವರು ಮೈಸೂರಿಗೆ ಮಹತ್ವದ ಕೊಡುಗೆ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಈ ಬಾರಿ ತಮ್ಮ ತವರು ಜಿಲ್ಲೆಗೆ ಹತ್ತು ಹಲವು ಕಾರ್ಯಕ್ರಮಗಳನ್ನು ರೂಪಿಸಿ ಅವುಗಳನ್ನು ಅನುಷ್ಠಾನಗೊಳಿಸುವ ಗುರಿಯಿಂದ ಮುಂಗಡಪತ್ರದಲ್ಲಿ ಆ ಎಲ್ಲಾ ಯೋಜನೆಗಳನ್ನು ಪ್ರಸ್ತಾಪಿಸಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಥಾಪಿಸಿದ ಮೈಸೂರು ವೈದ್ಯಕೀಯ ಮಹಾವಿದ್ಯಾಲಯದ ಶತಮಾನೋತ್ಸವದ ನೆನಪಿಗಾಗಿ ಕೆ.ಆರ್.ಆಸ್ಪತ್ರೆ ಆವರಣದಲ್ಲಿ 75 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಹೊರರೋಗಿ ವಿಭಾಗದ ಕಟ್ಟಡ ನಿರ್ಮಾಣ ಮಾಡಲಾಗುವುದು. ಮೈಸೂರು ನಗರ ಸಮೀಪದಲ್ಲಿ ಇಂಟೆಗ್ರೇಟೆಡ್ ಟೌನ್‌ಶಿಪ್ ಅಭಿವೃದ್ಧಿಪಡಿಸುವುದಾಗಿ ಹೇಳಿರುವ ಅವರು, ಇಲ್ಲಿನ ನಗರದ ಹೊರವಲಯದಲ್ಲಿ ಪೆರಿಫೆರಲ್ ರಿಂಗ್ ರಸ್ತೆ ನಿರ್ಮಿಸಲು ಕಾರ್ಯಸಾಧು ವರದಿಯನ್ನು ಸಿದ್ಧಪಡಿಸಲಾಗುವುದು.

ಮೈಸೂರು ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳಿಗೆ ಮೂಲಸೌಕರ್ಯ ಕಲ್ಪಿಸಲು 2 ಸಾವಿರ ಕೋಟಿ ರೂ.ಗಳನ್ನು ಮೀಸಲಿರಿಸಿದ್ದಾರೆ. ● 6ನೇ ಪುಟಕ್ಕೆ

4 ಗ್ರಾಮೀಣ ಭಾಗದ ರಸ್ತೆ ಅಭಿವೃದ್ಧಿಗೆ 'ಪ್ರಗತಿ ಪಥ' ಯೋಜನೆ ಜಾರಿ

- 189 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ತಲಾ 50 ಕಿ.ಮೀ. ಉದ್ದದ ರಸ್ತೆಯಂತೆ 9450 ಕಿ.ಮೀ. ರಸ್ತೆ ಸಂಪರ್ಕ ಜಾಲ; 5400 ಕೋಟಿ ಅನುದಾನ ಮೀಸಲು
- ಸಮರ್ಥ ಗ್ರಾಮ ಸರ್ಕಾರಗಳಾಗಿ ರೂಪಿಸುವ ಪ್ರಸ್ತಾಪ

ಪುಟ 5



5 ಸಹಭಾಗಿತ್ವದಲ್ಲಿ ಕೆಆರ್‌ಎಸ್ ಬೃಂದಾವನ ವಿಶ್ವ ದರ್ಜೆ ಪ್ರವಾಸೋದ್ಯಮ ಕೇಂದ್ರವಾಗಿ ಅಭಿವೃದ್ಧಿ

ಪುಟ 5



6 ರಾಜ್ಯ ವಿದ್ಯುತ್ ಉತ್ಪಾದನೆ ಸಾಮರ್ಥ್ಯ 60 ಸಾವಿರ ಮೆಗಾವ್ಯಾಟ್‌ಗೆ ಹೆಚ್ಚಳ

- ಇಂಧನ ವಲಯದಲ್ಲಿ ಖಾಸಗಿಯವರಿಗೆ ಆದ್ಯತೆ
- 40 ಸಾವಿರ ಸೋಲಾರ್ ಪಂಪ್‌ಸೆಟ್ ಸ್ಥಾಪನೆ ಗುರಿ
- ವಿದ್ಯುತ್ ಚಾಲಿತ ವಾಹನಗಳಿಗೆ ಪ್ರೋತ್ಸಾಹಿಸಲು 2500 ಇವಿ ಚಾರ್ಜಿಂಗ್ ಕೇಂದ್ರ ಸ್ಥಾಪನೆ

ಪುಟ 5



ಮಂಡ್ಯಕ್ಕೆ ಮತ್ತೊಂದು ಸಕ್ಕರೆ ಕಾರ್ಖಾನೆ...

ರಾಜ್ಯ ಬಜೆಟ್‌ನಲ್ಲಿ ಮಂಡ್ಯ ಜಿಲ್ಲೆಗೆ ಅನೇಕ ಕೊಡುಗೆಗಳನ್ನು ನೀಡಿದ್ದಾರೆ. ಮಂಡ್ಯ ಜಿಲ್ಲೆಯ ರೈತರ ಜೀವನಾಡಿ ಮೈಷುಗರ್ ಕಾರ್ಖಾನೆ ಆವರಣದಲ್ಲಿ ರಾಜ್ಯ ಸರ್ಕಾರದ ಅನುದಾನ, ಇತರೆ ಮೂಲಗಳು, ಕಾರ್ಖಾನೆ ಆಸ್ತಿ ಹಾಗೂ ಅದರ ಬಾಡಿಗೆ ಸಂಪನ್ಮೂಲಗಳನ್ನು ಕ್ರೋಢೀಕರಿಸಿ ಹೊಸ ಸಕ್ಕರೆ ಕಾರ್ಖಾನೆ ನಿರ್ಮಿಸಲು ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. ಇದೇ ರೀತಿ ಕೆಆರ್‌ಎಸ್ ವಿಶ್ವದರ್ಜೆ ಪ್ರವಾಸಿ ತಾಣವಾಗಿಸುವುದು, ವಿಸಿ ಫಾರಂನಲ್ಲಿ ಕೃಷಿ ವಿವಿ ಸ್ಥಾಪನೆ, ನಾಲೆಗಳ ಆಧುನೀಕರಣಕ್ಕೆ ಒತ್ತು, ಆದಿಚುಂಚನಗಿರಿಯಲ್ಲಿ ವಿಜ್ಞಾನ ಕೇಂದ್ರ, ಮಿಮ್ಸ್‌ನಲ್ಲಿ ಕ್ರಿಟಿಕಲ್ ಕೇರ್ ಬ್ಲಾಕ್ ಸ್ಥಾಪನೆ, ಎಕ್ಸ್‌ಪ್ರೆಸ್ ವೇ ಬಳಿ ಮೇಲ್ಸೇತುವೆ ಹಾಗೂ ರೈಲ್ವೆ ಕೆಳಸೇತುವೆ ನಿರ್ಮಿಸಲು ಬಜೆಟ್‌ನಲ್ಲಿ ಹಣ ಮೀಸಲಿಟ್ಟಿರುವುದಾಗಿ ಅವರು ತಿಳಿಸಿದರು.

ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದ ಸಿಎಂ ಸಿದ್ದರಾಮಯ್ಯ!

ಬೆಂಗಳೂರು, ಫೆ.16– ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ 2ನೇ ಬಾರಿಗೆ ಮುಖ್ಯಮಂತ್ರಿಯಾಗಿ ಮೊದಲ ಪೂರ್ಣಕಾಲಿಕ ಬಜೆಟ್ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ಸೂಟ್‌ಕೇಸ್ ಬಿಟ್ಟು ಲಿಡ್ಕರ್ ಸಂಸ್ಥೆಯ ಲೆದರ್ ಬ್ಯಾಗ್‌ನಲ್ಲಿ ಬಜೆಟ್ ಪ್ರತಿಗಳನ್ನು ಹೊತ್ತು ತರುವ ಮೂಲಕ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದ್ದಾರೆ.

ಸಿದ್ದರಾಮಯ್ಯ ಅವರು ಈವರೆಗೆ ಬರೋಬ್ಬರಿ 14 ಬಜೆಟ್‌ಗಳನ್ನು ಮಂಡನೆ ಮಾಡಿದ ಖ್ಯಾತಿ ಹೊಂದಿದ್ದಾರೆ. ಇವರು ಯಾವಾಗಲೂ ಬ್ರಿಟಿಷರ ಸಂಪ್ರದಾಯದಂತೆ ಸೂಟ್‌ಕೇಸ್‌ನಲ್ಲಿ ಬಜೆಟ್ ಪ್ರತಿಗಳನ್ನು ಹೊತ್ತು ತಂದು ಅದನ್ನು ರಾಜ್ಯದ ಜನತೆಗೆ ತೋರಿಸಿ ಬಜೆಟ್ ಮಂಡನೆ ಮಾಡುತ್ತಿದ್ದರು. ಆದರೆ, ಈ ಬಾರಿ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದ್ದಾರೆ. ಈ ಹಿಂದಿನ ಸಂಪ್ರದಾಯದಂತೆ ಸೂಟ್‌ಕೇಸ್‌ನಲ್ಲಿ ಬಜೆಟ್ ಪ್ರತಿಗಳನ್ನು ಹೊತ್ತು ತರದೇ ಸರ್ಕಾರಿ ಸ್ವಾಮ್ಯದ ಲಿಡ್ಕರ್ ಸಂಸ್ಥೆಯ ಚರ್ಮದ ಬ್ಯಾಗ್‌ನಲ್ಲಿ ಬಜೆಟ್ ಪ್ರತಿಗಳನ್ನು ತುಂಬಿಕೊಂಡು ಬಂದು ಬಜೆಟ್ ಮಂಡಿಸಿದರು. ಬ್ರಿಟಿಷ್ ಆಡಳಿತದ ಕಾಲದಿಂದಲೂ ಇತ್ತೀಚಿನವರೆಗೆ ಸೂಟ್‌ಕೇಸ್‌ನಲ್ಲಿ ಬಜೆಟ್ ಪ್ರತಿಗಳನ್ನು ತಂದು ಬಜೆಟ್ ಮಂಡಿಸುವ ಸಂಪ್ರದಾಯ ಪಾಲನೆ ಮಾಡಲಾಗುತ್ತಿತ್ತು. ಕೇಂದ್ರ ಸರ್ಕಾರ ಮತ್ತು ಎಲ್ಲ ರಾಜ್ಯ ಸರ್ಕಾರಗಳೂ ಕೂಡ ಇದೇ ಸಂಪ್ರದಾಯ ಅನುಕರಿಸುತ್ತಿದ್ದವು. ಆದರೆ, ಮೊದಲ ಬಾರಿಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್ ಪ್ರತಿಗಳನ್ನು ತರಲು ಸೂಟ್‌ಕೇಸ್ ಬದಲಾಗಿ ಬ್ಯಾಗ್ ಬಳಕೆ ಮಾಡಿದ್ದರು. ಆದರೆ, ಈ ಬಾರಿ 2024ನೇ ಸಾಲಿನ ಮಧ್ಯಂತರ ಬಜೆಟ್ ಮಂಡನೆಗೆ ಟ್ಯಾಬ್ ಬಳಕೆ ಮಾಡಿದ್ದರು. ಸಿಎಂ ಸಿದ್ದರಾಮಯ್ಯ ಅವರಿಗಿಂತಲೂ ಮುಂಚಿತವಾಗಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಲೆದರ್ ಬ್ಯಾಗ್ ಬಳಕೆ ಮಾಡಿದ್ದರೂ ಅದು ಮುನ್ನೆಲೆಗೆ ಬರಲಿಲ್ಲ. ಆದರೆ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಲಿಡ್ಕರ್ ಸಂಸ್ಥೆಗೆ ಹೆಚ್ಚಿನ ಪ್ರಾಧಾನ್ಯತೆ ನೀಡಲಾಗಿದ್ದು, ನಟ ಡಾಲಿ ಧನಂಜಯ ಲಿಡ್ಕರ್ ಸಂಸ್ಥೆಗೆ ರಾಯಭಾರಿ ಆಗಿದ್ದಾರೆ. ಸಿಎಂ ಬಜೆಟ್ ಮಂಡನೆಗೆ ಲಿಡ್ಕರ್ ಸಂಸ್ಥೆಯ ಲೆದರ್ ಬ್ಯಾಗ್ ಬಳಕೆ ಮಾಡುತ್ತಿರುವುದರಿಂದ ಹೆಚ್ಚು ಮುನ್ನೆಲೆಗೆ ಬಂದಿದೆ.

ಬಡವರಿಗೆ ಕೊಳ್ಳುವ ಶಕ್ತಿ ಹೆಚ್ಚಳ; ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೂ ಒತ್ತು

ಬಿಜೆಪಿಗೆ ಸಂಸದೀಯ ವ್ಯವಸ್ಥೆಯಲ್ಲಿ ನಂಬಿಕೆ ಇಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಫೆ.16–ರಾಜ್ಯದ ಬಡವರು, ಮಹಿಳೆಯರು, ಯುವಕರು, ಪರಿಶಿಷ್ಟ ಜಾತಿ, ವರ್ಗದವರು, ಅಲ್ಪಸಂಖ್ಯಾತರಿಗೆ ಕೊಂಡುಕೊಳ್ಳುವ ಶಕ್ತಿ ಹೆಚ್ಚು ಮಾಡುವ ಪ್ರಯತ್ನ ಹಾಗೂ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡುವ ಪ್ರಯತ್ನವೂ ಬಜೆಟ್‌ನಲ್ಲಿ ಆಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು 2024–25ನೇ ಸಾಲಿನ ಆಯವ್ಯಯವನ್ನು ಮಂಡಿಸಿದ ನಂತರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ದೇಶದಲ್ಲಿ ನಿರುದ್ಯೋಗ, ಹಣದುಬ್ಬರದ ಸಮಸ್ಯೆಗಳಿಂದ ಬಡವರು ಜೀವನ ಸಾಗಿಸುವುದು ಕಷ್ಟವಾಗಿದೆ. ಬಡವರ ಕೊಳ್ಳುವ ಶಕ್ತಿಯನ್ನು ಹೆಚ್ಚು ಮಾಡಲು ಗ್ಯಾರಂಟಿ ಯೋಜನೆಗಳನ್ನು ರೂಪಿಸಲಾಗಿದೆ. ಈ ಆರ್ಥಿಕ ವರ್ಷದಲ್ಲಿ ನಾವು ಅಧಿಕಾರಕ್ಕೆ ಬಂದು 9 ತಿಂಗಳಾಗುವ ಮೊದಲೇ ನಾವು ಜನತೆಗೆ ಕೊಟ್ಟಿದ್ದ ಭರವಸೆಗಳನ್ನು ಈಡೇರಿಸಲಾಗಿದೆ. ಇದರೊಂದಿಗೆ ಕೃಷಿ, ನೀರಾವರಿ, ಲೋಕೋಪಯೋಗಿ, ಇಂಧನ, ಗ್ರಾಮೀಣಾಭಿವೃದ್ಧಿ, ಬರಗಾಲ ಎಲ್ಲವನ್ನೂ ಸಮರ್ಥವಾಗಿ ನಿಭಾಯಿಸುವ ದೃಷ್ಟಿಯಿಂದ ಹಾಗೂ ಅಭಿವೃದ್ಧಿಗೆ ಹಣ ಕೊಡುವ ಕೆಲಸವನ್ನು ಮಾಡಲಾಗಿದೆ ಎಂದು ಅಭಿಪ್ರಾಯಪಟ್ಟರು.

ಅಭಿವೃದ್ಧಿಗೂ ಅನುದಾನ: 2024–25ನೇ ಸಾಲಿಗೆ 3,71,383 ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಲಾಗಿದೆ. ಕಳೆದ ವರ್ಷ ಬಜೆಟ್ ಗಾತ್ರ 3,27,747 ಕೋಟಿ ರೂ. ಇತ್ತು. ಕಳೆದ ಬಜೆಟ್‌ಗಿಂತ 46,636 ಕೋಟಿ ರೂ. ಹೆಚ್ಚಾಗಿದೆ. ಜುಲೈನಲ್ಲಿ ಮಂಡಿಸಿದ ಬಜೆಟ್ ಗಾತ್ರಕ್ಕಿಂತ ಬೆಳವಣಿಗೆಯಲ್ಲಿ ಶೇ.13ರಷ್ಟು ಬೆಳವಣಿಗೆಯಾಗಿದೆ. ಗ್ಯಾರಂಟಿ ಜಾರಿಯಿಂದಾಗಿ ಆರ್ಥಿಕವಾಗಿ ದಿವಾಳಿಯಾಗಿದೆ. ಬಿಟ್ಟಿ ಗ್ಯಾರಂಟಿ ಎಂದು ಹೇಳಿ ಮಹಿಳೆಯರು, ಬಡವರಿಗೆ ಅವಮಾನಿಸಲಾಗಿದೆ. ಈ ವರ್ಷ 36,000 ಕೋಟಿ ರೂ. ಗ್ಯಾರಂಟಿಗಳಿಗೆ ಕೊಟ್ಟಿದ್ದರೂ ಕೂಡ ಅಭಿವೃದ್ಧಿಗೂ ಅನುದಾನವನ್ನು ಮೀಸಲಿರಿಸಿದ್ದೇವೆ. ಬರಗಾಲ ನಡುವೆಯೂ 240 ತಾಲೂಕುಗಳಲ್ಲಿ 223 ತಾಲೂಕುಗಳು ಬರಪೀಡಿತವಾಗಿದ್ದು ಸುಮಾರು 35,000 ಕೋಟಿ ರೂ. ಆಹಾರದ ಉತ್ಪಾದನೆಯಲ್ಲಿ ನಷ್ಟವಾಗಿದೆ. 18171 ಕೋಟಿ ರೂ.ಗಳನ್ನು ಎನ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಬರಪರಿಹಾರವನ್ನು ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಎನ್‌ಡಿಆರ್‌ಎಫ್ ಅನುದಾನ ನಿಗದಿ ಮಾಡುವುದು ಹಣಕಾಸು ಆಯೋಗದವರು. ಅದು ರಾಜ್ಯದಿಂದ ಸಂಗ್ರಹಿಸಿರುವ ಹಣ. ಕೇಂದ್ರ ಸರ್ಕಾರದ ಅನುದಾನವಲ್ಲ. ಐದು ತಿಂಗಳಾದರೂ ಒಂದು ರೂಪಾಯಿಯನ್ನೂ ಬಿಡುಗಡೆ ಮಾಡಿಲ್ಲ, ಸಭೆಯನ್ನೂ ಕರೆದಿಲ್ಲ ಎಂದು ವಿವರಿಸಿದರು.



ಸಿಎಂ ಸಿದ್ದರಾಮಯ್ಯ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಬಿಜೆಪಿಗೆ ಸಂಸದೀಯ ವ್ಯವಸ್ಥೆಯಲ್ಲಿ ನಂಬಿಕೆ ಇಲ್ಲ: ಬಿಜೆಪಿಯವರು ಬಾಯಿಗೆ ಬಂದಂತೆ ಮಾತನಾಡುತ್ತಾರೆ. ವಿಧಾನಸಭೆಯಲ್ಲಿ ಬಜೆಟ್ ಮಂಡಿಸುವಾಗ ವಾಕ್ ಔಟ್ ಮಾಡಿದ ನಿದರ್ಶನ ಇಲ್ಲ. ಬಜೆಟ್ ಓದಲು ಪ್ರಾರಂಭ ಮಾಡಿದ ಕೂಡಲೇ ಸುನೀಲ್ ಕುಮಾರ್ ಅವರು ಏನಿಲ್ಲ ಏನಿಲ್ಲ ಎಂದು ಘೋಷಣೆ ಕೂಗುತ್ತಿದ್ದರು. ಬಿಜೆಪಿಗೆ ಸಂಸದೀಯ, ಪ್ರಜಾಪ್ರಭುತ್ವ ಹಾಗೂ ಸಂವಿಧಾನಾತ್ಮಕ ವ್ಯವಸ್ಥೆಯಲ್ಲಿ ನಂಬಿಕೆ ಇಲ್ಲ. ಅವರ ತಲೆ ತುಂಬ ● 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಹೆಂಡತಿ : (ಎರಡು ದಿನದ ನಂತರ ಬಂದ ಗಂಡನಿಗೆ) "ಎಲ್ಲಿ ಹೋಗಿದ್ರಿ?"

ಗಂಡ : "ಏನ್ ಮಾಡ್ಲಿ ಶಾಪಿಂಗ್ ಮಾಲ್‌ನಲ್ಲಿ ಎಸ್ಕಲೇಟರ್ (ವಿದ್ಯುತ್ ಚಾಲಿತ ಮೆಟ್ಟಿಲು)ನಲ್ಲಿ ಇಳಿಯುತ್ತಿದ್ದೆ. ಕರೆಂಟ್ ಹೋಯ್ತು, ಅದು ನಿಂತು ಬಿಟ್ಟಿತು. ಈಗ ಬರುತ್ತೆ, ಇನ್ನೊಂದು ಗಂಟೆಗೆ ಬರುತ್ತೆ ಅಂತಾ ನಿಂತೇ ಇದ್ದೆ. ಇವತ್ತು ಕರೆಂಟ್ ಬಂತು!"

ಮೈಸೂರು ಮಿತ್ರ

ಶನಿವಾರ, 17 ಫೆಬ್ರವರಿ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಉರಿಯುತ್ತಿರುವ ದೀಪ ತನ್ನ ಪ್ರಕಾಶಕ್ಕೆ ಕುಂದು ತರದಂತೆ ಸಾವಿರಾರು ಇತರೇ ದೀಪಗಳನ್ನು ಹೊತ್ತಿಸಬಲ್ಲದು –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕೃತಿ ಇಲ್ಲದೆ ಮಾತು ಕಸ ಬೆಳೆದ ತೋಟವಿದ್ದಂತೆ

ನಿಮ್ಮ ಪತ್ರಗಳು

■ ಒಣಗಿದ ರೆಂಬೆಗಳು ಬೀಳುವ ಆತಂಕ



ಮಾನ್ಯರೆ,

ಮೈಸೂರಿನ ವಿಜಯನಗರ ಮೊದಲನೇ ಹಂತದಲ್ಲಿ ಹುಣಸೂರು ರಸ್ತೆಯ ಬದಿಯಲ್ಲಿ ಮರವೊಂದರ ಒಣಗಿದ ರೆಂಬೆಗಳು ರಸ್ತೆಗೆ ಬೀಳುವ ಹಂತದಲ್ಲಿವೆ.

ಪ್ರತಿನಿತ್ಯ ಸಂಚರಿಸುವ ವಾಹನ ಸವಾರರು ಹಾಗೂ ಪಾದಚಾರಿಗಳು ಇದರಿಂದ ಆತಂಕಗೊಂಡಿದ್ದಾರೆ. ಇತ್ತೀಚೆಗೆ ಕುಕ್ಕರಹಳ್ಳಿ ಕೆರೆ ಬಳಿ ಬೋಗಾದಿ ರಸ್ತೆಯಲ್ಲಿ ಮರದ ಒಣ ರೆಂಬೆ ಬಿದ್ದು ಹಿರಿಯ ನಾಗರಿಕರೊಬ್ಬರು ಸಾವನ್ನಪ್ಪಿರುವ ಹಿನ್ನೆಲೆಯಲ್ಲಿ ನಾಗರಿಕರಲ್ಲಿ ಸಹಜವಾಗಿ ಆತಂಕ ಇದ್ದೇ ಇದೆ. ಈಗಾಗಲೇ ಮೈಸೂರು ಮಹಾನಗರ ಪಾಲಿಕೆ ಒಣ ರೆಂಬೆ–ಕೊಂಬೆ ತೆರವು ಕಾರ್ಯಾಚರಣೆ ಆರಂಭಿಸಿದ್ದು, ಸದರಿ ಮರದ ಬಗ್ಗೆಯೂ ಗಮನಹರಿಸಬೇಕೆಂದು ಮನವಿ.

– ವಿಜಯನಗರ 1ನೇ ಹಂತದ ನಿವಾಸಿಗಳು, ಮೈಸೂರು.

■ ಆಡಳಿತ ಯಂತ್ರವಿರುವ ವಿಧಾನಸಭೆಯಲ್ಲಿ ಕನ್ನಡವೇ ಇಲ್ಲ

ಮಾನ್ಯರೆ,

ರಾಜ್ಯದ ಈ ಸಾಲಿನ ಬಜೆಟ್ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಪಾಲರು ಸರ್ಕಾರದ ಎಲ್ಲಾ ಜನಪ್ರಿಯ ಯೋಜನೆಗಳು, ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಾದ ಅನ್ನ ಭಾಗ್ಯ, ಶಕ್ತಿ, ಗೃಹ ಜ್ಯೋತಿ, ಗೃಹಲಕ್ಷ್ಮಿ ಮತ್ತು ಯುವ ನಿಧಿಗಳ ಬಗ್ಗೆ ನುಡಿದಂತೆ ನಡೆಯುತ್ತಿರುವ ಸರ್ಕಾರ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಇಡೀ ದೇಶದಲ್ಲೇ ಅತೀ ಹೆಚ್ಚು ತೆರಿಗೆ ಸಂಗ್ರಹಿಸುವ 2ನೇ ರಾಜ್ಯವೆಂದು ಸಂತಸ ವ್ಯಕ್ತಪಡಿಸಿದ್ದಾರೆ. ಇದೆಲ್ಲಾ ಹಿಂದಿ ಭಾಷೆಯಲ್ಲಿ ಸಿದ್ಧಪಡಿಸಿದ್ದ ಭಾಷಣ. ಅದನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಓದಿದ್ದಾರೆ.

ಇದು ನಮ್ಮ ಎಷ್ಟು ಜನ ಶಾಸಕರಿಗೆ ಅರ್ಥವಾಯಿತೋ ಗೊತ್ತಿಲ್ಲ? ಆದರೂ ಸಹ ಆಡಳಿತ ಪಕ್ಷದ ಶಾಸಕರು ಮೇಜು ಕುಟ್ಟಿ ತಮ್ಮ ಸಂತಸ ವ್ಯಕ್ತಪಡಿಸಿದ್ದಾರೆ. ಕನ್ನಡ ಭಾಷೆ ತಿಳಿದಿರುವವರನ್ನು ರಾಜ್ಯದ ರಾಜ್ಯಪಾಲರನ್ನಾಗಿ ಕೇಂದ್ರ ಸರ್ಕಾರ ನೇಮಿಸುವಂತಾಗಬೇಕು. ಇಲ್ಲ ರಾಜ್ಯಪಾಲರು ಕನ್ನಡ ಭಾಷೆ ಕಲಿಯುವಂತಾಗ ಬೇಕು. ಕನ್ನಡದಲ್ಲೇ ಆಡಳಿತ ಎನ್ನುವ ರಾಜ್ಯ ಸರ್ಕಾರ, ಆಡಳಿತ ಯಂತ್ರವಿರುವ ವಿಧಾನಸಭೆಯಲ್ಲಿ ಕನ್ನಡವೇ ಇಲ್ಲ, ಹಿಂದಿ ಭಾಷಣವನ್ನು ಕನ್ನಡಕ್ಕೆ ತರ್ಜುಮೆ ಮಾಡಿ ಮಾತನಾಡ ಬಹುದಿತ್ತು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

■ ಅಕ್ಕಿ ಹೆಸರಿನಲ್ಲಿ ರಾಜಕೀಯ ಬಿಡಿ

ಮಾನ್ಯರೆ,

ಪಡಿತರ ವಿತರಣೆಗಾಗಿ ಕರ್ನಾಟಕ ಸರ್ಕಾರ ಕೇಂದ್ರದಿಂದ 34 ರೂ. ಕೊಟ್ಟು ಕೊಳ್ಳುತ್ತೇವೆ. ನಮ್ಮ ರಾಜ್ಯಕ್ಕೆ ಅಕ್ಕಿಯನ್ನು ನೀಡಿ ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿಕೊಂಡಾದ ಕೇಂದ್ರದಿಂದ ಬಂದ ಉತ್ತರ ನಮ್ಮ ಬಳಿ ದಾಸ್ತಾನು ಇಲ್ಲ ಎಂಬುದಾಗಿ. ಆದರೆ ಅದೇ ಕೇಂದ್ರ ಸರ್ಕಾರ ಇಂದು ಭಾರತ್ ಬ್ರಾಂಡ್ ಅಕ್ಕಿ ಹೆಸರಿನಲ್ಲಿ ಆಯ್ದ ಕೆಲವು ನಗರಗಳಲ್ಲಿ ಅಕ್ಕಿ ಮಾರಾಟ ಮಾಡಲು ನಿಮಗೆ ಅಕ್ಕಿ ಎಲ್ಲಿಂದ ಬಂತು? ಅಂದು ದಾಸ್ತಾನು ಇಲ್ಲದ ಅಕ್ಕಿ ಇಂದು ಕೇವಲ 29 ರೂ.ಗಳಿಗೆ ಹೇಗೆ ಮಾರಾಟ ಮಾಡುತ್ತಿದ್ದೀರಿ. ನೀವು ಮಾರಾಟ ಮಾಡುತ್ತಿರುವ ಅಕ್ಕಿ ಬಡಜನರಿಗೆ ತಲುಪುತ್ತಿದೆಯೇ ಅಥವಾ ಸರ್ಕಾರಿ ನ್ಯಾಯಬೆಲೆ ಅಂಗಡಿ ಮೂಲಕ ಮಾರಾಟ ಮಾಡಿ ಬಡಜನರ ಕೈ ಸೇರುವಂತೆ ಮಾಡದೆ ತಮ್ಮ ರಾಜಕೀಯ ಬೇಳೆ ಬೇಯಿಸಲು ಅಕ್ಕಿಯ ಹೆಸರಲ್ಲಿ ನಿಮ್ಮ ರಾಜಕೀಯವನ್ನು ನಿಲ್ಲಿಸಿ ಚುನಾವಣೆ ಸಂದರ್ಭದಲ್ಲಿ ಅದರಲ್ಲೂ ಒಕ್ಕೂಟ ವ್ಯವಸ್ಥೆಯಲ್ಲಿ ನಿಮ್ಮ ಮಲತಾಯಿ ಧೋರಣೆ ಸರಿಯೇ? ರಾಜ್ಯಕ್ಕೆ ಆಗುತ್ತಿರುವ ಈ ಅನ್ಯಾಯದ ವಿರುದ್ಧ ರಾಜ್ಯದ ಸಂಸದರು ಮಾತನಾಡಲು ಧ್ವನಿ ಇಲ್ಲವೇ? ಪರಸ್ಪರ ಪ್ರತ್ಯಾರೋಪ ಮಾಡುವ ಹಾಗೆ ಕಾಲ ಕಳೆಯುತ್ತಿರುವ ಜನಪ್ರತಿನಿಧಿಗಳೇ ಈಗಲಾದರೂ ನಿಮ್ಮ ರಾಜಕೀಯವನ್ನು ಬಿಟ್ಟು ಜನಸಾಮಾನ್ಯರ ಕಷ್ಟಕ್ಕೆ ಸ್ಪಂದಿಸಿ ಕೇಂದ್ರದ ಮಲತಾಯಿ ಧೋರಣೆಯನ್ನು ಖಂಡಿಸಿ ನಿಮ್ಮ ಸ್ಥಾನದ ಘನತೆಯನ್ನು ಕಾಪಾಡಿ ಮತ್ತು ನಮ್ಮ ದೇಶ ಒಕ್ಕೂಟ ವ್ಯವಸ್ಥೆಯಡಿ ರಚನೆಯಾಗಿದೆ ಎಂಬುದನ್ನು ತಿಳಿಯಿರಿ.

–ಕೆ.ಎಸ್. ಸುರೇಶ್, ಶಿಕ್ಷಕ, ಕೆ.ಜಿ.ಹಳ್ಳಿ, ಹೆಚ್.ಡಿ. ಕೋಟೆ

■ ಸಮತೋಲನದಿಂದ ಕೂಡಿದ ಬಜೆಟ್

ಮಾನ್ಯರೆ,

ಆರ್ಥಿಕ ತಜ್ಞರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಯವ್ಯಯದ ಲೆಕ್ಕಾಚಾರ ಅರ್ಥಗರ್ಭಿತವಾಗಿದೆ.

ಶ್ರೀಸಾಮಾನ್ಯನ ಏಳಿಗೆಯ ದೃಷ್ಟಿಕೋನದೊಂದಿಗೆ ಸಮತೋಲನವಾದ ಆಯವ್ಯಯ ಇದಾಗಿದೆ. ಬರದ ಬರೆ ಹಾಗೂ ನಿರೀಕ್ಷಿತ ಆದಾಯ ಮೂಲದ ಲೆಕ್ಕಾಚಾರವನ್ನು ಆಯವ್ಯಯ ಒಳಗೊಂಡಿದೆ.

ಶ್ರೀಮಂತರನ್ನೊಳಗೊಂಡು ಶ್ರೀಸಾಮಾನ್ಯನವರೆಗೂ ಎಲ್ಲರಿಗೂ ಆಯವ್ಯಯ ದಲ್ಲಿ ಆದ್ಯತೆ ನೀಡುವ ಮೂಲಕ ಸಿದ್ದರಾಮಯ್ಯ ಅವರು ಸಮತೋಲನ ಕಾಪಾಡಿದ್ದಾರೆ.

ರಾಜ್ಯ ಸರ್ಕಾರದ ಈ ಹಿಂದಿನ ಎಲ್ಲ ಯೋಜನೆಗಳು, ಗ್ಯಾರಂಟಿ ಸ್ಕೀಮು ಗಳೊಂದಿಗೆ ಅತ್ಯವಶ್ಯವಾಗಿರುವ ಯೋಜನೆಗಳ ಅನುಷ್ಠಾನಕ್ಕೆ ಆಯವ್ಯಯದಲ್ಲಿ ಮುಂದಡಿ ಇಟ್ಟಿರುವುದು ಸವಾಲೇ ಸರಿ.

ಆರೋಗ್ಯ, ಶಿಕ್ಷಣ, ಕೃಷಿ, ನೀರಾವರಿ ಸೇರಿದಂತೆ ಪ್ರಮುಖ ಆದ್ಯತಾ ವಲಯಗಳಿಗೆ ಮನ್ನಣೆ ನೀಡಿರುವುದಕ್ಕೆ ಆಯವ್ಯಯ ಸಾಕ್ಷಿಯಾಗಿದೆ.

–ಕೆ.ವಿ.ಮಲ್ಲೇಶ್, ಮಾಜಿ ನಗರ ಪಾಲಿಕೆ ಸದಸ್ಯ, ಮೈಸೂರು.

ಬಹುಮುಖಿ



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ : 94815 33167

ಸಾಹಿತ್ಯ ಶ್ರೇಷ್ಠ ಶೇಷಗಿರಿರಾಯರು

"ಶೈಕ್ಷಣಿಕ ಜ್ಞಾನದಿಂದ, ಇಂಗ್ಲೀಷ್ ಭಾಷಾ ಪಾಂಡಿತ್ಯದಿಂದ ಆ ಎಳೆಯ ವಯಸ್ಸಿಗೇ ಬಿಎಂಶ್ರೀ ಅವರನ್ನು ಮೆಚ್ಚಿಸಿದ ಹುಡುಗನಿಗೆ ಸೀಟು ಸಿಗದಿರುತ್ತದೆಯೇ. ಸೀಟಿನೊಡನೆ ಮುಂದಿನ ಸಾಹಿತ್ಯ ಕೃಷಿಗೆ ಆಶೀರ್ವಾದವೆಂಬಂತೆ ಪ್ರೋತ್ಸಾಹದ ನುಡಿ ಮುತ್ತುಗಳೂ 'ಶ್ರೀ' ಅವರಿಂದ ಹುಡುಗನಿಗೆ ದೊರಕಿತ್ತು. ಅವರಿಂದ ಪ್ರಭಾವಿತ ನಾದ ಹುಡುಗ ಆ ಗಳಿಗೆಯಲ್ಲೇ 'ಶ್ರೀ' ಅವರನ್ನು ತನ್ನ ಶೈಕ್ಷಣಿಕ ಮತ್ತು ಸಾಹಿತ್ಯಕ ಗುರು ವಾಗಿ ತನ್ನ ಎದೆಯಾಳದಲ್ಲಿ ಪ್ರತಿಷ್ಠಾಪಿಸಿಕೊಂಡ. ಅಂದಿನ ಆ ಹುಡುಗನೇ ಇಂದು ಕನ್ನಡ ಸಾರಸ್ವತ ಲೋಕ ದಲ್ಲಿ ಕೀರ್ತಿಶೇಷರಾಗಿರುವ (20-12-2019) ಸುವಿಖ್ಯಾತ ವಿಮರ್ಶಕ, ಹೆಸರಾಂತ ವಿದ್ವಾಂಸ, ಅಪ್ರತಿಮ ಅನುವಾದಕ, ಸುಪ್ರಸಿದ್ಧ ಸಾಹಿತಿ ಚುಟುಕಾಗಿ 'ಎಲ್ಲೆಸ್ಸೆಸ್' ಎಂದೇ ಹೆಸರಾಗಿದ್ದ ಪ್ರೊ. ಎಲ್.ಎಸ್.ಶೇಷಗಿರಿರಾವ್!

'ನಮ್ಮ ಜೊತೆಗಿದ್ದಾರೆ
ಯಾರೋ ಬಿಟ್ಟ ಬಾಣದ ಹಾಗೆ
ನೆಟ್ಟಗೆ ನಡೆಯುವವರು ಹಿಡಿದಿದ್ದನ್ನು ಅಚ್ಚುಕಟ್ಟಾಗಿ ಕಡೆದು ಗುಡ್ಡೆಕಟ್ಟಿ ದಾರಿ ಯುದ್ಧಕೂ ನೆನಪ ಉಳಿಸಿದವರು ಸದ್ದಿರದೆ ತನ್ನ ಪಾಡಿಗೆ ಬಂದಷ್ಟು ನೆಲವನ್ನು ಬಿತ್ತಿ ಬೆಳೆಯುತ್ತಿದ್ದವರು
ಬಿಸಿಲು ಬಿರುಗಾಳಿ ಮಾಗಿಯ ಜತೆಗೆ ಕೆಳೆ ಬೆಳೆಸಿ ಎದೆಗೆ ಸುಗ್ಗಿಯಾಗಿ ತುಂಬಿಕೊಂಡವರು ಹೆಸರೇ? ಲಾಭವೇ? ಪದವಿಗಳೇ? ಅವನೆಲ್ಲಾ ನಸು ನುಕ್ಕು ದಾಟಿದವರು ಗಿರಿಯಷ್ಟು ಸಾಧಿಸಿದರೂ ಕಡೆಗೆ ಯಾವತ್ತೂ ಶೇಷವೆಷ್ಟೆಂದು ಎಣಿಸಿದವರು'...

–ಇದು ರಾಷ್ಟ್ರಕವಿ ಡಾ.ಜಿ.ಎಸ್. ಶಿವರುದ್ರಪ್ಪನವರು ಎಲ್.ಎಸ್. ಶೇಷಗಿರಿರಾಯರ ಬಗ್ಗೆ ಬರೆದಿರುವ ನುಡಿ ರತ್ನಗಳು.ಇಲ್ಲಿ ಕಿಂಚಿತ್ತೂ ಉತ್ಪ್ರೇಕ್ಷೆ ಇಲ್ಲ. ಅಕ್ಷರಕ್ಷರವೂ ಸತ್ಯ!

ಒಂದು ಕಾಲದಲ್ಲಿ ಮೈಸೂರು ವಿಶ್ವವಿದ್ಯಾನಿಲಯದಿಂದ ಪದವಿ ಪಡೆಯುವುದೆಂದರೆ ಅದೊಂದು ಬಹುದೊಡ್ಡ ಗೌರವವಾಗಿತ್ತು ಅಲ್ಲಿ ಪದವಿ ಪಡೆಯುವುದಿರಲಿ ಅಲ್ಲಿಗೆ ಸೇರುವುದೇ ಒಂದು ಸುಯೋಗ ಎನ್ನುತ್ತಿದ್ದ ಕಾಲವದು. ಏಕೆಂದರೆ ಆಗ ಇಡೀ ಮೈಸೂರು ಸಂಸ್ಥಾನಕ್ಕೆಲ್ಲಾ ಇದ್ದದ್ದು ಇದೊಂದೇ ವಿಶ್ವವಿದ್ಯಾನಿಲಯ! ಜೊತೆಗೆ ದೇಶದಲ್ಲೇ ಹೆಸರಾದದ್ದು, ವಿದೇಶಗಳಲ್ಲೂ ಖ್ಯಾತಿ ಪಡೆದದ್ದು. ಇದರ ವ್ಯಾಪ್ತಿಯ ಮಹಾರಾಜ ಕಾಲೇಜಿನ ವಿದ್ಯಾರ್ಥಿಯಾಗುವುದೇ ಒಂದು ಮಹಾಭಾಗ್ಯವಾಗಿತ್ತು. ಅಂತಹ ಕಾಲದಲ್ಲಿ ಇಂಥಾ ಮಹಾರಾಜ ಕಾಲೇಜಿಗೆ ಸೇರಿ ಮೈಸೂರು ವಿಶ್ವವಿದ್ಯಾನಿಲಯದಿಂದ ಪದವಿ ಅದೂ ಇಂಗ್ಲೀಷ್ ಸಾಹಿತ್ಯದಲ್ಲಿ ಪಡೆಯಬೇಕೆಂಬ ಮಹದಾಸೆ ಹೊತ್ತ ಹುಡುಗನೊಬ್ಬ ತನ್ನ ಸ್ವಂತ ಪರಿಶ್ರಮದಿಂದ ಇಂಟರ್ ಮೀಡಿಯಟ್‌ನಲ್ಲಿ, ಅದೂ ಸಹ ಇಂಗ್ಲೀಷ್‌ನಲ್ಲಿ ಇಡೀ ರಾಜ್ಯಕ್ಕೇ ಮೊದಲಿಗನಾಗಿ ಫಸ್ಟ್‌ಕ್ಲಾಸ್‌ನಲ್ಲಿ ಪಾಸು ಮಾಡಿದ್ದ. ಈ ಹುಮ್ಮಸ್ಸಿನಲ್ಲೇ ಹುಡುಗ ಮಹಾರಾಜ ಕಾಲೇಜಿಗೆ ಸೀಟಿಗೆ ಅರ್ಜಿ ಗುಜರಾಯಿಸಿದ್ದ. ಅದರೂ ಇಲ್ಲಿ ತನಗೆ ಸೀಟು ಸಿಗುವುದರ ಬಗ್ಗೆ ಹುಡುಗನಿಗೆ ಅಳುಕಿತ್ತು. ಕಾರಣ ಸೀಟಿಗಾಗಿ ಇಂಟರ್‌ವ್ಯೂವೊಂದನ್ನು ಎದುರಿಸಿ ಅಲ್ಲೂ ಉತ್ತಮ ಅಂಕಗಳನ್ನು ಗಳಿಸಬೇಕಾಗಿತ್ತು, ಒಂದು ರೀತಿ ಈಗಿನ ಸಿಇಟಿ ಪರೀಕ್ಷೆಗಳಿದ್ದಂತೆ.

ಹದಿನೈದದಿನಾರಿನ ಆಜು ಬಾಜಿನ ಚೂಟಿಹುಡುಗ ಮನದ ತುಂಬಾ ಮೈಸೂರು ವಿಶ್ವ ವಿದ್ಯಾನಿಲಯ ದಲ್ಲೋದುವ ಕನಸು ಕಟ್ಟಿಕೊಂಡು ಇಂಟರ್‌ವ್ಯೂ ಅಟೆಂಡ್ ಮಾಡಿದ. ಕಾಲೇಜಿನ ಪ್ರಿನ್ಸಿಪಾಲರಾಗಿದ್ದ ಆಗಿನ ಖ್ಯಾತ ಇಂಗ್ಲೀಷ್ ಪ್ರೊಫೆಸರ್ ಜೆ.ಸಿ.ರಾಲೋ ಸಮ್ಮುಖದಲ್ಲಿ ರಾಜ್ಯದಲ್ಲೇ ಹೆಸರಾಗಿ ರಾರಾಜಿಸುತ್ತಿದ್ದ 'ಬಿಎಂಶ್ರೀ' ಅವರನ್ನೊಳಗೊಂಡ ಪ್ರಸಿದ್ಧ ಪ್ರಾಧ್ಯಾಪಕರ ತಂಡ ಸಂದರ್ಶನದಲ್ಲಿ ಎಸೆದ ಎಲ್ಲಾ ಪ್ರಶ್ನೆಗಳಿಗೂ ದಿಟ್ಟವಾಗಿಯೇ ಸೂಕ್ತ ಉತ್ತರಗಳನ್ನು ನೀಡಿದ ಹುಡುಗ ಆ ಕ್ಷಣ ಬಹುವಾಗಿ ಬಿಎಂಶ್ರೀ ಅವರ ಗಮನಸೆಳೆದ. ತನ್ನ ಶೈಕ್ಷಣಿಕ ಜ್ಞಾನದಿಂದ, ಇಂಗ್ಲೀಷ್ ಭಾಷಾ ಪಾಂಡಿತ್ಯದಿಂದ ಆ ಎಳೆಯ ವಯಸ್ಸಿಗೇ ಬಿಎಂಶ್ರೀ ಅವರನ್ನು ಮೆಚ್ಚಿಸಿದ ಹುಡುಗನಿಗೆ ಸೀಟು ಸಿಗದಿರುತ್ತದೆಯೇ. ಸೀಟಿನೊಡನೆ ಮುಂದಿನ ಸಾಹಿತ್ಯ ಕೃಷಿಗೆ ಆಶೀರ್ವಾದವೆಂಬಂತೆ ಪ್ರೋತ್ಸಾಹದ ನುಡಿ ಮುತ್ತುಗಳೂ 'ಶ್ರೀ' ಅವರಿಂದ ಹುಡುಗನಿಗೆ ದೊರಕಿತ್ತು. ಅವರಿಂದ ಪ್ರಭಾವಿತನಾದ ಹುಡುಗ ಆ ಗಳಿಗೆಯಲ್ಲೇ 'ಶ್ರೀ' ಅವರನ್ನು ತನ್ನ ಶೈಕ್ಷಣಿಕ ಮತ್ತು ಸಾಹಿತ್ಯಿಕ ಗುರುವಾಗಿ ತನ್ನ ಎದೆಯಾಳದಲ್ಲಿ ಪ್ರತಿಷ್ಠಾಪಿಸಿಕೊಂಡ. ಅಂದಿನ ಆ ಹುಡುಗನೇ ಇಂದು ಕನ್ನಡ ಸಾರಸ್ವತ ಲೋಕ ದಲ್ಲಿ ಕೀರ್ತಿಶೇಷರಾಗಿರುವ (20–12–2019) ಸುವಿಖ್ಯಾತ ವಿಮರ್ಶಕ, ಹೆಸರಾಂತ ವಿದ್ವಾಂಸ, ಅಪ್ರತಿಮ ಅನುವಾದಕ, ಸುಪ್ರಸಿದ್ಧ ಸಾಹಿತಿ ಚುಟುಕಾಗಿ 'ಎಲ್ಲೆಸ್ಸೆಸ್' ಎಂದೇ ಹೆಸರಾಗಿದ್ದ ಪ್ರೊ. ಎಲ್.ಎಸ್.ಶೇಷಗಿರಿರಾವ್!

ಬಿಎಂಶ್ರೀ, ಕುವೆಂಪು, ತೀನಂಶ್ರೀ, ವೀಸಿ, ಜಿ.ಪಿ.ರಾಜರತ್ನಂರಂತಹ ಘಟಾನುಘಟಿ ಸಾಹಿತ್ಯ ದಿಗ್ಗಜರನ್ನು ಗುರುಗಳಾಗಿ ಪಡೆದ ಶೇಷಗಿರಿರಾಯರು ಹುಟ್ಟಿದ್ದು (16.02.1925) ಧಾರವಾಡ ಜಿಲ್ಲೆಯ ಲಕ್ಷ್ಮೇಶ್ವರವಾದರೂ ಬೆಳೆದದ್ದೆಲ್ಲಾ ಹೆಚ್ಚು ಬೆಂಗಳೂರಿನಲ್ಲೇ. ಸಂಪ್ರದಾಯಸ್ಥ ಮನೆತನದ ಸುಸಂಸ್ಕೃತ ಕುಟುಂಬ ದಲ್ಲಿನ ತಂದೆ ಸ್ವಾಮಿರಾವ್, ತಾಯಿ ಕಮಲಾಬಾಯಿ ಅವರ ಮಾರ್ಗದರ್ಶನದಲ್ಲಿ ಬಾಲ್ಯದಿಂದಲೂ ವಿದ್ಯೆಗೆ ಹೆಚ್ಚು ಮಹತ್ವ ಕೊಟ್ಟು ಬೆಳೆದ ಇವರು ಪ್ರಾಥಮಿಕ ಶಾಲಾ ಹಂತದಿಂದಲೂ, ಬುದ್ಧಿಮತ ವಿದ್ಯಾರ್ಥಿಯಾಗಿ ಜ್ಞಾನದ ಹಸಿವಿಗೆ ಬಿದ್ದು ಅದನ್ನು ತಣಿಸಿಕೊಳ್ಳುವ ಅಮೃತ ಪಥದಲ್ಲಿ ನಡೆದು ಬಂದವರು. ಪ್ರಾಥಮಿಕ ಹಂತದಲ್ಲೇ ಶಿಕ್ಷಣ ಗಟ್ಟಿಯಾಗಿದ್ದುದರಿಂದ ಉನ್ನತ ಶಿಕ್ಷಣ ಇವರಿಗೆ ಸುಲಭವಾಗಿತ್ತು. ಹಾಗಾಗಿ ಶೇಷಗಿರಿರಾವ್ ಆನರ್ಸ್ ಪರೀಕ್ಷೆಯಲ್ಲಿ ಇಂಗ್ಲೀಷ್ ತರಗತಿಯಲ್ಲಿ ಮಾತ್ರವಲ್ಲದೆ ಸ್ನಾತಕೋತ್ತರ ಕಲಾ ವಿಭಾಗದಲ್ಲೂ ಪ್ರಥಮ ಶ್ರೇಣಿ ಪಡೆದು ಜನರಲ್ ಪ್ರೊಫೆಷಿಯನ್ಸಿ ಚಿನ್ನದಪದಕ ಗಳಿಸಿದರು. ಆ ಸಂದರ್ಭದಲ್ಲಿ ನಡೆದ ಘಟಿಕೋತ್ಸವದಲ್ಲಿ ಮಹಾರಾಜರಿಂದ ಚಿನ್ನದ ಪದಕ ಸ್ವೀಕರಿಸುತ್ತಿದ್ದ ಶೇಷಗಿರಿರಾವ್ ಅವರನ್ನು ಸೂಕ್ಷ್ಮವಾಗಿ ಗಮನಿಸಿ ಇವರ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡ ಆಗಿನ ಉಪಕುಲಪತಿ ಸಿಂಗಾರಸ್ವಾಮಿ ಮೊದಲಿಯಾರ್ ತಕ್ಷಣವೇ ಇವರನ್ನು ಅಧ್ಯಾಪಕ ಹುದ್ದೆಗೆ ನೇಮಿಸಿಕೊಳ್ಳಬೇಕೆಂದು ಅಲ್ಲಿಯೇ ಇದ್ದ ಇಂಗ್ಲೀಷ್ ವಿಭಾಗದ ಮುಖ್ಯಸ್ಥ ರಾದ ಪ್ರೊಫೆಸರ್ ಈಗಲ್‌ಟನ್‌ರವರಿಗೆ ಸೂಚಿಸಿ ದಾಗ ಅಂದಿನಿಂದಲೇ ಇವರು ಅಧ್ಯಾಪಕರಾಗಿ ವೃತ್ತಿ ಆರಂಭಿಸಿದರು.


ನಂತರ ತಮಗೆ ಅತ್ಯಂತ ಪ್ರೀತಿ ಪಾತ್ರವಾದ ಅಧ್ಯಾಪಕ ವೃತ್ತಿ ಮಾಡುತ್ತಲೇ ನಾಗಪುರ ವಿಶ್ವವಿದ್ಯಾಲಯದಲ್ಲಿ ಪ್ರಥಮ ದರ್ಜೆಯಲ್ಲಿ ಎಂ.ಎ. ಮಾಡಿಕೊಂಡರು. ಅಧ್ಯಾಪಕ ವೃತ್ತಿಯಲ್ಲಿ 40 ವರ್ಷಗಳ ಸುದೀರ್ಘಕಾಲ ಇಂಗ್ಲೀಷ್ ಅಧ್ಯಾಪಕರಾಗಿ, ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ ಇವರ ಶಿಷ್ಯಂದಿರ ಬಳಗ ಬಹುದೊಡ್ಡದು. ಹಂಪಿ ವಿಶ್ವವಿದ್ಯಾಲಯದ ಸಂದರ್ಶಕ ಪ್ರಾಧ್ಯಾಪಕರಾಗಿಯೂ ಸೇವೆಗೈದಿರುವ ಇವರ ಶೈಕ್ಷಣಿಕ ಸಾಧನೆ ಕೂಡ ಅಪಾರವಾದದ್ದು.

ಶಿಕ್ಷಣದ ಜೊತೆ ಸಾಹಿತ್ಯ ಕೃಷಿಯನ್ನು ಒಂದು ವ್ರತದಂತೆ ಮಾಡಿಕೊಂಡು ಬಂದಿರುವ ಶೇಷಗಿರಿರಾಯರ ಲೇಖನಿ ಪುಸ್ತಕಗಳ ಗುಡ್ಡೆಯನ್ನೇ ಸೃಷ್ಟಿಸಿದೆ. ಸಣ್ಣ ಕಥೆ 'ಕಪ್ಪು ಹುಡುಗಿ'ಯ ಮೂಲಕ ಕನ್ನಡ ಸಾಹಿತ್ಯ ಪ್ರಪಂಚಕ್ಕೆ ಪಾದಾರ್ಪಣೆ ಮಾಡಿದ ಇವರು ಸಾಹಿತ್ಯದ ವಿವಿಧ ಪ್ರಾಕಾರಗಳಲ್ಲಿ 80 ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ಏಕಕಾಲದಲ್ಲಿ ಇಂಗ್ಲೀಷ್ ಮತ್ತು ಕನ್ನಡದಲ್ಲಿ ವಿಮರ್ಶೆ ಬರೆದ ಇವರು ಕಾದಂಬರಿ, ಸಣ್ಣ ಕಥೆಗಳ ಮೂಲಕ ತಮ್ಮ ಸೃಜನಶೀಲ ಸಾಹಿತ್ಯವನ್ನು ಧಾರಾಳವಾಗಿ ದಾಖಲಿಸಿದ್ದರೂ, ವಿಮರ್ಶಕರಾಗಿಯೇ ಹೆಚ್ಚು ಖ್ಯಾತಿ ಗಳಿಸಿದ್ದಾರೆ. 'ಎಲಿಯಡ್' ಕೃತಿಯ ಅನುವಾದಕ್ಕೆ ಇವರು ಬರೆದಿರುವ ಮುನ್ನುಡಿಯೇ ಸಾಕು ಇವರ ವಿಮರ್ಶಾ ಕಣ್ಣಿನ ಆಳ–ಅಗಲದ ಉದಾಹರಣೆಗೆ. ವಿಮರ್ಶೆಯಲ್ಲೂ ಸೃಜನ ಶೀಲತೆಯನ್ನು ಮೆರೆಸಿರುವ ಇವರ ಸಾಹಿತ್ಯಶೈಲಿ ಒಂದು ಅದ್ಭುತವೇ ಸರಿ! ಹಾಗೆಯೇ ಮಕ್ಕಳ ಪ್ರಿಯರಾದ ಶೇಷಗಿರಿರಾಯರು ಶಿಶು ಸಾಹಿತ್ಯಕ್ಕೊಂದು ಅಮೋಘ ಕೊಡುಗೆ ನೀಡಿ ಈ ದಿಸೆಯಲ್ಲಿ ಸಾಹಿತ್ಯ ಚರಿತ್ರೆಯಲ್ಲೊಂದು ದಾಖಲೆ ನಿರ್ಮಿಸಿದ್ದಾರೆ. ಇದಕ್ಕೆ ಪ್ರತ್ಯಕ್ಷ ಸಾಕ್ಷಿ 'ಭಾರತ–ಭಾರತಿ' ಪುಸ್ತಕ ಮಾಲೆಯಡಿಯಲ್ಲಿ ಇವರು ಮಕ್ಕಳಿಗಾಗಿ ಸಂಪಾದಿಸಿರುವ 550 ಕನ್ನಡ ಪುಸ್ತಕಗಳೇ ಆಗಿವೆ. ಇಷ್ಟೊಂದು ದೊಡ್ಡ ಸಂಖ್ಯೆಯಲ್ಲಿ ಮಕ್ಕಳಿಗಾಗಿ ಪುಸ್ತಕಗಳನ್ನು ಸಂಪಾದಿಸಿರುವ ಮತ್ತೊಬ್ಬ ಲೇಖಕ ಬಹುಶಃ ಕಾಣಸಿಗುವುದಿಲ್ಲವೇನೋ!

ಶೇಷಗಿರಿರಾಯರ ಬರಹ ಗಿರಿಯಷ್ಟೇ ಎತ್ತರ, ಸಾಗರದಂತೆ ಆಳ, ಆಗಸದಷ್ಟು ಅಗಲ, ಉದ್ದವೂ ಅಷ್ಟೇ ಊಹಾತೀತ. ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳೆರಡರಲ್ಲೂ ಪ್ರಭುತ್ವ ಸಾಧಿಸಿರುವ ಇವರ ಸಾಹಿತ್ಯ ವೈವಿಧ್ಯಮಯ. ಇವರು ನಾಡಿನ ಪತ್ರಿಕೆಗಳಿಗೆ ಗ್ರಂಥಗಳಿಗೆ ಬರೆದಿರುವ ನೂರಾರು ಬಿಡಿ ಲೇಖನಗಳು ಮತ್ತು ಮುನ್ನುಡಿಗಳು ಇವರ ಕ್ರಿಯಾಶೀಲತೆಗೆ, ಭಾಷಾಪ್ರೇಮಕ್ಕೆ, ಸಾಹಿತ್ಯ ಪ್ರೀತಿಗೆ ಸಾಕ್ಷಿಗಲ್ಲುಗಳಾಗಿ ನಿಂತಿವೆ. ಇವರ ಆಕಾಂಕ್ಷೆ, ಆಸ್ತಿ, ಗ್ರೀಕ್ ರಂಗಭೂಮಿ ಮತ್ತು ನಾಟಕ, ಇಂಗ್ಲೀಷ್ ಭಾಷೆಯಲ್ಲಿ ಆಧುನಿಕ ಸಾಹಿತ್ಯ ವಿಮರ್ಶೆ, ವಿಲಿಯಂ ಷೇಕ್ಸ್‌ಪಿಯರ್ ಅತ್ಯಂತ ಮೌಲ್ಯಯುತ ಕೃತಿಗಳು. ಹಾಗೆಯೇ ಇವರ ಕಾದಂಬರಿ ಸಾಮಾನ್ಯ ಮನುಷ್ಯ, ಕಥಾ ಸಂಕಲನಗಳಾದ ಇದು ಜೀವನ, ಮುಟ್ಟಿದ ಗುರಿ ಮತ್ತು ಇತರ ಕಥೆಗಳು, ಜಂಗಮ ಜಾತ್ರೆಯಲ್ಲಿ, ಮುಯ್ಯಿ..... ಮುಂತಾದ ಕೃತಿಗಳು ಕಥಾಲೋಕದ ಮಾಣಿಕ್ಯಗಳಾಗಿವೆ. ಮುಯ್ಯಿ ಕಥೆ ಚಲನಚಿತ್ರವಾಗಿ ಬೆಳ್ಳಿತೆರೆಯನ್ನು ಬೆಳಗಿದ್ದು, ಶೇಷಗಿರಿರಾಯರ ಲೇಖನಿ ಚಲನಚಿತ್ರ ಲೋಕಕ್ಕೂ ವಿಸ್ತಾರಗೊಂಡಿದ್ದು, ಇಲ್ಲೂ ಕೂಡ ಇವರು ತಮ್ಮ ಛಾಪು ಮೂಡಿಸಿದ್ದಾರೆ.

ಏಷ್ಯನ್ ಭಾಷೆಗಳಲ್ಲೇ ಮೊದಲ ಬಾರಿಗೆ ಕನ್ನಡದಲ್ಲಿ ಇಂಗ್ಲೀಷ್ ಸಾಹಿತ್ಯ ಚರಿತ್ರೆಯನ್ನು ಅಧಿಕೃತವಾಗಿ ಬಹುದೊಡ್ಡ ಮಟ್ಟದಲ್ಲಿ ದಾಖಲಿಸಿರುವ ಶೇಷಗಿರಿರಾಯರು ಪ್ರತಿಷ್ಠಿತ ಬಿರ್ಲಾ ಪ್ರತಿಷ್ಠಾನಕ್ಕಾಗಿ ಇಂಗ್ಲೀಷ್‌ನಲ್ಲಿ ಮಹಾಭಾರತವನ್ನು ನಾಲ್ಕು ಬೃಹತ್ ಸಂಪುಟಗಳಲ್ಲಿ ಹೊರತಂದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಹಂಪಿ ಕನ್ನಡ ವಿಶ್ವವಿದ್ಯಾಲಯಕ್ಕಾಗಿ ಇವರು ಸಂಪಾದಿಸಿರುವ ಕನ್ನಡ ವಿಷಯ ವಿಶ್ವಕೋಶ ಕನ್ನಡದ ಪ್ರಮುಖ ಸಂದರ್ಭ ಗ್ರಂಥಗಳಲ್ಲಿ ಒಂದು. 1985ರಲ್ಲಿ ಇವರು ಸಂಪಾದಿಸಿದ ಕನ್ನಡದ ಅಳಿವು–ಉಳಿವು ಕನ್ನಡದ ಸಮಸ್ಯೆಗಳನ್ನೂ ಮತ್ತು ಅವಕ್ಕೆ ಖಚಿತ ಪರಿಹಾರಗಳನ್ನೂ ಸೂಚಿಸುವ ಮುಖ್ಯ ಕೃತಿಯಾಗಿದೆ. ಹಾಗೆಯೇ ಇವರ ಸುಲಭ ಇಂಗ್ಲೀಷ್ ಕೃತಿ ಕನ್ನಡದ ಮೂಲಕ ಇಂಗ್ಲೀಷಿನ ಸಾಧ್ಯತೆ, ಸಮಸ್ಯೆ, ಸಿಕ್ಕು ಮತ್ತು ಅವುಗಳಿಗೆ ಪರಿಹಾರಗಳನ್ನು ಕೊಡುವ ಅಮೂಲ್ಯ ಕೃತಿಯಾಗಿದೆ. ಇವರ ಸಾರ್ಥಕ ಸುಭೋಧ, ಎಂ. ವಿಶ್ವೇಶ್ವರಯ್ಯ, ಮಾಸ್ತಿ ವೆಂಕಟೇಶ್ ಅಯ್ಯಂಗಾರ್, ಟಿ.ಪಿ. ಕೈಲಾಸಂ, ಎಲ್.ಎಸ್.ಎಸ್. ಕಂಡ ತ.ರಾ.ಸು..... ಮುಂತಾದ ಜೀವನ ಚಿತ್ರ ಕೃತಿಗಳಂತೂ ಕನ್ನಡ ಸಾಹಿತ್ಯ ಭಂಡಾರವನ್ನು ಮತ್ತಷ್ಟು ಶ್ರೀಮಂತಗೊಳಿಸಿವೆ.

ಇನ್ನು ನಿಘಂಟು ವಿಷಯಕ್ಕೆ ಬಂದರೆ ಐಬಿಹೆಚ್ ಕನ್ನಡ–ಕನ್ನಡ ನಿಘಂಟು, ಐಬಿಹೆಚ್ ಇಂಗ್ಲೀಷ್–ಕನ್ನಡ ನಿಘಂಟು, ಐಬಿಹೆಚ್ ಕನ್ನಡ–ಕನ್ನಡ–ಇಂಗ್ಲೀಷ್ ನಿಘಂಟು, ಸುಭಾಷ್ ಇಂಗ್ಲೀಷ್–ಇಂಗ್ಲೀಷ್–ಕನ್ನಡ ನಿಘಂಟು, ಸುಭಾಷ್ ವಿದ್ಯಾರ್ಥಿ ಮಿತ್ರ ಇಂಗ್ಲೀಷ್–ಕನ್ನಡ ನಿಘಂಟುಗಳು ಇವರಿಂದ ಸೃಷ್ಟಿಯಾದ ಉಪಯುಕ್ತ ಕೃತಿಗಳು. ವಿಮರ್ಶಾ ವಿಷಯದಲ್ಲಂತೂ ಇವರು ಎತ್ತಿದ ಕೈ. ಇಲ್ಲಿ ಇವರಿಗಿವರೇ ಸಾಟಿ ಎಂಬಷ್ಟರ ಮಟ್ಟಿಗೆ ಪಾಶ್ಚಾತ್ಯ ಸಾಹಿತ್ಯ ವಿಚಾರ, ಹೊಸಗನ್ನಡ ಸಾಹಿತ್ಯ ಚರಿತ್ರೆ, ಪಾಶ್ಚಾತ್ಯ ಸಾಹಿತ್ಯ ಲೋಕದಲ್ಲಿ, ಪಾಶ್ಚಾತ್ಯ ಮತ್ತು ಭಾರತೀಯ ಮಹಾಕಾವ್ಯ ಪರಂಪರೆಗಳ ಮನೋಧರ್ಮ, ಸಾಹಿತ್ಯದ ಕನ್ನಡಿಯಲ್ಲಿ, ಫ್ರಾನ್ಸ್ ಕಾಫ್ಕಾ........ ಮುಂತಾದ ವಿಮರ್ಶಾ ಕೃತಿಗಳು ಇವರಿಂದ ಮೈದಾಳಿ ಬಂದಿವೆ.



ಖ್ಯಾತ ಸಾಹಿತಿ ವಿದ್ವತ್ತಿನ ಮೇರುಗಿರಿ ಎಲ್.ಎಸ್. ಶೇಷಗಿರಿರಾಯರ ಜನ್ಮ ಶತಮಾನೋತ್ಸವ ವರ್ಷ ಇದೇ ಫೆಬ್ರವರಿ 16 ರಿಂದ ಆರಂಭವಾಗಿದೆ. ಈ ಹೊತ್ತಿನಲ್ಲಿ ಅವರ ಬದುಕು, ಬರಹ, ಸಾಧನೆ, ಸಿದ್ಧಿಯ ಮೇಲೊಂದು ಕ್ಷ– ಕಿರಣ ಈ ಲೇಖನ.

ಕನ್ನಡ ಪುಸ್ತಕ ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಾಗ ಅದರ ಮೊದಲ ಅಧ್ಯಕ್ಷರಾಗಿ ಕರ್ನಾಟಕ ಸರ್ಕಾರದಿಂದ ನೇಮಕಗೊಂಡ ಇವರು ತಮ್ಮ ಅಧಿಕಾರಾವಧಿಯಲ್ಲಿ ಕನ್ನಡ ಲೇಖಕ–ಪ್ರಕಾಶಕರ ಅಭ್ಯುದಯಕ್ಕೆ ಪೂರಕವಾಗಿ ಮಾಡಿದ ಕೆಲಸಗಳನ್ನು ಮತ್ತು ತನ್ಮೂಲಕ ಕನ್ನಡವನ್ನು ಕಟ್ಟಿ ಬೆಳೆಸಲು ಇವರು ಶ್ರಮಿಸಿದ ರೀತಿಯನ್ನು ಈಗಲೂ ಕನ್ನಡಿಗರು ನೆನಪಿಸಿಕೊಳ್ಳುತ್ತಾರೆ. ಆರ್.ಗುಂಡೂರಾವ್ ಮುಖ್ಯಮಂತ್ರಿಗಳಾಗಿದ್ದ ಕಾಲದಲ್ಲಿ ಅವರ ಮಾಧ್ಯಮ ಸಲಹೆಗಾರರಾಗಿದ್ದ ಶೇಷಗಿರಿರಾವ್ ಆಗಲೂ ಕೂಡ ಕನ್ನಡ ಪರ ಕಾರ್ಯಗಳಿಗೆ ಹತ್ತಾಳಾಗಿ ನಿಂತವರೇ. ಸರಳತೆ, ಸಜ್ಜನಿಕೆ, ಸೌಮ್ಯತೆಯ ಮೂರ್ತಿವೆತ್ತಂತಹ ವ್ಯಕ್ತಿತ್ವದ ಇವರು ಸದ್ದಿಲ್ಲದೆಯೇ ಸಾಹಿತ್ಯದ ಮೂಲಕ ಕನ್ನಡ ಕೈಂಕರ್ಯವನ್ನು ಮಾಡುತ್ತಾ ಬಂದವರು. ಇದರ ಫಲವೆಂಬಂತೆ 74 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆಯ ಗೌರವ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ವಿಶ್ವಮಾನವ ಪ್ರಶಸ್ತಿ ಸೇರಿದಂತೆ ನಾಡಿನ ನೂರಾರು ಪ್ರಶಸ್ತಿ ಪುರಸ್ಕಾರಗಳು ಇವರ ಕೊರಳನ್ನು ಅಲಂಕರಿಸಿವೆ. ತನ್ಮೂಲಕ ಇವರು ಪ್ರಶಸ್ತಿಗಳಿಗೊಂದು ಘನತೆಯನ್ನು ತಂದು ಕೊಟ್ಟಿದ್ದಾರೆ.

ಚಂಪಾ ಮಾತಿನಲ್ಲಿ ಹೇಳುವುದಾದರೆ 'ಎಲ್.ಎಸ್.ಎಸ್. ಅವರು ಸೃಜನಶೀಲ ಲೇಖಕರಾದರೂ ಮುಖ್ಯವಾಗಿ ವಿಮರ್ಶೆ ಹಾಗೂ ಅನುವಾದಗಳಿಗೆ ತಮ್ಮನ್ನು ಅರ್ಪಿಸಿಕೊಂಡವರು. ಕನ್ನಡ ಸಾಹಿತ್ಯವನ್ನು ಇಂಗ್ಲೀಷ್ ಅನುವಾದಗಳ ಮೂಲಕ ಅಂತರಾಷ್ಟ್ರೀಯ ಲೋಕಕ್ಕೆ ಪರಿಚಯಿಸುವುದು ಒಂದು; ಹಾಗೆಯೇ ಜಾಗತಿಕ ಲೋಕವನ್ನು ಅನುವಾದದ ಮೂಲಕ ಕನ್ನಡಕ್ಕೆ ತೆರೆದಿಡುವುದು ಇನ್ನೊಂದು. ಎಲ್.ಎಸ್.ಎಸ್. ಈ ನೆಲೆಯಲ್ಲಿ ಒಬ್ಬ ಸಾಂಸ್ಕೃತಿಕ ರಾಯಭಾರಿ.....' ಖಂಡಿತವಾಗಿಯೂ ಈ ಮಾತುಗಳು ಅಕ್ಷರಕ್ಷರವು ಶೇಷಗಿರಿರಾವ್‌ರವರಿಗೆ ಒಪ್ಪುವಂತದ್ದು.

ಶ್ರೀಕೃಷ್ಣದೇವರಾಯರ 553ನೇ ಜಯಂತಿ ಆಚರಣೆ

ಅಶೋಕನ ನಂತರ ವಿಶಾಲ ಸಾಮ್ರಾಜ್ಯದ ಒಡೆಯ ಶ್ರೀಕೃಷ್ಣದೇವರಾಯ: ಸ್ಮರಣೆ



ಮೈಸೂರಿನ ವಿಜಯನಗರ 2ನೇ ಹಂತದಲ್ಲಿ ಶ್ರೀ ಕೈವಾರ ತಾತಯ್ಯ ಬಲಿಜ ನಾಯ್ಡು ಒಕ್ಕೂಟದ ವತಿಯಿಂದ ಶ್ರೀ ಕೃಷ್ಣದೇವರಾಯರ 553ನೇ ಜಯಂತಿಯನ್ನು ಆಚರಿಸಲಾಯಿತು.

ಮೈಸೂರು, ಫೆ.16(ಎಂಕೆ)– ಮೈಸೂರಿನ ವಿಜಯನಗರ 2ನೇ ಹಂತದಲ್ಲಿ ಶ್ರೀ ಕೈವಾರ ತಾತಯ್ಯ ಬಲಿಜ ನಾಯ್ಡು ಒಕ್ಕೂಟದ ವತಿಯಿಂದ ಶ್ರೀ ಕೃಷ್ಣದೇವರಾಯರ 553ನೇ ಜಯಂತಿಯನ್ನು ಶುಕ್ರವಾರ ಆಚರಿಸಲಾಯಿತು.

ಶ್ರೀ ಕೃಷ್ಣದೇವರಾಯರ ಪ್ರತಿಮೆಗೆ ಮಾಲಾರ್ಪಣೆ ಹಾಗೂ ಸಿಹಿ ಹಂಚುವ ಮೂಲಕ ಜಯಂತಿ ಆಚರಿಸಲಾಯಿತು. ಬಳಿಕ ಮೈಸೂರು ಮಹಾರಾಜ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ.ಎಸ್ ಕೃಷ್ಣಪ್ಪ ಮಾತನಾಡಿ, ಶ್ರೀ ಕೃಷ್ಣದೇವರಾಯನ ಆಡಳಿತದ ವೈಖರಿ, ರಾಜ್ಯ ತಾಂತ್ರಿಕ ನಿಲುವುಗಳಿಂದ ವೈಷ್ಣವ ಧರ್ಮದ ಪೋಷಣೆಯಾಯಿತು. ವಿಜಯನಗರ ಸಾಮ್ರಾಜ್ಯದ ಮೂಲಕ ಅಖಂಡ ಹಿಂದೂ ಸಾಮ್ರಾಜ್ಯ ಸ್ಥಾಪನೆ ಮಾಡುವಲ್ಲಿ ಶ್ರೀ ಕೃಷ್ಣದೇವರಾಯರ ಕೊಡುಗೆ ಅನನ್ಯ. ಸಾಮ್ರಾಟ ಅಶೋಕನ ಹೊರತು ವಿಶಾಲ ಸಾಮ್ರಾಜ್ಯವನ್ನು ಆಳ್ವಿಕೆ ಮಾಡಿದ ಕೀರ್ತಿ ಶ್ರೀ ಕೃಷ್ಣದೇವ ರಾಯರಿಗೆ ಸಲ್ಲುತ್ತದೆ ಎಂದರು.

ದೇಶದ ಸಾಂಸ್ಕೃತಿಕ ಪರಂಪರೆಗೆ ಐತಿಹಾಸಿಕ ದೇವಾಲಯಗಳ ನಿರ್ಮಾಣದ ಮೂಲಕ ಮಹತ್ತರ ಕೊಡುಗೆ ನೀಡಿರುವ ಅವರನ್ನು ರಾಜ್ಯ ಸರ್ಕಾರ ಕಡೆಗಣಿಸಿರುವುದು ಬೇಸರ ಸಂಗತಿಯಾಗಿದೆ. ಮೂರು ರಾಯರ ಗಂಡ ಎಂಬಿತ್ಯಾದಿ ಹಲವು ಬಿರುದಾಂಕಿತರಾಗಿದ್ದ ಶ್ರೀಕೃಷ್ಣದೇವರಾಯರ ಜಯಂತಿಯನ್ನು ಸರ್ಕಾರ ಮಟ್ಟದಲ್ಲಿ ಆಚರಿಸುವಂತೆ ಒತ್ತಾಯಿಸುವಂತೆ ಒತ್ತಾಯಿಸಿದರು.

ಶ್ರೀ ಕೈವಾರ ತಾತಯ್ಯ ಬಲಿಜ ನಾಯ್ಡು ಒಕ್ಕೂಟದ ಅಧ್ಯಕ್ಷ ರಾಕೇಶ್ ನಾಯ್ಡು, ಕಾರ್ಯದರ್ಶಿ ಹರೀಶ್ ಕುಮಾರ್, ಮುಖಂಡರಾದ ಲಿಂಗರಾಜು, ಪಿ.ಪ್ರಕಾಶ್, ಮಹೇಶ್ ನಾಯ್ಡು, ಚಿನ್ನಸ್ವಾಮಿ, ಮಂಜುನಾಥ್, ಶ್ರೀಮತಿ ಲೀಲಾ ನಾಯ್ಡು, ಯೋಗೀಶ್, ಮಂಜು ಮತ್ತಿತರರು ಉಪಸ್ಥಿತರಿದ್ದರು.

ಮಹಿಳಾ ಉದ್ಯಮಿಗಳಿಗೆ ನಬಾರ್ಡ್ ಸಹಾಯಹಸ್ತ



ಮೈಸೂರು, ಫೆ16(ಎಂಕೆ)– ಮಹಿಳೆಯರು ಸ್ವಾವಲಂಬಿಗಳಾದರೆ ದೇಶದ ಅಭಿವೃದ್ಧಿಯ ವೇಗ ಹೆಚ್ಚಾಗಲಿದ್ದು, ಮಹಿಳೆಯರನ್ನು ಉದ್ಯಮಿಗಳನ್ನಾಗಿಸುವ ನಿಟ್ಟಿನಲ್ಲಿ ನಬಾರ್ಡ್ ಸಹಾಯ ಹಸ್ತನೀಡಲಿದೆ ಎಂದು ನಬಾರ್ಡ್‌ನ ಕರ್ನಾಟಕ ಪ್ರಾದೇಶಿಕ ಪ್ರಧಾನ ವ್ಯವಸ್ಥಾಪಕ ಟಿ.ರಮೇಶ್ ಹೇಳಿದರು.

ನಗರದ ದೇವರಾಜ ಅರಸು ರಸ್ತೆಯಲ್ಲಿರುವ ಶ್ರೀ ಗಂಗಾ ಚಾರಿಟಬಲ್ ಟ್ರಸ್ಟ್‌ನಲ್ಲಿ ನಬಾರ್ಡ್(ನ್ಯಾಷನಲ್ ಬ್ಯಾಂಕ್ ಫಾರ್ ಅಗ್ರಿಕಲ್ಚರ್ ಅಂಡ್ ರೂರಲ್ ಡೆವಲಪ್‌ಮೆಂಟ್) ಸಹಯೋಗದೊಂದಿಗೆ ಆಯೋಜಿಸಿದ್ದ 15 ದಿನಗಳ ಸೂಕ್ಷ್ಮ ಉದ್ಯಮ ಅಭಿವೃದ್ಧಿ ಕಾರ್ಯಕ್ರಮ(ಸಿಹಿತಿಂಡಿ, ಮಸಾಲಪುಡಿ ತಯಾರಿಕೆ ಹಾಗೂ ಕುರುಕಲು ತಿಂಡಿ ತಯಾರಿಕೆ)ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರು ಆರ್ಥಿಕವಾಗಿ ಸಬಲರಾದರೆ ದೇಶವೂ ಅಭಿವೃದ್ಧಿ ಹೊಂದಿದಂತೆ ಎಂದರು.

ಕೃಷಿ ಕ್ಷೇತ್ರದ ಜೊತೆಗೆ ಸ್ವ–ಸಹಾಯ ಸಂಘಗಳ ಮೂಲಕ ಮಹಿಳೆಯರು ಸ್ವಯಂ ಉದ್ಯೋಗ ಮಾಡಲು ನಬಾರ್ಡ್ ಸಹಕಾರ ನೀಡಲಿದೆ. ಸುಮಾರು 30 ವರ್ಷದ ಹಿಂದೆ ಮಹಿಳೆಯರಿಗೆ ಯಾವ ಬ್ಯಾಂಕ್‌ಗಳಲ್ಲಿಯೂ ಸಾಲ–ಸೌಲಭ್ಯಗಳು ದೊರೆಯುತ್ತಿರಲಿಲ್ಲ. ಸ್ವ–ಸಹಾಯ ಸಂಘಗಳ ಸ್ಥಾಪನೆಯಿಂದ ಮಹಿಳೆಯರಿಗೆ ನೇರವಾಗಿ ಸಾಲ–ಸೌಲಭ್ಯಗಳು ದೊರೆಯುವಂತಾಗಿದೆ. ಪ್ರಸ್ತುತ ದಿನಗಳಲ್ಲಿ 25 ಲಕ್ಷಕ್ಕೂ ಅಧಿಕ ಮಹಿಳೆಯರು ಸ್ವ–ಸಹಾಯ ಸಂಘಗಳ ಸದಸ್ಯರಾಗಿರುವುದು ಪ್ರಶಂಸನೀಯ ವಿಚಾರವಾಗಿದೆ ಎಂದರಲ್ಲದೆ ಶ್ರೀ ಗಂಗಾ ಚಾರಿಟಬಲ್ ಟ್ರಸ್ಟ್ ಸಹಯೋಗದಲ್ಲಿ ಹಮ್ಮಿಕೊಂಡಿರುವ 15 ದಿನಗಳ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವ ಮಹಿಳೆಯರು ಮುಂದಿನ ದಿನಗಳಲ್ಲಿ ಉದ್ಯಮಿಗಳಾಗಲಿ ಎಂದು ಶುಭ ಹಾರೈಸಿದರು. ನಬಾರ್ಡ್‌ನ ಜಿಲ್ಲಾ ಅಭಿವೃದ್ಧಿ ಅಧಿಕಾರಿ ಶಾಂತವೀರ, ಕೃಷಿ ಇಲಾಖೆ ನಿವೃತ್ತ ಸಹಾಯಕ ನಿರ್ದೇಶಕರಾದ ಕೆ.ಕಾಮಯ್ಯ, ಪಿ.ಶಿವರಾಮೇಗೌಡ, ತೋಟಗಾರಿಕೆ ಇಲಾಖೆ ನಿವೃತ್ತ ಸಹಾಯಕ ಅಧಿಕಾರಿ ಎಂ.ಮರಿಗೌಡ, ಬೆಮೆಲ್‌ನ ನಿವೃತ್ತ ನಿರ್ದೇಶಕ ಬಿ.ಶಂಕರ್, ಶ್ರೀ ಗಂಗಾ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ರಾಜ್ ಕಾಮಯ್ಯ, ಕಾರ್ಯದರ್ಶಿ ಎಂ.ದಿವ್ಯಶ್ರೀ, ಸಂಯೋಜಕ ರಾಜಣ್ಣ, ಚಾಂದಿನಿ ಮತ್ತಿತರರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇನ್ನು ಆಯುಕ್ತಾಲಯವಾಗಿ ಉನ್ನತಿ

ವೈದ್ಯಕೀಯ ಕಾಲೇಜುಗಳ ಸುಧಾರಣೆಗೆ 400 ಕೋಟಿ; ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ 350 ಕೋಟಿ ಅನುದಾನ

ಬೆಂಗಳೂರು, ಫೆ.16(ಕೆಎಂಶಿ)– ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯವನ್ನು ಆಯುಕ್ತಾಲಯವನ್ನಾಗಿ ಉನ್ನತೀಕರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಘೋಷಣೆ ಮಾಡಿದ್ದಾರೆ.

ವೈದ್ಯಕೀಯ ಶಿಕ್ಷಣ ಕ್ಷೇತ್ರವು ಸರ್ಕಾರಿ ವಲಯವೆಂದು ವ್ಯಾಪಕ ಬೆಳವಣಿಗೆ ಹೊಂದಿದ್ದು, ಇಲಾಖೆ ಕಾರ್ಯ ನಿರ್ವಹಣೆಯಲ್ಲಿ ಇನ್ನಷ್ಟು ದಕ್ಷತೆ ತರುವ ಕಾರಣಕ್ಕಾಗಿ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯವನ್ನು ಆಯುಕ್ತಾಲಯವನ್ನಾಗಿ ಉನ್ನತೀಕರಿಸಲಾಗುವುದು. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ವೈದ್ಯಕೀಯ ಕಾಲೇಜುಗಳ ನಿರ್ಮಾಣ ಮತ್ತು ಉಪಕರಣಗಳ ಖರೀದಿಗಾಗಿ 400 ಕೋಟಿ ರೂ. ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ನಿರ್ಮಾಣಕ್ಕಾಗಿ 350 ಕೋಟಿ ರೂ., ಕಲಬುರಗಿಯ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಮಕ್ಕಳ ಆರೋಗ್ಯ ಘಟಕವನ್ನು ಬೆಂಗಳೂರು ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆ ತಾಂತ್ರಿಕ ನೆರವಿನೊಂದಿಗೆ ಸ್ಥಾಪನೆ.

ಕೊಡಗು ವೈದ್ಯಕೀಯ ಸಂಸ್ಥೆಯಲ್ಲಿ ಅಪಾಯಕಾರಿ ಸಾಂಕ್ರಾಮಿಕ ರೋಗ, ಸೋಂಕುಗಳನ್ನು ಪತ್ತೆ ಹಚ್ಚಲು ವೈರಲ್ ರಿಸರ್ಚ್ ಮತ್ತು ಡಯಾಗ್ನಸ್ಟಿಕ್ ಲ್ಯಾಬೊರೇಟರಿ ನಿರ್ಮಾಣ, ಚಿತ್ರದುರ್ಗ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಅಗತ್ಯವಿರುವ ಹೊಸ ವೈದ್ಯಕೀಯ ಕಟ್ಟಡ, ವಿದ್ಯಾರ್ಥಿ ವಸತಿ ನಿಲಯ, ಸಿಬ್ಬಂದಿ, ವಸತಿ ಗೃಹ ನಿರ್ಮಾಣ ಕಾರ್ಯ ಪೂರ್ಣಗೊಳಿಸುತ್ತೇವೆ ಎಂದು ಹೇಳಿದ್ದಾರೆ.


ಬೆಂಗಳೂರಿನ ನೆಫ್ರೋ–ಯೂರಾಲಜಿ ಸಂಸ್ಥೆಯ ಶಸ್ತ್ರಚಿಕಿತ್ಸೆ ವಿಭಾಗದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ರೋಬೋಟಿಕ್ ಯಂತ್ರದ ಮೂಲಕ ಉತ್ತಮ ಚಿಕಿತ್ಸೆ ನೀಡಲಾಗುವುದು.

ವೈದ್ಯಕೀಯ ಕಾಲೇಜಿನ ಆಸ್ಪತ್ರೆ ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ 114 ಮಾಡ್ಯೂಲರ್ ಓಟಿಗಳನ್ನು 177 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಸಂಸ್ಥೆಗಳಲ್ಲಿ 64 ಅನೇಸ್ತೇಷಿಯಾ ವರ್ಕ್ ಸ್ಟೇಷನ್‌ಗಳನ್ನು 34 ಕೋಟಿ ರೂ. ವೆಚ್ಚದಲ್ಲಿ ಖರೀದಿಸಿ ಅಳವಡಿಕೆ, ಈಗಾಗಲೇ ನಾಲ್ಕು ಜಿಲ್ಲೆಗಳಲ್ಲಿ ಅಸ್ತಿತ್ವದಲ್ಲಿರುವ ಹ್ಯೂಮನ್ ಮಿಲ್ಕ್ ಬ್ಯಾಂಕ್‌ಗಳನ್ನು ಇನ್ನು ಮುಂದೆ ಮೈಸೂರು ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು ಎಂದರು.

ಬಜೆಟ್‌ನಲ್ಲಿ ಮೇಕೆದಾಟು ಅಣೆಕಟ್ಟೆ ನಿರ್ಮಾಣದ ದಿಟ್ಟತನ ಘೋಷಣೆ

● ಇದರ ಜೊತೆಗೆ ಪ್ರಮುಖ ನೀರಾವರಿ ಯೋಜನೆಗಳ ಪ್ರಸ್ತಾಪ ● ಕುಡಿಯುವ ನೀರು, ಕೃಷಿ, ಕೈಗಾರಿಕೆಗಳಿಗೆ ನೀರು ಪೂರೈಸಲು 200 ಕೋಟಿ ವೆಚ್ಚದಲ್ಲಿ ಸಣ್ಣಪುಟ್ಟ 115 ಕಾಮಗಾರಿ ಪ್ರಕಟ



ಬೆಂಗಳೂರು, ಫೆ.16(ಕೆಎಂಶಿ)– ಕೃಷ್ಣರಾಜ ಸಾಗರ ಅಣೆಕಟ್ಟೆಗೆ ಸಮಾನಾಂತರವಾಗಿ ಮೇಕೆದಾಟು ಬಳಿ ಕುಡಿಯುವ ನೀರಿನ ಸಂಗ್ರಹಕ್ಕಾಗಿ ಸಮತೋಲನ ಜಲಾಶಯ ನಿರ್ಮಿಸುವ ಗಟ್ಟಿತನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ 2024–25ರ ಮುಂಗಡ ಪತ್ರದಲ್ಲಿ ಪ್ರದರ್ಶಿಸಿದ್ದಾರೆ.

ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ಅನುಷ್ಠಾನಕ್ಕಾಗಿ ಸ್ಥಾಪನೆಗೊಂಡಿರುವ ಪ್ರತ್ಯೇಕ ಯೋಜನಾ ವಿಭಾಗದ ಮೂಲಕ ಮುಳುಗಡೆಯಾಗುವ ಭೂಮಿಯನ್ನು ಗುರುತಿಸುವ ಸರ್ವೆ ಹಾಗೂ ಮರಗಳ ಎಣಿಕೆ ಪ್ರಕ್ರಿಯೆಗೆ ಚಾಲನೆ ನೀಡಿದ್ದಾರೆ. ಉಳಿದ ಅಗತ್ಯ ತೀರುವಳಿಗಳನ್ನು ಸಕ್ಷಮ ಪ್ರಾಧಿಕಾರಗಳಿಂದ ಪಡೆದು ಶೀಘ್ರವಾಗಿ ಪ್ರಾರಂಭಿಸಲು ಆದ್ಯತೆ ಮೇರೆಗೆ ಕ್ರಮವಹಿಸಲಾಗುವುದು ಎಂದು ತಿಳಿಸಿದ್ದಾರೆ.

ಕಾವೇರಿ ನೀರಾವರಿ ನಿಗಮದಡಿ ವಿಶ್ವೇಶ್ವರಯ್ಯ ನಾಲಾ ಜಾಲದ ಹೆಬ್ಬಕವಾಡಿ, ನಿಡಘಟ್ಟ, ತುರುಗನೂರು, ಮಳವಳ್ಳಿ ತಾಲೂಕಿನ ಮಾದವಮಂತ್ರಿ ನಾಲೆಗಳು ಹಾಗೂ ಮದ್ದೂರು ತಾಲೂಕು ಕೆಮ್ಮಣ್ಣುನಾಲಾ ಆಧುನೀಕರಣ, ಹುಣಸೂರು ತಾಲೂಕಿನ ಮರದೂರು, ಕನಕಪುರದ ಹೆಗ್ಗನೂರು ಕೆರೆ ತುಂಬಿಸುವ ಯೋಜನೆಗಳು, ಶ್ರೀರಂಗ ಕುಡಿಯುವ ನೀರು ಯೋಜನೆಗೆ ಪೈಪ್ಲೈನ್ ಮೂಲಕ ನೀರು ಒದಗಿಸುವ ಯೋಜನೆ, ವರುಣಾ ವಿಧಾನಸಭಾ ಕ್ಷೇತ್ರದಲ್ಲಿ ನಾಲೆಗಳ ಅಭಿವೃದ್ಧಿ, ಗುಬ್ಬಿಯ ಮಠದಹಳ್ಳಿ ಕುಡಿಯುವ ನೀರು ಯೋಜನೆ, ರಾಮನಗರದ ಬಳಿ ಅರ್ಕಾವತಿ ರಿವರ್ ಫ್ರಂಟ್ ಡೆವಲಪ್‌ಮೆಂಟ್ ಯೋಜನೆಗಳನ್ನು ಅಂದಾಜು 2,000 ಕೋಟಿ ರೂ. ಮೊತ್ತದಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು.

ಪಾವಗಡ ಸೋಲಾರ್ ಪಾರ್ಕ್ ಮಾದರಿಯಲ್ಲಿ ಜಲಸಂಪನ್ಮೂಲ ಇಲಾಖೆಯ ಮಾಲೀಕತ್ವವಿರುವ ಜಮೀನಿನಲ್ಲಿ ಮತ್ತು ಜಲಾಶಯಗಳ ಹಿನ್ನೀರಿನಲ್ಲಿ ಸೂಕ್ತ ಮಾದರಿಯ ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸುವ ಯೋಜನೆಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳಲಾಗುವುದು.

ಮಳೆಯ ಕೊರತೆಯಿಂದಾಗಿ ಸಣ್ಣ ನೀರಾವರಿ ಕೆರೆಗಳ ವಿನ್ಯಾಸಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರು ದೊರೆಯುತ್ತಿಲ್ಲ. ಅಲ್ಲದೆ, ಕುಡಿಯುವ ನೀರಿಗೂ ತೊಂದರೆಯಾಗುತ್ತಿದೆ. ಇಂತಹ ಕೆರೆಗಳನ್ನು ಸಮೀಪದ ಜೀವನದಿಗಳಿಂದ ತುಂಬಿಸಲು ಯೋಜನೆಗಳನ್ನು ಕೈಗೊಳ್ಳಲು ಗಣನೀಯ ಪ್ರಮಾಣದ ವೆಚ್ಚ ಮಾಡಲಾಗಿದೆ. ಈ ಯೋಜನೆಗಳಿಂದಾಗಿ ಸ್ಥಳೀಯ ಅಂತರ್ಜಲ ಮಟ್ಟದ ವಸ್ತುಸ್ಥಿತಿ, ಸುತ್ತಲಿನ ರೈತರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗಳ ಆಧಾರದಲ್ಲಿ ಮೌಲ್ಯಮಾಪನ ಕಾರ್ಯ ಕೈಗೊಳ್ಳಲಾಗುವುದು ಎಂದರು.

ಕುಡಿಯುವ ನೀರು, ಕೃಷಿ ಹಾಗೂ ಕೈಗಾರಿಕೆಗಳಿಗೆ ನೀರನ್ನು ಸಮರ್ಪಕವಾಗಿ ಪೂರೈಸಲು ಕೆರೆಗಳ ಅಭಿವೃದ್ಧಿ, ಚೆಕ್ ಡ್ಯಾಂ ಮತ್ತು ಬ್ರಿಡ್ಜ್–ಕಂ–ಬ್ಯಾರೇಜ್ ನಂತಹ 115 ಕಾಮಗಾರಿಗಳನ್ನು 200 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದರು.

ಕೆಆರ್‌ಎಸ್ ಬೃಂದಾವನ ವಿಶ್ವ ದರ್ಜೆ ಪ್ರವಾಸೋದ್ಯಮ ಕೇಂದ್ರವಾಗಿ ಅಭಿವೃದ್ಧಿ

ಮಂಡ್ಯ ವಿ.ಸಿ.ಫಾರಂನಲ್ಲಿ ಕೃಷಿ ವಿವಿ ಸ್ಥಾಪನೆ ಚಿಂತನೆ



ಬೆಂಗಳೂರು, ಫೆ.16(ಕೆಎಂಶಿ)– ಕೃಷ್ಣರಾಜ ಸಾಗರ (ಕೆಆರ್‌ಎಸ್) ಅಣೆಕಟ್ಟೆಯ ಬೃಂದಾವನ ಉದ್ಯಾನವನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಉನ್ನತೀಕರಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ವಿಧಾನಸಭೆಯಲ್ಲಿಂದು ಮಂಡಿಸಿದ 2024–25ರ ಮುಂಗಡಪತ್ರದಲ್ಲಿ ವಿಷಯ ಪ್ರಸ್ತಾಪಿಸಿರುವ ಮುಖ್ಯಮಂತ್ರಿ ಅವರು, ಉದ್ಯಾನವನ್ನು ವಿಶ್ವದರ್ಜೆಯ ಪ್ರವಾಸೋದ್ಯಮ ಕೇಂದ್ರವನ್ನಾಗಿಸುವ ಉದ್ದೇಶದಿಂದ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದರು. ಮಂಡ್ಯ ಜಿಲ್ಲೆಯ ವಿ.ಸಿ. ಫಾರಂನಲ್ಲಿ ಕೃಷಿ ವಿಶ್ವವಿದ್ಯಾಲಯ ಸ್ಥಾಪಿಸುವ ಕುರಿತು ಪರಿಶೀಲಿಸಲು ತಜ್ಞರ ಸಮಿತಿ ರಚಿಸುವುದಾಗಿ ತಿಳಿಸಿದ್ದಾರೆ.

ರೈತ ಪರ ಯೋಜನೆಗಳ 'ಕರ್ನಾಟಕ ರೈತ ಸಮೃದ್ಧಿ' ಯೋಜನೆ

▸ ಸಮಗ್ರ ಕೃಷಿಯನ್ನು ಉತ್ತೇಜಿಸುವ ಉದ್ದೇಶ ▸ ರೈತರ ಆದಾಯದಲ್ಲಿ ಸುಸ್ಥಿರತೆ ಕಾಯ್ದುಕೊಳ್ಳಲು ಬೆಂಬಲ ▸ ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಸಹಕಾರ, ಪಶು ಸಂಗೋಪನೆ ಸಮನ್ವಯಕ್ಕಾಗಿ ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಕೃಷಿ ಅಭಿವೃದ್ಧಿ ಪ್ರಾಧಿಕಾರ

ಬೆಂಗಳೂರು, ಫೆ.16(ಕೆಎಂಶಿ)– ವಿವಿಧ ರೈತಪರ ಯೋಜನೆಗಳನ್ನು ಒಗ್ಗೂಡಿಸಿ, ಸಮಗ್ರ ಕೃಷಿಯನ್ನು ಉತ್ತೇಜಿಸುವ 'ಕರ್ನಾಟಕ ರೈತ ಸಮೃದ್ಧಿ' ಯೋಜನೆಯನ್ನು ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಘೋಷಣೆ ಮಾಡಿದ್ದಾರೆ.

2024–25ರ ಮುಂಗಡಪತ್ರದಲ್ಲಿ ಪ್ರಸ್ತಾಪಿಸಿರುವ ಮುಖ್ಯಮಂತ್ರಿಗಳು, ಕೃಷಿ, ಪಶುಸಂಗೋಪನೆ, ತೋಟಗಾರಿಕೆ, ಹೈನುಗಾರಿಕೆ ಒಳಗೊಂಡಂತೆ ಸಮಗ್ರ ಕೃಷಿ ಕೈಗೊಳ್ಳುವ ಮೂಲಕ ಆದಾಯದಲ್ಲಿ ಸುಸ್ಥಿರತೆಯನ್ನು ಕಂಡುಕೊಳ್ಳಲು ಬೆಂಬಲ ನೀಡಲಾಗುವುದು ಎಂದಿದ್ದಾರೆ.

ಮಣ್ಣಿನ ಗುಣ ಹಾಗೂ ಮಾರುಕಟ್ಟೆ ಬೇಡಿಕೆಯನ್ನು ಆಧರಿಸಿ ಯಾವ ಬೆಳೆ ಬೆಳೆಯಬೇಕೆಂಬ ಕುರಿತು ರೈತರಿಗೆ ಮಾರ್ಗದರ್ಶನ ನೀಡುವುದು. ಮಣ್ಣು ಪರೀಕ್ಷೆ ಮತ್ತು ಗುಣಮಟ್ಟ ಕುರಿತು ಮಾಹಿತಿ ನೀಡುವುದು. ಹೊಸ ಕೃಷಿ ಪದ್ಧತಿ ಹಾಗೂ ತಂತ್ರಜ್ಞಾನಗಳ ಕುರಿತು ರೈತರಿಗೆ ಅರಿವು ಮೂಡಿಸಿ, ಬೆಂಬಲ ನೀಡುವುದು. ರೈತರಿಗೆ ಸಂಗ್ರಹಣೆ ಮತ್ತು ಮೌಲ್ಯವರ್ಧನೆಯ ಕುರಿತು ಅರಿವು ಮೂಡಿಸುವುದು. ರೈತರು ಬೆಳೆದ ಬೆಳೆಗೆ ಉತ್ತಮ ಬೆಲೆ ಪಡೆಯಲು ಮಾರುಕಟ್ಟೆ ಸಂಪರ್ಕ ಕಲ್ಪಿಸಲಾಗುವುದೆಂದು ತಿಳಿಸಿದ್ದಾರೆ.

ಕೃಷಿ ಮತ್ತು ಪೂರಕ ಚಟುವಟಿಕೆಗಳ ನೀತಿ ಮತ್ತು ಯೋಜನೆಗಳ ಸಂಯೋಜನೆ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕೆ ಅನುವಾಗುವಂತೆ ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಸಹಕಾರ, ಪಶುಸಂಗೋಪನೆ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಕೃಷಿ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಲಾಗುವುದು.



ಬೀಜ ಬ್ಯಾಂಕ್ ಸ್ಥಾಪನೆ: ಕಣ್ಮರೆಯಾಗುತ್ತಿರುವ ಹಾಗೂ ನಶಿಸಿ ಹೋಗುತ್ತಿರುವ ಸ್ಥಳೀಯ ಬೆಳೆಗಳ ತಳಿಗಳನ್ನು ಸಂಗ್ರಹಿಸಲು ಮತ್ತು ಸಂರಕ್ಷಿಸುವ ಉದ್ದೇಶದಿಂದ ಒಂದು ಸಮುದಾಯ ಬೀಜ ಬ್ಯಾಂಕ್ ಅನ್ನು ಸ್ಥಾಪಿಸಲಾಗುವುದು. ಇದಕ್ಕಾಗಿ 'ನಮ್ಮ ಮಿಲ್ಲೆಟ್' ಹೊಸ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುವುದು. ಈ ಯೋಜನೆಯಡಿಯಲ್ಲಿ ಸಂಸ್ಕರಿಸಿದ ಸಿರಿಧಾನ್ಯಗಳು ಹಾಗೂ ಮೌಲ್ಯವರ್ಧಿತ ಸಿರಿಧಾನ್ಯ ಉತ್ಪನ್ನಗಳನ್ನು ಅಗ್ರಿ–ಟೆಕ್ ಕಂಪನಿಗಳು ಮತ್ತು ರಿಟೇಲ್ ಚೈನ್‌ಗಳ ಸಹಭಾಗಿತ್ವದೊಂದಿಗೆ ಕೈಗೆಟಕುವ ದರದಲ್ಲಿ ಜನರಿಗೆ ದೊರಕಿಸಲು ಅನುವು ಮಾಡಿಕೊಡಲಾಗುವುದು.

ರಾಜ್ಯದ ಬರಪೀಡಿತ ಮತ್ತು ಮಳೆಯಾಶ್ರಿತ ಪ್ರದೇಶಗಳಲ್ಲಿ ಸುಸ್ಥಿರ ಕೃಷಿ ಮಾಡಲು ಮಣ್ಣು ಮತ್ತು ನೀರಿನ ಸಂರಕ್ಷಣೆಗಾಗಿ ಪ್ರತಿ ವರ್ಷ 1,000ದಂತೆ ಒಟ್ಟು 5,000 ಸಣ್ಣ ಸರೋವರಗಳನ್ನು ನರೇಗಾ ಯೋಜನೆಯಡಿ ನಿರ್ಮಿಸಲಾಗುವುದು.

ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ರಫ್ತನ್ನು ಉತ್ತೇಜಿಸಲು ರಾಜ್ಯದಲ್ಲಿರುವ ವಿಮಾನ ನಿಲ್ದಾಣಗಳ ಹತ್ತಿರದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ 'ಆಹಾರ ಪಾರ್ಕ್'ಗಳನ್ನು ಸ್ಥಾಪಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಶಿವಮೊಗ್ಗದ ಸೋಗಾನೆ, ವಿಜಯಪುರದ ಇಟ್ಟಂಗಿಹಾಳ ಮತ್ತು ಬೆಂಗಳೂರು ಗ್ರಾಮಾಂತರದ ಪೂಜೇನಹಳ್ಳಿಯಲ್ಲಿ ಸ್ಥಾಪಿಸಲಾಗುವುದು.

ತೋಟಗಾರಿಕೆಗೆ ಸಂಬಂಧಿಸಿದ ತಾಂತ್ರಿಕ ಸಲಹೆ, ಮಾರುಕಟ್ಟೆ ಸಂಪರ್ಕ, ಬೇಸಾಯ ಪರಿಕರಗಳು ಮತ್ತು ಉತ್ಪನ್ನಗಳನ್ನು ಒಂದೇ ಸೂರಿನಡಿ ಒದಗಿಸುವ ಉದ್ದೇಶದಿಂದ ಆಯ್ದ ಜಿಲ್ಲೆಗಳಲ್ಲಿ ಕಿಸಾನ್ ಮಾಲ್‌ಗಳನ್ನು ಸ್ಥಾಪಿಸಲಾಗುವುದು ಎಂದು ತಿಳಿಸಿದ್ದಾರೆ.

ತೋಟಗಾರಿಕೆ ಬೆಳೆಗಳ ಸಂಸ್ಕರಣೆ ಮತ್ತು ರಫ್ತಿನ ಪ್ರಮಾಣ ಹೆಚ್ಚಿಸಲು ಕೊಯ್ಲೋತ್ತರ ನಿರ್ವಹಣಾ ಕೇಂದ್ರ ಹಾಗೂ ಮೌಲ್ಯವರ್ಧನ ಸಂಸ್ಕರಣಾ ಘಟಕಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

ಗ್ರಾಮೀಣ ಭಾಗದ ರಸ್ತೆ ಅಭಿವೃದ್ಧಿಗೆ 'ಪ್ರಗತಿ ಪಥ' ಯೋಜನೆ ಜಾರಿ


● 189 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ತಲಾ 50 ಕಿ.ಮೀ. ಉದ್ದದ ರಸ್ತೆಯಂತೆ 9450 ಕಿ.ಮೀ. ರಸ್ತೆ ಸಂಪರ್ಕ ಜಾಲ; ಇದಕ್ಕೆ 5400 ಕೋಟಿ ಅನುದಾನ ಮೀಸಲು ● ಗ್ರಾಮ ಪಂಚಾಯಿತಿಗಳು ಸಮರ್ಥ ಗ್ರಾಮ ಸರ್ಕಾರಗಳಾಗಿ ರೂಪಿಸುವ ಪ್ರಸ್ತಾಪ

ಬೆಂಗಳೂರು, ಫೆ.16(ಕೆಎಂಶಿ)– ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ಮತ್ತು ಗುಣಾತ್ಮಕವಾಗಿ ಅಭಿವೃದ್ಧಿಪಡಿಸಲು ಪ್ರಗತಿ ಪಥ ಯೋಜನೆಯನ್ನು ಬಾಹ್ಯ ನೆರವಿನೊಂದಿಗೆ ಪ್ರಾರಂಭಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಪ್ರಕಟಿಸಿದ್ದಾರೆ.

ಈ ಯೋಜನೆ ಅಡಿಯಲ್ಲಿ 189 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ತಲಾ 50 ಕಿ.ಮೀ. ಉದ್ದದ ರಸ್ತೆಗಳಂತೆ, ಒಟ್ಟಾರೆಯಾಗಿ 9,450 ಕಿ.ಮೀ. ಉದ್ದದ ರಸ್ತೆ ಸಂಪರ್ಕ ಜಾಲವನ್ನು 5,200 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು. ಕಲ್ಯಾಣ ಪಥ ಯೋಜನೆಯಡಿ ಕಲ್ಯಾಣ ಕರ್ನಾಟಕದ 38 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ ಮಾದರಿಯಲ್ಲಿ ಒಟ್ಟು 1,150 ಕಿ.ಮೀ. ರಸ್ತೆಗಳನ್ನು 1,000 ಕೋಟಿ ರೂ.ಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

ಕರ್ನಾಟಕದಲ್ಲಿ ಗ್ರಾಮ ಪಂಚಾಯಿತಿಗಳು ಆರೋಗ್ಯ ರಕ್ಷಣೆ, ಘನತ್ಯಾಜ್ಯ ನಿರ್ವಹಣೆ, ಗ್ರಂಥಾಲಯ ನವೀಕರಣ ಮುಂತಾದ ಕ್ಷೇತ್ರಗಳಲ್ಲಿ ನಾಯಕತ್ವದ ಸಾಮರ್ಥ್ಯವನ್ನು ಪ್ರದರ್ಶಿಸಿವೆ. ಈ ದಿಸೆಯಲ್ಲಿ ಗ್ರಾಮ ಪಂಚಾಯಿತಿಗಳನ್ನು ಸಾಮಾಜಿಕ ಕಳಕಳಿಯುಳ್ಳ ಸ್ಪಂದನಾಶೀಲ ಹಾಗೂ ಸಮರ್ಥ ಗ್ರಾಮ ಸರ್ಕಾರಗಳನ್ನಾಗಿ ರೂಪಿಸಲು ಕ್ರಮವಹಿಸಲಾಗುವುದು ಎಂದರು.

ಕೌನ್ಸಿಲಿಂಗ್ ಮೂಲಕ ವರ್ಗಾವಣೆ: ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಕಾರ್ಯದರ್ಶಿ ಮತ್ತು ಲೆಕ್ಕ ಸಹಾಯಕರ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡಲಾಗುವುದು. ಗ್ರಾಮಗಳ ಸಂಪನ್ಮೂಲಗಳನ್ನು ಹೆಚ್ಚಿಸಲು ಗ್ರಾಮ ಪಂಚಾಯಿತಿ ಸ್ವತ್ತುಗಳ ಆಸ್ತಿ ಮೌಲ್ಯವರ್ಧನೆ ನೀತಿಯನ್ನು ಜಾರಿಗೆ ತರಲಾಗುವುದು.



ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಇ–ಆಫೀಸ್ ಪ್ರಾರಂಭಿಸಲಾಗುವುದು, ಸೇವಾ ಸಿಂಧು ಪೋರ್ಟಲ್ ಮೂಲಕ ಒದಗಿಸಲಾಗುತ್ತಿರುವ ಎಲ್ಲಾ ಸೇವೆಗಳನ್ನು ಈ ವರ್ಷದಿಂದ ಬಾಪೂಜಿ ಸೇವಾ ಕೇಂದ್ರಗಳಲ್ಲೂ ಪ್ರಾರಂಭಿಸಲಾಗುವುದು.

ಗ್ರಾಮ ಪಂಚಾಯಿತಿಗಳಲ್ಲಿನ ವಿದ್ಯುತ್ ಬಳಕೆಯ ಮೇಲೆ ನಿಗಾ ವಹಿಸಲು ಹಾಗೂ ವಿದ್ಯುತ್ ವೆಚ್ಚ ಕಡಿಮೆ ಮಾಡಲು ಪ್ರಾಯೋಗಿಕವಾಗಿ, 50 ಗ್ರಾಮ ಪಂಚಾಯಿತಿಗಳಲ್ಲಿ ಹೊಂಬೆಳಕು ಕಾರ್ಯಕ್ರಮದಡಿ 25 ಕೋಟಿ ರೂ. ವೆಚ್ಚದಲ್ಲಿ ಸೋಲಾರ್ ದೀಪಗಳನ್ನು ಅಳವಡಿಸಲಾಗುವುದು. 200 ಗ್ರಾಮ ಪಂಚಾಯಿತಿಗಳಲ್ಲಿ ಬೀದಿ ದೀಪಗಳ ವ್ಯವಸ್ಥಿತ ಮೀಟರಿಂಗ್ ಮಾಡಲಾಗುವುದು.

ರಾಜ್ಯದ 100 ಆಯ್ದ ಗ್ರಾಮ ಪಂಚಾಯಿತಿಗಳಲ್ಲಿ ಮಹಿಳೆಯರ ಆಕಾಂಕ್ಷೆ ಮತ್ತು ಆಸಕ್ತಿಗೆ ಅನುಗುಣವಾಗಿ ಉದ್ಯೋಗಾಧಾರಿತ ಕೌಶಲ್ಯ ತರಬೇತಿ ನೀಡಲು ಸಾವಿತ್ರಿ ಬಾಯಿ ಫುಲೆ ಮಹಿಳಾ ಸಬಲೀಕರಣ ಯೋಜನೆಯನ್ನು ಪ್ರಾರಂಭಿಸಲಾಗುವುದು. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ತಲಾ ಒಂದು ಲಕ್ಷ ರೂ. ನೆರವಿನೊಂದಿಗೆ ಎಸ್.ಹೆಚ್.ಜಿ.ಗಳ ಸಹಯೋಗದೊಂದಿಗೆ ಎಣ್ಣೆಗಾಣ ಸ್ಥಾಪಿಸಲಾಗುವುದು.

ಸಮರ್ಥ ರೀತಿ ತ್ಯಾಜ್ಯ ವಿಲೇವಾರಿ: ಗ್ರಾಮೀಣ ಪ್ರದೇಶದಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಸ್ವ–ಸಹಾಯ ಸಂಘಗಳ ಒಕ್ಕೂಟಗಳ ಮೂಲಕ ಕೈಗೊಳ್ಳಲಾಗುತ್ತಿದೆ. ಸದರಿ ವ್ಯವಸ್ಥೆಯನ್ನು ಸುಸ್ಥಿರವಾಗಿ ನಿರ್ವಹಿಸಲು, ತ್ಯಾಜ್ಯವನ್ನು ಕಡಿಮೆ ಮಾಡುವ, ಪುನಃ ಬಳಸುವ ಮತ್ತು ಮರಳಿ ಉಪಯೋಗಿಸುವ ತತ್ವಗಳಾಧಾರಿತ ವರ್ತುಲ ಆರ್ಥಿಕತೆ ಮಾದರಿಯನ್ನು ಪ್ರಸಕ್ತ ಸಾಲಿನಿಂದ ಪ್ರೋತ್ಸಾಹಿಸಲಾಗುವುದು.

ಜೀತ ಕಾರ್ಮಿಕ ಪದ್ಧತಿಯಿಂದ ಬಿಡುಗಡೆ ಗೊಂಡ ಕಾರ್ಮಿಕರ ಪುನರ್ವಸತಿಗಾಗಿ ನೀಡುವ ಮಾಸಿಕ ಪ್ರೋತ್ಸಾಹ ಧನವನ್ನು 2,000 ರೂ.ಗಳಿಗೆ ಹೆಚ್ಚಿಸಲಾಗುವುದು. ಈ ಪಿಡುಗಿನ ಪರಿಣಾಮಕಾರಿ ನಿರ್ಮೂಲನೆಗೆ ಪೂರಕವಾಗಿ ಸಂಬಂಧಪಟ್ಟ ಇಲಾಖೆಗಳ ಕ್ಷೇತ್ರಮಟ್ಟದ ಅಧಿಕಾರಿಗಳನ್ನು ಜೀತ ಕಾರ್ಮಿಕ ನಿಷೇಧ ಅಧಿಕಾರಿಗಳಾಗಿ ಅಧಿಸೂಚಿಸಲಾಗುವುದು ಎಂದಿದ್ದಾರೆ.

ತೀವ್ರ ಅಸ್ವಸ್ಥ ರೋಗಿಗಳಿಗೆ ಚಿಕಿತ್ಸೆಗಾಗಿ ಆಧುನಿಕ ಕ್ರಿಟಿಕಲ್ ಕೇರ್ ಘಟಕ ಸ್ಥಾಪನೆ

● ಪ್ರತಿ ಜಿಲ್ಲೆಯಲ್ಲಿ ಸ್ಥಾಪಿಸಲು ಕ್ರಮ; ಪ್ರಸಕ್ತ ಸಾಲಿನಲ್ಲಿ 15 ಜಿಲ್ಲೆಯಲ್ಲಿ ನಿರ್ಮಾಣ ಪ್ರಾರಂಭ ● ಯಳಂದೂರು ಸೇರಿ ಹಲವು ತಾಲೂಕಲ್ಲಿ ಆಸ್ಪತ್ರೆ ನಿರ್ಮಾಣ ● 2025ರೊಳಗೆ ಕ್ಷಯ ರೋಗ ನಿರ್ಮೂಲನೆಗೆ ಕ್ರಮ ● ರಾಜ್ಯದಲ್ಲಿ 50 ಹೊಸ ರಕ್ತ ಶೇಖರಣಾ ಘಟಕ ಸ್ಥಾಪನೆ

ಬೆಂಗಳೂರು, ಫೆ.16(ಕೆಎಂಶಿ)– ರಾಜ್ಯದಲ್ಲಿ ತೀವ್ರ ಅಸ್ವಸ್ಥತೆಯಿಂದ ಬಳಲುತ್ತಿರುವ ರೋಗಿಗಳಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಿ ಪ್ರಾಣ ಉಳಿಸುವ ಉದ್ದೇಶದಿಂದ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಆಧುನಿಕ ಕ್ರಿಟಿಕಲ್ ಕೇರ್ ಬ್ಲಾಕ್‌ಗಳನ್ನು ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ.

2024–25ರ ಮುಂಗಡಪತ್ರದಲ್ಲಿ ಅವರು, ಈಗಾಗಲೇ 15 ಜಿಲ್ಲೆಗಳಲ್ಲಿ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಉಡುಪಿ, ದಾವಣಗೆರೆ, ವಿಜಯಪುರ, ಮೈಸೂರು, ಮಂಡ್ಯ, ಧಾರವಾಡ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ 187 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು, ಮುಂದಿನ ಸಾಲಿನಲ್ಲಿ ಉಳಿದ 9 ಜಿಲ್ಲೆಗಳಲ್ಲೂ ಕ್ರಿಟಿಕಲ್ ಕೇರ್ ಬ್ಲಾಕ್‌ಗಳನ್ನು ಸ್ಥಾಪಿಸಲಾಗುವುದು ಎಂದರು.

ತಾಲೂಕು ಆಸ್ಪತ್ರೆಗಳಿಲ್ಲದ ಆನೇಕಲ್, ನೆಲಮಂಗಲ, ಹೊಸಕೋಟೆ, ಶೃಂಗೇರಿ, ಖಾನಾಪುರ, ಶಿರಹಟ್ಟಿ ಮತ್ತು ಯಳಂದೂರು ತಾಲೂಕುಗಳಲ್ಲಿ ಪ್ರಸಕ್ತ ಸಾಲಿನಲ್ಲಿ 100 ಹಾಸಿಗೆ ಸಾಮರ್ಥ್ಯದ ತಾಲೂಕು ಆಸ್ಪತ್ರೆಗಳನ್ನು 280 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು.

ಆರೋಗ್ಯ ಇಲಾಖೆಯ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ದುರಸ್ತಿ ಮತ್ತು ಉನ್ನತೀಕರಣಕ್ಕೆ 75 ಕೋಟಿ ರೂ. ಗಳ ಅನುದಾನ ಒದಗಿಸಲಾಗುವುದು.

ಬೆಂಗಳೂರಿನ ಕೆ.ಸಿ. ಜನರಲ್ ಆಸ್ಪತ್ರೆ ಆವರಣದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ ಮತ್ತಿತರ ಮೂಲಸೌಕರ್ಯ ಕಾಮಗಾರಿಗಳನ್ನು 150 ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲಾಗುವುದು. ಗ್ರಾಮೀಣ ಪ್ರದೇಶದ ಜನರಿಗೆ ದಿನದ 24 ಗಂಟೆ ತುರ್ತು ಆರೋಗ್ಯ ಸೇವೆ ನೀಡಲು ಮುಂದಿನ 2 ವರ್ಷಗಳಲ್ಲಿ 350 ಕೋಟಿ ರೂ. ವೆಚ್ಚದಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು



ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗುವುದು.

ಪ್ರಸಕ್ತ ಸಾಲಿನಲ್ಲಿ 199 ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳ ಕಟ್ಟಡ ಕಾಮಗಾರಿಗಾಗಿ 130 ಕೋಟಿ ರೂ. ಅನುದಾನ ಒದಗಿಸಲಾಗುವುದು, ಜಿಲ್ಲಾ ಆಸ್ಪತ್ರೆಗಳು ಮತ್ತು ವೈದ್ಯಕೀಯ ಕಾಲೇಜುಗಳಲ್ಲಿರುವ ಮಕ್ಕಳ ತಜ್ಞರು, ಮತ್ತು ಕ್ರಿಟಿಕಲ್ ಕೇರ್ ಮೆಡಿಸಿನ್ ತಜ್ಞ ಮತ್ತಿತರ ತಜ್ಞ ವೈದ್ಯರುಗಳ ಸೇವೆಯನ್ನು ಟೆಲಿ–ಐಸಿಯು ವ್ಯವಸ್ಥೆ ಮೂಲಕ ತಾಲೂಕು ಆಸ್ಪತ್ರೆಗಳಿಗೆ ಒದಗಿಸಲಾಗುವುದು. 20 ಕೋಟಿ ರೂ. ವೆಚ್ಚದಲ್ಲಿ ಪ್ರತಿ ಜಿಲ್ಲೆಯಲ್ಲಿಯೂ ಒಂದು ಡೇ–ಕೇರ್ ಕಿಮೋಥೆರಪಿ ಕೇಂದ್ರ ಸ್ಥಾಪಿಸಲಾಗುವುದು.


ಸ್ತನ, ಗರ್ಭಕಂಠದ ಕ್ಯಾನ್ಸರ್ ಚಿಕಿತ್ಸೆಗೆ ಕ್ರಮ: ಮಹಿಳೆಯರಲ್ಲಿ ಹೆಚ್ಚುತ್ತಿರುವ ಸ್ತನ ಕ್ಯಾನ್ಸರ್ ಮತ್ತು ಗರ್ಭಕಂಠದ ಕ್ಯಾನ್ಸರ್ ಅನ್ನು ಪ್ರಾರಂಭಿಕ ಹಂತದಲ್ಲಿಯೇ ಪತ್ತೆ ಹಚ್ಚಿ ಚಿಕಿತ್ಸೆ ನೀಡಲು 20 ಜಿಲ್ಲಾ ಆಸ್ಪತ್ರೆಗಳಲ್ಲಿ ಡಿಜಿಟಲ್ ಮೆಮೊಗ್ರಫಿ ಯಂತ್ರ ಮತ್ತು ಬೆಂಗಳೂರು ಕೆ.ಸಿ. ಜನರಲ್ ಆಸ್ಪತ್ರೆ ಹಾಗೂ ಉಡುಪಿ, ಕೋಲಾರ ಮತ್ತು ದಾವಣಗೆರೆ ಜಿಲ್ಲಾ ಆಸ್ಪತ್ರೆಗಳಿಗೆ ಕಾಲ್ಪೋಸ್ಕೋಪಿ ಉಪಕರಣಗಳ ಖರೀದಿಗೆ ಒಟ್ಟಾರೆ 21 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು ಎಂದರು.

ಬರುವ 2025ರೊಳಗೆ ಕ್ಷಯರೋಗ ನಿರ್ಮೂಲನೆಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕ್ಷಯರೋಗ ತಪಾಸಣೆಗಾಗಿ 87 ಟ್ರು–ನ್ಯಾಟ್ ಮೆಷಿನ್‌ಗಳನ್ನು ಖರೀದಿಸಲು 6 ಕೋಟಿ ರೂ. ಅನುದಾನ ಒದಗಿಸಲಾಗುವುದು ಎಂದರು.

ರಾಜ್ಯ ವಿದ್ಯುತ್ ಉತ್ಪಾದನೆ ಸಾಮರ್ಥ್ಯ 60 ಸಾವಿರ ಮೆಗಾವ್ಯಾಟ್‌ಗೆ ಹೆಚ್ಚಳ

● ಇಂಧನ ವಲಯದಲ್ಲಿ ಖಾಸಗಿಯವರಿಗೆ ಆದ್ಯತೆ ● 40 ಸಾವಿರ ಸೋಲಾರ್ ಪಂಪ್‌ಸೆಟ್ ಸ್ಥಾಪನೆ ಗುರಿ ● ವಿದ್ಯುತ್ ಚಾಲಿತ ವಾಹನಗಳಿಗೆ ಪ್ರೋತ್ಸಾಹಿಸಲು 2500 ಇವಿ ಚಾರ್ಜಿಂಗ್ ಕೇಂದ್ರ ಸ್ಥಾಪನೆ

ಬೆಂಗಳೂರು, ಫೆ.16(ಕೆಎಂಶಿ)– ರಾಜ್ಯದಲ್ಲಿ ವಿದ್ಯುತ್ ಸಮಸ್ಯೆ ನಿವಾರಿಸಲು ಮುಂದಿನ ಏಳು ವರ್ಷಗಳಲ್ಲಿ ಇಂಧನ ವಲಯಕ್ಕೆ ಹೆಚ್ಚಿನ ಬಂಡವಾಳ ಆಕರ್ಷಿಸುವ ಮೂಲಕ ವಿದ್ಯುತ್ ಉತ್ಪಾದನೆಯ ಸ್ಥಾಪಿತ ಸಾಮರ್ಥ್ಯವನ್ನು 32,000 ಮೆಗಾವ್ಯಾಟ್‌ನಿಂದ 60,000 ಮೆಗಾವ್ಯಾಟ್‌ಗಳಿಗೆ ಹೆಚ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಪ್ರಕಟಿಸಿದ್ದಾರೆ.



ರಾಜ್ಯವು ಉತ್ಪಾದಿಸುತ್ತಿರುವ ವಿದ್ಯುತ್ತಿನ ಶೇ.63ರಷ್ಟು ಇಂಧನವು ನವೀಕರಿಸಬಹುದಾದ ಇಂಧನದಿಂದ ಆಗಿರುತ್ತದೆ. ಸರ್ಕಾರದ ಸಕಾರಾತ್ಮಕ ನೀತಿಗಳಿಂದ ಈ ವಲಯದಲ್ಲಿ ಸಾವಿರಾರು ಕೋಟಿ ರೂ. ಖಾಸಗಿ ಹೂಡಿಕೆಯನ್ನು ಮಾಡಲಾಗುತ್ತಿದೆ. ಈ ನೀತಿಗಳನ್ನು ಇನ್ನಷ್ಟು ಹೂಡಿಕೆದಾರರ ಸ್ನೇಹಿಯನ್ನಾಗಿ ಮಾಡಲು ಕ್ರಮವಹಿಸಲಾಗುವುದು.

ರೈತರನ್ನು ಸ್ವಾವಲಂಬಿಗಳನ್ನಾಗಿ ಮಾಡಲು ಪಿಎಂ–ಕುಸುಮ್ ಕಾಂಪೋನೆಂಟ್–ಬಿ ಯೋಜನೆಯಡಿ 1,174 ಕೋಟಿ ರೂ. ಅಂದಾಜು ವೆಚ್ಚದಲ್ಲಿ 40,000 ಜಾಲ ಮುಕ್ತ ಸೋಲಾರ್ ಪಂಪ್‌ಸೆಟ್‌ಗಳನ್ನು ಸ್ಥಾಪಿಸಲಾಗುತ್ತಿದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾಲು ಶೇ.30ರಷ್ಟಿದ್ದು, ರಾಜ್ಯ ಸರ್ಕಾರದ ವತಿಯಿಂದ ನೀಡುವ ಸಹಾಯಧನವನ್ನು ಶೇ.30ರಿಂದ ಶೇ.50ಕ್ಕೆ ಹೆಚ್ಚಿಸಲಾಗಿದೆ ಎಂದರು.

ಕರ್ನಾಟಕ ವಿದ್ಯುತ್ ನಿಗಮವು ವಿವಿಧ ಸಂಸ್ಥೆಗಳ ಸಹಯೋಗದೊಂದಿಗೆ ತೇಲುವ ಸೌರ ಹಾಗೂ ಭೂಸ್ಥಾಪಿತ ಸೌರ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಕೃಷಿ ಪಂಪ್‌ಸೆಟ್ ಫೀಡರ್ ಸೌರೀಕರಣ ಯೋಜನೆ ಅಡಿಯಲ್ಲಿ 1,320 ಮೆಗಾವ್ಯಾಟ್ ವಿಕೇಂದ್ರೀಕೃತ ಉತ್ಪಾದನೆಗೆ ಕ್ರಮವಹಿಸಲಾಗಿದೆ. ಇದರಿಂದ 3.37 ಲಕ್ಷ ರೈತರಿಗೆ ಅನುಕೂಲವಾಗಲಿದೆ. ಇದಲ್ಲದೆ, 1,192 ಮೆಗಾವ್ಯಾಟ್ ಸೌರ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ 4.30 ಲಕ್ಷ ಐ.ಪಿ.ಸೆಟ್‌ಗಳನ್ನು ಸೌರೀಕರಣಗೊಳಿಸಲು ಉದ್ದೇಶಿಸಲಾಗಿದೆ ಎಂದರು.

ಗ್ರೀನ್ ಹೈಡ್ರೋಜನ್ ಭವಿಷ್ಯದ ಇಂಧನ, ಖಾಸಗಿ ಬಂಡವಾಳವನ್ನು ಈ ವಲಯಕ್ಕೆ ಆಕರ್ಷಿಸಲು 300 ಕಿಲೋ ವ್ಯಾಟ್ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರವನ್ನು ಪ್ರಾಯೋಗಿಕವಾಗಿ ಅಂದಾಜು 10 ಕೋಟಿ ರೂ. ವೆಚ್ಚದಲ್ಲಿ ಎಂಎನ್‌ಆರ್‌ಇ ನಿಧಿಯಿಂದ ಸ್ವಯಂ–ಸುಸ್ಥಿರ ಘಟಕದ ಆಧಾರದ ಮೇಲೆ ಅನುಷ್ಠಾನಗೊಳಿಸಲಾಗುವುದು ಮತ್ತು ಗ್ರೀನ್ ಹೈಡ್ರೋಜನ್ ನೀತಿಯನ್ನು ರೂಪಿಸಲಾಗುವುದು.

ವಿದ್ಯುತ್ ಚಾಲಿತ ವಾಹನಗಳಿಗೆ ಉತ್ತೇಜನ ನೀಡಲು 2,500 ಇವಿ ಚಾರ್ಜಿಂಗ್ ಕೇಂದ್ರಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು. ಅಲ್ಲದೇ, ವಿದ್ಯುತ್ ಸರಬರಾಜು ಕಂಪನಿಗಳ ಮೂಲಕ 35 ಕೋಟಿ ರೂ. ವೆಚ್ಚದಲ್ಲಿ 100 ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದರು.

ಮೈಸೂರಿಗೆ ಮುಖ್ಯಮಂತ್ರಿ ಮಹತ್ವ ಯೋಜನೆ ಘೋಷಣೆ

ಕೆಆರ್ ಆಸ್ಪತ್ರೆ ಹೊರರೋಗಿ ವಿಭಾಗ, ನೆಫ್ರೋ ಯೂರಾಲಜಿ ಆಸ್ಪತ್ರೆ, ಮಹಾರಾಣಿ ವಿಜ್ಞಾನ ಕಾಲೇಜು ಕಟ್ಟಡ, ಕಲಾ–ವಾಣಿಜ್ಯ ಕಾಲೇಜು ಹಾಸ್ಟೆಲ್ ಕಟ್ಟಡ ಸೇರಿ ಮೈಸೂರಿಗೆ ಬಜೆಟ್‌ನಲ್ಲಿ ಹಲವು ಯೋಜನೆ

ಮೈಸೂರು, ಫೆ. 16(ಆರ್‌ಕೆ)– ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (ಎಂಎಂಸಿಆರ್‌ಐ)ಯ ಶತಮಾನೋತ್ಸವದ ಸಂದರ್ಭದಲ್ಲಿ ಕೆಆರ್ ಆಸ್ಪತ್ರೆ ಹೊರರೋಗಿ ವಿಭಾಗದ ಕಟ್ಟಡ ನಿರ್ಮಿಸಲು 75 ಕೋಟಿ ರೂ., ಉದ್ದೇಶಿತ 40 ಹಾಸಿಗೆ ಸಾಮರ್ಥ್ಯದ ನೆಫ್ರೋ ಯೂರಾಲಜಿ ಆಸ್ಪತ್ರೆಯನ್ನು 100 ಹಾಸಿಗೆ ಸಾಮರ್ಥ್ಯಕ್ಕೆ ವಿಸ್ತರಣೆ ಸೇರಿದಂತೆ ಮೈಸೂರಿಗೆ 2024–25ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ಹಲವು ಅಭಿವೃದ್ಧಿ ಯೋಜನೆಗಳನ್ನು ಘೋಷಿಸಲಾಗಿದೆ.

ಬಜೆಟ್‌ನಲ್ಲಿ ಮೈಸೂರಿಗೆ ಭಾರೀ ಅಭಿವೃದ್ಧಿ ಯೋಜನೆಗಳನ್ನು ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಶಾಸಕ ಕೆ. ಹರೀಶ್‌ಗೌಡ ಅಭಿನಂದಿಸಿದ್ದಾರೆ. ಮೈಸೂರಲ್ಲಿ ಅತ್ಯಾಧುನಿಕ ಕ್ರಿಟಿಕಲ್ ಕೇರ್ ಸೆಂಟರ್, ಹ್ಯೂಮನ್ ಮಿಲ್ಕ್ ಬ್ಯಾಂಕ್ ಘಟಕ, ಮಹಾರಾಣಿ ವಿಜ್ಞಾನ ಕಾಲೇಜು ಕಟ್ಟಡಕ್ಕೆ 54 ಕೋಟಿ ರೂ., ಕಲಾ ಮತ್ತು ವಾಣಿಜ್ಯ ಕಾಲೇಜು ಕಟ್ಟಡಕ್ಕೆ 116 ಕೋಟಿ ರೂ. ಅನುದಾನ, ಲ್ಯಾನ್ಸ್‌ಡೌನ್ ಮತ್ತು ದೇವರಾಜ ಮಾರುಕಟ್ಟೆ ಪಾರಂಪರಿಕ ಕಟ್ಟಡಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಬಜೆಟ್‌ನಲ್ಲಿ ಪ್ರಸ್ತಾಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಮುಖ್ಯಮಂತ್ರಿಗಳಿಗೆ ಶಾಸಕ ಕೆ. ಹರೀಶ್‌ಗೌಡ ಅಭಿನಂದನೆ



ಮೈಸೂರಿನ ಹೊರ ವಲಯದಲ್ಲಿ ಮೇಲ್ಸೇತುವೆ ನಿರ್ಮಾಣ, ಕುಕ್ಕರಹಳ್ಳಿ ಕೆರೆ ಬಳಿ ಹಾಗೂ ಕೆಆರ್‌ಎಸ್ ರಸ್ತೆಯಲ್ಲಿ ಅಂಡರ್ ಬ್ರಿಡ್ಜ್ ಅಥವಾ ಓವರ್ ಬ್ರಿಡ್ಜ್, ಎಪಿಎಂಸಿ ಮಾರುಕಟ್ಟೆಯಲ್ಲಿ 40 ಕೋಟಿ ರೂ. ವೆಚ್ಚದಲ್ಲಿ ಶೀತಲ ಗೃಹ (ಕೋಲ್ಡ್ ಸ್ಟೋರೇಜ್), ಬಯೋ ಸಿಎನ್‌ಜಿ ಪ್ಲಾಂಟ್ ನಿರ್ಮಾಣ, ಟೌನ್ ಪ್ಲಾನಿಂಗ್ ಅಥವಾ ಪಿಪಿಪಿ ಮಾದರಿಯಲ್ಲಿ ಪೆರಿಫೆರಲ್ ರಿಂಗ್ ರಸ್ತೆ ನಿರ್ಮಿಸಲು ಕಾರ್ಯಸಾಧ್ಯತಾ ವರದಿ ತಯಾರಿಸುವುದು, ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಗೆ 43 ಕೋಟಿ ರೂ. ಬಿಡುಗಡೆ, ಮೈಸೂರಲ್ಲಿ ವಿಜ್ಞಾನ ಮತ್ತು ತಾರಾಲಯ ಸ್ಥಾಪನೆ, ಮೈಸೂರು ಸಮೀಪ ಇಂಟಿಗ್ರೇಟೆಡ್ ಟೌನ್‌ಶಿಪ್ ನಿರ್ಮಾಣ ಸೇರಿದಂತೆ ಹಲವು ಯೋಜನೆಗಳನ್ನು ಘೋಷಣೆ ಮಾಡಲಾಗಿದೆ.

ಎಲ್ಲಾ ವರ್ಗದ ಜನರನ್ನು ಗಮನದಲ್ಲಿರಿಸಿಕೊಂಡು ಮುಖ್ಯಮಂತ್ರಿಗಳು ಮಂಡಿಸಿರುವ ಬಜೆಟ್ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿದೆ ಎಂದ ಕೆ. ಹರೀಶ್‌ಗೌಡರು, ಕ್ಷೇತ್ರ ಹಾಗೂ ಮೈಸೂರಿನ ಜನರ ಪರವಾಗಿ ಸಿದ್ದರಾಮಯ್ಯ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರು ಷೆಡ್ಯೂಲ್ ನಲ್ಲಿ ನಮೂದು ಮಾಡಿರುವ ಸ್ವತ್ತನ್ನು ಸದರಿ ಸ್ವತ್ತಿನ ಮಾಲೀಕರುಗಳಿಂದ ಶುದ್ಧ ಕ್ರಯಕ್ಕೆ ಪಡೆದುಕೊಳ್ಳುವ ಇಚ್ಛೆಯನ್ನು ಹೊಂದಿದ್ದು, ಈ ಸಂಬಂಧ ಕೆಳಕಂಡಂತೆ ಸಾರ್ವಜನಿಕ ಪ್ರಕಟಣೆಯನ್ನು ನೀಡುತ್ತಿದ್ದಾರೆ.

ಸದರಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ವ್ಯಕ್ತಿ/ವ್ಯಕ್ತಿಗಳು/ಸಂಘ ಸಂಸ್ಥೆಗಳು ಅಥವಾ ಷೆಡ್ಯೂಲ್ ಸ್ವತ್ತಿನ ಯಾವುದೇ ಭಾಗಕ್ಕೆ ಸಂಬಂಧಿಸಿದಂತೆ ಯಾವುದೇ ರೀತಿಯ ಹಕ್ಕು, ವಾರಸು, ಮಾಲೀಕತ್ವ ಹಾಗೂ ಇನ್ನಿತರೆ ಯಾವುದೇ ರೀತಿಯ ಮಾಲೀಕತ್ವವನ್ನು ಹೊಂದಿದ್ದಂತಹ ಪಕ್ಷದಲ್ಲಿ ಅಂತಹ ವ್ಯಕ್ತಿಗಳು ಈ ಕೆಳಗೆ ಸಹಿ ಮಾಡಿರುವ ವಕೀಲರ ವಿಳಾಸಕ್ಕೆ ಸೂಕ್ತ ದಾಖಲಾತಿಗಳ ಸಮೇತ ಹಾಜರಾಗಿ ತಮ್ಮ ಆಕ್ಷೇಪಣೆ ಯನ್ನು ಈ ಸಾರ್ವಜನಿಕ ಪ್ರಕಟಣೆ ಪ್ರಕಟವಾದಂತಹ ಹದಿನೈದು (15) ದಿನಗಳೊಳಗಾಗಿ ಲಿಖಿತವಾಗಿ ಸಲ್ಲಿಸುವಂತೆ ಈ ಮೂಲಕ ಸೂಚಿಸಲಾಗಿದೆ. ಒಂದು ವೇಳೆ ಮೇಲೆ ತಿಳಿಸಿದಂತಹ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಬಾರದೇ ಇದ್ದಂತಹ ಪಕ್ಷದಲ್ಲಿ ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಕ್ರಯದ ವ್ಯವಹಾರವನ್ನು ಪೂರ್ಣಗೊಳಿಸುತ್ತಾರೆಂತಲೂ ಮತ್ತು ಆನಂತರ ಬರುವಂತಹ ಯಾವುದೇ ಆಕ್ಷೇಪಣೆಗಳಿಗೆ ನಮ್ಮ ಕಕ್ಷಿದಾರರು ಜವಾಬ್ದಾರರಲ್ಲವೆಂತಲೂ ಈ ಮೂಲಕ ತಿಳಿಯಪಡಿಸಲಾಗುತ್ತಿದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ತಾಲ್ಲೂಕು, ವರುಣಾ ಹೋಬಳಿ, ವರುಣಾ ಗ್ರಾಮ, ಮಹಾಲಕ್ಷ್ಮಿ ಬಡಾವಣೆಯಲ್ಲಿರುವ ನಿವೇಶನ ಸಂಖ್ಯೆ 36, ಖಾತ ಸಂಖ್ಯೆ : 302/1, ಸರ್ವೆ ನಂಬರ್ 132, ಸ್ವತ್ತಿನ ವಿಸ್ತೀರ್ಣ ಪೂರ್ವಪಶ್ಚಿಮ: 9 ಮೀಟರ್ ಮತ್ತು ದಕ್ಷಿಣೋತ್ತರ: 15 ಮೀಟರ್ ಅಡಿಗಳು, ಒಟ್ಟು ವಿಸ್ತೀರ್ಣ 135 ಚದರ ಮೀಟರ್‌ಗಳುಳ್ಳ ನಿವೇಶನ ಸ್ವತ್ತಿಗೆ ಚಕ್ಕುಬಂದಿ: ಪೂರ್ವಕ್ಕೆ: 37ನೇ ನಂಬರ್ ಸ್ವತ್ತು
ಪಶ್ಚಿಮಕ್ಕೆ: 35ನೇ ನಂಬರ್ ಸ್ವತ್ತು, ಉತ್ತರಕ್ಕೆ: 9 ಮೀಟರ್ ರಸ್ತೆ, ದಕ್ಷಿಣಕ್ಕೆ: 34ನೇ ನಂಬರ್ ಸ್ವತ್ತು.


Thontadarya .K.N B.com.LL.B.,
Advocate, Office : No.100,
Kanchamalli Village & Post, H.D.kote taluk, Mysore dist - 571125, Mob: 9902637327

ದಿನಾಂಕ: 15.02.2024, ಸ್ಥಳ: ಮೈಸೂರು

ಬಜೆಟ್‌ನಲ್ಲಿ ಮಂಡ್ಯ ಜಿಲ್ಲೆಗೆ ಸಿಕ್ಕಿದ್ದೇನು...?


● ಮೈಷುಗರ್ ಕಾರ್ಖಾನೆ ಪುನರ್ ನಿರ್ಮಾಣ ● ವಿ.ಸಿ. ಫಾರಂನಲ್ಲಿ ಕೃಷಿ ವಿವಿ ● ಕೆಆರ್‌ಎಸ್ ವಿಶ್ವದರ್ಜೆ ಪ್ರವಾಸಿ ತಾಣ ಮಾಡಲು ಒತ್ತು

ಮಂಡ್ಯ,ಫೆ.16– ಸಕ್ಕರೆ ನಾಡು ಮಂಡ್ಯ ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ 2024–25ನೇ ಅವಧಿಯ ಬಜೆಟ್‌ನಲ್ಲಿ ಅನೇಕ ಕೊಡುಗೆಗಳನ್ನು ಕೊಟ್ಟಿದ್ದು, ಸಕ್ಕರೆ ಕಾರ್ಖಾನೆ, ನೀರಾವರಿ, ಕೃಷಿ, ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಹಲವು ಯೋಜನೆಗಳು ಮಂಡ್ಯ ಜಿಲ್ಲೆಯ ಪಾಲಾಗಿವೆ.



ಮೈಷುಗರ್: ಮಂಡ್ಯ ಜಿಲ್ಲೆಯ ಜೀವ ನಾಡಿ ಮೈಷುಗರ್ ಕಾರ್ಖಾನೆಯ ಆವರಣದಲ್ಲಿ ಹೊಸ ಸಕ್ಕರೆ ಕಾರ್ಖಾನೆಯನ್ನು ನಿರ್ಮಿಸಲು ಸರ್ಕಾರ ಚಿಂತನೆ ನಡೆಸಿದ್ದು, ರಾಜ್ಯ ಸರ್ಕಾರದ ಅನುದಾನ, ಇತರೆ ಮೂಲಗಳು, ಕಾರ್ಖಾನೆ ಆಸ್ತಿ ಹಾಗೂ ಅದರ ಬಾಡಿಗೆ ಮೂಲಕ ಸಂಪನ್ಮೂಲವನ್ನು ಕ್ರೋಢೀಕರಿಸಿ, ಕಾರ್ಖಾನೆ ನಿರ್ಮಿಸಲು ಸರ್ಕಾರ ಸಿದ್ಧವಿದೆ ಎಂದು ಬಜೆಟ್‌ನಲ್ಲಿ ಸಿಎಂ ಘೋಷಿಸಿದ್ದಾರೆ.

ಕೆಆರ್‌ಎಸ್ ವಿಶ್ವದರ್ಜೆ ಪ್ರವಾಸಿ ತಾಣ: ಪ್ರತಿಷ್ಠಿತ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ವಿಶ್ವ ದರ್ಜೆಯ ಪ್ರವಾಸೋದ್ಯಮ ಆಕರ್ಷಣೀಯ ಕೇಂದ್ರವನ್ನಾಗಿ ಉನ್ನತೀಕರಿಸುವ ಯೋಜನೆಯನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳಲಾಗುವುದು



ಎಂದು ಸಿಎಂ ಬಜೆಟ್‌ನಲ್ಲಿ ಹೇಳಿದ್ದಾರೆ. ಈ ಹಿಂದೆ ಮೈತ್ರಿ ಸರ್ಕಾರದಲ್ಲಿ ಜಲ ಸಂಪನ್ಮೂಲ ಸಚಿವರಾಗಿದ್ದ ಡಿ.ಕೆ.ಶಿವಕುಮಾರ್ ಸಹ ಈ ಯೋಜನೆ ಬಗ್ಗೆ ಚಿಂತನೆ ನಡೆಸಿದ್ದರು.

ವಿ.ಸಿ.ಫಾರಂನಲ್ಲಿ ಕೃಷಿ ವಿವಿ: ಮಂಡ್ಯ ತಾಲೂಕಿನ ಪ್ರತಿಷ್ಠಿತ ಕೃಷಿ ಶಿಕ್ಷಣ ಸಂಸ್ಥೆಯಾದ ವಿ.ಸಿ.ಫಾರಂನಲ್ಲಿ ಕೃಷಿ ವಿಶ್ವವಿದ್ಯಾಲಯ ಸ್ಥಾಪಿಸುವ ಕುರಿತು ಪರಿಶೀಲಿಸಲು ತಜ್ಞರ ಸಮಿತಿ ರಚಿಸಲಾಗುವುದೆಂದು ಸಿಎಂ ಹೇಳಿದ್ದಾರೆ. ಸದ್ಯ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಅಡಿಯಲ್ಲಿರುವ ಬರುವ ವಿ.ಸಿ.ಫಾರಂನ್ನು ಪ್ರತ್ಯೇಕ ವಿವಿ ಮಾಡಲಾಗುವುದು ಎಂದು ಕೃಷಿ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದರು. ಇದೀಗ ಬಜೆಟ್‌ನಲ್ಲಿ ಅಧಿಕೃತ ಘೋಷಣೆಯಾಗಿದೆ.

ನಾಲಾ ಆಧುನೀಕರಣಕ್ಕೆ ಒತ್ತು: ಕಾವೇರಿ ನೀರಾವರಿ ನಿಗಮದಡಿ ವಿಶ್ವೇಶ್ವರಯ್ಯ ನಾಲಾ ಜಾಲದ ಮಂಡ್ಯ ತಾಲೂಕಿನ ಹೆಬ್ಬಕವಾಡಿ ಕೆರೆ, ಮದ್ದೂರು ತಾಲ್ಲೂಕಿನ ನಿಡಘಟ್ಟ ಕೆರೆ, ಕೆಮ್ಮಣ್ಣುನಾಲೆ, ಮಳವಳ್ಳಿ ತಾಲೂಕಿನ ತುರುಗನೂರು ಕೆರೆ, ಮಾದವಮಂತ್ರಿ ನಾಲೆಗಳ ಆಧುನೀಕರಣ, ಕೆರೆ ತುಂಬಿಸುವ ಯೋಜನೆ, ಕುಡಿಯುವ ನೀರು ಯೋಜನೆ ಮೂಲಕ ನೀರು ಒದಗಿಸುವ ಯೋಜನೆಗೆ ಒತ್ತು ಕೊಡಲಾಗುವುದು ಎಂದು ಸಿಎಂ ಹೇಳಿದ್ದಾರೆ.

ಮಿಮ್ಸ್‌ನಲ್ಲಿ ಕೈಗೆಟುಕವ ದರದಲ್ಲಿ ಪ್ರಯೋಗಾಲಯ: ಸಂಯೋಜಿತ ಮತ್ತು ಸಾರ್ವಜನಿಕ ಆರೋಗ್ಯ ಪ್ರಯೋಗಾಲಯವನ್ನು ಸ್ಥಾಪಿಸುವ ಮೂಲಕ ಸಾರ್ವಜನಿಕರಿಗೆ ಕೈಗೆಟಕುವ ದರದಲ್ಲಿ ಉತ್ತಮ ಪ್ರಯೋಗಾಲಯ ಸೇವೆಗಳನ್ನು ನೀಡಬೇಕೆಂಬ ಉದ್ದೇಶದಿಂದ ಪ್ರಸಕ್ತ ಸಾಲಿನಲ್ಲಿ ಮಂಡ್ಯ ಮಿಮ್ಸ್ ಆಸ್ಪತ್ರೆ ಸೇರಿದಂತೆ ಏಳು ಜಿಲ್ಲೆಗಳಲ್ಲಿ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗುವುದು. ಇದಕ್ಕೆ 11 ಕೋಟಿ ರೂ.ಗಳ ಅನುದಾನವನ್ನು ನೀಡಲಾಗುವುದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಎಕ್ಸ್‌ಪ್ರೆಸ್‌ವೇ ಬಳಿ ಮೇಲ್ಸೇತುವೆ ನಿರ್ಮಾಣ: ಬೆಂಗಳೂರು–ಮಂಡ್ಯ–ಮೈಸೂರು ರಾಷ್ಟ್ರೀಯ ಹೆದ್ದಾರಿಯ ಜಂಕ್ಷನ್‌ನಲ್ಲಿ ವಾಹನ ಸಂಚಾರ ದಟ್ಟಣೆಯನ್ನು ನೀಗಿಸಲು ಎನ್.ಹೆಚ್.ಎ.ಐ ಸಹಯೋಗದೊಂದಿಗೆ ಮೇಲುಸೇತುವೆ ನಿರ್ಮಾಣ ಮಾಡಲಾಗುವುದು ಎಂದು ಬಜೆಟ್‌ನಲ್ಲಿ ಘೋಷಿಸಲಾಗಿದೆ.

ರೈಲ್ವೆ ಕೆಳಸೇತುವೆ ನಿರ್ಮಾಣ: ಶ್ರೀರಂಗಪಟ್ಟಣ ತಾಲೂಕಿನ ಕೆಆರ್‌ಎಸ್ ರಸ್ತೆ ಬಳಿ ರೈಲ್ವೆ ಕೆಳಸೇತುವೆಗಳ ನಿರ್ಮಾಣಕ್ಕೆ ಹಣ ಮೀಸಲಿಡಲು ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಆದಿಚುಂಚನಗಿರಿಯಲ್ಲಿ ವಿಜ್ಞಾನ ಕೇಂದ್ರ

ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿ ವಿಜ್ಞಾನ ಕೇಂದ್ರದಲ್ಲಿ ಈಗಾಗಲೇ ಜ್ಞಾನ ಕೇಂದ್ರಗಳ ಕಾಮಗಾರಿಯು ಪ್ರಗತಿಯಲ್ಲಿದ್ದು, ಇದನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದೆಂದು ಸಿಎಂ ಘೋಷಿಸಿದರು.

ಮಿಮ್ಸ್‌ನಲ್ಲಿ ಕ್ರಿಟಿಕಲ್ ಕೇರ್ ಬ್ಲಾಕ್ ಸ್ಥಾಪನೆ

ರಾಜ್ಯದಲ್ಲಿ ತೀವ್ರ ಅಸ್ವಸ್ಥತೆಯಿಂದ ಬಳಲುತ್ತಿರುವ ರೋಗಿಗಳಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಿ ಪ್ರಾಣ ಉಳಿಸುವ ಉದ್ದೇಶದಿಂದ ಆಧುನಿಕ ಕ್ರಿಟಿಕಲ್ ಕೇರ್ ಬ್ಲಾಕ್‌ಗಳನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಈ ಪೈಕಿ ರಾಜ್ಯದ 15 ಜಿಲ್ಲೆಗಳಲ್ಲಿ ಈ ಯೋಜನೆಗೆ ಚಾಲನೆ ಸಿಗಲಿದೆ. ಇದರಲ್ಲಿ ಮಂಡ್ಯ ನಗರದ ಮಿಮ್ಸ್ ಆಸ್ಪತ್ರೆಯೂ ಒಳಗೊಂಡಿದೆ ಎಂದು ಸಿಎಂ ಘೋಷಿಸಿದರು.

ಬಜೆಟ್ ಬಗ್ಗೆ ಮಿಶ್ರಕ್ರಿಯೆ



ಸಿದ್ಧರಾಮಯ್ಯ ಅವರು ದಾಖಲೆಯ 15ನೇ ಬಜೆಟ್ ಮಂಡಿಸಿದ್ದು ಇದೊಂದು ಅತ್ಯಂತ ಜನಸ್ನೇಹಿ, ರೈತರ ಪರ, ಮಹಿಳಾ ಪರ ಬಜೆಟ್ ಆಗಿದೆ. ಇದೊಂದು ಸಮತೋಲಿತ ಮತ್ತು ದೂರದೃಷ್ಟಿ ಚಿಂತನೆಗಳ ಸರ್ವರಿಗೂ ಸಮಪಾಲು ಸರ್ವರಿಗೂ ಸಮ ಬಾಳು ಎಂಬ ಬಜೆಟ್. ಸಮ ಸಮಾಜದ ನಿರ್ಮಾಣದ ಪರಿಕಲ್ಪನೆಯೊಂದಿಗೆ ಎಲ್ಲಾ ವರ್ಗಗಳ ಜನರಿಗೂ, ಎಲ್ಲಾ ಕ್ಷೇತ್ರಗಳಿಗೂ ನ್ಯಾಯ ಒದಗಿಸಲಾಗಿದೆ. ರೈತರು ರೈತ ಮಹಿಳೆಯರ ಸಬಲೀಕರಣ ಹಾಗೂ ಸುಸ್ಥಿರ, ಸಮಗ್ರ ಕೃಷಿ ಅಭಿವೃದ್ಧಿಗೆ ದೂರಗಾಮಿ ಯೋಜನೆಗಳ ಜಾರಿ ಅಭಿನಂದನೀಯ.
–ಎನ್.ಚಲುವರಾಯಸ್ವಾಮಿ, ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ



ಸಿದ್ದರಾಮಯ್ಯ ಸರ್ಕಾರದ ಬಜೆಟ್ ಅತ್ಯಂತ ನಿರಾಸದಾಯಕ ಆಗಿದೆ. ರೈತರು, ಯುವಕರು, ವಿದ್ಯಾರ್ಥಿಗಳ ಬಗ್ಗೆ ಕಿಂಚಿತ್ತು ಯೋಚನೆ ಮಾಡಿಲ್ಲ. ಇದರಿಂದ ಯಾವುದೇ ಯೋಜನೆ ಇಲ್ಲದಂತಾಗಿದೆ. ಬರೀ ಕೇಂದ್ರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರು ಆರ್ಥಿಕ ತಜ್ಞರು ಎಂದು ಹೇಳಿಕೊಳ್ಳುತ್ತಿದ್ದರು. ಅದು ಹುಸಿಯಾಗಿದೆ.
–ಡಾ.ಎನ್.ಎಸ್.ಇಂದ್ರೇಶ್, ಜಿಲ್ಲಾಧ್ಯಕ್ಷ, ಜಿಲ್ಲಾ ಬಿಜೆಪಿ ಘಟಕ ಮಂಡ್ಯ



ಸರ್ಕಾರದ ಬೊಕ್ಕಸದಲ್ಲಿ ಹಣನೇ ಇಲ್ಲ. ಸಾಲ ಮಾಡಿ ತುಪ್ಪ ತಿನ್ನುವಂತೆ ಬಜೆಟ್ ಇದೆ. ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದ್ದಾರೆ. ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಇದೊಂದು ಗಿಮಿಕ್ ಬಜೆಟ್ ಆಗಿದೆ. ಪ್ರಸ್ತುತ ಬಜೆಟ್ ನಲ್ಲಿ ಮೇಲುಕೋಟೆ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡುವ ನಿರೀಕ್ಷೆ ಇತ್ತು. ಅದು ಹುಸಿಯಾಗಿದೆ. ಇದೊಂದು ನಿರಾಶದಾಯಕ ಬಜೆಟ್ ಆಗಿದೆ.
–ಸಿ.ಎಸ್.ಪುಟ್ಟರಾಜು, ಮಾಜಿ ಸಚಿವ.



ಮುಖ್ಯಮಂತ್ರಿ ಅವರು ಜಿಲ್ಲೆಯ ರೈತರ ಹಿತವನ್ನು ಕಾಪಾಡಿದ್ದಾರೆ. ಮೈಷುಗರ್ ಅಭಿವೃದ್ಧಿ, ನಾಲೆಗಳ ಆಧುನೀಕರಣಕ್ಕೆ ಒತ್ತು ಕೆಆರ್‌ಎಸ್‌ನ್ನು ವಿಶ್ವದರ್ಜೆಯ ಪ್ರವಾಸಿ ತಾಣವನ್ನಾಗಿ ಮಾಡಲು ಸುಸಜ್ಜಿತ ಉದ್ಯಾನವನ ಹಾಗೂ ಬೃಂದಾವನವನ್ನು ನಿರ್ಮಾಣ, ಮಂಡ್ಯದ ವಿಸಿ ಫಾರಂನಲ್ಲಿ ಕೃಷಿ ವಿಶ್ವವಿದ್ಯಾನಿಲಯವನ್ನು ತೆರೆಯುವುದು, ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದು ಅವರಿಗೆ ಅಭಿನಂದನೆಯನ್ನು ಸಲ್ಲಿಸುತ್ತೇನೆ. **– ದಿನೇಶ್ ಗೂಳಿಗೌಡ, ವಿಧಾನಪರಿಷತ್ ಸದಸ್ಯ**

ಹೇಮಗಿರಿಯಲ್ಲಿ ವೈಭವದ ಬ್ರಹ್ಮ ರಥೋತ್ಸವ



ಕೆ.ಆರ್.ಪೇಟೆ: ತಾಲೂಕಿನ ಹೇಮಾವತಿ ನದಿ ದಂಡೆಯಲ್ಲಿರುವ ಶ್ರೀ ಕ್ಷೇತ್ರ ಹೇಮಗಿರಿ ಶ್ರೀ ಕಲ್ಯಾಣ ವೆಂಕಟರಮಣ ಸ್ವಾಮಿಯವರ ಬ್ರಹ್ಮ ರಥೋತ್ಸವವು ಪವಿತ್ರ ರಥಸಪ್ತಮಿಯ ದಿನವಾದ ಇಂದು ವಿಜೃಂಭಣೆಯಿಂದ ನಡೆಯಿತು. ಶಾಸಕ ಹೆಚ್.ಟಿ.ಮಂಜು, ತಹಶೀಲ್ದಾರ್ ನಿಸರ್ಗ ಪ್ರಿಯ ಅವರು ದೇವರಿಗೆ ಸಾಂಪ್ರದಾಯಿಕ ಪೂಜೆ ಸಲ್ಲಿಸಿ ರಥವನ್ನು ಎಳೆಯುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು.

ದನಗಳ ಜಾತ್ರೆಯಲ್ಲಿ ಉತ್ತಮ ರಾಸುಗಳನ್ನು ಕಟ್ಟಿದ್ದ ರಾಸುಗಳ ಮಾಲಿಕರಿಗೆ ಪ್ರಶಸ್ತಿ ಹಾಗೂ ಬಹುಮಾನವನ್ನು ಶಾಸಕ ಮಂಜು ವಿತರಣೆ ಮಾಡಿದರು. ರಥೋತ್ಸವ ಕುರಿತು ಶಾಸಕ ಹೆಚ್.ಟಿ.ಮಂಜು ಮಾತನಾಡಿದರು. ಜಾತ್ರಾ ಮಹೋತ್ಸವಕ್ಕೆ ಬಂದಿದ್ದ ಮಕ್ಕಳು, ಮಹಿಳೆಯರು, ಯುವಕರು, ಸಾರ್ವಜನಿಕರು ಹಾಗೂ ಭಕ್ತರು ಕಲ್ಯಾಣ ವೆಂಕಟರಮಣ ಸ್ವಾಮಿ ರಥಕ್ಕೆ ಹಣ್ಣು ಜವನ ಎಸೆದು ಪುಳಕಿತರಾದಲ್ಲದೆ ದೇವರ ಕೃಪೆಗೆ ಪಾತ್ರರಾದರು.

ಇಂದು ಶ್ರೀರಂಗಪಟ್ಟಣದಲ್ಲಿ ದರ್ಶನ್ ಹುಟ್ಟುಹಬ್ಬ

25 ಸಾವಿರ ಅಭಿಮಾನಿಗಳು ಆಗಮಿಸುವ ನಿರೀಕ್ಷೆ

ಶ್ರೀರಂಗಪಟ್ಟಣ,ಫೆ.16– ಕನ್ನಡದ ಖ್ಯಾತ ಚಿತ್ರನಟ ದರ್ಶನ್ ಅವರ 47ನೇ ವರ್ಷದ ಹುಟ್ಟುಹಬ್ಬ ಹಾಗೂ ಬೆಳ್ಳಿ ಪರದೆಗೆ ಬಂದು 25ನೇ ವರ್ಷ ತುಂಬಿದ ಹಿನ್ನೆಲೆಯಲ್ಲಿ ಸಂಭ್ರಮಾಚರಣೆ ಕಾರ್ಯಕ್ರಮ ಶ್ರೀರಂಗಪಟ್ಟಣದ ಶ್ರೀರಂಗನಾಥ ಸ್ವಾಮಿ ದೇಗುಲದ ಆವರಣದಲ್ಲಿ ನಾಳೆ(ಫೆ.17) ನಡೆಯಲಿದೆ.

ಈ ಸಂಬಂಧ ಚಿತ್ರನಟ ದರ್ಶನ್ ರವರ ಆಪ್ತ ಹಾಗೂ ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಪಟ್ಟಣದ ಶ್ರೀರಂಗನಾಥ ಸ್ವಾಮಿ ದೇಗುಲದ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ ವೇದಿಕೆಯನ್ನು ಪರಿಶೀಲಿಸಿ ಮಾತನಾಡಿ, ದರ್ಶನ್ ಅವರ 25ನೇ ವರ್ಷದ ಸಿನಿಮಾ ಬೆಳ್ಳಿ ಪರದೆ ಪಾದಾರ್ಪಣೆ ಮಾಡಿದ ಸಂತಸವನ್ನು ಕಣ್ತುಂಬಿಕೊಳ್ಳಲು ಬೃಹತ್ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದರು.



ಕಾರ್ಯಕ್ರಮದ ವೇದಿಕೆ ಸ್ಥಳವನ್ನು ಪರಿಶೀಲಿಸುತ್ತಿರುವ ಇಂಡುವಾಳು ಸಚ್ಚಿದಾನಂದ.

ರಾಜ್ಯದ ನಾನಾ ಭಾಗಗಳಿಂದ ಸುಮಾರು 25 ಸಾವಿರ ಅಭಿಮಾನಿಗಳು ಆಗಮಿಸುವ ನಿರೀಕ್ಷೆಯಿದ್ದು, ಗಣ್ಯರು, ಅತೀ ಗಣ್ಯರು ಹಾಗೂ ಸಾವಿರಾರು ಮಂದಿ ಬರುವ ನಿರೀಕ್ಷೆ ಇದೆ. ಸಾರ್ವಜನಿಕರು ಹಾಗೂ ದರ್ಶನ್ ಅವರ ಅಭಿಮಾನಿಗಳು ಕಾರ್ಯಕ್ರಮಕ್ಕೆ ಬನ್ನಿ ಎಂದು ಮನವಿ ಮಾಡಿದರು. ಕಾರ್ಯಕ್ರಮಕ್ಕೆ ಕನ್ನಡ ಚಿತ್ರರಂಗದ ಹಿರಿಯ ನಟರಾದ ಡಾ. ಶಿವರಾಜ್ ಕುಮಾರ್, ರಾಕಿಂಗ್ ಸ್ಟಾರ್ ಯಶ್, ಸುದೀಪ್, ನಟ–ನಟಿಯರು ಸೇರಿದಂತೆ ನೂರಾರು ಕಲಾವಿದರು ಬರುವ ನಿರೀಕ್ಷೆ ಇದೆ ಹಾಗೂ ಹತ್ತಾರು ಸಾಂಸ್ಕೃತಿಕ ಕಾರ್ಯಕ್ರಮಗಳಿವೆ.

ತಬ್ಬಿಕೊಂಡ ಸ್ಥಿತಿಯಲ್ಲಿರುವ ಅಪರಿಚಿತ ಮಹಿಳೆ, ಪುರುಷನ ಮೃತದೇಹ ಪತ್ತೆ

ಪಾಂಡವಪುರ, ಫೆ.16– ತಬ್ಬಿಕೊಂಡ ಸ್ಥಿತಿಯಲ್ಲಿರುವ ಅಪರಿಚಿತ ಮಹಿಳೆ ಮತ್ತು ಪುರುಷನ ಮೃತದೇಹ ಪಟ್ಟಣದ ಹಿರೋಡೆ ಕೆರೆ ಬಳಿ ಪತ್ತೆಯಾಗಿದೆ.

ಪಟ್ಟಣದ ನಾಗಮಂಗಲ ರಸ್ತೆಯ ಪೆಟ್ರೋಲ್ ಬಂಕ್ ಹಿಂಭಾಗದ ಹಿರೋಡೆ ಕೆರೆಯ ಕೆಸರಿನಲ್ಲಿ ಗಂಡು–ಹೆಂಗಸ್ಸಿನ ಮೃತದೇಹಗಳು ತಬ್ಬಿಕೊಂಡಿರುವ ಸ್ಥಿತಿಯಲ್ಲಿ ಪತ್ತೆಯಾಗಿದೆ. ಕೆರೆಯ ಪಕ್ಕದಲ್ಲಿ ಸ್ಥಳೀಯರು ಎಮ್ಮೆಯನ್ನು ಮೇಯಲು ಬಿಡಲು ಹೋದ ಸಂದರ್ಭದಲ್ಲಿ ಮೃತ ದೇಹವನ್ನು ಕಂಡು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಮೃತಪಟ್ಟಿರುವ ಮಹಿಳೆ ಮತ್ತು ಪುರುಷನಿಗೆ 45ರಿಂದ 50 ವರ್ಷ ಇರಬಹುದು ಎಂದು ಪೊಲೀಸರು ಅಂದಾಜಿಸಿದ್ದಾರೆ. ಮೃತ ದೇಹಗಳು ಕೆರೆಯ ದಡದದಲ್ಲಿರುವ ಕೆಸರಿನಲ್ಲಿ ಬಿದ್ದಿರುವುದರಿಂದ ಇದು ಕೊಲೆಯೋ? ಅಥವಾ ಆತ್ಮಹತ್ಯೆಯೋ? ಎಂಬುದು ತಿಳಿದು ಬರಬೇಕಾಗಿದೆ. ಎರಡು ಮೃತ ದೇಹಗಳು ತಬ್ಬಿಕೊಂಡಿರುವ ಸ್ಥಿತಿಯಲ್ಲಿ ದೊರಕಿರುವುದರಿಂದ ಇವರು ಗಂಡ–ಹೆಂಡತಿ ಇರಬಹುದು ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಎರಡು ಮೃತರ ಮುಖಗಳು ಊದಿಕೊಂಡಿರುವುದರಿಂದ ಇವರು ಮೃತಪಟ್ಟು ಮೂರ್‍ನಾಲ್ಕು ದಿನಗಳಾಗಿರಬಹುದು ಎಂದು ಪೊಲೀಸರು ತಿಳಿಸಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು ಮೃತದೇಹಗಳನ್ನು ಕೆರೆಯಿಂದ ಹೊರತೆಗೆದು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಶವಗಾರಕ್ಕೆ ಸಾಗಿಸಿದ್ದಾರೆ. ಮೃತಪಟ್ಟಿರುವ ಮಹಿಳೆ ಸೀರೆ, ರವಿಕೆ ಹಾಕಿದ್ದಾರೆ. ಪುರುಷ ಶರ್ಟ್ ಮತ್ತು ಪ್ಯಾಂಟ್ ಧರಿಸಿದ್ದಾನೆ. ಸಂಬಂಧಿಸಿದವರು ಹತ್ತಿರದ ಪೊಲೀಸ್ ಠಾಣೆ ಸಂಪರ್ಕಿಸಿ ಎಂದು ಸಬ್ ಇನ್ಸ್‌ಪೆಕ್ಟರ್ ಧನಲ್‌ಪಾಲ್ ತಿಳಿಸಿದ್ದಾರೆ. ಘಟನೆ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಮೂರನೇ ಪುಟದಿಂದ

27 ಸಾವಿರ ಕೋಟಿ ಸಾಲ ನೀಡುವ ಗುರಿ



ಬೆಳೆಗಳಾದ ಅಡಿಕೆ, ಈರುಳ್ಳಿ, ದ್ರಾಕ್ಷಿ, ಮಾವು, ಬಾಳೆ ಮತ್ತು ಇತರ ತೋಟಗಾರಿಕಾ ಬೆಳೆಗಳಿಗೂ ಕನಿಷ್ಠ ಬೆಂಬಲ ಬೆಲೆ ಘೋಷಿಸುವಂತೆ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಲಾಗುವುದು. ಕೃಷಿ ತಜ್ಞ ಎಂ.ಎಸ್.ಸ್ವಾಮಿನಾಥನ್ ಅವರಿಗೆ ಭಾರತ ರತ್ನ ನೀಡಿರುವುದು ಸಂತೋಷದ ವಿಷಯ. ಅವರ ಅಧ್ಯಕ್ಷತೆಯ ಸಮಿತಿ ವರದಿ ಶಿಫಾರಸು ಮಾಡಿದಂತೆ ಕನಿಷ್ಠ ಬೆಂಬಲ ಬೆಲೆಯನ್ನು ವ್ಯವಸಾಯಕ್ಕೆ ತಗಲುವ ವೆಚ್ಚ ಮತ್ತು ಶೇ.50ರಷ್ಟು ಲಾಭಾಂಶ ಆಧಾರದಡಿ ನಿಗದಿ ಮಾಡುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ತಿಳಿಸಿದ್ದಾರೆ.

ಮಾಧ್ಯಮಿಕ, ಫೆಡರಲ್ ಹಾಗೂ ಅಪೆಕ್ಸ್ ಸಹಕಾರ ಸಂಘಗಳ ಆಡಳಿತ ಮಂಡಳಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಮಹಿಳೆಯರಿಗೆ ಮೀಸಲಾತಿ ತರಲು ಅಧಿನಿಯಮಗಳಿಗೆ ತಿದ್ದುಪಡಿ ತರಲಾಗುವುದು.

ಮೈಸೂರಲ್ಲಿ ಶೀತಲ ಗೃಹ: ಕೃಷಿ ಉತ್ಪನ್ನ ಮಾರಾಟ ಇಲಾಖೆಯ ಮೂಲಕ ಯಲಬುರ್ಗಾ, ಬಸವನಬಾಗೇವಾಡಿ, ರಾಣೆಬೆನ್ನೂರು, ಬಳ್ಳಾರಿ ಹಾಗೂ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ಹಾಗೂ ರಾಯಚೂರು ಮತ್ತು ಮೈಸೂರಿನಲ್ಲಿ ತಲಾ 40 ಕೋಟಿ ರೂ. ವೆಚ್ಚದಲ್ಲಿ ಶೀತಲ ಗೃಹಗಳನ್ನು ನಿರ್ಮಿಸಲಾಗುವುದು. ರಾಯಚೂರಿನಲ್ಲಿ ಸುಸಜ್ಜಿತ ಒಣಮೆಣಸಿನಕಾಯಿ ಮಾರುಕಟ್ಟೆಯನ್ನು ಅಂದಾಜು 25 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು ಮತ್ತು ರಾಣೆಬೆನ್ನೂರಿನಲ್ಲಿ 112 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ 222 ಎಕರೆ ಮೆಗಾ ಮಾರುಕಟ್ಟೆ ಪ್ರಾಂಗಣದಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆಯನ್ನು ಪ್ರಾರಂಭಿಸಲಾಗುವುದು. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಎಲ್ಲಾ ಕಾರ್ಯಚಟುವಟಿಕೆಗಳನ್ನು 10 ಕೋಟಿ ರೂ. ವೆಚ್ಚದಲ್ಲಿ ಡಿಜಿಟೈಜ್ ಮಾಡಲಾಗುವುದು.

ಮೈಸೂರಲ್ಲಿ ಬಯೋ ಸಿಎನ್‌ಜಿ ಪ್ಲಾಂಟ್ ಸ್ಥಾಪನೆ: ಬೆಂಗಳೂರಿನ ದಾಸನಪುರ, ಮೈಸೂರು, ಹುಬ್ಬಳ್ಳಿ, ಬಳ್ಳಾರಿ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಳಗಾವಿಯ ಮಾರುಕಟ್ಟೆಗಳಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಬಯೋ ಸಿಎನ್‌ಜಿ ಪ್ಲಾಂಟ್ ಸ್ಥಾಪಿಸುವ ಮೂಲಕ ಶೂನ್ಯ ತ್ಯಾಜ್ಯ ತರಕಾರಿ ಮಾರುಕಟ್ಟೆಗಳನ್ನಾಗಿ ಪರಿವರ್ತಿಸಲಾಗುವುದು. ಎಪಿಎಂಸಿಗಳಲ್ಲಿ ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಕೇಂದ್ರಗಳು ಹಾಗೂ ಪೆಟ್ರೋಲ್ ಬಂಕ್‌ಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲು ಒತ್ತು ನೀಡಲಾಗುವುದು. ರೈತ ವಿರೋಧಿ ಎಪಿಎಂಸಿ ತಿದ್ದುಪಡಿ ಕಾಯ್ದೆಯನ್ನು ಹಿಂಪಡೆಯುವ ವಿಧೇಯಕಕ್ಕೆ ವಿಧಾನಸಭೆಯ ಅಂಗೀಕಾರ ಪಡೆಯಲಾಗಿದ್ದು, ವಿಧಾನ ಪರಿಷತ್ತಿನಲ್ಲಿ ಸದನ ಸಮಿತಿಯ ಪರಿಶೀಲನೆಗೆ ಒಪ್ಪಿಸಲಾಗಿದೆ. ಸದರಿ ವಿಧೇಯಕಕ್ಕೆ ಶೀಘ್ರದಲ್ಲಿಯೇ ಅಂಗೀಕಾರ ಪಡೆಯಲು ಕ್ರಮವಹಿಸಲಾಗುವುದು. ಬೆಂಬಲ ಬೆಲೆ ಯೋಜನೆ ಜಾರಿಗೆ ಶಾಸನಾತ್ಮಕ ಬೆಂಬಲ ನೀಡಲು ಕ್ರಮ ವಹಿಸಲಾಗುವುದು. ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹಿತ ಕಾಯಲು ಮತ್ತು ತೂಕದಲ್ಲಾಗುವ ಮೋಸ ತಡೆಗಟ್ಟಲು ಎಲ್ಲಾ ಸಕ್ಕರೆ ಕಾರ್ಖಾನೆಗಳ ಬಳಿ ವೇಬ್ರಿಜ್‌ಗಳನ್ನು ಎಪಿಎಂಸಿಗಳ ಮೂಲಕ ಸ್ಥಾಪಿಸಲಾಗುವುದು ಎಂದಿದ್ದಾರೆ.

ಮನೆ ಬಾಗಿಲಿಗೆ ಆಹಾರಧಾನ್ಯ

ಗದಾ ಪ್ರಹಾರವನ್ನು ಮುಂಗಡಪತ್ರದಲ್ಲೂ ಮುಂದುವರೆಸಿ, ಕೇಂದ್ರ ಮಾಡದ ಕೆಲಸವನ್ನು ರಾಜ್ಯ ಸರ್ಕಾರ ಕೈಗೆತ್ತಿಕೊಂಡಿದೆ. ನಾವು ರೂಪಿಸಿದ ಗ್ಯಾರಂಟಿ ಯೋಜನೆಗಳು ಕೇವಲ ಚುನಾವಣಾ ಗಿಮಿಕ್ ಅಲ್ಲ. ಭಾರತ್ ಜೋಡೋ ಯಾತ್ರೆ ಸಂದರ್ಭದಲ್ಲಿ ನಮ್ಮ ಪಕ್ಷದ ಕಾರ್ಯಕರ್ತರು ಸಂಗ್ರಹಿಸಿದ ಜನಭಿಪ್ರಾಯದಿಂದ ಪಂಚ ಯೋಜನೆಗಳು ಅನುಷ್ಠಾನಗೊಂಡಿವೆ ಎಂದು ಸಮರ್ಥಿಸಿಕೊಂಡಿದ್ದಾರೆ. ಇದು ಉದ್ಯೋಗ ಸೃಜಿಸಿ, ಜನರು ಕೊಳ್ಳುವ ಸಾಮರ್ಥ್ಯ ಹೆಚ್ಚಿಸುವುದಾಗಿದೆ, ನಿಷ್ಪಕ್ಷಪಾತ ಮತ್ತು ನ್ಯಾಯಯುತ ಸಮಾಜ ನಿರ್ಮಾಣಕ್ಕಾಗಿ, ಸಂಪತ್ತಿನ ಮರು ಹಂಚಿಕೆ ಮಾಡುವ ಕಾರ್ಯಕ್ರಮಗಳು ಇವಾಗಿವೆ ಎಂದಿದ್ದಾರೆ.

ಮೈಸೂರಿಗೆ ಮಹತ್ವದ ಕೊಡುಗೆ

ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ 2.0 ಅಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವುದಾಗಿ ತಿಳಿಸಿದ್ದಾರೆ. ಮೈಸೂರಿನ ಪ್ರಖ್ಯಾತ ಲ್ಯಾನ್ಸ್‌ಡೌನ್ ಕಟ್ಟಡ ಮತ್ತು ದೇವರಾಜ ಮಾರುಕಟ್ಟೆಯನ್ನು ಪಾರಂಪರಿಕ ಶೈಲಿಯಲ್ಲಿ ಅಭಿವೃದ್ಧಿಪಡಿಸಲಾಗುವುದು.

ಇಲ್ಲಿನ 40 ಹಾಸಿಗೆ ಸಾಮರ್ಥ್ಯದ ನೆಫ್ರೋ–ಯುರಾಲಜಿ ಆಸ್ಪತ್ರೆಯನ್ನು 100 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ ಉನ್ನತೀಕರಿಸಲಾಗುವುದು. ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಟ್ಟಡವನ್ನು 54 ಕೋಟಿ ರೂ. ವೆಚ್ಚದಲ್ಲಿ ಹಾಗೂ ಮಹಾರಾಣಿ ಕಲಾ ಮತ್ತು ವಾಣಿಜ್ಯ ಕಾಲೇಜು ಹಾಸ್ಟೆಲ್ ಕಟ್ಟಡ ನಿರ್ಮಾಣವನ್ನು 116 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳುವುದಾಗಿ ತಿಳಿಸಿದ್ದಾರೆ. ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಮೈಸೂರಿನ ಎಪಿಎಂಸಿ ವ್ಯಾಪ್ತಿಯಲ್ಲಿ ಬಯೋ ಸಿಎನ್‌ಜಿ ಪ್ಲಾಂಟ್ ಸ್ಥಾಪಿಸುವ ಮೂಲಕ ಶೂನ್ಯ ತ್ಯಾಜ್ಯ ಮಾರುಕಟ್ಟೆಗಳನ್ನಾಗಿ ಪರಿವರ್ತಿಸಲಾಗುವುದು. ನಂಜನಗೂಡು ತಾಲೂಕಿನ ಬದನವಾಳು ಗ್ರಾಮದಲ್ಲಿ ಖಾದಿ ಚಟುವಟಿಕೆಗೆ ಪ್ರೋತ್ಸಾಹ ನೀಡಲಾಗುವುದು. ಬಂಡೀಪುರ, ಕಬಿನಿ ಹಾಗೂ ದಾಂಡೇಲಿಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಇಂಟರ್‌ಪ್ರೆಟೇಷನ್ ಸೆಂಟರ್ ಸ್ಥಾಪಿಸುವುದಾಗಿ ತಿಳಿಸಿದ್ದಾರೆ.

ಮಂಡ್ಯದ ಮೈಶುಗರ್ ಕಾರ್ಖಾನೆ ಆವರಣದಲ್ಲಿ ಹೊಸ ಸಕ್ಕರೆ ಕಾರ್ಖಾನೆ ನಿರ್ಮಿಸಲಾಗುವುದು, ಸರ್ಕಾರದ ಅನುದಾನ ಹಾಗೂ ಇತರೆ ಮೂಲಗಳು ಅಲ್ಲದೆ, ಕಾರ್ಖಾನೆಯ ಆಸ್ತಿ ಮೌಲ್ಯವರ್ಧನೆಯ ಮೂಲಕ ಸಂಪನ್ಮೂಲ ಕ್ರೋಢೀಕರಿಸಲಾಗುವುದು.

ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯ ಮೈಸೂರು ಹೊರವಲಯದಲ್ಲಿರುವ ಜಂಕ್ಷನ್‌ನಲ್ಲಿ ವಾಹನ ಸಂಚಾರ ದಟ್ಟಣೆಯನ್ನು ನಿಭಾಯಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದೊಂದಿಗೆ ಮೇಲ್ಸೇತುವೆ ನಿರ್ಮಾಣ ಮಾಡಲಾಗುವುದು. ಮೈಸೂರಿನ ಕುಕ್ಕರಹಳ್ಳಿ ಹಾಗೂ ಕೆಆರ್‌ಎಸ್ ರಸ್ತೆ ಬಳಿ ರೈಲ್ವೆ ಮೇಲು ಹಾಗೂ ಕೆಳ ಸೇತುವೆಗಳ ನಿರ್ಮಾಣವನ್ನು 350 ಕೋಟಿ ರೂ. ಮೊತ್ತದಲ್ಲಿ ಕೈಗೆತ್ತಿಕೊಳ್ಳುವುದಾಗಿ ತಿಳಿಸಿದ್ದಾರೆ.

ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೂ ಒತ್ತು

ರಾಜಕೀಯ ಮಂಜು ತುಂಬಿದೆ. ಕಾಮಾಲೆ ರೋಗಿಗಳಿಗೆ ಕಂಡಿದ್ದೆಲ್ಲಾ ಹಳದಿಯಂತೆ ಆಗಿದೆ. ರಾಜಕೀಯ ಹೇಳಿಕೆ ಬೇಡ ಎನ್ನುವುದಿಲ್ಲ. ಆದರೆ ಟೀಕೆಗಳು ಆರೋಗ್ಯಕರವಾಗಿರಬೇಕು. ಟೀಕೆ ಮಾಡುವ ಸಲುವಾಗಿಯೇ ಟೀಕೆ ಮಾಡುತ್ತಾರೆ. ಪ್ಲೇಕಾರ್ಡ್ ಹಿಡಿದಿದ್ದರು. ಬಜೆಟ್ ಕೇಳಬಾರದು ಎಂದು ಯೋಚಿಸಿ ಕೊಂಡೇ ಬಂದಿದ್ದರು. ನಾನು ವಸ್ತುಸ್ಥಿತಿಯನ್ನು ಹೇಳಿದರೆ ಅವರಿಗೆ ಅದು ನುಂಗಲಾರದ ತುತ್ತು. ಸತ್ಯ ಹೇಳಿದರೆ ತಡೆದುಕೊಳ್ಳಲು ಆಗುವುದಿಲ್ಲ ಎಂದರು.

ಕನ್ನಡಿಗರಿಗೆ ಅನ್ಯಾಯವಾದರೂ ಸುಮ್ಮನಿರಬೇಕೇ?: ಕೇಂದ್ರದಿಂದ ರಾಜ್ಯಕ್ಕಾದ ಅನ್ಯಾಯವನ್ನು ಜನರಿಗೆ ಹೇಳು ವುದು ನನ್ನ ಕರ್ತವ್ಯ ಹಾಗೂ ಜವಾಬ್ದಾರಿ. ಅವರು ಕೂಡ ಕೋಲೆ ಬಸವನ ಹಾಗೆ ತಲೆ ಅಲ್ಲಾಡಿಸದೇ ಕೇಂದ್ರದವರನ್ನು ಕೇಳಬೇಕಿತ್ತು. ಕೋಲಾರ ಸಂಸದ ಮುನಿಸ್ವಾಮಿಯವರು ಅವರು ಸಂಸತ್ತಿನಲ್ಲಿ ಒಂದು ದಿನವೂ ಕರ್ನಾಟಕಕ್ಕೆ ಅನ್ಯಾಯ ವಾಗಿದೆ ಎಂದು ಬಾಯಿ ಬಿಡಲಿಲ್ಲ. ಐದು ವರ್ಷದಲ್ಲಿ ಒಂದು ಬಾರಿಯಾದರೂ ಮಾತನಾಡಿದ್ದಾರಾ ಅವರು ಸಂಸದರಾಗಲು ಲಾಯಕ್ಕೇ ಎಂದರು. ಕೇಂದ್ರ ಸರ್ಕಾರದಿಂದ ನ್ಯಾಯಯುತವಾದದ್ದು ಕೇಳಲು ಇವರಿಗೆ ಸಾಧ್ಯವಿಲ್ಲ ಎಂದರೇ ಏನು ಸೂಚಿಸುತ್ತದೆ. ನಾನು ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಸಿಎಂ ಆಗಿದ್ದಾಗ, ಕೇಂದ್ರದ ಅನುದಾನವನ್ನು ಪಡೆಯಿರಿ ಎಂದು ಒತ್ತಾಯಿಸಿದ್ದೆ. 15ನೇ ಹಣಕಾಸು ಆಯೋಗದವರು ವಿಶೇಷ ಅನುದಾನ 5495 ಕೋಟಿ ರೂ ವಿಶೇಷ ಅನುದಾನ ಪಡೆಯಲು ಹೇಳಿದ್ದೆ. ಬೆಂಗಳೂರು ಅಭಿವೃದ್ಧಿಗೆ 6000 ಕೋಟಿ ಕೊಟ್ಟಿದ್ದಾರೆ. ಅದನ್ನು ಪಡೆಯಿರಿ ಎಂದು ಹೇಳಿದ್ದೆ. ಒಟ್ಟು 11495 ಕೋಟಿ ರೂ. ಶಿಫಾರಸ್ಸು ಮಾಡಿರುವುದನ್ನು ಒತ್ತಾಯ ಮಾಡಿ ಎಂದು ಅವರಿಗೆ ಒತ್ತಾಯಿಸಿದ್ದೆ. ಕನ್ನಡಿಗರಿಗೆ ಅನ್ಯಾಯವಾದರೂ ಸುಮ್ಮನಿರಬೇಕೇ?

ರಾಜಕೀಯ ಮಂಜು ಕವಿದಿದೆ: ಕೇಂದ್ರ ಹಣಕಾಸು ಸಚಿವೆ ಹಾಗೂ ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಬಜೆಟ್ ಬಾಷಣದ ಭಾಗವನ್ನು ಓದಿ ಹೇಳಿದ ಮುಖ್ಯಮಂತ್ರಿಗಳು, ಪ್ಲೇಕಾರ್ಡ್ ಹಿಡಿದು ಬಂದರೆ ಕರ್ನಾಟಕದ ಜನರಿಗೆ ಮಾಡುವ ದ್ರೋಹ ಎಂದರು. ಇದು ಪ್ರಜಾಪ್ರಭುತ್ವ ವಿರೋಧಿ ಅಲ್ಲವೇ. ನಾನು ಈ ವರ್ಷ ಗ್ಯಾರಂಟಿಗಳಿಗೆ 36000 ಕೋಟಿ ಕೊಟ್ಟಿಲ್ಲ ಎಂದು ಸಾಬೀತುಪಡಿಸಲಿ. ಅಭಿವೃದ್ಧಿ ಕೆಲಸಗಳಿಗೆ ಅನುದಾನ ನೀಡಿಲ್ಲ ಎಂದು ಸಾಬೀತು ಮಾಡಲಿ. ಚರ್ಚೆ ಮಾಡಬಹುದಿತ್ತು. ಅದಕ್ಕೆ ಇವರ ತಲೆಯಲ್ಲಿ ಏನೂ ಇಲ್ಲ, ರಾಜಕೀಯ ಮಂಜು ಕವಿದಿದೆ. ಕನ್ನಡಿಗರ ಜನದ್ರೋಹದ ಕೆಲಸ ಮಾಡಿದ್ದಾರೆ ಎಂದರು.

ಸಾಲ ಮಾಡಿರುವುದಾಗಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳುತ್ತಾರೆ. ನಾನು ಸ್ವಾತಂತ್ರ್ಯ ಬಂದಾಗಿನಿಂದ ಹಣಕಾಸಿನ ಮಂತ್ರಿಯಾಗಿರುವವರೆಗೆ ಈ ರಾಜ್ಯದ ಮೇಲೆ 2,46,000 ಕೋಟಿ ಸಾಲವಿದ್ದು, ನಾನು ಮಾಡಿರುವದು 1.12 ಲಕ್ಷ ಕೋಟಿ ರೂ.ಗಳು ಮಾತ್ರ. ಇವರ ಬಜೆಟ್ ನಲ್ಲಿ ಕೇಲದ ವರ್ಷ 80 ಸಾವಿರ ಕೋಟಿ ರೂ.ಗಳ ಸಾಲ ಮಾಡಿದ್ದಾರೆ ಎಂದರು.

ರಥಸಪ್ತಮಿ; ಅರಮನೆ ಆವರಣದ ದೇವಾಲಯಗಳಲ್ಲಿ ವಿಶೇಷ ಪೂಜೆ



ರಥಸಪ್ತಮಿ ಅಂಗವಾಗಿ ಶುಕ್ರವಾರ ಅರಮನೆ ಆವರಣದಲ್ಲಿರುವ ದೇವಾಲಯಗಳ ಎಂಟು ರಥಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಮೈಸೂರು, ಫೆ. 16(ಎಸ್‌ಪಿಎನ್)– ರಥಸಪ್ತಮಿ ಅಂಗವಾಗಿ ಶುಕ್ರವಾರ ಅರಮನೆ ಆವರಣದಲ್ಲಿರುವ ದೇವಾಲಯಗಳ ಎಂಟು ರಥಗಳಿಗೆ ವಿಶೇಷ ಪೂಜೆ ಸಲ್ಲಿಸಿ, ಪ್ರಸಾದ ಹಂಚಿದರು. ಮುಂಜಾನೆ ಅರಮನೆಯ ಮುಖ್ಯದ್ವಾರದ ಮುಂಭಾಗ ರಥಗಳನ್ನು ನಿಲ್ಲಿಸಿ ಪೂಜೆ ಸಲ್ಲಿಸಲಾಯಿತು. ನಂತರ ಶ್ರೀ ಭುವನೇಶ್ವರಿ, ತ್ರಿನೇಶ್ವರ ಸ್ವಾಮಿ, ಲಕ್ಷ್ಮೀರಮಣಸ್ವಾಮಿ, ಮಹಾಲಕ್ಷ್ಮೀದೇವಿ, ಪ್ರಸನ್ನ, ವೇದ ವರಹಸ್ವಾಮಿ, ಖಿಲ್ಲೆ ವೆಂಕಟರಮಣಸ್ವಾಮಿ ಹಾಗೂ ಗಾಯಿತ್ರಿ ಅಮ್ಮನವರ ಉತ್ಸವ ಮೂರ್ತಿಗಳ ದರ್ಶನಕ್ಕೆ ಸಾರ್ವಜನಿಕರಿಗೆ ಅವಕಾಶ ನೀಡಲಾಯಿತು.

ನಗರದ ವಿವಿಧ ಬಡಾವಣೆಗಳಿಂದ ನೂರಾರು ಮಂದಿ ಅರಮನೆಗೆ ಆಗಮಿಸಿ ದೇವರ ದರ್ಶನ ಪಡೆದರು. ದೇವರಾಜ ಮೊಹಲ್ಲಾ, ಅಗ್ರಹಾರ, ರಾಮಾನುಜ ರಸ್ತೆ, ಸುಣ್ಣದಕೇರಿ, ಕನಕಗಿರಿ, ವಿದ್ಯಾರಣ್ಯಪುರಂ. ಇಟ್ಟಿಗೆಗೂಡು, ನಜರ್‌ಬಾದ್ ಮೊದಲಾದ ಪ್ರದೇಶಗಳಿಂದ ಕುಟುಂಬ ಸಮೇತರಾಗಿ ಆಗಮಿಸುತ್ತಿದ್ದ ಸಾರ್ವಜನಿಕರು ಕೈ ಮುಗಿದು, ಪೂಜೆ ಸಲ್ಲಿಸಿ ನಮಿಸಿದರು.

ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನ: ರಥಸಪ್ತಮಿ ಅಂಗವಾಗಿ ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಯದುಗಿರಿ ಯತಿರಾಜ ಮಠದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಾಲಯದಲ್ಲಿ ರಥಸಪ್ತಮಿ ಪ್ರಯುಕ್ತ ಬಹಳ ಅದ್ಧೂರಿಯಾಗಿ ಪ್ರಧಾನ ವ್ಯವಸ್ಥಾಪಕ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ) ನೇತೃತ್ವದಲ್ಲಿ ಉತ್ಸವ ಜರುಗಿತು.

ಉತ್ಸವಮೂರ್ತಿಯನ್ನು ದೇವಸ್ಥಾನದ ಸುತ್ತಲೂ ಮೂರು ಸುತ್ತು ತರಲಾಯಿತು. ದೇವರ ಪೂಜಾ ಕಾರ್ಯಕ್ರಮಗಳು ಬಹಳ ಅದ್ಧೂರಿಯಾಗಿ ಮೂಡಿಬಂತು. ಭಕ್ತಾದಿಗಳು ಸಕಾಲಕ್ಕೆ ಆಗಮಿಸಿ ದೇವರ ಕೃಪೆಗೆ ಪಾತ್ರರಾದರು. ಮಹಾಮಂಗಳಾರತಿ, ಭಕ್ತಿ–ಭಾವದೊಂದಿಗೆ ದೇವರ ಕಾರ್ಯಕ್ರಮಗಳು ಜರುಗಿದವು.

ಖಾಯಂ ಭರವಸೆ; ಪೌರಕಾರ್ಮಿಕರ ಸಂಭ್ರಮಾಚರಣೆ



ಮೈಸೂರು, ಫೆ.16(ಎಸ್‌ಬಿಡಿ)– ಪೌರಕಾರ್ಮಿಕರನ್ನು ಖಾಯಂಗೊಳಿಸಲು ಕ್ರಮ ವಹಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಜೆಟ್‌ನಲ್ಲಿ ಘೋಷಿಸಿದ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ಪೌರಕಾರ್ಮಿಕರು ಸಂಭ್ರಮಾಚರಿಸಿದರು.

ನೇರ ವೇತನ ಪಾವತಿಯಡಿ ಕಾರ್ಯನಿರ್ವಹಿಸುತ್ತಿರುವ ಸುಮಾರು 24 ಸಾವಿರ ಪೌರಕಾರ್ಮಿಕರನ್ನು ಈಗಾಗಲೇ ಖಾಯಂಗೊಳಿಸಲು ಸರ್ಕಾರದಿಂದ ಅನುಮೋದನೆ ನೀಡಲಾಗಿದ್ದು, ನೇರ ಪಾವತಿಯಡಿಯಲ್ಲಿ ಬಾಕಿ ಉಳಿದಿರುವ ಪೌರಕಾರ್ಮಿಕರನ್ನೂ ಹಂತ ಹಂತವಾಗಿ ಖಾಯಂಗೊಳಿಸಲು ಕ್ರಮವಹಿಸಲಾಗುವುದು ಎಂದು ಬಜೆಟ್‌ನಲ್ಲಿ ಘೋಷಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮೈಸೂರು ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘದ ವತಿಯಿಂದ ನಗರಪಾಲಿಕೆ ಮುಖ್ಯ ಕಚೇರಿ ಮುಂಭಾಗದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಿಸಲಾಯಿತು.

ಸಂಘದ ಉನ್ನತ ಸಮಿತಿ ಅಧ್ಯಕ್ಷ ಎನ್.ಮಾರ, ಕಾರ್ಯಾಧ್ಯಕ್ಷ ಮಂಚಯ್ಯ, ಅಧ್ಯಕ್ಷ ಆರ್.ನರಸಿಂಹ, ಪ್ರಧಾನ ಕಾರ್ಯದರ್ಶಿ ಜಿ.ಮಂಜುನಾಥ್, ಕಾರ್ಯದರ್ಶಿ ಶ್ರೀನಿವಾಸ್, ಉಪಾಧ್ಯಕ್ಷರಾದ ದೊರೆ, ಮುಖಂಡರಾದ ಬ್ಯಾಂಕ್ ರಂಗಣ್ಣ, ಮಹಿಳಾ ಪೌರಕಾರ್ಮಿಕರಾದ ಮಾದೇವಿ ವೆಂಕಟಮ್ಮ ಸೇರಿದಂತೆ ಅನೇಕ ಪೌರಕಾರ್ಮಿಕರು ಪಾಲ್ಗೊಂಡಿದ್ದರು.

ಹುಟ್ಟುಹಬ್ಬದ ಸಂಭ್ರಮ



ಮೈಸೂರು-ಕೊಡಗು ಸಂಸದ ಪ್ರತಾಪ್ ಸಿಂಹ ಹಾಗೂ ಶ್ರೀಮತಿ ಅರ್ಪಿತಾ ಸಿಂಹ ಅವರ ಪುತ್ರಿ ವಿಪಂಚಿ ಸಿಂಹರ ಹುಟ್ಟುಹಬ್ಬವನ್ನು ಮೈಸೂರಿನ ಜೆಪಿ ಫಾರ್ಚುನ್ ಹೋಟೆಲ್‌ನಲ್ಲಿ ಕಚೇರಿ ಸಿಬ್ಬಂದಿಗಳೊಂದಿಗೆ ಸಂಭ್ರಮದಿಂದ ಆಚರಿಸಲಾಯಿತು.

ಮೂರೂವರೆ ವರ್ಷದ ಮಗು ಮೇಲೆ ಬೀದಿನಾಯಿ ದಾಳಿ

ಗಂಭೀರ ಗಾಯ; ಆಸ್ಪತ್ರೆಗೆ ದಾಖಲು

● ಮೈಸೂರಲ್ಲಿ ದಂಡು ದಂಡಾಗಿ ಅಲೆಯುತ್ತಿವೆ ಶ್ವಾನಗಳು ● ದಿಢೀರ್ ದಾಳಿ ನಡೆಸುವ ಆತಂಕದಲ್ಲಿ ಜನತೆ ● ಇದರತ್ತ ಗಮನವನ್ನೇ ಹರಿಸದ ನಗರ ಪಾಲಿಕೆ ಸಿಬ್ಬಂದಿ ವರ್ಗ ● ಮಾತೆತ್ತಿದರೆ ಕೋರ್ಟ್‌ನತ್ತ ಬೊಟ್ಟು

ಮೈಸೂರು, ಫೆ.16(ಎಸ್‌ಬಿಡಿ)- ಮೂರೂವರೆ ವರ್ಷದ ಮಗುವಿನ ಮೇಲೆ ಬೀದಿನಾಯಿ ದಾಳಿ ಮಾಡಿ, ಗಂಭೀರವಾಗಿ ಗಾಯಗೊಳಿಸಿರುವ ಘಟನೆ ಮೈಸೂರಿನ ಗುಂಡೂರಾವ್ ನಗರದಲ್ಲಿ ಗುರುವಾರ ಮಧ್ಯಾಹ್ನ ನಡೆದಿದೆ.

ಎಪಿಎಂಸಿಯಲ್ಲಿ ಸೆಕ್ಯುರಿಟಿ ಗಾರ್ಡ್ ಆಗಿರುವ ಗುಂಡೂರಾವ್‌ನಗರ ಒಂದನೇ ಕ್ರಾಸ್ ನಿವಾಸಿ ಯೋಗೇಶ್ ಹಾಗೂ ಕಾವ್ಯ ದಂಪತಿ ಪುತ್ರಿ ವರ್ಷಾ, ನಾಯಿ ದಾಳಿಯಿಂದ ಗಂಭೀರವಾಗಿ ಗಾಯಗೊಂಡಿದ್ದಾಳೆ.

ಗುರುವಾರ ಮಧ್ಯಾಹ್ನ ಸುಮಾರು 3 ಗಂಟೆ ಸಮಯದಲ್ಲಿ ಪಕ್ಕದಲ್ಲೇ ಇರುವ ಅಜ್ಜಿ ಮನೆಗೆ ಬಂದು, ಅಲ್ಲಿಂದ ಚಾಕೊಲೇಟ್ ತೆಗೆದುಕೊಳ್ಳಲೆಂದು ಅಂಗಡಿಗೆ ಹೋಗುತ್ತಿದ್ದಾಗ ಏಕಾಏಕಿ ನಾಯಿ ದಾಳಿ ಮಾಡಿದೆ. ಮಗುವಿನ ಎರಡೂ ಕೆನ್ನೆ, ಕಿವಿ, ತಲೆಗೆ ಕಚ್ಚಿ, ಓಡಿ ಹೋಗಿದೆ. ಮಗುವಿಗೆ ಐದಾರು ಕಡೆ ಗಾಯಗಳಾಗಿದ್ದು, ರಕ್ತಸ್ರಾವವಾಗಿದೆ.

ನೋವಿನಿಂದ ನರಳುತ್ತಿದ್ದ ಮಗುವನ್ನು ಆಕೆಯ ಅಜ್ಜಿ ಪಕ್ಕದ ಮನೆಯವರ ಬೈಕ್‌ನಲ್ಲಿ ಕೆಆರ್‌ಎಸ್ ರಸ್ತೆಯಲ್ಲಿರುವ ಜಿಲ್ಲಾಸ್ಪತ್ರೆಗೆ ಕರೆತಂದಿದ್ದಾರೆ. ವಿಷಯ ತಿಳಿದ ಮಗುವಿನ ತಂದೆ ಹಾಗೂ ತಾತ ಆಸ್ಪತ್ರೆಗೆ ದೌಡಾಯಿಸಿದ್ದಾರೆ. ಸದ್ಯ ಮಗು ಪ್ರಾಣಾಪಾಯದಿಂದ ಪಾರಾಗಿದ್ದು, ವೈದ್ಯರು ಚಿಕಿತ್ಸೆ ಮುಂದುವರೆಸಿದ್ದಾರೆ.



ನಾಯಿ ದಾಳಿಯಿಂದ ತೀವ್ರವಾಗಿ ಗಾಯಗೊಂಡು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಗು

ಗಾಯಗಳನ್ನು ಸ್ವಚ್ಛಗೊಳಿಸಿ, ಬ್ಯಾಂಡೇಡ್ ಮಾಡಿ, ಇಂಜೆಕ್ಷನ್ ನೀಡಿದ್ದಾರೆ. ಇನ್ನೆರಡು ದಿನ ಬಿಟ್ಟು ಹೊಲಿಗೆ ಹಾಕಬೇಕೆಂದು ಹೇಳಿದ್ದಾರೆ. ಕೆನ್ನೆ ಹಾಗೂ ತಲೆಯ ಹಿಂಭಾಗದಲ್ಲಿ ಬಲವಾಗಿ ಕಚ್ಚಿದೆ. ಪುಟ್ಟ ಮಗು, ನೋವು ಸಹಿಸಲಾರದೆ ನರಳುತ್ತಿದೆ ಎಂದು ಮನೆಯವರು ನೊಂದು ನುಡಿದರು.

ಅಗ್ರಹಾರದಲ್ಲೂ ದಾಳಿಯಾಗಿತ್ತು

ಕೆಲ ದಿನಗಳ ಹಿಂದೆ ಅಗ್ರಹಾರದಲ್ಲೂ ಬೀದಿನಾಯಿಯೊಂದು ಸಿಕ್ಕಸಿಕ್ಕವರಿಗೆ ಕಚ್ಚಿತ್ತು. ಸಿದ್ದಪ್ಪ ವೃತ್ತ, ಚಾಮರಾಜ ಜೋಡಿ ರಸ್ತೆ, ತ್ಯಾಗರಾಜ ರಸ್ತೆ, ವಾಣಿ ವಿಲಾಸ ರಸ್ತೆ ಸೇರಿದಂತೆ ಮನ ಬಂದಂತೆ ಓಡಾಡಿ, ಎದುರಿಗೆ ಬಂದವರಿಗೆ ಕಚ್ಚಿತ್ತು. ಹಲವರು ದ್ವಿಚಕ್ರ ವಾಹನಗಳಲ್ಲಿ ಹಿಂಬಾಲಿಸಿ, ನಾಯಿಯನ್ನು ಹಿಡಿಯಲು ಪ್ರಯತ್ನಿಸಿದರಾದರೂ ಪ್ರಯೋಜನವಾಗಲಿಲ್ಲ. ಈ ಬಗ್ಗೆ ನಗರ ಪಾಲಿಕೆಗೆ ಮಾಹಿತಿ ನೀಡಿದರೂ ಏನೂ ಕ್ರಮ ಕೈಗೊಳ್ಳಲಿಲ್ಲ ಎಂದು ವ್ಯಕ್ತಿಯೊಬ್ಬರು ತಿಳಿಸಿದ್ದಾರೆ.

ಇನ್ನಿಬ್ಬರ ಮೇಲೂ ದಾಳಿ: ಇದೇ ಬಡಾವಣೆಯಲ್ಲಿ ಬುಧವಾರ ನಾಯಿ ದಾಳಿಯಿಂದ ಇಬ್ಬರು ಗಾಯಗೊಂಡಿದ್ದಾರೆ. ರಸ್ತೆಯಲ್ಲಿ ಹೋಗುವಾಗ ಏಕಾಏಕಿ ದಾಳಿ ಮಾಡಿ, ಕಚ್ಚಿ ಓಡಿ ಹೋಗಿದೆ. ಇಂದು ಮೂರೂವರೆ ವರ್ಷದ ಮಗುವನ್ನು ಕಚ್ಚಿ ಗಂಭೀರವಾಗಿ ಗಾಯಗೊಳಿಸಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಪಾಲಿಕೆಯೇ ನೇರಹೊಣೆ: ಈ ಘಟನೆಗೆ ನಗರ ಪಾಲಿಕೆಯೇ ನೇರ ಹೊಣೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಊಟಿ ರಸ್ತೆಗೆ ಹೊಂದಿಕೊಂಡಿರುವ ಗುಂಡೂರಾವ್ ನಗರದಲ್ಲಿ ನಾಯಿ ಹಾವಳಿ ವಿಪರೀತವಾಗಿದೆ. ಆಗಾಗ್ಗೆ ಜನ-ಜಾನುವಾರುಗಳ ಮೇಲೆ ದಾಳಿ ಮಾಡುತ್ತಿರುತ್ತವೆ. ಈ ಬಗ್ಗೆ ಹಲವು ಬಾರಿ ನಗರ ಪಾಲಿಕೆ ಅಧಿಕಾರಿಗಳಿಗೆ ತಿಳಿಸಿದರೂ ಯಾವುದೇ ಕ್ರಮ ವಹಿಸಿಲ್ಲ. ಬುಧವಾರವೂ ಇಬ್ಬರು ನಾಯಿ ದಾಳಿಯಿಂದ ಗಾಯಗೊಂಡು ಚಿಕಿತ್ಸೆ ಪಡೆದಿದ್ದಾರೆ. ಇಂದು ಮಗು ಮೇಲೆ ದಾಳಿ ಮಾಡಿ, ಗಂಭೀರವಾಗಿ ಗಾಯಗೊಳಿಸಿರುವ ವಿಷಯ ತಿಳಿಸಿದರೂ ಪಾಲಿಕೆ ಅಧಿಕಾರಿಗಳು ಸ್ಥಳಕ್ಕೆ ಬರಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಪಾಲಿಕೆ ಕಂಟ್ರೋಲ್ ರೂಂಗೆ ಕರೆ ಮಾಡಿದರೆ ಡಾಗ್ ಸ್ಕ್ವಾಡ್‌ನವರ ನಂಬರ್ ಕೊಟ್ಟರು. ಆ ಮೊಬೈಲ್ ಸಂಖ್ಯೆಗೆ ಕರೆ ಮಾಡಿದರೆ ವಾಹನದ ಡ್ರೈವರ್ ಇಲ್ಲ ಎಂದು ಸಬೂಬು ಹೇಳಿದರು. ಪಾಲಿಕೆ ಆರೋಗ್ಯ ಅಧಿಕಾರಿಗೆ ಕರೆ ಮಾಡಿದರೂ ಯಾವುದೇ ಪ್ರಯೋಜನವಾಗಲಿಲ್ಲ. ಅವರೂ ಕೂಡ ಸರಿಯಾಗಿ ಸ್ಪಂದಿಸಲಿಲ್ಲ. ಗಂಭೀರ ಸಮಸ್ಯೆಯನ್ನು ತುಂಬಾ ಲಘುವಾಗಿ ಪರಿಗಣಿಸಿದರು. ಡಾಗ್ ಸ್ಕ್ವಾಡ್‌ನವರಿಗೆ ಹೇಳುತ್ತೇನೆ ಎಂದರು. ಆದರೆ ಯಾರೊಬ್ಬರೂ ಸ್ಥಳಕ್ಕೆ ಬರಲಿಲ್ಲ ಎಂದು ಸ್ಥಳೀಯರಾದ ಸಂತೋಷ್ ತಿಳಿಸಿದರು.

ನಾಯಿ ಮಗುವಿನ ತಲೆ, ಮುಖಕ್ಕೆ ಕಚ್ಚಿದೆ. ಅದು ಏನಾದರೂ ಕತ್ತಿನ ಭಾಗಕ್ಕೆ ಕಚ್ಚಿದ್ದರೆ ಪರಿಸ್ಥಿತಿ ಏನಾಗುತ್ತಿತ್ತು? ಜನರ ಪ್ರಾಣಕ್ಕೆ ಬೆಲೆಯೇ ಇಲ್ಲವೇ? ಕಾನೂನಿನ ನೆಪ ಹೇಳಿ ಬೀದಿನಾಯಿ ಹಾವಳಿ ತಪ್ಪಿಸುವುದರಿಂದ ನುಣುಚಿಕೊಳ್ಳುತ್ತಿದ್ದಾರೆ. ನಾಯಿಗಳನ್ನು ಕೊಲ್ಲಬೇಕು ಎಂದು ಯಾರೂ ಹೇಳುತ್ತಿಲ್ಲ. ಆದರೆ ಪರ್ಯಾಯ ಕ್ರಮದ ಬಗ್ಗೆ ಚಿಂತನೆಯನ್ನೂ ಮಾಡುತ್ತಿಲ್ಲ. ಗಂಭೀರ ಪ್ರಕರಣವಾದರೂ ಅಧಿಕಾರಿಗಳು ಇಷ್ಟೊಂದು ನಿರ್ಲಕ್ಷಿಸುತ್ತಾರೆ ಎಂದರೆ ಜನರ ಗತಿಯೇನು? ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ಕಾರ್ಮಿಕರು, ರೈತರ ಪ್ರತಿಭಟನೆ



ಮೈಸೂರಿನ ಗಾಂಧಿ ಚೌಕದ ಬಳಿ ಶುಕ್ರವಾರ ಕೇಂದ್ರ ಸರ್ಕಾರದ ಜನ ವಿರೋಧಿ ನೀತಿಗಳನ್ನು ಖಂಡಿಸಿ ಸಂಯುಕ್ತ ಹೋರಾಟ ಕರ್ನಾಟಕ ಹಾಗೂ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಪ್ರತಿಭಟನೆ ನಡೆಸಿದರು

ಮೈಸೂರು, ಫೆ.16(ಜಿಎ)-ಕೇಂದ್ರ ಸರ್ಕಾರದ ಜನ ವಿರೋಧಿ ನೀತಿಗಳನ್ನು ಖಂಡಿಸಿ, ದುಡಿಯುವ ಜನರ ಶೋಷಣೆ ತಪ್ಪಿಸಲು, ಜನರ ಕೊಂಡುಕೊಳ್ಳುವ ಸಾಮರ್ಥ್ಯ ಹೆಚ್ಚಿಸಬೇಕು, ಉದ್ಯೋಗ ಸೃಷ್ಟಿಸುವಂತೆ ಆಗ್ರಹಿಸಿ ಸಂಯುಕ್ತ ಹೋರಾಟ ಕರ್ನಾಟಕ ಹಾಗೂ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ನೇತೃತ್ವದಲ್ಲಿ ಕಾರ್ಮಿಕರು ಮತ್ತು ರೈತರು ನಗರದ ಗಾಂಧಿ ಚೌಕದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು.

ಎನ್‌ಡಿಎ ನೇತೃತ್ವದ ಕೇಂದ್ರ ಸರ್ಕಾರ ಅಧಿಕಾರಕ್ಕೆ ಬಂದು 10 ವರ್ಷ ಸಮೀಪಿಸುತ್ತಿದೆ. 2 ಕೋಟಿ ಉದ್ಯೋಗದ ಸೃಷ್ಟಿ, ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ., ಡಾ. ಸ್ವಾಮಿನಾಥನ್ ಅವರ ಶಿಫಾರಸ್ಸಿನಂತೆ ಬೆಂಬಲ ಬೆಲೆಯ ಕಾನೂನು ಜಾರಿ ಕುರಿತ ವಾಗ್ದಾನವನ್ನು ಪ್ರಣಾಳಿಕೆಯಲ್ಲಿ ನೀಡಿತ್ತು. ಇದೀಗ ಜನರ ಸುಲಿಗೆಗೆ ಮುಂದಾಗಿದೆ ಎಂದ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಜನಸಾಮಾನ್ಯರ ಕೊಂಡುಕೊಳ್ಳುವ ಸಾಮರ್ಥ್ಯವನ್ನು ಕುಗ್ಗಿಸಿ, ಆಹಾರ, ಆರೋಗ್ಯ ಮತ್ತು ಶಿಕ್ಷಣಕ್ಕಾಗಿ ಅನುದಾನಗಳನ್ನು ಹೆಚ್ಚಳ ಮಾಡುವ ಬದಲಿಗೆ ಅನುದಾನ ಕಡಿತ ಮಾಡಿ, ಆರೋಗ್ಯ ಮತ್ತು ಶಿಕ್ಷಣವನ್ನು ಸಂಪೂರ್ಣವಾಗಿ ಖಾಸಗೀಕರಿಸುವುದಲ್ಲದೇ ದೇಶವನ್ನು ಹಸಿವಿನ ಸೂಚ್ಯಾಂಕದಲ್ಲಿ 111ನೇ ಸ್ಥಾನಕ್ಕೆ ಕುಸಿಯುವಂತೆ ಮಾಡಲಾಗಿದೆ ಎಂದು ದೂರಿದರು.

ಅಗತ್ಯ ವಸ್ತುಗಳ ಬೆಲೆ ಏರಿಕೆ ನಿಯಂತ್ರಿಸಿ, ಶ್ರೀಮಂತರ ಮೇಲಿನ ತೆರಿಗೆ ಹೆಚ್ಚಿಸಿ ಬಡವರಿಗೆ ಬದುಕಲು ಅವಕಾಶ ನೀಡುವ ನೀತಿಗಳನ್ನು ಜಾರಿಗೆ ತರಬೇಕು. ಎಲ್ಲಾ ಸ್ವರೂಪದ ಖಾಸಗೀಕರಣ ಕೈಬಿಡಬೇಕು. ಕೃಷಿ ಕಾರ್ಮಿಕರಿಗೆ ಸಮಗ್ರವಾದ ಕಲ್ಯಾಣ ಯೋಜನೆಗಳು, ಕಾರ್ಮಿಕ ವಿರೋಧಿ ನೀತಿಗಳನ್ನು ಕೈ ಬಿಟ್ಟು, ಕಾರ್ಮಿಕರ ಪರವಾದ ನೀತಿಗಳನ್ನು ಜಾರಿಗೆ ತರಬೇಕು ಎಂದು ಅವರು ಒತ್ತಾಯಿಸಿದರು.

ಡಾ. ಸ್ವಾಮಿನಾಥನ್ ಶಿಫಾರಸಿನಂತೆ ಕನಿಷ್ಟ ಬೆಂಬಲ ಬೆಲೆ ಕಾನೂನು ರಚಿಸಬೇಕು. ಕೃಷಿ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳನ್ನು ರೂಪಿಸಬೇಕು. ನರೇಗಾ ಯೋಜನೆಯನ್ನು 200 ದಿನಗಳಿಗೆ ಹೆಚ್ಚಿಸಿ, 600 ರೂ. ಕೂಲಿ ನಿಗದಿ ಮಾಡಿ, ಬಯೋಮೆಟ್ರಿಕ್ ಪದ್ಧತಿಯನ್ನು ಕೈಬಿಡಬೇಕು. ಬರ ಪೀಡಿತ ಕರ್ನಾಟಕದ ರೈತರ ನೆರವಿಗೆ ಕೇಂದ್ರ ಸರ್ಕಾರ ಮುಂದಾಗಬೇಕು ಎಂದು ಅವರು ಆಗ್ರಹಿಸಿದರು.

ದೇಶದ ಎಲ್ಲಾ ರೈತರು, ಕೂಲಿಕಾರರು, ಕಾರ್ಮಿಕರು ಒಂದಾಗಿ ದೆಹಲಿ ಚಲೋ ಚಳವಳಿ ನಡೆಸುತ್ತಿದ್ದು, ಅವರ ಮೇಲೆ ಪೊಲೀಸರು ದಬ್ಬಾಳಿಕೆ ಮಾಡಿರುವುದನ್ನು ಸರಿಯಲ್ಲ ಎಂದು ಅವರು ಖಂಡಿಸಿದರು.

ಪ್ರತಿಭಟನೆಯಲ್ಲಿ ಜಂಟಿ ಸಮಿತಿಯ ಎನ್.ಕೆ. ಬಾಲಾಜಿ ರಾವ್, ಮುಖಂಡರಾದ ಜಗದೀಶ್ ಸೂರ್ಯ, ಪಿ. ಮರಂಕಯ್ಯ, ಚಂದ್ರಶೇಖರ್ ಮೇಟಿ, ಶೇಷಾದ್ರಿ, ಪಿ.ಎಸ್. ಸಂಧ್ಯಾ, ಮಂಡಕಳ್ಳಿ ಮಹೇಶ್, ನಾಗನಹಳ್ಳಿ ವಿಜಯೇಂದ್ರ, ಜವರಯ್ಯ, ದೇವದಾಸ್, ಹೊಸಕೋಟೆ ಬಸವರಾಜು, ಉಗ್ರ ನರಸಿಂಹೇಗೌಡ, ಜಯರಾಮ್, ಚೋರನಹಳ್ಳಿ ಶಿವಣ್ಣ, ಹಳ್ಳಿಕೆರೆಹುಂಡಿ ಭಾಗ್ಯರಾಜ್ ಪಾಲ್ಗೊಂಡಿದ್ದರು.

ಕುಕ್ಕರಹಳ್ಳಿ ಕೆರೆಯಲ್ಲಿ ಮೀನುಗಳ ಮಾರಣಹೋಮ

ಬಿಸಿಲಿನ ತೀವ್ರತೆ ಕಾರಣ: ಅಧಿಕಾರಿಗಳ ವಿವರಣೆ





ಮೈಸೂರು, ಫೆ 16(ಆರ್‌ಕೆ)- ಮೈಸೂರಿನ ಕುಕ್ಕರಹಳ್ಳಿ ಕೆರೆಯಲ್ಲಿ ಮೀನುಗಳು ಸಾವನ್ನಪ್ಪಿದ್ದು ವಾಯು ವಿಹಾರಿಗಳು, ಪರಿಸರ ಪ್ರೇಮಿಗಳು ಆತಂಕಗೊಂಡಿದ್ದಾರೆ.

ಇಂದು ಮುಂಜಾನೆ ವಾಯುವಿಹಾರಿಗಳು, ಕೆರೆ ನೀರಿನಲ್ಲಿ ತೇಲುತ್ತಿದ್ದ ಮೀನುಗಳನ್ನು ಕಂಡು ಮೈಸೂರು ವಿಶ್ವವಿದ್ಯಾನಿಲಯದ ತೋಟಗಾರಿಕಾ ವಿಭಾಗದ ಅಧಿಕಾರಿಗಳಿಗೆ ಮಾಹಿತಿ ನೀಡಿದರು. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ತೋಟಗಾರಿಕಾ ನಿರ್ದೇಶಕ ಮುನಾವರ್ ಹಾಗೂ ಸಿಬ್ಬಂದಿ, ಮೀನುಗಾರರ ನೆರವಿನಿಂದ ಸಾವನ್ನಪ್ಪಿರುವ ಮೀನುಗಳನ್ನು ಕಲೆ ಹಾಕಿಸಿದರು.

ಒಳಚರಂಡಿ ನೀರು ಕೆರೆಗೆ ಸೇರಿ ನೀರು ಕಲುಷಿತಗೊಳ್ಳುವುದರಿಂದ, ಆಮ್ಲಜನಕ ಕೊರತೆಯಿಂದ ಮೀನು ಮತ್ತು ಇತರೆ ಜಲಚರ ಪ್ರಾಣಿಗಳು ಸಾಯುವುದುಂಟು. ಆದರೆ, ಈಗ ಕೆರೆಗೆ ಒಳಚರಂಡಿ ಇಲ್ಲವೇ ಕಲುಷಿತ ನೀರು ಹರಿದು ಬರುತ್ತಿಲ್ಲವಾದರೂ, ಮೀನುಗಳು ಸಾವನ್ನಪ್ಪುವುದಕ್ಕೆ ಕಾರಣ ಏನೆಂಬುದು ತಕ್ಷಣಕ್ಕೆ ತಿಳಿಯುತ್ತಿಲ್ಲ ಎಂದು ಮುನಾವರ್ ತಿಳಿಸಿದ್ದಾರೆ.

ಈ ಭಾರಿ ಬಿಸಿಲಿನ ತೀವ್ರತೆ ಜಾಸ್ತಿಯಾಗಿರುವುದರಿಂದ ಕೆರೆ ನೀರು ಹೆಚ್ಚು ಬಿಸಿಯಾಗಿ ದಡದ ಕಡೆ ಇರುವ ಮೀನುಗಳು ಅಧಿಕ ಶಾಕಾ ಪ್ರಮಾಣದಿಂದ ಸಾವನ್ನಪ್ಪಿರಬಹುದೆಂದು ಶಂಕಿಸಲಾಗಿದೆ. ನಿಖರ ಕಾರಣ ತಿಳಿಯಲು ಕುಕ್ಕರಹಳ್ಳಿ ಕೆರೆ ನೀರು, ಸಾವನ್ನಪ್ಪಿರುವ ಮೀನುಗಳ ದೇಹದ ಸ್ಯಾಂಪಲ್‌ಗಳನ್ನು ಪ್ರಯೋಗಾಲಯಕ್ಕೆ ರವಾನಿಸಿ ವರದಿ ತರಿಸಿಕೊಳ್ಳುತ್ತೇವೆ ಎಂದು ಅವರು ತಿಳಿಸಿದ್ದಾರೆ.

50 ರಿಂದ 60 ಮೀನುಗಳು ಮೃತಪಟ್ಟಿವೆ. ಪ್ರತೀ ಬೇಸಿಗೆ ಕಾಲದಲ್ಲಿ ಬಿಸಿಲಿನ ಝಳದಿಂದ ಮೀನುಗಳು ಸಾವನ್ನಪ್ಪುತ್ತಿರುತ್ತವೆ ಎಂದು ಅವರು ಮಾಹಿತಿ ನೀಡಿದರು.

ಈಗಾಗಲೇ ತಜ್ಞರನ್ನು ಕರೆಸಿ ತಪಾಸಣೆ ಮಾಡಿಸಲಾಗಿದೆ. ಮೀನುಗಳ ಸಾವಿಗೆ ಕಾರಣಗಳೇನಿರಬಹುದೆಂದು ತಿಳಿದುಕೊಂಡು ಸಮಸ್ಯೆಗೆ ಪರಿಹಾರೋಪಾಯ ಕಂಡುಕೊಳ್ಳಲು ಪ್ರಕ್ರಿಯೆ ನಡೆಸುತ್ತಿದ್ದೇವೆ. ಮುಂದೆ ಈ ರೀತಿ ಜಲಚರ ಪ್ರಾಣಿಗಳ ಸಾವು ಸಂಭವಿಸದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುತ್ತೇವೆ ಎಂದು ಮುನಾವರ್ ತಿಳಿಸಿದರು.

ಮೀನುಗಳು ಸತ್ತು ನೀರಿನಲ್ಲಿ ತೇಲುತ್ತಿದ್ದ ವೇಳೆ ವಾಯು ವಿಹಾರಿಗಳು ಜಮಾಯಿಸಿ ಕೆರೆ ನೀರು ಕಲುಷಿತಗೊಳ್ಳುತ್ತಿರುವುದೇ ಮೀನುಗಳು ಸಾವನ್ನಪ್ಪಲು ಕಾರಣ ಎಂದು ದೂರುತ್ತಿದ್ದರಲ್ಲದೇ ಮೈಸೂರು ವಿಶ್ವವಿದ್ಯಾನಿಲಯದ ಅಧಿಕಾರಿಗಳು ಕೆರೆಗೆ ಬಂದು ಸೇರುತ್ತಿರುವ ಒಳಚರಂಡಿಯ ಕಲುಷಿತ ನೀರನ್ನು ತಡೆದು, ಆಗಿಂದಾಗ್ಗೆ ಕೆರೆ ನೀರನ್ನು ಸ್ವಚ್ಛಗೊಳಿಸಿ ಸರಿಯಾಗಿ ನಿರ್ವಹಣೆ ಮಾಡದಿರುವುದು ಮೀನುಗಳು ಸಾವನ್ನಪ್ಪಲು ಕಾರಣ ಎಂದು ಅಸಮಾಧಾನ ವ್ಯಕ್ತಪಡಿಸಿದ ಪರಿಸರ ಪ್ರೇಮಿಗಳು, ನಗರದ ಮಧ್ಯದಲ್ಲಿರುವ ಕುಕ್ಕರಹಳ್ಳಿ ಕೆರೆಯು ಮೈಸೂರಿನ ನಿಸರ್ಗ ತಾಣವಾಗಿದೆ. ಮೈಸೂರು ವಿಶ್ವವಿದ್ಯಾನಿಲಯ, ತೋಟಗಾರಿಕೆ, ಮೀನುಗಾರಿಕೆ ಅಧಿಕಾರಿಗಳು ಕುಕ್ಕರಹಳ್ಳಿ ಕೆರೆ ನೀರನ್ನು ಆಗಿಂದಾಗ್ಗೆ ಸ್ವಚ್ಛಗೊಳಿಸಬೇಕು. ನಿಯತ ಕಾಲಿಕ ನಿರ್ವಹಣೆಗೆ ಗಮನಹರಿಸಿದಿದ್ದರೆ ಅಲ್ಲಿನ ಮೀನುಗಳನ್ನು ಸಂರಕ್ಷಿಸಬೇಕು ಎಂದು ಒತ್ತಾಯಿಸಿದ್ದಾರೆ.

"ಕುಕ್ಕರಹಳ್ಳಿ ಕೆರೆಯಲ್ಲಿ ಮೀನುಗಳು ಸಾವನ್ನಪ್ಪಿರುವುದು ನೋವಿನ ಸಂಗತಿ. ಮಳೆ ಬಿದ್ದಿಲ್ಲ, ಒಳಚರಂಡಿ, ಕಲುಷಿತ ನೀರು ಕೆರೆಗೆ ಸೇರುತ್ತಿಲ್ಲವಾದರೂ ಮೀನುಗಳು ಸಾವನ್ನಪ್ಪಲು ಕಾರಣವೇನೆಂದು ತಿಳಿಯಲು ಪ್ರಯೋಗಾಲಯದಿಂದ ವರದಿ ತರಿಸಿಕೊಂಡು ಮುಂದೆ ಹೀಗಾಗದಂತೆ ಎಚ್ಚರಿಕಾ ಕ್ರಮ ಕೈಗೊಳ್ಳುತ್ತೇವೆ. ಬಿಸಿಲಿನ ತಾಪ ತಡೆಯಲಾರದೆ ಮೀನುಗಳು ಮೃತಪಟ್ಟಿರಬಹುದೆಂದು ಶಂಕಿಸಲಾಗಿದೆ. ಪ್ರಯೋಗಾಲಯದಿಂದ ವರದಿ ಕೈಸೇರಿದ ತಕ್ಷಣ ಮೀನುಗಳ ಸಾವು ತಡೆಯಲು ಅಗತ್ಯ ಕ್ರಮ ವಹಿಸಲಾಗುವುದು.

- ಎನ್.ಕೆ. ಲೋಕನಾಥ್,
ಕುಲಪತಿ, ಮೈಸೂರು ವಿಶ್ವವಿದ್ಯಾನಿಲಯ

ಇಂದು ವಿದ್ಯುತ್ ಗ್ರಾಹಕರ ಸಂವಾದ

ಮೈಸೂರು, ಫೆ.16- ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ನಿಗಮ ನಿಯಮಿತದ ವತಿಯಿಂದ ಮೈಸೂರು ತಾಲೂಕು ವಿ.ವಿ ಮೊಹಲ್ಲಾ ಕಾರ್ಯ ಮತ್ತು ಪಾಲನಾ ವಿಭಾಗ ವ್ಯಾಪ್ತಿಯ ಚಾ.ವಿ.ಸ.ನಿ.ನಿ ಉಪವಿಭಾಗಗಳಾದ ವಿ.ವಿ ಮೊಹಲ್ಲಾ, ಹೂಟಗಳ್ಳಿ, ಕುವೆಂಪುನಗರ ಮತ್ತು ರಾಮಕೃಷ್ಣನಗರ ಉಪವಿಭಾಗಗಳಲ್ಲಿ ವಿದ್ಯುತ್ ಇಲಾಖೆಗೆ ಸಂಬಂಧಿತ ಸಮಸ್ಯೆಗಳ ಬಗ್ಗೆ ಹಾಗೂ ಗ್ರಾಹಕರಿಗೆ ವಿದ್ಯುತ್ ಸುರಕ್ಷಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಲು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅಧ್ಯಕ್ಷತೆ ಯಲ್ಲಿ ಫೆ.17ರಂದು ಬೆಳಿಗ್ಗೆ 11 ಗಂಟೆಗೆ ವಿದ್ಯುತ್ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಆಯಾ ಉಪ ವಿಭಾಗ ಕಛೇರಿಯಲ್ಲಿ ನಡೆಯುವ ವಿದ್ಯುತ್ ಗ್ರಾಹಕರ ಸಂವಾದ ಸಭೆಗೆ ಭಾಗವಹಿಸಿ, ವಿದ್ಯುತ್ ಇಲಾಖೆಗೆ ಸಂಬಂಧಿತ ಸಮಸ್ಯೆಗಳೇನಾದರೂ ಇದ್ದಲ್ಲಿ ಲಿಖಿತ ಅರ್ಜಿಗಳನ್ನು ಸಲ್ಲಿಸಿ ವಿದ್ಯುತ್ ಸಮಸ್ಯೆ ಹಾಗೂ ವಿದ್ಯುತ್ ಸುರಕ್ಷತಾ ಜಾಗೃತಿ ಬಗ್ಗೆ ಯಾವುದೇ ಪ್ರಶ್ನೆ/ಸಮಸ್ಯೆಗಳಿದ್ದಲ್ಲಿ ಬಗೆಹರಿಸಿಕೊಳ್ಳುವಂತೆ ಚಾವಿಸನಿನಿ ವಿ.ವಿ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಶೋಧನಾ ಲೇಖನಗಳ ಆಹ್ವಾನ

ಮೈಸೂರು, ಫೆ.16- ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ವತಿಯಿಂದ ಮಾ.2 ಮತ್ತು 3ರಂದು 'ಡಾ. ಬಿ.ಆರ್. ಅಂಬೇಡ್ಕರ್‌ರವರ ಅಭಿವೃದ್ಧಿ ದೃಷ್ಟಿಕೋನಗಳು ಮತ್ತು ಸಮಕಾಲೀನ ಜಗತ್ತು' ವಿಷಯವಾಗಿ ಎರಡು ದಿನಗಳ ಅಂತರರಾಷ್ಟ್ರೀಯ ಸಮ್ಮೇಳನವನ್ನು ಏರ್ಪಡಿಸಲಾಗಿದ್ದು, ಸಂಶೋಧನಾ ಲೇಖನಗಳನ್ನು ಆಹ್ವಾನಿಸಲಾಗಿದೆ. ಸಮ್ಮೇಳನದಲ್ಲಿ ರಾಜ್ಯ, ದೇಶ ಮತ್ತು ವಿದೇಶಗಳ ಪ್ರತಿಷ್ಠಿತ ವಿಶ್ವವಿದ್ಯಾನಿಲಯಗಳ ಸಂಪನ್ಮೂಲ ವ್ಯಕ್ತಿಗಳು ಮತ್ತು ವಿದ್ವಾಂಸರುಗಳು ಡಾ.ಬಿ.ಆರ್.ಅಂಬೇಡ್ಕರ್‌ರವರ ಚಿಂತನೆಗಳ ಪ್ರಮುಖ ಭಾಷಣ ಮತ್ತು ಪ್ರಬಂಧಗಳನ್ನು ಮಂಡಿಸುವರು. ಪ್ರಬಂಧಗಳನ್ನು ಮಂಡಿಸಲು ಮತ್ತು ಅವುಗಳನ್ನು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಕಟಣೆಗೊಳಿಸಲು ಅವಕಾಶವಿದ್ದು, ಲೇಖನಗಳನ್ನು ಸಲ್ಲಿಸಲು ಫೆ.24 ಕೊನೆಯ ದಿನಾಂಕವಾಗಿದೆ. ಸಂಶೋಧನಾ ವಿದ್ಯಾರ್ಥಿಗಳು, ಅಧ್ಯಾಪಕ ವರ್ಗದವರು ಮತ್ತು ಪ್ರಗತಿಪರ ಚಿಂತಕರು ಇದರ ಸದುಪಯೋಗ ಪಡೆದುಕೊಳ್ಳಬಹುದು.

ಖದೀಮರ ಸೆರೆ: 26 ಲಕ್ಷ ರೂ. ಮೌಲ್ಯದ ಚಿನ್ನಾಭರಣ ವಶ

ಮೈಸೂರು, ಫೆ. 16(ಆರ್‌ಕೆ)- ಇಬ್ಬರು ಮನೆ ಕಳ್ಳರನ್ನು ಬಂಧಿಸಿರುವ ಸಿಸಿಬಿ ಪೊಲೀಸರು, 26 ಲಕ್ಷ ರೂ. ಮೌಲ್ಯದ 416 ಗ್ರಾಂ ಚಿನ್ನಾಭರಣ ಹಾಗೂ ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ.

ಮೈಸೂರಿನ ರಾಜೀವ್‌ನಗರ ನಿವಾಸಿ ಸೈಯ್ಯದ್ ಅಸ್ಲಂ ಮತ್ತು ಜೀಷನ್ ಬಂಧಿತ ಆರೋಪಿಗಳಾಗಿದ್ದು, ಅವರಿಂದ 26 ಲಕ್ಷ ರೂ. ಚಿನ್ನಾಭರಣ ವಶಪಡಿಸಿಕೊಳ್ಳಲಾಗಿದೆ. 2023ರ ಡಿಸೆಂಬರ್ 28ರಂದು ವಿಜಯನಗರ ಠಾಣಾ ವ್ಯಾಪ್ತಿಯಲ್ಲಿ ಮನೆ ಕಳುವಾಗಿದ್ದ ಪ್ರಕರಣದ ಪತ್ತೆಗಾಗಿ ರಚಿಸಿದ್ದ ಸಿಸಿಬಿ ಘಟಕದ ಪೊಲೀಸರ ತಂಡವು ಕಾರ್ಯಾಚರಣೆ ನಡೆಸಿದಾಗ ಜನವರಿ 17ರಂದು ಮೈಸೂರಿನ ಅಶೋಕ ರಸ್ತೆಯಲ್ಲಿ ಓರ್ವನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಫೆಬ್ರವರಿ 10ರಂದು ಮಂಡಿಮೊಹಲ್ಲಾ ಮತ್ತೋರ್ವನನ್ನು ಬಂಧಿಸುವಲ್ಲಿ ಯಶಸ್ವಿಯಾದರು.



ಆತನನ್ನು ವಿಚಾರಣೆ ಮಾಡಿದಾಗ ಮೈಸೂರಿನ ವಿಜಯನಗರದಲ್ಲಿ ನಡೆದಿದ್ದ ಮನೆ ಕಳವು ಹಾಗೂ ಹಾವೇರಿ ಪಟ್ಟಣ ಠಾಣೆ ವ್ಯಾಪ್ತಿಯ ಮನೆಯೊಂದರಲ್ಲಿ ಕಳವು ಮಾಡಿದ್ದ 416 ಗ್ರಾಂ ಬೆಲೆ ಬಾಳುವ 26 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಹಾಗೂ 1 ಸುಜುಕಿ ಆಕ್ಸೆಸ್ ಸ್ಕೂಟರ್ ಅನ್ನು ವಶಪಡಿಸಿಕೊಂಡರು.

ಡಿಸಿಪಿ ಎಸ್. ಜಾಹ್ನವಿ, ಸಿಸಿಬಿ ಎಸಿಪಿ ಎಸ್.ಎನ್.ಸಂದೇಶಕುಮಾರ್ ಮಾರ್ಗದರ್ಶನದಲ್ಲಿ ಇನ್ಸ್‌ಪೆಕ್ಟರ್ ಎಂ. ಮೋಹನ್‌ಕುಮಾರ್, ಸಬ್ ಇನ್ಸ್‌ಪೆಕ್ಟರ್‌ಗಳಾದ ಮಾರುತಿ ಅಂತರಗಟ್ಟಿ, ಕಿರಣ್ ಹಂಪಿಹೋಳಿ, ಎಎಸ್‌ಐಗಳಾದ ಅಸ್ಗರ್ ಖಾನ್, ಜಗದೀಶ್, ಸಿಬ್ಬಂದಿಗಳಾದ ಸಲೀಂ ಪಾಷ, ರಂಗಸ್ವಾಮಿ, ಎಂ.ಆರ್. ಗಣೇಶ್, ಎ. ಉಮಾಮಹೇಶ್, ಲಕ್ಷ್ಮೀಕಾಂತ, ಪ್ರಕಾಶ್, ಸುರೇಶ್, ಮೋಹನಾರಾಧ್ಯ, ಚಂದ್ರಶೇಖರ್, ಮಹೇಶ್, ನರಸಿಂಹರಾಜು, ಮಧುಸೂದನ್, ಶಿವಣ್ಣ, ಗೋವಿಂದ, ಕೆ.ಎಸ್. ರವಿ, ಮಹೇಶ್, ಮಮತಾ, ರಮ್ಯಾ ಪತ್ತೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಅಕ್ರಮಗಳ ತನಿಖೆಗೆ ಆಗ್ರಹಿಸಿ ಮುಕ್ತ ವಿವಿ ವಿರುದ್ಧ ಪತ್ರ ಚಳುವಳಿ



ಮೈಸೂರು ಮಹಾನಗರ ಪಾಲಿಕೆ ಮುಂಭಾಗ ಕರ್ನಾಟಕ ರಾಜ್ಯ ಮುಕ್ತ ವಿವಿಯಲ್ಲಿ ನಡೆಯುತ್ತಿರುವ ಹಗರಣ ಬಗ್ಗೆ ತನಿಖೆ ನಡೆಸುವಂತೆ ಆಗ್ರಹಿಸಿ ದೇವರಾಜ ಅರಸು ಪ್ರತಿಮೆ ಪ್ರತಿಷ್ಠಾಪನಾ ಸಮಿತಿ ಶುಕ್ರವಾರ ಪ್ರತಿಭಟನೆ ನಡೆಸಿತು.

ಮೈಸೂರು, ಫೆ.16(ಜಿಎ)-ಕರ್ನಾಟಕ ರಾಜ್ಯ ಮುಕ್ತ ವಿವಿಯಲ್ಲಿ ನಡೆಯುತ್ತಿರುವ ಅನಾವಶ್ಯಕ ನೇಮಕಾತಿಯಿಂದಾಗಿ ವಿವಿಯೂ ಮುಚ್ಚುವ ಹಂತಕ್ಕೆ ತಲುಪಿದೆ ಎಂದು ಆರೋಪಿಸಿ ದೇವರಾಜ ಅರಸು ಪ್ರತಿಮೆ ಪ್ರತಿಷ್ಠಾಪನಾ ಸಮಿತಿಯವರು ಮೈಸೂರಿನ ಮಹಾನಗರ ಪಾಲಿಕೆ ಬಳಿ ಶುಕ್ರವಾರ ಪತ್ರ ಚಳವಳಿ ನಡೆಸಿ, ರಾಜ್ಯ ಮುಕ್ತ ವಿವಿಯಲ್ಲಿ ನಡೆಯುತ್ತಿರುವ ಹಗರಣಗಳ ಬಗ್ಗೆ ಸೂಕ್ತ ತನಿಖೆಗೆ ಆಗ್ರಹಿಸಿ ರಾಜ್ಯಪಾಲರು, ಮುಖ್ಯಮಂತ್ರಿ ಹಾಗೂ ಉನ್ನತ ಶಿಕ್ಷಣ ಸಚಿವರಿಗೆ ಪತ್ರ ಕಳುಹಿಸಿದರು.

ರಾಜ್ಯ ಮುಕ್ತ ವಿವಿ ಆರಂಭದಿಂದಲೂ ಒಂದಲ್ಲ ಒಂದು ವಿವಾದಕ್ಕೆ ಕಾರಣವಾಗಿದೆ. ಇದಕ್ಕೆ ಕೊನೆಯಿಲ್ಲದಂತಾಗಿದ್ದು, ಮೌಲಿಕ ಶಿಕ್ಷಣಕ್ಕಿಂತ ಕಟ್ಟಡ ಕಟ್ಟುವ, ಅನಾವಶ್ಯಕ ನೇಮಕಾತಿ ಮಾಡುವ ದಂಧೆಯಲ್ಲಿ ಮುಳುಗಿ ಮುಕ್ತ ವಿವಿಯನ್ನು ಮುಚ್ಚುವ ಹಂತಕ್ಕೆ ತಲುಪಿಸಿದ್ದಾರೆ. ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಾಗಿ ಬೋದಕ, ಬೋದಕೇತರ ಸಿಬ್ಬಂದಿ ನೇಮಕಾತಿ ಮಾಡುತ್ತ ಅದರಿಂದ ಹಣ ವಸೂಲಿ ಮಾಡುವ ಕೃತ್ಯ ಈಗಾಗಲೇ ಬಹಿರಂಗವಾಗಿದೆ ಎಂದು ದೂರಿದರು.

2022ರಿಂದ ಈವರೆಗೂ ಬೋಧಕ ಮತ್ತು ಬೋದಕೇತರ ಸಿಬ್ಬಂದಿ ಒಳಗೊಂಡಂತೆ ಸುಮಾರು 400 ಸಿಬ್ಬಂದಿ ನೇಮಕಾತಿ ಆಗಿದೆ. ಇದುವರೆಗೂ ಮುಕ್ತ ವಿವಿಯಲ್ಲಿ 1500 ಹೆಚ್ಚು ಬೋಧಕ ಮತ್ತು ಬೋಧಕೇತರ ಅನಾವಶ್ಯಕ ಸಿಬ್ಬಂದಿ ನೇಮಕ ಆಗಿದೆ. ಪ್ರತಿ ತಿಂಗಳು ನೀಡುತ್ತಿರುವ ಸಿಬ್ಬಂದಿ ಸಂಬಳದ ಮೊತ್ತ 7 ರಿಂದ 8 ಕೋಟಿ ರೂ. ತಗುಲುತ್ತಿದ್ದು, ಮುಕ್ತ ವಿವಿಗೆ ಸರ್ಕಾರದಿಂದ ಯಾವುದೇ ರೀತಿಯ ಅನುದಾನ ದೊರಕುವುದಿಲ್ಲ. ಪ್ರವೇಶಾತಿಯಿಂದ ಬಂದ ಸಂಪನ್ಮೂಲದಿಂದ ಸಿಬ್ಬಂದಿ ಸಂಬಳ ಹಾಗೂ ಕಚೇರಿ ನಿರ್ವಹಣೆ ಮಾಡಬೇಕಾಗಿದೆ. ಹೀಗಾಗಿ, ಈ ಕೂಡಲೇ ಉನ್ನತ ಶಿಕ್ಷಣ ಸಚಿವರು, ಮುಖ್ಯಮಂತ್ರಿಗಳು, ರಾಜ್ಯಪಾಲರು ಮಧ್ಯಪ್ರವೇಶಿಸಿ ಸೂಕ್ತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ವಹಿಸಿ, ಮುಕ್ತ ವಿವಿಯನ್ನು ಸರಿ ದಾರಿಗೆ ತಂದು ವಿದ್ಯಾರ್ಥಿಗಳಿಗೆ ಮುಕ್ತ ಶಿಕ್ಷಣವನ್ನು ನೀಡುವಂತಾಗಲು ಸಹಕರಿಸಬೇಕು ಎಂದು ಅವರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಮೇಯರ್ ಪುರುಷೋತ್ತಮ್, ದೇವರಾಜ ಅರಸು ಪ್ರತಿಮೆ ಪ್ರತಿಷ್ಠಾಪನ ಸಮಿತಿ ಅಧ್ಯಕ್ಷ ಜಾಕೀರ್ ಹುಸೇನ್, ಗೌರವಾಧ್ಯಕ್ಷ ಎಂ. ಚಂದ್ರಶೇಖರ್, ವಿವಿಧ ಸಂಘಟನೆಗಳ ಮುಖಂಡರಾದ ದ್ಯಾವಪ್ಪನಾಯಕ, ಪವನ್ ಸಿದ್ದರಾಮು, ವೆಂಕಟೇಶ್, ಪಿ. ರಾಜು, ರದಿವುಲ್ಲಾ ಖಾನ್, ಪ್ರಶಾಂತ್ ಅರ್ಯ ಪಾಲ್ಗೊಂಡಿದ್ದರು.

ಮೈಸೂರಿನ ರಂಗಾಯಣದಲ್ಲಿ ಮಾ. 6ರಿಂದ ಬಹುರೂಪಿ ನಾಟಕೋತ್ಸವ

● 18 ನಾಟಕಗಳ ಆಯ್ಕೆ ● ನಾಟಕೋತ್ಸವಕ್ಕೆ ಬಸವಣ್ಣನವರ ಉಕ್ತಿಯ ಶೀರ್ಷಿಕೆ ● ನಾಟಕೋತ್ಸವದ ಯಶಸ್ವಿಗೆ ಡಿಸಿ ಡಾ.ರಾಜೇಂದ್ರ ಟಿಪ್ಸ್ ● ಬ್ರಾಂಡಿಂಗ್ ಮಾಡಲು ಅಧಿಕಾರಿಗಳಿಗೆ ಸೂಚನೆ ● ಪ್ರಯೋಗಶೀಲ ನಾಟಕ ಪ್ರದರ್ಶನ ● ರಾಷ್ಟ್ರೀಯ ವಿಚಾರ ಸಂಕಿರಣ ಏರ್ಪಾಡು

ಮೈಸೂರು, ಫೆ.16(ಬಿಎಲ್‌ಯು)- ಮೈಸೂರಿನ ರಂಗಾಯಣದಲ್ಲಿ ಮಾರ್ಚ್ 6 ರಿಂದ ಆರಂಭವಾಗುವ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವಕ್ಕೆ 18 ನಾಟಕಗಳನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ತಿಳಿಸಿದರು.

ಮೈಸೂರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ನಡೆದ ಬಹುರೂಪಿ ನಾಟಕೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಬಹುರೂಪಿ ನಾಟಕೋತ್ಸವ ಮಾರ್ಚ್ 6 ರಂದು ಆರಂಭವಾಗಿ ಮಾರ್ಚ್ 11 ರವರೆಗೆ ನಡೆಯಲಿದ್ದು, ನಾಟಕೋತ್ಸವದ ಯಶಸ್ಸಿಗೆ ಅಧಿಕಾರಿಗಳು ಸಹಕರಿಸಬೇಕು ಎಂದು ಸೂಚನೆ ನೀಡಿದರು.

ಸಮಾನತೆಯ ಹರಿಕಾರ ವಿಶ್ವಗುರು ಬಸವಣ್ಣನವರ ಇವ ನಮ್ಮವ, ಇವ ನಮ್ಮವ ಎಂಬ ಉಕ್ತಿಯ ಶೀರ್ಷಿಕೆಯಡಿ ಈ ಬಾರಿಯ ಬಹುರೂಪಿ ನಾಟಕೋತ್ಸವ ಜರುಗಲಿದೆ ಎಂದು ಹೇಳಿದರು.

ಜೈಪುರ ಉತ್ಸವ ಹಾಗೂ ಬೆಂಗಳೂರು ಹಬ್ಬದ ರೀತಿಯಲ್ಲಿ ಬಹುರೂಪಿ ನಾಟಕೋತ್ಸವ ಬ್ರಾಂಡಿಂಗ್ ಆಗಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಯೋಜನೆ ರೂಪಿಸಬೇಕು ಎಂದು ಸಲಹೆ ನೀಡಿದರು.

ರಂಗಾಯಣದಲ್ಲಿ ಮಾರ್ಚ್ 6 ರಂದು ಜಾನಪದೋತ್ಸವ ಉದ್ಘಾಟನೆಯಾಗಲಿದ್ದು, ಮಾರ್ಚ್ 7 ರಿಂದ ನಾಟಕಗಳು ಪ್ರದರ್ಶನಗೊಳ್ಳಲಿದೆ. ನಾಟಕ ಪ್ರದರ್ಶನಕ್ಕಾಗಿ ಈಗಾಗಲೇ 118 ಅರ್ಜಿ ಸಲ್ಲಿಕೆಯಾಗಿದ್ದು, ಆಯ್ಕೆ ಸಮಿತಿ 18 ನಾಟಕಗಳನ್ನು ಆಯ್ಕೆ ಮಾಡಿದೆ ಎಂದು ಡಾ.ರಾಜೇಂದ್ರ ಮಾಹಿತಿ ನೀಡಿದರು.



ಮೈಸೂರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ರಂಗಾಯಣದ ಬಹುರೂಪಿ ನಾಟಕೋತ್ಸವದ ಪೋಸ್ಟರ್ ಬಿಡುಗಡೆ ಮಾಡಿದರು.

ಸಾಮಾಜಿಕ ಸಮಸ್ಯೆಗಳಿಗೆ ಒತ್ತು ನೀಡುವುದರೊಂದಿಗೆ ಪ್ರಯೋಗಶೀಲ ನಾಟಕಗಳನ್ನು ಪ್ರದರ್ಶಿಸಲಾಗುವುದು. ಎಲ್ಲಾ ವಯೋಮಾನದವರು ಇಷ್ಟಪಡುವ ನಾಟಕಗಳನ್ನು ಆಯ್ಕೆ ಮಾಡಲಾಗಿದೆ. ಕನ್ನಡದ ಜೊತೆಗೆ ಬಹು ಭಾಷಾ ನಾಟಕಗಳು ಕೂಡ ಪ್ರದರ್ಶನಗೊಳ್ಳಲಿದೆ ಎಂದರು.

ಬಹುರೂಪಿ ನಾಟಕೋತ್ಸವದಲ್ಲಿ ನಾಟಕ ಪ್ರದರ್ಶನ ಮಾತ್ರವಲ್ಲದೆ ರಾಷ್ಟ್ರೀಯ ವಿಚಾರ ಸಂಕೀರಣಗಳು ಜರುಗಲಿದೆ. ಆದರೆ ವಿಚಾರ ಸಂಕಿರಣದಲ್ಲಿ ಕಲಾತ್ಮಕ ಹಾಗೂ ವಿದ್ವತ್ಪೂರ್ಣ ಚಿಂತನೆಗೆ ಹಚ್ಚುವ ವಿಚಾರಗಳಿರುವಂತೆ ಗಮನ ಹರಿಸಬೇಕು ಎಂದು ಡಾ.ರಾಜೇಂದ್ರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಾಟಕೋತ್ಸವಕ್ಕೆ ಆಗಮಿಸುವ ಗಣ್ಯರು ಹಾಗೂ ಚಿಂತಕರಿಗೆ ಉತ್ತಮ ವ್ಯವಸ್ಥೆ ಕಲ್ಪಿಸಬೇಕು. ನಾಟಕ ಪ್ರದರ್ಶನಗೊಳ್ಳುವ ಕಲಾಮಂದಿರದ ಸುತ್ತಮುತ್ತ ಮೈಸೂರು ನಗರ ಪಾಲಿಕೆಯವರು ಸ್ವಚ್ಛತೆ ಬಗ್ಗೆ ಗಮನ ಹರಿಸಬೇಕು. ಬಹುರೂಪಿ ನಾಟಕೋತ್ಸವಕ್ಕೆ ಸಾವಿರಾರು ಜನರು ಆಗಮಿಸುವ ಕಾರಣ ಯಾವುದೇ ಕಾರಣಕ್ಕೂ ಕಲಾಮಂದಿರದ ಬಳಿ ಟ್ರಾಫಿಕ್ ಸಮಸ್ಯೆ ಉಂಟಾಗಬಾರದು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಕಲಾಮಂದಿರದಿಂದ ಮುಖ್ಯ ಸ್ಥಳಗಳಿಗೆ ಹೋಗಲು ಬಸ್ ಸಂಚಾರ ವ್ಯವಸ್ಥೆ ಕಲ್ಪಿಸಬೇಕು. ಎಲ್ಲಾ ಇಲಾಖೆಯ ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಡಾ.ರಾಜೇಂದ್ರ ಸೂಚಿಸಿದರು.

ಇದೇ ವೇಳೆ ಮಾತನಾಡಿದ ರಂಗಾಯಣದ ಉಪ ನಿರ್ದೇಶಕಿ ನಿರ್ಮಲಾ ಮಠಪತಿ, ರಂಗಾಯಣದ ನಾಲ್ಕು ಸ್ಥಳಗಳಲ್ಲಿ ನಾಟಕಗಳು ಪ್ರದರ್ಶನಗೊಳ್ಳಲಿದೆ. ಐದು ದಿನಗಳ ಕಾಲ ಚಲನಚಿತ್ರೋತ್ಸವದ ರಾಷ್ಟ್ರೀಯ ವಿಚಾರ ಸಂಕೀರಣ, ಕರಕುಶಲ ವಸ್ತು ಪ್ರದರ್ಶನ, ಕರಕುಶಲ ಪ್ರಾತ್ಯಕ್ಷಿಕೆ, ಚಿತ್ರಕಲಾ ಪ್ರದರ್ಶನ, ಚಾರಿತ್ರಿಕ ದಾಖಲೆಗಳ ಪ್ರದರ್ಶನ, ಜಾನಪದ ಕಲಾ ಪ್ರದರ್ಶನ ಹಾಗೂ ರಂಗ ಗೀತೆಗಳ ಕಾರ್ಯಕ್ರಮ ನಡೆಯಲಿದೆ ಎಂಬ ಹಲವು ವಿವರ ನೀಡಿದರು.

ಇದೇ ವೇಳೆ ಜಿಲ್ಲಾಧಿಕಾರಿ ಡಾ.ರಾಜೇಂದ್ರ ಬಹುರೂಪಿ ನಾಟಕೋತ್ಸವದ ಪೋಸ್ಟರ್ ಬಿಡುಗಡೆ ಮಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ನಗರ ಪಾಲಿಕೆ ಉಪ ಆಯುಕ್ತ ಸೋಮಶೇಖರ್, ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಮಂಜುನಾಥ್ ಸೇರಿದಂತೆ ಹಲವು ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಹುಲ್ಲಿನ ಮೆದೆ ಭಸ್ಮ



ಪೊನ್ನಂಪೇಟೆ ತಾಲೂಕಿನ ಕಿರುಗೂರು ಗ್ರಾಮದ ಹುಲ್ಲಿನ ಮೆದೆಗೆ ಬಿದ್ದ ಬೆಂಕಿ ನಂದಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ.

ಗೋಣಿಕೊಪ್ಪ, ಫೆ.16–ಪೊನ್ನಂಪೇಟೆ ತಾಲೂಕಿನ ಕಿರುಗೂರು ಗ್ರಾಮದಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಕಾಫಿ ಕಣದಲ್ಲಿ ಶೇಖರಿಸಿದ್ದ ಹುಲ್ಲಿನ ಮೆದೆ ಶುಕ್ರವಾರ ಸುಟ್ಟು ಭಸ್ಮವಾಗಿದೆ.

ಗ್ರಾಮದ ಪಿ.ನರೇಂದ್ರ ಅವರ ಮನೆಯ ಹತ್ತಿರದ ಕಾಫಿ ಕಣದಲ್ಲಿ ಹುಲ್ಲಿನ ಕಂತೆಗಳನ್ನು ಶೇಖರಿಸಿಡಲಾಗಿತ್ತು. ಆದರೆ, ಮಧ್ಯಾಹ್ನ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಹುಲ್ಲಿನ ಮೆದೆಗೆ ಬೆಂಕಿ ಹೊತ್ತಿಕೊಂಡಿದೆ. ಬೆಂಕಿಯ ಕೆನ್ನಾಲಿಗೆಗೆ ಸುಮಾರು 800 ರಿಂದ 1 ಸಾವಿರದಷ್ಟು ಹುಲ್ಲಿನ ಕಂತೆಗಳು ಭಸ್ಮವಾಗಿವೆ.

ಗೋಣಿಕೊಪ್ಪಲಿನ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿ, ಹೆಚ್ಚಿನ ಅನಾಹುತ ತಪ್ಪಿಸಿದರು. ಸ್ಥಳಕ್ಕೆ ಸೆಸ್ಕ್‌ನ ಸಹಾಯಕ ಕಾರ್ಯಪಾಲಕ ಅಭಿಯಂತರ ವಿವೇಕಾನಂದ ಪೊನ್ನಪ್ಪ, ಗೋಣಿಕೊಪ್ಪಲು ಜೂನಿಯರ್ ಇಂಜಿನಿಯರ್ ಹೇಮಂತ್‌ಕುಮಾರ್, ಪೊನ್ನಂಪೇಟೆ ಠಾಣಾಧಿಕಾರಿ ಜಿ.ನವೀನ್ ಹಾಗೂ ಸಿಬ್ಬಂದಿ, ಗ್ರಾಮ ಪಂಚಾಯಿತಿ ಕರ ವಸೂಲಿಗಾರ ಎಂ.ಬಿ. ಹರೀಶ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಮಡಿಕೇರಿಯಲ್ಲಿ ಅರಣ್ಯ ವಿದ್ಯಾರ್ಥಿಗಳ ಪ್ರತಿಭಟನೆ



ಮಡಿಕೇರಿಯ ಜನರಲ್ ತಿಮ್ಮಯ್ಯ ವೃತ್ತದ ಬಳಿ ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು.

ಮಡಿಕೇರಿ, ಫೆ.16–ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ವಲಯ ಅರಣ್ಯಾಧಿಕಾರಿ ಮತ್ತು ಉಪ ವಲಯ ಅರಣ್ಯಾಧಿಕಾರಿ ಹುದ್ದೆಯ ನೇಮಕಾತಿಯಲ್ಲಿ ಬಿಎಸ್ಸಿ ಅರಣ್ಯಶಾಸ್ತ್ರ ಪದವಿಯನ್ನೇ ಕನಿಷ್ಠ ವಿದ್ಯಾರ್ಹತೆಯನ್ನಾಗಿ ಪರಿಗಣಿಸುವಂತೆ ಕರ್ನಾಟಕ ಅರಣ್ಯ ಪದವೀಧರರು ಮತ್ತು ವಿದ್ಯಾರ್ಥಿಗಳ ಸಂಘದ ವತಿಯಿಂದ ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಕಳೆದ ಏಳು ದಿನಗಳಿಂದ ತರಗತಿ ಬಹಿಷ್ಕರಿಸಿರುವ ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು, ಮಡಿಕೇರಿಯ ಹಳೇ ಖಾಸಗಿ ಬಸ್ ನಿಲ್ದಾಣದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿ, ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು. ನಂತರ ನಗರದ ಜನರಲ್ ತಿಮ್ಮಯ್ಯ ವೃತ್ತದ ಬಳಿ ಮಾನವ ಸರಪಳಿ ರಚಿಸಿ, ಅಸಮಾಧಾನ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಬೀದಿ ನಾಟಕದ ಮೂಲಕ ಅರಣ್ಯ ಶಿಕ್ಷಣದ ಮಹತ್ವ ಸಾರಿದರು.

ಅರಣ್ಯ ಇಲಾಖೆಯಲ್ಲಿ ವಿವಿಧ ಹುದ್ದೆಗಳಾದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ವಲಯ ಅರಣ್ಯಾಧಿಕಾರಿ ಮತ್ತು ಉಪ ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ಬಿಎಸ್ಸಿ ಅರಣ್ಯಶಾಸ್ತ್ರ ಪದವೀಧರರನ್ನೇ ನೇರ ನೇಮಕಾತಿಗೊಳಿಸುವ ಮೂಲಕ ಅರಣ್ಯಶಾಸ್ತ್ರದಲ್ಲಿ ವಿಶೇಷ ಪರಿಣತಿ ಹೊಂದಿರುವ ಪದವೀಧರರ ಜ್ಞಾನ ಮತ್ತು ಅನುಭವವನ್ನು ರಚನಾತ್ಮಕವಾಗಿ ಬಳಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಅರಣ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಸೌಮ್ಯಾ, ಸುಹಾಸ್, ಕೀರ್ತನಾ, ನವನೀತ್, ಆಕಾಶ್, ಆನಂದ್, ಮನೋಜ್, ಚೇತನ್ ಮತ್ತಿತರ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಕೊಡಗು ಜಿಲ್ಲೆಗೆ ಕೆಲ ಕೊಡುಗೆಗಳ ಘೋಷಣೆ

• ಕೆಲ ಯೋಜನೆಗಳು ಜಿಲ್ಲೆಗೂ ಅನ್ವಯ ಸಾಧ್ಯತೆ • ರಾಜ್ಯ ಬಜೆಟ್ ಕುರಿತು ವಿಶ್ಲೇಷಣೆ

ಪ್ರಸಾದ್ ಸಂಪಿಗೆಕಟ್ಟೆ

ಮಡಿಕೇರಿ, ಫೆ.16–ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ 15ನೇ ಬಜೆಟ್‌ನಲ್ಲಿ ಕೊಡಗು ಜಿಲ್ಲೆಗೆ ಕೆಲವು ಕೊಡುಗೆಗಳು ಲಭ್ಯವಾಗಿವೆ ಎಂದು ವಿಶ್ಲೇಷಿಸಲಾಗುತ್ತಿದೆ.

ಜಿಲ್ಲೆಯ ಮೆಡಿಕಲ್ ಕಾಲೇಜಿನಲ್ಲಿ ಸಾಂಕ್ರಾಮಿಕ ರೋಗ ಮತ್ತು ಸೋಂಕು ಪತ್ತೆ ಹಚ್ಚಲು ಪ್ರಯೋಗಾಲಯ ಸ್ಥಾಪಿಸಲು ಘೋಷಿಸಲಾಗಿದೆ. ಜಿಲ್ಲಾ ಕೇಂದ್ರಗಳಲ್ಲಿ ಸಂಯೋಜಿತ ಮತ್ತು ಸಾರ್ವಜನಿಕರ ಆರೋಗ್ಯ ಪ್ರಯೋಗಾಲಯದ ಸ್ಥಾಪನೆ, ಅತ್ಯಾಧುನಿಕ ಶಸ್ತ್ರಚಿಕಿತ್ಸಾ ಘಟಕಗಳನ್ನು ರಾಜ್ಯದ ವಿವಿಧ ಕಡೆಗಳಲ್ಲಿ ತೆರೆಯಲು ಒಟ್ಟು 117 ಕೋಟಿ ರೂ. ಮೀಸಲಿಡಲಾಗಿದ್ದು, ಈ ಪೈಕಿ ಕೊಡಗು ಜಿಲ್ಲೆಗೂ ಸೌಲಭ್ಯ ದೊರೆಯಲಿದೆ. ಜಿಲ್ಲಾ ಕೇಂದ್ರದಲ್ಲಿ ಕ್ರಿಟಿಕಲ್ ಕೇರ್ ಸೆಂಟರ್ ಸ್ಥಾಪಿಸಿ 'ಡೇ ಕೇರ್ ಕಿಮೋಥೆರಫಿ' ಕೇಂದ್ರ ತೆರೆಯಲು 20 ಕೋಟಿ ರೂ. ಮೀಸಲಿಟ್ಟಿರುವುದು ಆರೋಗ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ಪೊನ್ನಂಪೇಟೆಯಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಕ್ರೀಡಾ ವಸತಿ ನಿಲಯ ತೆರೆಯುವ ಘೋಷಿಸಿದ್ದು, ವಿರಾಜಪೇಟೆಯಲ್ಲಿ 12 ಕೋಟಿ ರೂ. ವೆಚ್ಚದಲ್ಲಿ ನ್ಯಾಯಾಲಯ ಸಂಕೀರ್ಣ ನಿರ್ಮಾಣದ ಘೋಷಣೆಯಾಗಿದೆ. ರಾಜ್ಯದ 16 ಮೀನುಮರಿ ಉತ್ಪಾದನಾ ಕ್ಷೇತ್ರಗಳ ಅಭಿವೃದ್ಧಿಗೂ (ನಬಾರ್ಡ್ ಯೋಜನೆ) ಬಜೆಟ್‌ನಲ್ಲಿ 20 ಕೋಟಿ ರೂ. ಘೋಷಣೆ ಮಾಡಲಾಗಿದ್ದು, ಹಾರಂಗಿ ಮೀನುಮರಿ ಉತ್ಪಾದನಾ ಕೇಂದ್ರವೂ ಅಭಿವೃದ್ಧಿ ಕಾಣಲಿದೆ ಎಂದು ನಂಬಲಾಗಿದೆ.



ಸಾಹಸ ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಲು ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದ್ದು, ಹಾರಂಗಿ ಹಿನ್ನೀರಿನ ಸಾಹಸಿ ಪ್ರವಾಸೋದ್ಯಮ ಕೂಡ ಮತ್ತಷ್ಟು ಅಭಿವೃದ್ಧಿ ಹೊಂದುವ ಸಾಧ್ಯತೆ ಇದೆ. ಇನ್ನು 'ರೋಪ್ ವೇ, ಕೇಬಲ್ ಕಾರ್‌ಗಳ ಉಲ್ಲೇಖಿಸಲಾಗಿದ್ದು, ಈ ಯೋಜನೆ ಕೊಡಗು ಜಿಲ್ಲೆಗೂ ಅನ್ವಯ ಆಗುವ ಸಾಧ್ಯತೆಗಳಿವೆ.

ರಾಜ್ಯದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳ ಉನ್ನತೀಕರಣಕ್ಕೆ 30 ಕೋಟಿ ರೂ. ಮೀಸಲಿಡಲಾಗಿದ್ದು, ಜಿಲ್ಲೆಯ ಸರ್ಕಾರಿ ಮಹಿಳಾ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳು ಮತ್ತಷ್ಟು ಅಭಿವೃದ್ಧಿ ಕಾಣಲಿವೆ. ಸರ್ಕಾರಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಮೂಲ ಸೌಕರ್ಯಕ್ಕೆ 600 ಕೋಟಿ ರೂ. ಮೀಸಲಿಡಲಾಗಿದ್ದು, ಇದರ ಪ್ರಯೋಜನ ಕೊಡಗು ಜಿಲ್ಲೆ ಪಡೆಯಲಿದೆ. ಸಹಕಾರ ಕ್ಷೇತ್ರದ ಮೂಲಕ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದ್ದ 3 ಲಕ್ಷ ರೂ. ಸಾಲದ ಮೊತ್ತವನ್ನು 5 ಲಕ್ಷ ರೂ.ಗೆ ಏರಿಕೆ ಮಾಡಲಾಗಿದೆ. ಹೀಗಾಗಿ ಕೃಷಿಕರು ಮತ್ತು ಬೆಳೆಗಾರರಿಗೆ ಅನುಕೂಲವಾಗಲಿದೆ. ಮಡಿಕೇರಿಯಲ್ಲಿ ತಾರಾಲಯ ಸ್ಥಾಪನೆಗೆ ಈಗಾಗಲೇ ಮುಖ್ಯಮಂತ್ರಿ ಶಂಕುಸ್ಥಾಪನೆ ನೆರವೇರಿಸಿದ್ದು, ಬಜೆಟ್‌ನಲ್ಲಿ ಪ್ರಸ್ತಾಪಿಸಲಾಗಿದೆ. ರಾಜ್ಯದ ಕೆಲವು ಕಡೆ ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ ಸ್ವಯಂ ಚಾಲಿತ ಚಾಲನಾ ಪರೀಕ್ಷಾ ಪಥ ಸ್ಥಾಪನೆಯ ಘೋಷಣೆ ಮಾಡಲಾಗಿದ್ದು, ಈ ಪೈಕಿ ಮಡಿಕೇರಿಯಲ್ಲೂ ನಿರ್ಮಾಣವಾಗಲಿದೆ. ಕೊಡವ ಭಾಷೆ ಅಭಿವೃದ್ಧಿಗೆ ಅಕಾಡೆಮಿ ಮೂಲಕ ಕ್ರಮವಹಿಸುವುದಾಗಿ ಘೋಷಿಸಲಾಗಿದೆ. ಇನ್ನು ವನ್ಯಜೀವಿ ಮತ್ತು ಮಾನವ ಸಂಘರ್ಷ ತಡೆಗೆ ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಪ್ರಸ್ತಾಪ ಬಜೆಟ್ ಮೂಲಕ ಮಾಡಲಾಗಿದ್ದು, ಜಿಲ್ಲೆಗೆ ಅನುಕೂಲವಾಗಲಿದೆ. ರಾಜ್ಯ ವ್ಯಾಪ್ತಿ ಪರಿಮಿತಿಯಲ್ಲಿ ಮಾಡಲಾಗಿರುವ ಘೋಷಣೆಗಳು ಸಹಜವಾಗಿಯೇ ಕೊಡಗು ಜಿಲ್ಲೆಗೂ ಲಭಿಸಲಿದೆ.

ಅಭಿವೃದ್ಧಿಯ ಬಜೆಟ್



ಸರ್ವಜನಾಂಗದ ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಯ ಬಜೆಟ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ್ದು, ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಕೊಡಗು ಜಿಲ್ಲೆಗೆ ಕಾರ್ಡಿಯಾಲಿಕ್ ಘಟಕ, ವೈರಸ್ ಪತ್ತೆಗಾಗಿ ಲ್ಯಾಬ್, ಕೊಡವ ಭಾಷೆ ಅಭಿವೃದ್ಧಿಗೆ ಅಕಾಡೆಮಿ ಮೂಲಕ ಕ್ರಮ ವಹಿಸಲಾಗಿದೆ. ವಿರಾಜಪೇಟೆಯಲ್ಲಿ 12 ಕೋಟಿ ರೂ. ವೆಚ್ಚದಲ್ಲಿ ನ್ಯಾಯಾಲಯ ನಿರ್ಮಾಣ, ಪೊನ್ನಂಪೇಟೆಯಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಕ್ರೀಡಾ ವಸತಿನಿಲಯ ಸ್ಥಾಪನೆಗೆ ಬಜೆಟ್‌ನಲ್ಲಿ ಘೋಷಿಸಲಾಗಿದೆ. ಉಚಿತ ಯೋಜನೆಗಳ ಮೂಲಕ ಖಜಾನೆ ಖಾಲಿ ಎನ್ನುವ ವಿಪಕ್ಷಗಳ ಸುಳ್ಳು ಆರೋಪಗಳಿಗೆ ಬಜೆಟ್ ಮೂಲಕ ಮುಖ್ಯಮಂತ್ರಿಗಳು ಉತ್ತರಿಸಿದ್ದಾರೆ.

– ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ

ಚುನಾವಣಾ ಬಜೆಟ್



ಮುಂಬರುವ ಲೋಕಸಭಾ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಮುಖ್ಯಮಂತ್ರಿಗಳು ಅಲ್ಪಾವಧಿ ಚುನಾವಣಾ ಬಜೆಟ್ ಮಂಡಿಸಿದ್ದಾರೆ. ಕೊಡಗಿನ ಜನತೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕೂಡಿಗೆಯಲ್ಲಿ ಏರ್‌ಸ್ಟ್ರಿಪ್ ಮತ್ತಿತರ ಘೋಷಣೆಗಳನ್ನು ಮಾಡಬಹುದು ಎಂಬ ನಿರೀಕ್ಷೆಯಲ್ಲಿದ್ದರು. ಆದರೆ, ಯಾವುದನ್ನು ಮಾಡದೇ ಕೊಡಗನ್ನು ಕಡೆಗಣಿಸಲಾಗಿದೆ. ಪ್ರವಾಸೋದ್ಯಮದಲ್ಲಿ ಕೊಡಗು ಜಿಲ್ಲೆ ಉನ್ನತ ಸ್ಥಾನದಲ್ಲಿದ್ದರೂ, ಮೂಲಸೌಕರ್ಯ ಅಭಿವೃದ್ಧಿಗೆ ಅನುದಾನವನ್ನೇ ನೀಡಿಲ್ಲ. ರೈತರ ಆದಾಯ ಹೆಚ್ಚಳಕ್ಕೂ ಯಾವುದೇ ಯೋಜನೆಗಳಿಲ್ಲ. ಇದು ಜನರ ಕಣ್ಣೊರೆಸಲು ಬಜೆಟ್.

–ಅಪ್ಪಚ್ಚು ರಂಜನ್, ಮಾಜಿ ಶಾಸಕ

ಕೊಡಗಿಗೆ ಕೊಡುಗೆ ಶೂನ್ಯ



ಬಜೆಟ್ ಮಂಡನೆ ಸಂದರ್ಭ ಕೇಂದ್ರ ಸರ್ಕಾರವನ್ನು ದೂಷಿಸಲಾಗಿದೆ. ನನ್ನ ರಾಜಕೀಯ ಇತಿಹಾಸದಲ್ಲೇ ಇಂತಹ ಕ್ರಮವನ್ನು ಕಂಡಿಲ್ಲ. ಇದೊಂದು ನಿರಾಶಾದಾಯಕ ಬಜೆಟ್ ಆಗಿದ್ದು, ಅಲ್ಪಸಂಖ್ಯಾತ ಮುಸ್ಲಿಂ ಹಾಗೂ ಕ್ರಿಶ್ಚಿಯನ್ ಸಮುದಾಯಗಳ ಓಲೈಕೆಯ ಬಜೆಟ್ ಆಗಿದೆ. ಕೇಂದ್ರ ಸರ್ಕಾರದ ಅನುದಾನ ನೋಡಿಕೊಂಡು ಬಜೆಟ್ ಮಂಡಿಸಲಾಗಿದೆ. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ನಿರೀಕ್ಷೆ ಹುಸಿಯಾಗಿದೆ. ರೈತರು ಮತ್ತು ಬೆಳೆಗಾರರ 10 ಹೆಚ್‌ಪಿ ಪಂಪ್‌ಸೆಟ್‌ಗೆ ಉಚಿತ ವಿದ್ಯುತ್ ನೀಡುವ ಬಗ್ಗೆ ಚಕಾರವನ್ನೇ ಎತ್ತಿಲ್ಲ. ವೈರಸ್ ಲ್ಯಾಬ್ ಕೇವಲ ಘೋಷಣೆ ಮಾತ್ರವೇ ಹೊರತು ಅನುದಾನ ಮೀಸಲಿಟ್ಟಿಲ್ಲ. ನಂಜುಂಡಪ್ಪ ಆಯೋಗ ವರದಿಯಂತೆ ಹಿಂದಿನ ಬಿಜೆಪಿ ಸರ್ಕಾರ ಪ್ರತಿವರ್ಷ ರಸ್ತೆ ಅಭಿವೃದ್ಧಿಗೆ 100 ಕೋಟಿ ರೂ. ಪ್ಯಾಕೇಜ್ ನೀಡುತ್ತಿತ್ತು. ಈ ಸರ್ಕಾರ ಎಷ್ಟು ಅನುದಾನ ಮೀಸಲಿಟ್ಟಿದೆ? ಇದೊಂದು ಪೊಳ್ಳು ಭರವಸೆಯ ಬಜೆಟ್.

–ಕೆ.ಜಿ.ಬೋಪಯ್ಯ, ಮಾಜಿ ಸ್ಪೀಕರ್

ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ಸಿಐಟಿಯು ಪ್ರತಿಭಟನೆ

ವಿರಾಜಪೇಟೆ, ಫೆ.16–ದಿನೇ ದಿನೇ ದಿನ ಬಳಕೆಯ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರ ಜನವಿರೋಧಿ ನೀತಿ ಅನುಸರಿಸುತ್ತಿವೆ ಎಂದು ಆರೋಪಿಸಿ ಸಿಐಟಿಯು ಸಂಘಟನೆಯ ಕಾರ್ಯಕರ್ತರು ಶುಕ್ರವಾರ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಸಿಐಟಿಯು ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ಸಿ.ಸಾಬು ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ಬಂದು 76 ವರ್ಷ ಕಳೆದರೂ, ಇನ್ನು ಬಡಕಾರ್ಮಿಕರಿಗೆ ಮೂಲಸೌಲಭ್ಯಗಳೇ ದೊರಕಿಲ್ಲ. ಕಳೆದ ಲೋಕಸಭೆ ಚುನಾವಣೆ ಸಂದರ್ಭ ಕೇಂದ್ರ ಸರ್ಕಾರ ವಿದೇಶಗಳಲ್ಲಿರುವ ದೇಶದ ಕಪ್ಪು ಹಣ ತರುವುದಾಗಿ ಭರವಸೆ ನೀಡಿ ಮತ್ತೆ ಅಧಿಕಾರಕ್ಕೆ ಬಂದಿದೆ. ಇದುವರೆಗೂ ನಿರುದ್ಯೋಗಿ ಯುವಕರಿಗೆ ಉದ್ಯೋಗ ನೀಡಲಿಲ್ಲ. 600 ರೂ. ಇದ್ದ ಅಡುಗೆ ಗ್ಯಾಸ್ ಸಿಲಿಂಡರ್ ಅನ್ನು 1000 ರೂ.ಗೆ ಏರಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯರು ವೇತನಕ್ಕಾಗಿ ಹೋರಾಟ ನಡೆಸುವಂತ ಪರಿಸ್ಥಿತಿ ಬಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಸಿಯೂಟ ನೌಕರರಿಗೆ 3–4 ತಿಂಗಳಿಗೊಮ್ಮೆ ಸಂಬಳ ನೀಡಲಾಗುತ್ತಿದೆ. ನಿವೃತ್ತಿಗೆ ಇದುವರೆಗೆ ಯಾವುದೇ ಸಹಾಯಧನ ನೀಡಿಲ್ಲ. ಕಟ್ಟಡ ಕರ್ಮಿಕರು ಮತ್ತು ತೋಟದ ಕಾರ್ಮಿಕರಿಗೆ ಸರ್ಕಾರದ ಸೌಲಭ್ಯಗಳು ದೊರಕಬೇಕು. ಸೌಲಭ್ಯಗಳಿಗಾಗಿ ಕಾರ್ಮಿಕ ಸಂಘಟನೆಗಳ ಹೋರಾಟ ನಿರಂತರವಾಗಿ ನಡೆಯಲಿದೆ ಎಂದು ಎಚ್ಚರಿಸಿದರು.

ರೈತ ಸಂಘದ ಡಾ.ಐ.ಆರ್.ದುರ್ಗಾ ಪ್ರಸಾದ್ ಮಾತನಾಡಿ, ಕಾರ್ಮಿಕರು ಮತ್ತು ರೈತರು ಸೇರಿ ದೇಶದ್ಯಾಂದತ ಹೋರಾಟ ನಡೆಸುತ್ತಿದ್ದಾರೆ. ರೈತ ದೇಶದ ಬೆನ್ನೆಲುಬು ಎನ್ನುತ್ತಾರೆ. ಆದರೆ, ರೈತರು ಬೆಳೆದ ಬೆಳೆಗೆ ಸರಿಯಾದ ಬೆಲೆ ಇಲ್ಲದಂತಾಗಿದೆ. ಈ ಸಂಬಂಧ ಕೇಂದ್ರ ಸರ್ಕಾರ ಇತ್ತ ಗಮನ ಹರಿಸಬೇಕು. ಕಾರ್ಮಿಕರಿಗೆ ಸೌಲಭ್ಯಗಳು ದೊರಕುತ್ತಿಲ್ಲ. ಈ ಹಿನ್ನೆಲೆಯಲ್ಲಿ ರೈತ ಸಂಘ ಮತ್ತು ವಿವಿಧ ಕಾರ್ಮಿಕ ಸಂಘಟನೆಗಳ ಹೋರಾಟ ಮುಂದುವರೆಯಲಿದೆ ಎಂದರು.

ಸಿಐಟಿಯು ಸಂಘಟನೆಯ ಜಿಲ್ಲಾ ಖಜಾಂಚಿ ಎನ್.ಡಿ.ಕುಟ್ಟಪ್ಪ ಮಾತನಾಡಿ, ಬಿಸಿಯೂಟ ನೌಕರರಿಗೆ ನೀಡುತ್ತಿರುವ 3700 ರೂ. ವೇತನ ಸಾಲುತ್ತಿಲ್ಲ. ಸರ್ಕಾರ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ತಹಶೀಲ್ದಾರ್ ಕಚೇರಿಯ ಅಧಿಕಾರಿ ತನ್‌ಜಿಯಾಬಾನು ಅವರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಕೃಷಿಕರಾದ ಚಾಮಿಯಾಲದ ಹನೀಫ್, ತೋಟದ ಕಾರ್ಮಿಕ ಸಂಘಟನೆಯ ಸೀನಾ ಮೇಸ್ತ್ರಿ, ಹಮೀದ್, ಬಿಸಿಯೂಟ ಸಂಘಟನೆಯ ತಾಲೂಕು ಅಧ್ಯಕ್ಷೆ ನ್ಯಾನ್ಸಿ, ಅಂಗನಾಡಿ ಕಾರ್ಯಕರ್ತೆಯರ ತಾಲೂಕು ಅಧ್ಯಕ್ಷೆ ಎ.ವಿ. ಶೀಲಾ, ಕಟ್ಟಡ ಕಾರ್ಮಿಕ ಸಂಘದ ಜಿಲ್ಲಾ ಸಮಿತಿಯ ಹರಿದಾಸ್, ಹಮೀದ್, ಅಂಗನವಾಡಿ ಕಾರ್ಯಕರ್ತೆಯರ ಸಂಘಟನೆ ಕಾರ್ಯದರ್ಶಿ ಲೀಲಾವತಿ, ಖಜಾಂಚಿ ಅರ್ಚನಾ ಹಾಗೂ ತಾಲೂಕು ಪದಾಧಿಕಾರಿಗಳು, ಕಟ್ಟಡ ಕಾರ್ಮಿಕರು ಭಾಗವಹಿಸಿದ್ದರು.



ಕೇಂದ್ರ ಮತ್ತು ರಾಜ್ಯ ಸರ್ಕಾರ ಜನವಿರೋಧಿ ನೀತಿ ಅನುಸರಿಸುತ್ತಿವೆ ಎಂದು ಆರೋಪಿಸಿ ಸಿಐಟಿಯು ಸಂಘಟನೆಯ ಕಾರ್ಯಕರ್ತರು ಶುಕ್ರವಾರ ವಿರಾಜಪೇಟೆ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಈ ಬಾರಿ ಬಜೆಟ್‌ನಲ್ಲಿ ಗಡಿ ಜಿಲ್ಲೆ ಕಡೆಗಣನೆ

ಚಾಮರಾಜನಗರ ಕಡೆಗಣಿಸಿರುವುದಾಗಿ ಸಾರ್ವಜನಿಕ ವಲಯದಲ್ಲಿ ಅಸಮಾಧಾನ

ಸಿದ್ದಲಿಂಗಸ್ವಾಮಿ

ಚಾಮರಾಜನಗರ, ಫೆ.16–ಸಿದ್ದರಾಮಯ್ಯ ಎರಡನೇ ಬಾರಿಗೆ ಮುಖ್ಯಮಂತ್ರಿಯಾದ ಬಳಿಕ ಶುಕ್ರವಾರ ಮಂಡಿಸಿದ ಬಜೆಟ್‌ನಲ್ಲಿ ಗಡಿಜಿಲ್ಲೆ ಚಾಮರಾಜನಗರಕ್ಕೆ ಅಷ್ಟೇನೂ ಆದ್ಯತೆ ನೀಡಿಲ್ಲ. ಮುಖ್ಯಮಂತ್ರಿ ಚಾಮರಾಜನಗರವನ್ನು ಕಡೆಗಣಿಸಿದ್ದಾರೆ ಎಂಬ ಅಸಮಾಧಾನ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

181 ಪುಟಗಳ ರಾಜ್ಯ ಬಜೆಟ್‌ನಲ್ಲಿ ಚಾಮರಾಜನಗರ ಜಿಲ್ಲೆಯ ಹೆಸರು ಅಲ್ಲಲ್ಲಿ ಮಾತ್ರ ಉಲ್ಲೇಖವಾಗಿದೆ. ಜಿಲ್ಲೆಯಾಗಿ 25 ವರ್ಷ ಪೂರ್ಣಗೊಂಡು ಬೆಳ್ಳಿಹಬ್ಬದ ಸಂಭ್ರಮದಲ್ಲಿರುವ ಜಿಲ್ಲೆಗೆ ಸಿದ್ದರಾಮಯ್ಯ ವಿಶೇಷ ಅನುದಾನ ನೀಡುತ್ತಾರೆ. ಬಜೆಟ್‌ನಲ್ಲಿ ಜಿಲ್ಲೆಗೆ ಸಾಕಷ್ಟು ಕೊಡುಗೆ ದೊರೆಯುತ್ತದೆ ಎಂಬ ಜನರ ಅಪಾರ ನಿರೀಕ್ಷೆ ಹುಸಿಯಾಗಿದೆ.

ರಾಜ್ಯ ಬಜೆಟ್‌ನಲ್ಲಿ ಸಿಕ್ಕಿದ್ದೇನು: ಯಳಂದೂರಿನಲ್ಲಿ 100 ಹಾಸಿಗೆ ಸಾಮರ್ಥ್ಯದ ತಾಲೂಕು ಆಸ್ಪತ್ರೆಯನ್ನು 40 ಕೋಟಿ ರೂ. ವೆಚ್ಚದಡಿ ನಿರ್ಮಿಸಲಾಗುವುದು ಎಂದು ಘೋಷಣೆ ಮಾಡಲಾಗಿದೆ. ಆದರೆ, ಈ ಯೋಜನೆ ಹಿಂದಿನ ಬಜೆಟ್‌ಗಳಲ್ಲೂ ಘೋಷಣೆಯಾಗಿದ್ದರೂ ಅನುಷ್ಠಾನವಾಗಿರಲಿಲ್ಲ.

ಮುಂದಿನ ನಾಲ್ಕು ವರ್ಷಗಳಲ್ಲಿ ಪ್ರತಿ ಜಿಲ್ಲಾಸ್ಪತ್ರೆಯಲ್ಲಿ ಸಂಯೋಜಿತ ಮತ್ತು ಸಾರ್ವಜನಿಕ ಆರೋಗ್ಯ ಪ್ರಯೋಗಾಲಯವನ್ನು ಸ್ಥಾಪಿಸುವ ಮೂಲಕ ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಉತ್ತಮ ಪ್ರಯೋಗಾಲಯ ಸೇವೆಗಳನ್ನು ನೀಡುವ ನಿಟ್ಟಿನಲ್ಲಿ ಮುಂದಿನ 2025–26ನೇ ಸಾಲಿನಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಪ್ರಯೋಗಾಲಯ (ಐಪಿಎಚ್‌ಎಲ್) ಸ್ಥಾಪನೆ ಮಾಡಲಾಗುವುದು ಎಂದು ಬಜೆಟ್‌ನಲ್ಲಿ ತಿಳಿಸಲಾಗಿದೆ.

ಸಿಮ್ಸ್‌ನಲ್ಲಿ ಸ್ಥಾಪನೆ ಮಾಡಲಾಗಿರುವ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗೆ ಅವಶ್ಯವಿರುವ ವೈದ್ಯಕೀಯ ಉಪಕರಣ ಮತ್ತು ಪಿಠೋಪಕರಣಗಳ ಖರೀದಿಗಾಗಿ 50 ಕೋಟಿ ರೂ. ಒದಗಿಸುವುದಾಗಿ ಬಜೆಟ್‌ನಲ್ಲಿ ಭರವಸೆ ನೀಡಲಾಗಿದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ವಿಜ್ಞಾನ ಮತ್ತು ತಂತ್ರಜ್ಞಾನ ಬೆಳವಣಿಗೆ ಉತ್ತೇಜಿಸುವ ನಿಟ್ಟಿನಲ್ಲಿ ಚಟುವಟಿಕೆ ಆಧಾರಿತ ಪರಿಸರವನ್ನು ಒದಗಿಸಲು ಚಾಮರಾಜನಗರದಲ್ಲಿ ವಿಜ್ಞಾನ ಕೇಂದ್ರ ತಾರಾಲಯ ಕಾರ್ಯಾರಂಭ ಮಾಡಲಾಗುವುದು ಎಂದು ತಿಳಿಸಲಾಗಿದೆ. ರಾಜ್ಯದಲ್ಲಿ ಪರಿಸರ ಪ್ರವಾಸೋದ್ಯಮವನ್ನು ಉತ್ತೇಜಿಸಲು ಬಂಡೀಪುರ, ದಾಂಡೇಲಿ ಮತ್ತು ಕಬಿನಿಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಇಂಟರ್ ಪ್ರಿಟೇಷನ್ ಸೆಂಟರ್‌ಗಳನ್ನು ಜೆಎಲ್‌ಆರ್ ಸಂಸ್ಥೆಯ ಮೂಲಕ ನಿರ್ಮಿಸಲಾಗುವುದು. ಜೊತೆಗೆ ಬಂಡೀಪುರದಲ್ಲಿ ಹೊಸ ಕಾರ್ಯಪಡೆ ರಚಿಸಲಾಗುವುದು ಎಂದು ಬಜೆಟ್‌ನಲ್ಲಿ ಹೇಳಲಾಗಿದೆ.

ಏನಿತ್ತು ಗಡಿಜಿಲ್ಲೆ ಜನರ ನಿರೀಕ್ಷೆ?...

ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ರೇಷ್ಮೆ ಹಾಗೂ ಪಶುಸಂಗೋಪನೆ ಸಚಿವರಾಗಿದ್ದರಿಂದ ಜಿಲ್ಲೆಯಲ್ಲಿ ರೇಷ್ಮೆ ಪುನ್ಚೇತನಕ್ಕೆ ಅವರು ಸರ್ಕಾರಕ್ಕೆ ಹೆಚ್ಚಿನ ಒತ್ತಡ ತಂದು ಜಿಲ್ಲೆಯಲ್ಲಿ ರೇಷ್ಮೆ ಮಾರುಕಟ್ಟೆ ಅಭಿವೃದ್ಧಿ, ರೇಷ್ಮೆ ಬೆಳೆಯ ಕ್ಷೇತ್ರ ವಿಸ್ತರಣೆಗೆ ವಿಶೇಷ ಅನುದಾನ ದೊರೆಯುತ್ತದೆ ಎಂಬ ಆಸೆ ಈ ಭಾಗದ ರೈತರಲ್ಲಿ ಚಿಗುರೊಡೆದಿತ್ತು. ಆದರೆ, ಆ ಬಗ್ಗೆ ಯಾವುದೇ ಪ್ರಸ್ತಾಪವಿಲ್ಲ.

ಚಾಮರಾಜನಗರ ಜಿಲ್ಲಾ ಕೇಂದ್ರಕ್ಕೆ ಎರಡನೇ ಹಂತದ ಕುಡಿಯುವ ನೀರಿನ ಯೋಜನೆ ಪ್ರಸ್ತಾವ, ಹೊಸ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಮಲೆಮಹದೇಶ್ವರಸ್ವಾಮಿಬೆಟ್ಟದಲ್ಲಿ ಸುಸಜ್ಜಿತ ಆಸ್ಪತ್ರೆ ನಿರ್ಮಾಣ, ಜಿಲ್ಲಾ ಕೇಂದ್ರದಲ್ಲಿ ಕಾನೂನು ಕಾಲೇಜು ಆರಂಭ ಸೇರಿದಂತೆ ಇತರೆ ಅಭಿವೃದ್ಧಿ ಕಾರ್ಯಗಳಿಗೆ ಬಜೆಟ್‌ನಲ್ಲಿ ಆದ್ಯತೆ ನೀಡಿಲ್ಲ. ಜಿಲ್ಲೆಯ ಬಗ್ಗೆ ವಿಶೇಷ ಕಾಳಜಿ, ಪ್ರೀತಿಯನ್ನು ಹೊಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ ಜಿಲ್ಲೆಯ ಜನರ ನಿರೀಕ್ಷೆಯನ್ನು ಹುಸಿಗೊಳಿಸಿರುವುದು ಜನರಿಗೆ ಬೇಸರ ಮೂಡಿಸಿದೆ.



ಪ್ರವಾಸೋದ್ಯಮಕ್ಕೆ ಆದ್ಯತೆ ಇಲ್ಲ



ಜಿಲ್ಲೆಯು ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾಗಿದೆ. ಆದರೆ, ರಾಜ್ಯ ಬಜೆಟ್‌ನಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿಗೆ ಯಾವುದೇ ಹೊಸ ಯೋಜನೆ ರೂಪಿಸಿಲ್ಲ. ಅಲ್ಲದೇ, ಇಡೀ ಬಜೆಟ್‌ನಲ್ಲಿ ಜಿಲ್ಲೆಗೆ ಅಷ್ಟೇನೂ ಕೊಡುಗೆಯನ್ನು ನೀಡಿಲ್ಲ. ಈ ಮೂಲಕ ಬಜೆಟ್‌ನಲ್ಲಿ ಜಿಲ್ಲೆಯನ್ನು ನಿರ್ಲಕ್ಷಿಸಲಾಗಿದೆ.

–ಡಾ.ಎ.ಆರ್.ಬಾಬು, ರಾಜ್ಯಾಧ್ಯಕ್ಷ, ಕಿವಿ,ಮೂಗು,ಗಂಟಲು ತಜ್ಞರ ಸಂಘ

ಸಮತೋಲನದ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್ ಸಮತೋಲನದಿಂದ ಕೂಡಿದ್ದು, ಎಲ್ಲಾ ವಲಯಗಳಿಗೂ ಆದ್ಯತೆ ನೀಡಲಾಗಿದೆ. ಕೇಂದ್ರ ಸರ್ಕಾರದ ಅಸಹಕಾರದ ನಡುವೆಯೂ 5 ಗ್ಯಾರಂಟಿಗಳನ್ನು ಉಳಿಸಿಕೊಂಡು ಕೃಷಿ ಹಾಗೂ ಶಿಕ್ಷಣ, ಆರೋಗ್ಯ, ಕೌಶಲ್ಯ ಅಭಿವೃದ್ಧಿ, ಪ್ರವಾಸೋದ್ಯಮ ಕ್ಷೇತ್ರಗಳಿಗೆ ಹೆಚ್ಚು ಅನುದಾನವನ್ನು ನೀಡಿದ್ದಾರೆ. ಸಿಮ್ಸ್ ಆಸ್ಪತ್ರೆಯ ಅಭಿವೃದ್ಧಿಗೆ ಅನುದಾನ ನೀಡಲಾಗಿದೆ. ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಅರಣ್ಯ ವಲಯದ ಅಭಿವೃದ್ಧಿಗೂ ಆದ್ಯತೆ ನೀಡಿದ್ದಾರೆ. ಇದೊಂದು ಜನಸಾಮಾನ್ಯರ ಬಜೆಟ್ ಎಂದು ಹೇಳಬಹುದು.

–ಬಿ.ಕೆ.ರವಿಕುಮಾರ್, ಎಪಿಎಂಸಿ ಮಾಜಿ ಅಧ್ಯಕ್ಷ

ರೈತರ ಅಭಿವೃದ್ಧಿಗೆ ಪೂರಕವಲ್ಲ



ರಾಜ್ಯ ಬಜೆಟ್ ಕೇವಲ ಪ್ರಚಾರ ಮತ್ತು ಚುನಾವಣೆಯ ಅಸ್ತ್ರವಾಗಿದೆ. ರಾಜ್ಯದಲ್ಲಿ ತೀವ್ರ ಬರಗಾಲವಿದ್ದು, ರೈತರು ಸಂಕಷ್ಟದಲ್ಲಿ ಸಿಲುಕಿದ್ದಾರೆ. ಆದರೂ ಬಜೆಟ್‌ನಲ್ಲಿ ರಾಜ್ಯದ ವ್ಯಾಪ್ತಿ ಸುಮಾರು 6040 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಸುಮಾರು 25,000 ಕೋಟಿ ಬೆಳೆ ಸಾಲಮನ್ನಾ ಮಾಡಬೇಕಾಗಿತ್ತು. ಗ್ರಾಮೀಣ ಭಾಗದಲ್ಲಿ ಗೋಶಾಲೆ ಮತ್ತು ಮೇವು ಬ್ಯಾಂಕ್ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕಾಗಿತ್ತು. ಸರ್ಕಾರದ ಆದೇಶ ಕಬ್ಬಿನ ಬಾಕಿ 950 ಕೋಟಿ ರೂ. ಅನ್ನು ರೈತರಿಗೆ ನೀಡಲು ಕ್ರಮ ವಹಿಸಬೇಕಾಗಿತ್ತು. ರೈತರ ಮೂಗಿಗೆ ತುಪ್ಪ ಸವರುವ ಕೆಲಸವನ್ನು ಮುಖ್ಯಮಂತ್ರಿಗಳು ಮಾಡಿದ್ದು, ಇದು ರೈತರ ಅಭಿವೃದ್ಧಿಗೆ ಪೂರಕವಲ್ಲದ ಬಜೆಟ್.

–ಹಳ್ಳಿಕೆರೆಹುಂಡಿ ಭಾಗ್ಯರಾಜ್, ರಾಜ್ಯಾಧ್ಯಕ್ಷ, ರೈತ ಸಂಘಟನೆಗಳ ಒಕ್ಕೂಟ

ಆಶಾದಾಯಕವಲ್ಲದ ರಾಜ್ಯ ಬಜೆಟ್



ಈ ಬಾರಿಯ ರಾಜ್ಯದ ಬಜೆಟ್ ಕಳೆದ ವರ್ಷದ ಬಜೆಟ್‌ನ ಮುಂದುವರಿದ ನಕಲು ಪ್ರತಿ. ಚಾಮರಾಜನಗರಕ್ಕೆ ಹೊಸ 400 ಹಾಸಿಗೆ ಆಸ್ಪತ್ರೆಯ ಭರವಸೆ ಹೊರತುಪಡಿಸಿ ಬೇರೇನು ಸಿಕ್ಕಿಲ್ಲ. ರಾಜ್ಯಕ್ಕೂ ಹೇಳಿಕೊಳ್ಳುವ ಆಶಾ ದಾಯಕ ಬಜೆಟ್ ಅಲ್ಲ. ಹನಿ ನೀರಾವರಿ, ತುಂತುರು ನೀರಾವರಿಗೆ ಶೇ.90ರಷ್ಟು ಸಬ್ಸಿಡಿ ನೀಡಬೇಕಿತ್ತು. ಒಟ್ಟಾರೆ ಇದೊಂದು ಕಾಟಾಚಾರದ ಬಜೆಟ್.

–ಮಲ್ಲೇಶ್, ಬಿಜೆಪಿ ಮುಖಂಡ

ಶ್ರೀರಾಮ ಪ್ರಾಮಾಣಿಕತೆಯ ದ್ಯೋತಕ



ಚಾಮರಾಜನಗರ ತಾಲೂಕಿನ ಜ್ಯೋತಿಗೌಡನಪುರದಲ್ಲಿ ಶ್ರೀರಾಮಮಂದಿರ ಉದ್ಘಾಟಿಸಲಾಯಿತು. ಜಿಲ್ಲಾ ನಾಯಕರ ಸಂಘದ ಅಧ್ಯಕ್ಷ ಎಂ.ರಾಮಚಂದ್ರ ಮತ್ತಿತರರು ಇದ್ದರು.

ಚಾಮರಾಜನಗರ, ಫೆ.16– ಶ್ರೀರಾಮ ಸತ್ಯ, ಪ್ರಾಮಾಣಿಕತೆ ಮತ್ತು ನೈತಿಕತೆಯ ದ್ಯೋತಕ ಎಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ನಾಯಕರ ಸಂಘದ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.

ತಾಲೂಕಿನ ಜ್ಯೋತಿಗೌಡನಪುರದ ನಾಯಕರ ಬೀದಿಯಲ್ಲಿ ಶ್ರೀರಾಮಮಂದಿರ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಶ್ರೀರಾಮ ನಮ್ಮೆಲ್ಲರ ಆರಾಧ್ಯ ದೈವ. ನಾಯಕ ಜನಾಂಗದವರು ರಾಮನ ಭಕ್ತರಾಗಿದ್ದಾರೆ. ಸಮುದಾಯದವರು ಪ್ರತಿ ಗ್ರಾಮದಲ್ಲೂ ಶ್ರೀರಾಮಮಂದಿರ ನಿರ್ಮಿಸಿ, ರಾಮನನ್ನು ಆರಾಧಿಸುತ್ತಿದ್ದಾರೆ. ಮರ್ಯಾದೆ ಪುರುಷ ಶ್ರೀರಾಮನ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಆದಿಕವಿ ವಾಲ್ಮೀಕಿ ಬರೆದ ರಾಮಾಯಣ ಸರ್ವಕಾಲಕ್ಕೂ ಪ್ರಸ್ತುತವಾಗಿದೆ. ಸತ್ಯವನ್ನು ವ್ಯಕ್ತಿಗತಗೊಳಿಸಲಾಗಿದ್ದು, ಶ್ರೀರಾಮ ಎಲ್ಲಾ ರೀತಿಯಲ್ಲೂ ಅತ್ಯಂತ ಆದರ್ಶ ವ್ಯಕ್ತಿಯಾಗಿದ್ದಾರೆ. ರಾಮರಾಜ್ಯ ಸ್ಥಾಪನೆಗೆ ಶ್ರಮಿಸಬೇಕು. ಸಹಬಾಳ್ವೆಯಿಂದ ಜೀವನ ಸಾಗುವ ಮೂಲಕ ರಾಮ ಸ್ಮರಣೆಯು ಮುಂದಿನ ಪೀಳಿಗೆಗೆ ತಲುಪಿಸುವ ಜೊತೆಗೆ ವಾಲ್ಮೀಕಿ ಬರೆದ ರಾಮಾಯಣ ಸರ್ವಕಾಲ, ಸರ್ವ ವ್ಯಾಪಿಯಾಗಿಸುವ ಮೂಲಕ ಜಗತ್ತಿಗೆ ರಾಮ ಸಂದೇಶವನ್ನು ತಲುಪಿಸೋಣ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಯಜಮಾನರಾದ ನಂಜುಂಡನಾಯಕ, ನಿಂಗನಾಯಕ, ಗುರುಲಿಂಗನಾಯಕ, ರಮೇಶ ನಾಯಕ, ರಾಮನಾಯಕ, ಹುಚ್ಚನಾಯಕ, ನಾಗನಾಯಕ, ಬಸವಣ್ಣ ನಾಯಕ, ವೀರಭದ್ರ ನಾಯಕ, ಮಣಿಕಂಠ ನಾಯಕ, ಗ್ರಾಪಂ ಸದಸ್ಯರಾದ ಚಿಕ್ಕಣ್ಣನಾಯಕ, ಯಶೋಧ ಕೃಷ್ಣ ನಾಯಕ, ನಿಂಗನಾಯಕ, ಮೀನಾ ವೆಂಕಟೇಶ್, ಕಮಲಮ್ಮ ಸುಬ್ಬನಾಯಕ, ಮುಖಂಡ ವೇಣುಗೋಪಾಲ್ ಹಾಜರಿದ್ದರು.

ಬೇಡಿಕೆ ಈಡೇರಿಕೆಗೆ ಅಂಗನವಾಡಿ ನೌಕರರ ಒತ್ತಾಯ

ಚಾಮರಾಜನಗರ: ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಸಿಐಟಿಯು ನೇತೃತ್ವದಲ್ಲಿ ರಾಜ್ಯ ಅಂಗನವಾಡಿ ನೌಕರರ ಸಂಘದ ತಾಲೂಕು ಸಮಿತಿ ವತಿಯಿಂದ ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಯಿತು.

ನಗರದ ಶ್ರೀ ಚಾಮರಾಜೇಶ್ವರಿ ದೇವಸ್ಥಾನ ಮುಂಭಾಗದಲ್ಲಿ ಸಂಘದ ಜಿಲ್ಲಾಧ್ಯಕ್ಷೆ ಸುಜಾತ ಹಾಗೂ ತಾಲೂಕು ಪ್ರಧಾನ ಕಾರ್ಯದರ್ಶಿ ಷಾಹಿದಾಬಾನು ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತ ಬಿ.ರಾಚಯ್ಯ ಜೋಡಿರಸ್ತೆ ಮೂಲಕ ತಾಲೂಕು ಕಚೇರಿಗೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿದರು.

ಅಗತ್ಯ ವಸ್ತುಗಳ ಬೆಲೆ ಏರಿಕೆ ನಿಯಂತ್ರಿಸಬೇಕು. ಶ್ರೀಮಂತರ ಮೇಲಿನ ತೆರಿಗೆ ಹೆಚ್ಚಿಸಿ, ಬಡವರಿಗೆ ಬದುಕಲು ಅವಕಾಶ ನೀಡುವ ನೀತಿಗಳನ್ನು ಜಾರಿಗೆ ತರಬೇಕು. ಸಾರ್ವಜನಿಕ ರಂಗದ ಕೈಗಾರಿಕೆ ಹಾಗೂ ಸೇವೆಗಳನ್ನು ಬಲಪಡಿಸಬೇಕು ನರೇಗಾ ಯೋಜನೆಯನ್ನು 200 ದಿನಗಳಿಗೆ ಹೆಚ್ಚಿಸಿ, 600 ರೂ. ಕೂಲಿ ನಿಗದಿಗೊಳಿಸಬೇಕು. ದೇಶದಲ್ಲಿ ಕೋಟ್ಯಾಂತರ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಭಾಗವಾಗಿ ಕನಿಷ್ಠ ಮಾಸಿಕ ಪಿಎಫ್ ಪಿಂಚಣಿಯನ್ನು 10 ಸಾವಿರ ರೂ.ಗೆ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ನಂತರ ತಹಸೀಲ್ದಾರ್ ಗ್ರೇಡ್ 2 ಗಿರಿಜಾ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಸಂಘದ ಉಪಾಧ್ಯಕ್ಷೆ ರೇವಮ್ಮ, ಖಜಾಂಚಿ ಗುರುಲಿಂಗಮ್ಮ, ನೀಲಮ್ಮ, ಚಿಕ್ಕತಾಯಮ್ಮ, ವಿಶಾಲಾಕ್ಷಿ, ರುಕ್ಷನಾಬಾನು, ಮೋಸಿಂ ಫಾತಿಮಾ, ಹಸೀನಾಬಾನು ಇತರರು ಭಾಗವಹಿಸಿದ್ದರು.



ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ರಾಜ್ಯ ಅಂಗನವಾಡಿ ನೌಕರರ ಸಂಘ ತಾಲೂಕು ಸಮಿತಿ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿಸಲಾಯಿತು.



ಗುಂಡ್ಲುಪೇಟೆಯ ವಿಜಯನಾರಾಯಣಸ್ವಾಮಿ ದೇವಾಲಯದಲ್ಲಿ ರಥಸಪ್ತಮಿ ಅಂಗವಾಗಿ ಶುಕ್ರವಾರ ರಥೋತ್ಸವ ನೆರವೇರಿತು.

ಗುಂಡ್ಲುಪೇಟೆಯಲ್ಲಿ ಬ್ರಹ್ಮರಥೋತ್ಸವ

ಗುಂಡ್ಲುಪೇಟೆ, ಫೆ16–ಪಟ್ಟಣದ ವಿಜಯ ನಾರಾಯಣಸ್ವಾಮಿ ದೇವಾಲಯದಲ್ಲಿ ರಥಸಪ್ತಮಿ ಪ್ರಯುಕ್ತ ಶುಕ್ರವಾರ ಬ್ರಹ್ಮರಥೋತ್ಸವ ನಡೆಯಿತು.

ರಥೋತ್ಸವ ಅಂಗವಾಗಿ ದೇವಸ್ಥಾನವನ್ನು ತಳಿರು ತೋರಣ ಹಾಗೂ ವಿವಿಧ ಹೂಗಳಿಂದ ಅಲಂಕಾರ ಮಾಡಲಾಗಿತ್ತು. ಮಧ್ಯಾಹ್ನ 12.45ರ ಸುಮಾರಿಗೆ ವಿಜಯನಾರಾಯಣಸ್ವಾಮಿಯ ಉತ್ಸವ ಮೂರ್ತಿಯನ್ನು ರಥದಲ್ಲಿ ಕುಳ್ಳಿರಿಸಿ ದೇವಾಲಯದ ಸುತ್ತಲೂ ಪ್ರದಕ್ಷಿಣೆ ಹಾಕಿ, ಸ್ವಸ್ಥಾನಕ್ಕೆ ತರಲಾಯಿತು.

ಪಟ್ಟಣ ಹಾಗೂ ವಿವಿಧ ಭಾಗಗಳಿಂದ ಸಹಸ್ರಾರು ಭಕ್ತರು ಭಾಗವಹಿಸಿ, ಗೋವಿಂದ ನಾಮ ಸ್ಮರಣೆಯೊಂದಿಗೆ ರಥ ಎಳೆದರು. ಪ್ರಧಾನ ಅರ್ಚಕ ವರದರಾಜು ಭಾಷ್ಯಂ, ವಿವಿಧ ಬಡಾವಣೆಯ ನಿವಾಸಿಗಳು ಭಾಗವಹಿಸಿದ್ದರು. ದೇವಾಲಯದ ಸುತ್ತಮುತ್ತಲ ಅಂಗಡಿಗಳ ವರ್ತಕರು ಬಿಸಿಲಿನಲ್ಲಿ ಬಸವಳಿದ ಭಕ್ತರಿಗೆ ಪಾನಕ, ಮಜ್ಜಿಗೆ, ಸಿಹಿ ವಿತರಿಸಿದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ
ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821– 2496522/23

MUDA APPROVED SITES FOR SALE
Ananda Sagara 30x40
Nithhyananda Sagara 30x40
Asset'Shoppe (MMG) 30x40
all sites East Face.
Contact JK
7892846068

NEW HOUSE FOR SALE
40x60 East facing
As per Vasthu, 60ft Road 4 Bed Rooms, (All Attached) at 1st Main, 1st stage, Vijayanagar, Mysore
price 3.6 Cr.
(Slightly Negotiable)
9880718980

ಬೇಕಾಗಿದ್ದಾರೆ
ಟೆಲಿಮಾರ್ಕೆಟಿಂಗ್ ಮಾಡಲು ಹುಡುಗಿಯರು, ಟೈಲರ್, ಹೆಲ್ಪರ್ ಬೇಕಾಗಿದ್ದಾರೆ.
ಸಂಬಳ: 12,000/– ರಿಂದ 15,000/–
9611477707
7676841708

SITE FOR SALE
40x60 Bapuji Layout attached BEML Layout New Kantaraj URS Road.
Mob: 9740088990

WANTED
COMPUTER TYPIST (Male / Female) FOR ADVOCATE OFFICE
Qualification: Typing - English & Kannada (Kan - Nudi / Baraha) in M.S. Word & Excel / Page Maker
9.30 am to 2 pm. Sunday: 10.30 to 3 pm. Salary: 10,000/- per month. For evening: (Male only). 6.30 pm to 11.30 pm. Salary: Rs. 10,000/- per month.
7349337469, 9448525072

SITE FOR SALE
40x60 & 30x40
North face,
Suvarna Nagar,
Bogadi Road.
Mob: 9880273834

HOUSE FOR RENT
30x40, Double Bed Room Ground And First Floor, With Car Parking in Naidu Nagar, Mysore
9380705968

ಹೊಸ ಮನೆ ಮಾರಾಟಕ್ಕಿದೆ
30x40
ಪೂರ್ವ ದಿಕ್ಕು
3BHK All Teak
ಕಲ್ಪವೃಕ್ಷ ನಗರ ಕೆಸರೆ
3ನೇ ಹಂತ, ಮೈಸೂರು
8095673991

WANTED
Electrical field supervisor
Qualification :
Diploma/BE in Electrical Engineering (Male only)
(2 years+experience in handling Escom
GK, WS and Linkline Works)
6366366388
Call between 10 AM to 5 PM
Mail your C.V : acpltd123@gmail.com

NEW HOUSE FOR SALE
20x40 Duplex Near Cristh Public School,
Site For Sale Old RT Nagar.
60x40, 30x40
9900222737
9742939395

House for Sale
* 40x60 G&F Floor at Ramakrishnanagar & Kuvempunagar.
* 16x32 at Sharadadevinagar.
* 1700 sq.ft. built G+2 house at Maduvana Layout.
* 45x35 site sale at Nivedithanagar.
Call: 9663136318

ಕೆಲಸಕ್ಕೆ ಬೇಕಾಗಿದ್ದಾರೆ
ಚಿಕನ್ ಅಂಗಡಿಯಲ್ಲಿ ಕೆಲಸ ಮಾಡಿ ಅನುಭವ ಇರುವ ಹುಡುಗರು ಕೆಲಸಕ್ಕೆ ಬೇಕಾಗಿದ್ದಾರೆ. ವಸತಿ ವ್ಯವಸ್ಥೆ ಇರುತ್ತದೆ.
ಸ್ಥಳ: ಮೆಲ್ಲಹಳ್ಳಿ ಸರ್ಕಲ್ ಮೈಸೂರು
7406992205

ಶಿಕ್ಷಕ/ಶಿಕ್ಷಕಿಯರು ಬೇಕಾಗಿದ್ದಾರೆ.
NST - 02
DEd - 02
BSc- BEd- 02
8147472526
6360942194

ಮನೆ ಬಾಡಿಗೆಗೆ ಇದೆ
3 ರೂಂ ಸೆಮಿ ಫರ್ನಿಚರ್ ಹೊಂದಿರುವ 1ನೇ ಮಹಡಿ ಡ್ಯೂಪ್ಲೆಕ್ಸ್ ಮನೆ ವಿಜಯನಗರ 2ನೇ ಹಂತದಲ್ಲಿ ಬಾಡಿಗೆಗೆ ಇದೆ.
9206380489
7899790448

ಸ್ಟಾರ್ ಮ್ಯಾರೇಜಸ್
ಎಲ್ಲಾ ಜನಾಂಗದ ವಧು–ವರರು ವಿಚ್ಛೇದಿತರು ಹಾಗೂ ವಿಧವಾ ವಿಧವೆಯರು ಸಂಪರ್ಕಿಸಿ:
8197607559
8105747339

WANTED
Electrical Engineer
Qualification :
Diploma/BE in Electrical Engineering (Female only)
(2-3 years exp.
in Electrical field
6366366388
Call between 10 AM to 5 PM
Mail your C.V : acpltd123@gmail.com

ಬೈಕ್ ರೈಡರ್ ಬೇಕಾಗಿದ್ದಾರೆ
ರಾಪಿಡೋ ರೈಡರ್ ಆಗಿ ಸೇರಿ ಹಾಗೂ ದಿನಕ್ಕೆ 1500/– ವರೆಗೂ ಸಂಪಾದಿಸಿ ಅಗತ್ಯ ದಾಖಲೆಗಳು DL ವಾಹನದ ದಾಖಲಾತಿಗಳು ಮತ್ತು ಆಧಾರ್ ಹೆಚ್ಚಿನ ಮಾಹಿತಿಗಾಗಿ ಕರೆ ಮಾಡಿ
04048937617

WANTED FIELD SERVICE TECHNICIAN
TWO WHEELER COMPULSORY
Qualification - ITI, PUC
Location - Mysore
9035434820

LAND FOR SALE
Behind KEB Power Station Chamarajanagar
Total Land
1 Acre 22 Guntas
9620089620

ಬೇಕಾಗಿದ್ದಾರೆ
ದಿನಸಿ ಅಂಗಡಿಯಲ್ಲಿ ಕೆಲಸ ಮಾಡಲು ಹುಡುಗರು ಬಿಲ್ಲಿಂಗ್ ಕಂಪ್ಯೂಟರ್, ಕ್ಯಾಷಿಯರ್ಸ್ ಬೇಕಾಗಿದ್ದಾರೆ.
ಇಚ್ಛೆಯುಳ್ಳವರು ಸಂಪರ್ಕಿಸಿ:
ಬಾಲಕೃಷ್ಣ ಪ್ರಾವಿಜನ್ ಸ್ಟೋರ್ಸ್
ಕರ್ನಾಟಕ ಬ್ಯಾಂಕ್ ಹತ್ತಿರ, ನಜರ್‌ಬಾದ್ ಮೈಸೂರು

ವಿಠಲ್ ರೆಕಾರ್ಡ್ಸ್ ಪ್ರೈವೇಟ್ ಲಿಮಿಟೆಡ್
ಖಾಲಿ ಹುದ್ದೆ: 150+
DATA ENTRY OPERATOR
ಸಂಬಳ 10,000 + 5000 Incentive
ಸಂದರ್ಶನದ ಸಮಯ: 9.30 ರಿಂದ 5.30.
ವಿಳಾಸ: #42, JCK ಇಂಡಸ್ಟ್ರಿಯಲ್ ಪಾರ್ಕ್, ಮೇಟಗಳ್ಳಿ ಪೋಸ್ಟ್, ಪ್ರೀತಿ ಗ್ರಾನೈಟ್ ಹತ್ತಿರ, ಕೆ.ಆರ್.ಎಸ್. ರಸ್ತೆ, ಮೈಸೂರು–570 016. ಕರೆ ಮಾಡಿ:
Mob: 8867064586

ತಕ್ಷಣ ಬೇಕಾಗಿದ್ದಾರೆ
ಕುವೆಂಪುನಗರ ಮತ್ತು ಜಯನಗರ ಅಪೋಲೋ ಆಸ್ಪತ್ರೆ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC, ಸಂಬಳ: 19000
ESI & PF ಊಟ ತಿಂಡಿ ಸೌಲಭ್ಯವಿರುತ್ತದೆ.
9620667819
9620777819

ಹೊಸ ಮನೆ ಮಾರಾಟಕ್ಕಿದೆ
ಶ್ರೀರಾಂಪುರ ರಿಂಗ್ ರಸ್ತೆ ಸಮೀಪ ಶಂಕರ ನಗರ ಬಡಾವಣೆಯಲ್ಲಿ ವಾಸ್ತು ಪ್ರಕಾರ ನಿರ್ಮಿಸಿರುವ ಹೊಸ ಮನೆ ಮಾರಾಟಕ್ಕಿದೆ
9108946647

Aquaguard & Kent Sales and Service
Service Charge: 300/-
9901200444

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಪ್ರಥಾನ್ಯತ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Arikethana Road, kuvempunagar, Mysuru
MYSURU 9611028523 MANGALORE 9343142258

ತಕ್ಷಣ ಕೆಲಸಕ್ಕೆ ಬೇಕಾಗಿದ್ದಾರೆ
ಹೂಟಗಳ್ಳಿ & ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿ ಕೆಲಸ ಮಾಡಲು SSLC, PUC, AND ITI ANY TRADE ಹುಡುಗರು ಕೆಲಸಕ್ಕೆ ಬೇಕಾಗಿದ್ದಾರೆ
ವಯಸ್ಸು - 18 to 30, ಸಂಬಳ–14500 to 19500
ಅನುಕೂಲತೆ: ESI, PF Canteen ಸೌಲಭ್ಯವಿರುತ್ತದೆ. ಸಂಪರ್ಕಿಸಿ:
7019380847 / 6362491336

WANTED FOR Bhaskar Heart Centre

Post	Qualification
Receptionist	Degree / PUC
Marketing / PRO (M)	Degree / PUC
Staff Nurses (F)	GNM / ANM
Pharma Aid	PUC / Degree
Office Boy	SSLC

0821-2499188 / 9880186386

FOR SALE
1) 30x50, 21 Lakhs Near Defence Apartment. Ready for registration.
2) 20x30, 19 Lakhs Bogadi Road.
3) 2, 3 BHK flats in Ramakrishnanagar.
4) 100x100 Farm house KRS Back Water attach. Starts 19 Lakhs.
5) 20x30, 30x40 house Srirampura
6) 18x40, 40 Ft. Road Kuvempunagar.
7) 40x40 site BSNL Layout, Bannur Road.
PRAKRUTHI PROPERTIES
9538690359, 9035990359

ಬೇಕಾಗಿದ್ದಾರೆ
1) ಮಹಿಳಾ ಹೌಸ್ ಕೀಪರ್ – 20 ಮಂದಿ
ಸ್ಥಳ: GSSS Eng College, ಮೇಟಗಳ್ಳಿ
2) ಸೆಕ್ಯೂರಿಟಿ ಗಾರ್ಡ್‌ಗಳು (ಪುರುಷರು) – 16 ಮಂದಿ
ಸ್ಥಳ: ಬೋಗಾದಿ ಸುತ್ತಮುತ್ತ
3) ಫೀಲ್ ಆಫೀಸರ್ – ಇಬ್ಬರು
(ಸೆಕ್ಯೂರಿಟಿ ಫೀಲ್ ಅನುಭವವಿರಬೇಕು)
4) ಹೌಸ್ ಕೀಪರ್ ಫೀಲ್ ಸೂಪರ್‌ವೈಸರ್
(ಅನುಭವಿಗಳಿಗೆ ಮಾತ್ರ)
9686422400
9242406261

ತಕ್ಷಣ ಕೆಲಸಕ್ಕೆ ಬೇಕಾಗಿದ್ದಾರೆ
ಕೆಲಸದ ಸಮಯ 9 ರಿಂದ 4
ಸಂಬಳ: ರೂ.14,000/– ರಿಂದ 20,000/– ಕೆಲಸ ಆಫೀಸ್ ಹಾಗೂ ಇತರೆ ಅರ್ಹತೆ : 10ನೇ ತರಗತಿ, ಪಿಯುಸಿ ಎಲ್ಲಾ ವರ್ಗದ ಯುವಕ / ಯುವತಿಯರಿಗೆ ಸುವರ್ಣ ಅವಕಾಶವನ್ನು ಒದಗಿಸುತ್ತದೆ.
ಆಸಕ್ತಿಯುಳ್ಳವರು ಸಂಪರ್ಕಿಸಿ:
6364396269

RS CONSTRUCTION
Engineers & Contractors
ನಿಮ್ಮ ಕನಸಿನ ಮನೆಯನ್ನು ಉತ್ಕೃಷ್ಟ ಗುಣಮಟ್ಟದಲ್ಲಿ ಅತ್ಯಂತ ಕಡಿಮೆ ಬೆಲೆಯಲ್ಲಿ ನಾವು ನಿರ್ಮಿಸಿ ಕೊಡುತ್ತೇವೆ.
ದರ 1,80,000/– ಪ್ರತಿ ಚದರ
ಉಚಿತ ಪ್ಲಾನ್ ಕೂಡ ಮಾಡಿಕೊಡಲಾಗುತ್ತದೆ ಇಂದೇ ಸಂಪರ್ಕಿಸಿ
9538575009
7019151884

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 8861401315

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

Change of Name
I, Pallavi, residing at Door No. 539, 3rd Stage, Kesare, Narasimharaja Mohalla, Mysuru-570 007, have changed my name as Varuni Sundar, on my own free will in front of Notary N.P. Kamala Devi on 13-7-2023. Hereafter in all records, deeds, instruments in writing, in all actions and proceedings, in all dealings and transactions, and upon all ocasions whatsoever, I shall sign the said name of Varuni Sundar.
Sd/- Varuni Sundar

SITE FOR SALE
30x40 KBL Gardenia, attached to Vijayanagar 4th Stage, 2nd Phase.
Mob: 9620451565

ಬೇಕಾಗಿದ್ದಾರೆ
ಪೈಂಟಿಂಗ್ ನೇಮ್ ಬೋರ್ಡ್ (ಆರ್ಟ್) ಕೆಲಸಕ್ಕೆ ಹುಡುಗರು (ಹೆಲ್ಪರ್) ಬೇಕಾಗಿದ್ದಾರೆ.
ಸೂರ್ಯ ಬೇಕರಿ ಹತ್ತಿರ, ಹೆಬ್ಬಾಳ್, ಮೈಸೂರು
9731305656

LAND FOR SALE
KRS BACK WATER
2 ACRE
7 GUNTA
9880768127

ಶುಂಠಿ ಕೃಷಿಕರೆ
ಉತ್ತಮ ದರ್ಜೆಯ ಬೇವಿನ ಹಿಂಡಿ ಹಾಗೂ ಬೇವಿನ ಹುಡಿ ನಿಮ್ಮ ಸಮಕ್ಷಮ ಮಾಡಿಕೊಡಲಾಗುತ್ತದೆ.
ಶ್ರೀ ಕಾಮಾಕ್ಷಿ ಬಯೋ–ನೀಮ್
#203, ಬನ್ನಿಮಂಟಪ ಬಡಾವಣೆ, ಮೈಸೂರು–570 015
Mob: 80888-87802

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884465577

WANTED
- Marketing Manager - 20 Nos
  Salary 20k allowance 5k
- Marketing Executive - 30 Nos
  Salary 16k allowance 5k
- Telecaller - 5 Nos - Salary 10k
- Accounts - 3 Nos - Salary 15k
- TV Anchor - Part time/Full time
- Pigmy Collection Boy - 5 Nos

Contact: Nama Suraksha:
80500 51 444

ನಿವೇಶನ ಮಾರಾಟಕ್ಕಿದೆ
ಸರ್ದಾರ್ ವಲ್ಲಭಭಾಯ್ ಪಟೇಲ್ ನಗರದಸಮೀಪದಲ್ಲಿ ಇರುವ ಕಾವೇರಿ ಗಾರ್ಡನ್ ಲೇಔಟ್ (ಕೊಳ್ಳೇಗಾಲ ಲೇಔಟ್)ನ ಮೂಲೆ ನಿವೇಶನ ಸಂಖ್ಯೆ322 (30*40)ಮಾರಾಟಕ್ಕಿದೆ.
+91 9880916816

ಹೊಸ ಮನೆ ಮಾರಾಟಕ್ಕಿದೆ
20x30 ಉತ್ತರ ದಿಕ್ಕು GF + FF ರೈಲ್ವೆ ಲೇಔಟ್, ಜೆ.ಪಿ. ನಗರ, ಮೈಸೂರು.
8660108796, 9538956060

WANTED
Part time or Full time sales Assistant for Filling Petrol & Diesel for a Petrol Bunk Cashier Plus Helper Preferene PUC & Above Salary 13000/-as per Qualifiation
9844002226

WANTED SITE
MUDA 40x60 East or North Facing at Vijayanagar 2nd Stage and Vijayanagar Railway Layout
9606160320
Brokers Excuse

SITES FOR SALE
MUDA Approved
30x40, Rs. 40,00,000
Near Ring Road, Srirampura, Mysuru.
8296832513

ಬೇಕಾಗಿದ್ದಾರೆ
ಮೈಸೂರಿನಲ್ಲಿರುವ ಮೆನ್ಸ್ ಪಾರ್ಲರ್‌ನಲ್ಲಿ ಕಟಿಂಗ್ ಮತ್ತು ಶೇವಿಂಗ್ ಮಾಡಲು 1–2 ವರ್ಷ ಅನುಭವವಿರುವವರು ಬೇಕಾಗಿದ್ದಾರೆ.
15-25K ಸಂಬಳ ದೊರೆಯುತ್ತದೆ.
ಕೂಡಲೇ ಕರೆ ಮಾಡಿ.
9844341652, 9880467652

ಮನೆ ಮಾರಾಟಕ್ಕಿದೆ
100% ವಾಸ್ತು, 30x40, E/F, 2 BHK ಮನೆ ಅರವಿಂದನಗರ, ಅರವಿಂದ ಆಸ್ಪತ್ರೆ ಎದುರು, ಕುವೆಂಪುನಗರ ಪಕ್ಕ, ಮೈಸೂರು.
Call: 9844756558

ಮನೆ ಕೆಲಸ ಮಾಡಲು ಬೇಕಾಗಿದ್ದಾರೆ.
ಕುವೆಂಪುನಗರ.
Mob: 9972805819

MUDA Approved
30x40 East face site @ Rs. 55 Lakhs. Bank loan available. Ready to construciton. Adjacent to Lal Bahadur Shastri Nagar, close to VTU Campus.
Mob: 9538583377

HOUSE FOR SALE & RENT
Corner 5BHK, 31x41
2BHK / 1BHK
I or II Floor
In Siddhartha Nagar
9845109573
9886298300

SITES FOR SALE
40x40, Corner
MUDA Approved
GSS Herbal Habitat Gated Community
Kadakola, Mysore
9972230774
9611173161

ಗೋವಾ ಪ್ರವಾಸ
ಹೊರಡುವ ದಿನಾಂಕ: 29 March 2024 (03 ದಿನಗಳು). ಬಾಗ ಬೀಚ್, ದೂಧ್ ಸಾಗರ್ ಜಲಪಾತ, ಕಲಂಗುಟ್ ಬೀಚ್, ಬಾಸಲಿಕ ಚರ್ಚ್, ಆಗೊಡ ಕೋಟೆ, ಮಂಗೇಶಿ ದೇವಸ್ಥಾನ ಮತ್ತು ನಾಗೇಶಿ ದೇವಸ್ಥಾನ, ಡಾಲ್ಫಿನ್ ಬೋಟ್, ಡಿಜೆ ಬೋಟ್. ಒಬ್ಬರಿಗೆ 7500/– ರೂ. ಮಾತ್ರ
Mob: 70222 71023

ROYAL BLUE SAND AND RCB BRICKS
*M- Sand, * P-Sand,
*VSI Sand, * C-Snd, (Option)
* Zomm Jelly, 40mm, 12 mm, 6mm, * Cement Bricks,
* Red Bricks
Entire Mysuru Supply
9448546936
9901476936

SITES FOR SALE
30x40,
North West Corner
60ft Road,
Semicommercial
Bramins Layout, A Block
8217042841

MUDA & RERA APPROVED 30X40 SITE FOR SALE
West Facing @ 2300/Sqft
North Facing @ 2500/Sqft
Near KIT Eng. Collage,
Next to Lalbahadur Shastri Nagar, Off. T-Narasipura Main Road, Immediate Registration & Bank Loan Available
7337-786-007

ವಧು–ವರಾನ್ವೇಷಣೆ
ಒಕ್ಕಲಿಗ/ಕುರುಬ/ಲಿಂಗಾಯತ/ನಾಯಕ/ SC & ಎಲ್ಲಾ ಜಾತಿಯ ವಧು–ವರರಿಗಾಗಿ ಕೂಡಲೇ ಸಂಪರ್ಕಿಸಿ
(II Marriages Also)
9343175000

MUDA SITE FOR SALE
40X60 Ft Muda allotted Semi-Commercial Site for Sale in Hanchya, Sathagalli 'A' Zone, West Facing, 60 ft Road, with clear Documents (Brokers Excuse) Direct Owners Can call
9632338969

ದೋಸೆ ಭಟ್ಟರು ಬೇಕಾಗಿದ್ದಾರೆ
ಮೈಸೂರಿನ ಬಲ್ಲಾಳ ವೃತ್ತದ ಹತ್ತಿರ ವಿರುವ ಪ್ರತಿಷ್ಠಿತ ರೆಸ್ಟೋರೆಂಟ್ ಒಂದಕ್ಕೆ ನುರಿತ ದೋಸೆ ಭಟ್ಟರು ಬೇಕಾಗಿದ್ದಾರೆ.
ಒಳ್ಳೆಯ ಸಂಬಳ ನೀಡಲಾಗುವುದು.
9900661620

ಸೈಟು / ಮನೆಗಳು/ ಮಾರಾಟ / ಬಾಡಿಗೆಗೆ
40x60 ಮನೆ, ದಟ್ಟಗಳ್ಳಿ ಆರ್.ಕೆ.ನಗರ
20x30, 30x40 ದಟ್ಟಗಳ್ಳಿ ಆರ್.ಕೆ.ನಗರ, ವಸಂತ ನಗರ ಶ್ರೀರಾಂಪುರ. ಬೇಕಾಗಿದೆ.
ಮುಡಾ ಸೈಟುಗಳು ಕ್ರಯಕ್ಕೆ ಬೇಕಾಗಿದೆ ಕೊಡುವ ಮಾಲೀಕರು ಸಂಪರ್ಕಿಸಿ:
9448938989
7892035789

NEW HOUSE FOR SALE
175. 50 Metr
(40x50) 30x40
Built House
close to Manasinagar
9108369258

40x30 ಅಳತೆಯ MUDA ಸೈಟು ಮಾರಾಟಕ್ಕಿದೆ
26 ಲಕ್ಷದ 50 ಸಾವಿರಗಳು
ಯಶಸ್ವಿನಿ ದೃಷ್ಟಿ ಎನ್‌ಕ್ಲೈವ್ ಜೆ.ಪಿ.ನಗರ ರಿಂಗ್ ರೋಡ್ ನಿಂದ 3 ಕಿ.ಮೀ.
ದಡದಹಳ್ಳಿ ರಸ್ತೆ, ಮೈಸೂರು
9742198093

ತಕ್ಷಣ ಬೇಕಾಗಿದ್ದಾರೆ
ಬೆಂಗಳೂರು ಹಾಗೂ ಮೈಸೂರು ಜಿಲ್ಲೆಗಳಲ್ಲಿ ಹೊಸದಾಗಿ ತೆರೆದಿರುವ ಕಂಪನಿಯೊಂದಕ್ಕೆ 156 ವಿವಿಧ ಪೋಸ್ಟ್‌ಗಳಿಗೆ 10th, PUC, ITI, Degree (Pass/Fail), ಆಗಿರುವ ಉತ್ಸಾಹ ಯುವಕ/ಯುವತಿಯರು ಬೇಕಾಗಿದ್ದಾರೆ. ಉಚಿತ ವಸತಿ ಊಟದೊಂದಿಗೆ ಸಂಬಳ 14,000 ರಿಂದ 35,000 (ESI+PF+OT) ಷರತ್ತು ಅನ್ವಯ.
9164052361,9513829246

ACCOUNTANT ಬೇಕಾಗಿದ್ದಾರೆ
ಸಗಟು ಮೆಡಿಕಲ್ ವ್ಯಾಪಾರಿಗಳಿಗೆ
ಸಂಪರ್ಕಿಸಿ:
ಶಿವರಾಂಪೇಟೆ, ಮೈಸೂರು
9902902530

ಕೆಲಸಕ್ಕೆ ಬೇಕಾಗಿದ್ದಾರೆ
ಮೈಸೂರು ಕೈಗಾರಿಕಾ ಪ್ರದೇಶ ಕೂರ್ಗಳ್ಳಿ ಮೇಟಗಳ್ಳಿ, ಹೆಬ್ಬಾಳ ಇಲ್ಲಿ ಕೆಲಸ ಮಾಡಲು Helper, SMD Operatore, Soldering, Inspection, Mahine Operatore ಹಾಗೂ co-Opertive Scoiety ನಲ್ಲಿ ಕೆಲಸ ಮಾಡಲು ಫೀಲ್ ಆಫೀಸರ್‌ಗಳು, ಎಕ್ಸಿಕ್ಯೂಟಿವ್‌ಗಳು, ಪಿಗ್ಮಿ ಕಲೆಕ್ಟರ್ Accounts, Computer Knowledge ಅಭ್ಯಾಸವುಳ್ಳವರು ಕೆಲಸಕ್ಕೆ ಬೇಕಾಗಿದ್ದಾರೆ.
9611208553, 9036461347

ತಕ್ಷಣ ಬೇಕಾಗಿದ್ದಾರೆ
TVS ಫ್ಯಾಕ್ಟರಿ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC
ಸಂಬಳ: 16000/- (26 Days)
ವಯೋಮಿತಿ : 45 ವರ್ಷದೊಳಗೆ
ESI & PF ಊಟ ತಿಂಡಿ ವಸತಿ ಸೌಲಭ್ಯವಿರುತ್ತದೆ.
9620777819
9620667819

ಅನುಬಂಧ ಮ್ಯಾರೇಜಸ್
ವಧುವರರನ್ನು ಹುಡುಕಲು ಸಹಾಯ ಬೇಕೆ?
ನಮಗೆ ಕರೆ ಮಾಡಿ
6361740552

WANTED
Accounts Assistant (Male/ Female) * Supervisor,
* Delivery Boys
ANJAN & Co.,
295, A Block, APMC Yard, Bandipalya, Mysore-570025
9845333588
8951699396

LIFE PARTNER ಆಗಲು Govt Job ವರನಿಗೆ ವಧು ಬೇಕಾಗಿದ್ದಾರೆ.
ಲಿಂಗಾಯತ Age: 42/5.4
BA Govt SDA Court Employee Salary 50000/- Well Settled Independent ಇರುವಂತಹ ವರನಿಗೆ ವಿಧವೆ/ವಿಚ್ಛೇದಿತ/ನೌಕರಸ್ಥ/ ಯಾವುದೇ ಜಾತಿಯ ಅಭ್ಯಂತರವಿಲ್ಲ ವಧು ಬೇಕಾಗಿದ್ದಾರೆ (ಸರಳ ವಿವಾಹಕ್ಕೆ) ಮಕ್ಕಳಿದ್ದರೂ ಪರವಾಗಿಲ್ಲ
ಬೆಂಗಳೂರು:9480385742

VARSHA DEVELOPERS & BUILDERS
SITES FOR SALES
MUDA & DTCP Approved
Mysore to Hunsur Highway Road
Near Yelawala & ManuganaHalli
Near Hootagalli Housing Board
KRS Main Road Mogarahalli
9620615226
7892991044

ಬೇಕಾಗಿದ್ದಾರೆ
ZED MSME ನಲ್ಲಿ ಕೆಲಸ ಮಾಡಲು ಬೇಕಾಗಿದ್ದಾರೆ ಫೀಲ್ಡ್ ಸರ್ವೆ, ಟೀಮ್ ಲೀಡರ್, ಆಫೀಸ್ ಎಕ್ಸಿಕ್ಯೂಟಿವ್ (ಮಹಿಳೆ) ತಕ್ಷಣ ಬೇಕಾಗಿದ್ದಾರೆ.
ಕೆಲಸದ ಸ್ಥಳ: ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ
7259488010

ತಕ್ಷಣ ಬೇಕಾಗಿದ್ದಾರೆ
1) ಸೆಕ್ಯೂರಿಟಿ ಗಾರ್ಡ್ಸ್ (ಹೂಟಗಳ್ಳಿ) ವಿದ್ಯಾರಣ್ಯಪುರಂ, ಹೆಬ್ಬಾಳು, ಸುತ್ತೂರು, ದಂಡಿಕೆರೆ)
2) ಹೌಸ್ ಕೀಪಿಂಗ್
(ಮಹಿಳೆಯರು/ಹುಡುಗರು
(ಮೇಟಗಳ್ಳಿ, ಹಿನಕಲ್, ಒಂಟಿಕೊಪ್ಪಲ್)
ESI+PF ಸೌಲಭ್ಯವಿರುತ್ತದೆ.
9739166772
9880419847

ಬೇಕಾಗಿದ್ದಾರೆ
ಟೆಲಿಕಾಲಿಂಗ್ ಮಾಡಲು ಹುಡುಗಿಯರು ಬೇಕಾಗಿದ್ದಾರೆ (ಕನ್ನಡ ಮಾತನಾಡಬಲ್ಲವರು)
ಸ್ಥಳ: ಚಾಮುಂಡಿಪುರಂ ಮತ್ತು ಎನ್.ಆರ್.ಮೊಹಲ್ಲಾ ಸಂಬಳ: 10000/– Field Executive ಬೇಕಾಗಿದ್ದಾರೆ. ಸಂಬಳ: 11000/–
8150005111

ಮುಡಾ ಖಾತೆ ಸೈಟ್ ಸೇಲ್
ಈಸ್ಟ್ ಫೇಸಿಂಗ್, ಕಾರ್ನರ್ ಸೈಟ್ 1124 ಚದುರಡಿ, ಜ್ಞಾನಭಾರತಿ ಲೇಔಟ್, ಏರ್‌ಪೋರ್ಟ್ ಹಿಂಭಾಗದ ರಸ್ತೆ
ಬೆಲೆ : 34 ಲಕ್ಷ
ಡೈರೆಕ್ಟ್ ಓನರ್
9342123373

ಬೇಕಾಗಿದ್ದಾರೆ
ಬೋಗಾದಿ ಬಸವನಪುರ ಬೆಳವಾಡಿ ಹತ್ತಿರ ಇರುವ ಅಪಾರ್ಟ್‌ಮೆಂಟ್‌ನಲ್ಲಿ ಕೆಲಸ ಮಾಡಲು ಅನುಭವವುಳ್ಳ ನುರಿತ ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ESI & PF ಸೌಲಭ್ಯವಿರುತ್ತದೆ.
ವಿದ್ಯಾರ್ಹತೆ: SSLC
ವಯೋಮಿತಿ: 50 ವರ್ಷ
9035050654
9035050653

ಸೈಟುಗಳು ಮಾರಾಟಕ್ಕಿದೆ
ಎಂ.ಬಸವಯ್ಯ ಲೇಔಟ್
30x40 ಮೂಡಾ ಅಪ್ರೂವ್ಡ್
ಎಲ್ಲಾ ಬ್ಯಾಂಕ್‌ಗಳಲ್ಲಿ ಲೋನ್ ದೊರೆಯುತ್ತದೆ. ಆರ್.ಟಿ.ನಗರ ಪಕ್ಕ (ನಗರ್ತಳ್ಳಿ) ಮೈಸೂರು
9880464585

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಸೈಬರ್ ಕ್ರೈಂ ವಿಚಾರವಾಗಿ ಪೊಲೀಸರಿಂದ ಸಾರ್ವಜನಿಕರಲ್ಲಿ ಜಾಗೃತಿ



ಮೈಸೂರು, ಫೆ. 16– ಸೈಬರ್ ಕ್ರೈಂ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮೈಸೂರು ನಗರ ಸೈಬರ್ ಕ್ರೈಂ ಠಾಣೆ ಪೊಲೀಸರು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಭಿಯಾನವನ್ನು ಹಮ್ಮಿಕೊಂಡಿದ್ದಾರೆ.

ಸೈಬರ್ ಕ್ರೈಂಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾವಂತ ಮಹಿಳೆಯರು ಹಾಗೂ ವೃದ್ಧರು ಒಳಗಾಗುತ್ತಿರುವ ಹಿನ್ನೆಲೆಯಲ್ಲಿ ಅವರಿರುವ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಜಾಗೃತಿ ಮೂಡಿಸುತ್ತಿದ್ದಾರೆ. ಶುಕ್ರವಾರ ಸಂಜೆ ಮೈಸೂರಿನ ಕೆ.ಸಿ. ಲೇಔಟ್‌ನಲ್ಲಿರುವ ಪಾರ್ಕ್‌ಗೆ ಭೇಟಿ ನೀಡಿದ ಮಹಿಳಾ ಎಎಸ್‌ಐ ಒಳಗೊಂಡ ಮೂವರು ಸೈಬರ್ ಕ್ರೈಂ ಠಾಣೆ ಮಹಿಳಾ ಸಿಬ್ಬಂದಿ ಪಾರ್ಕ್‌ನಲ್ಲಿ ವಾಯುವಿಹಾರಕ್ಕೆ ಬಂದಿದ್ದ ನಿವಾಸಿಗಳಿಗೆ ಸೈಬರ್ ಕ್ರೈಂ ಬಗ್ಗೆ ಜಾಗೃತಿ ಮೂಡಿಸಿದ್ದಾರೆ.

ಮೊಬೈಲ್‌ಗಳಿಗೆ ಬರುವ ಅನಾಮಧೇಯ ಲಿಂಕ್‌ಗಳನ್ನು ಕ್ಲಿಕ್ ಮಾಡಬೇಡಿ. ಬಹುಮಾನ ಬಂದಿದೆ ಎಂದು ರವಾನೆಯಾಗುವ ಮೆಸೇಜ್‌ಗಳನ್ನು ನಿರ್ಲಕ್ಷಿಸಿ, ವರ್ಕ್ ಫ್ರಂ ಹೋಮ್ ಹೆಸರಿನಲ್ಲಿ ಟೆಲಿಗ್ರಾಂ ಆಪ್ ಅನ್ನು ಲಿಂಕ್ ಮಾಡಿ ಬರುವ ಮೆಸೇಜ್‌ಗಳಿಗೆ ಪ್ರತಿಕ್ರಿಯಿಸಬೇಡಿ, ಬ್ಯಾಂಕ್ ಅಧಿಕಾರಿಗಳು ಎಂಬ ಹೆಸರಿನಲ್ಲಿ ಯಾರೇ ಕರೆ ಮಾಡಿ ಬ್ಯಾಂಕ್ ಹಾಗೂ ಎಟಿಎಂ ಕಾರ್ಡ್ ವಿವರಗಳನ್ನು ಕೇಳಿದರೆ ಕೊಡಬೇಡಿ ಎಂದು ತಿಳಿಸಿದರು. ಅಲ್ಲದೇ, ಇಂತಹ ಮೆಸೇಜ್‌ಗಳಿಂದ ಯಾವ ರೀತಿ ವಂಚಿಸಲ್ಪಡಲಾಗುತ್ತದೆ ಎಂಬುದರ ಬಗ್ಗೆ ಉದಾಹರಣೆಗಳೊಂದಿಗೆ ವಿವರಿಸಿದರು.

ಸಿದ್ದರಾಮಯ್ಯ ಬಜೆಟ್‌ನಲ್ಲಿ ಮೈಸೂರು ಭಾಗಕ್ಕೆ 4 ಸಾವಿರ ಕೋಟಿಗೂ ಅಧಿಕ ಅನುದಾನದ 22 ಯೋಜನೆ ಘೋಷಣೆ

ಕಾಂಗ್ರೆಸ್ ವಕ್ತಾರ ಲಕ್ಷ್ಮಣ್ ವಿವರಣೆ



ಮೈಸೂರು, ಫೆ.16(ಎಸ್‌ಬಿಡಿ)– ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ 15ನೇ ಬಜೆಟ್ ಐತಿಹಾಸಿಕವಾಗಿದ್ದು, ಮೈಸೂರು ಭಾಗಕ್ಕೆ 4 ಸಾವಿರ ಕೋಟಿಗೂ ಹೆಚ್ಚು ಅನುದಾನದ 22 ಯೋಜನೆಗಳನ್ನು ನೀಡಿದ್ದಾರೆ. ಈವರೆಗಿನ ಯಾವ ಸರ್ಕಾರಗಳೂ ಇಷ್ಟೊಂದು ಕೊಡುಗೆ ನೀಡಿಲ್ಲ ಎಂದು ಕಾಂಗ್ರೆಸ್ ವಕ್ತಾರ ಎಂ.ಲಕ್ಷ್ಮಣ್ ತಿಳಿಸಿದರು.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ರಾಜ್ಯ ಬಜೆಟ್ ಬಗ್ಗೆ ಮಾತನಾಡಿ, 56 ಕೋಟಿ ರೂ.ವೆಚ್ಚದಲ್ಲಿ ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಕಟ್ಟಡ ಹಾಗೂ 116 ಕೋಟಿ ರೂ.ವೆಚ್ಚದಲ್ಲಿ ಮಹಾರಾಣಿ ಕಲಾ ಮತ್ತು ವಾಣಿಜ್ಯ ಕಾಲೇಜು ಹಾಸ್ಟೆಲ್ ಕಟ್ಟಡ ನಿರ್ಮಾಣಕ್ಕೆ ಕ್ರಮ. 40 ಹಾಸಿಗೆ ಸಾಮರ್ಥ್ಯದ ನೆಫ್ರೋ–ಯೂರಾಲಜಿ ಆಸ್ಪತ್ರೆಯನ್ನು 100 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ ಉನ್ನತೀಕರಣ. ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಶತಮಾನೋತ್ಸವ ಸವಿನೆನಪಿಗಾಗಿ ಕೆಆರ್.ಆಸ್ಪತ್ರೆ ಆವರಣದಲ್ಲಿ 75 ಕೋಟಿ ರೂ ವೆಚ್ಚದಲ್ಲಿ ಸುಸಜ್ಜಿತ ಹೊರರೋಗಿ ವಿಭಾಗದ ಕಟ್ಟಡ ನಿರ್ಮಾಣಕ್ಕೆ ಕ್ರಮ. ಪೆರಿಫೆರಲ್ ರಿಂಗ್ ರಸ್ತೆ ನಿರ್ಮಿಸಲು ಕಾರ್ಯಸಾಧ್ಯತಾ ವರದಿಗೆ ಕ್ರಮ ವಹಿಸಲಾಗಿದೆ ಎಂದರು.

ಕಾವೇರಿ ನೀರಾವರಿ ನಿಗಮದಡಿ 2000 ಕೋಟಿ ರೂ. ಮೊತ್ತದ ನೀರಾವರಿ ನಾಲಾ ಹಾಗೂ ಕೆರೆ ತುಂಬಿಸುವ ಯೋಜನೆಗಳ ಜಾರಿ. ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ವಿಆರ್‌ಡಿಎಲ್ ಹಾಗೂ ಡಿಜಿಟಲ್ ಹೆಲ್ತ್ ಸೊಸೈಟಿಯಡಿ ಹೆಲ್ತ್ ರೆಪಸಿಟರಿ ಸೃಷ್ಟಿ, 10 ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತಡರಾತ್ರಿ 1 ಗಂಟೆವರೆಗೆ ವ್ಯಾಪಾರ–ವಹಿವಾಟಿಗೆ ಸಮಯ ವಿಸ್ತರಣೆ. 10 ಮಹಾನಗರ ಪಾಲಿಕೆಗಳಲ್ಲಿ 2000 ಕೋಟಿ ರೂ.ವೆಚ್ಚದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ 2.0 ಯೋಜನೆ ಜಾರಿ. ಮೈಸೂರು ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆ ಸೇರಿದಂತೆ ಉನ್ನತೀಕರಣಕ್ಕೆ ಒಟ್ಟು 1600 ಕೋಟಿ ಅನುದಾನ ಮೀಸಲಿಡಲಾಗಿದೆ ಎಂದು ತಿಳಿಸಿದರು.

ಮೈಸೂರು ಸೇರಿ ವಿವಿಧ ಜಿಲ್ಲೆಗಳಲ್ಲಿ ಅಸ್ತಿತ್ವದಲ್ಲಿರುವ ಕೈಗಾರಿಕಾ ವಸಾಹತುಗಳು 39 ಕೋಟಿ ರೂ ವೆಚ್ಚದಲ್ಲಿ ಮೇಲ್ದರ್ಜೆಗೆ. 25 ಜಿಲ್ಲೆಗಳಲ್ಲಿ ಮಿನಿ ಜವಳಿ ಪಾರ್ಕ್ ಸ್ಥಾಪನೆ. ನಂಜನಗೂಡು ತಾಲೂಕಿನ ಬದನವಾಳು ಗ್ರಾಮದಲ್ಲಿ ಖಾದಿ ಚಟುವಟಿಕೆ ಪ್ರೋತ್ಸಾಹಕ್ಕೆ ಕ್ರಮ. ಕ್ರೀಡಾಪಟುಗಳಿಗೆ ವಿವಿಧ ಇಲಾಖೆಗಳ ನೇಮಕಾತಿಯಲ್ಲಿ ಶೇ.2 ರಷ್ಟು ಹುದ್ದೆ ಮೀಸಲು. ಪರಿಷ್ಕೃತ ಪ್ರವಾಸೋದ್ಯಮ ನೀತಿ 2024–29 ಜಾರಿಗೆ ತರಲು ಕ್ರಮ. ಚಾಮುಂಡಿ ಬೆಟ್ಟ ಸೇರಿದಂತೆ ರಾಜ್ಯದ 10 ಪ್ರವಾಸಿ ತಾಣಗಳಲ್ಲಿ ಕೇಬಲ್ ಕಾರ್ ಅಥವಾ ರೋಪ್ ವೇ ಸೌಲಭ್ಯ ಬಂಡೀಪುರ, ದಾಂಡೇಲಿ ಮತ್ತು ಕಬಿನಿಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಇಂಟರ್ ಪ್ರಿಟೇಷನ್ ಸೆಂಟರ್ ನಿರ್ಮಾಣ. ವಿರಾಜಪೇಟೆಯಲ್ಲಿ 12 ಕೋಟಿ ರೂ.ವೆಚ್ಚದಲ್ಲಿ ಹೊಸ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಸೇರಿದಂತೆ ಮೈಸೂರು ಭಾಗಕ್ಕೆ ಸಿದ್ದರಾಮಯ್ಯ ನವರು ಅಪಾರ ಕೊಡುಗೆ ನೀಡಿದ್ದಾರೆ ಎಂದರು.

ಸಿದ್ದರಾಮಯ್ಯನವರು ಎರಡನೇ ಬಾರಿ ಮುಖ್ಯಮಂತ್ರಿಯಾಗಿರುವುದು ಮೈಸೂರು ಜನರ ಅದೃಷ್ಟ. ಬಜೆಟ್ ಓದದೆಯೇ ಬಿಜೆಪಿ ನಾಯಕರು ಟೀಕಿಸುತ್ತಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ವಿಪಕ್ಷ ನಾಯಕ ಆರ್.ಅಶೋಕ್‌ಗೆ ಬಜೆಟ್ ಬಗ್ಗೆ ಕಿಂಚಿತ್ತೂ ಜ್ಞಾನವಿಲ್ಲ. ಅವರಿಗೆ ಸಿದ್ದರಾಮಯ್ಯನವರ ಆರ್ಥಿಕ ಜ್ಞಾನದ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ಚುನಾವಣಾ ಬಾಂಡ್ ಸಂಬಂಧ ಸುಪ್ರೀಂಕೋರ್ಟ್ ಆದೇಶ ಸ್ವಾಗತಾರ್ಹ. ಈ ಸಂಬಂಧ ಪಟ್ಟಿ ಬಿಡುಗಡೆಯಾದಾಗ ಬಿಜೆಪಿ ಬಂಡವಾಳ ಬಯಲಾಗುತ್ತದೆ. ಇದರಿಂದ ಕೋಪಗೊಂಡು ಐಟಿ ಮೂಲಕ ಕಾಂಗ್ರೆಸ್ ಪಕ್ಷದ ಅಕೌಂಟ್‌ಗಳನ್ನು ಸೀಸ್ ಮಾಡಿಸಿದ್ದಾರೆ ಎಂದು ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿಗಳಾದ ಎಂ.ಶಿವಣ್ಣ, ಗಿರೀಶ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಧ್ಯಮ ವಕ್ತಾರ ಮಹೇಶ್ ಇದ್ದರು.

ಮೈಸೂರಿಗೆ ಭರಪೂರ ಕೊಡುಗೆ



ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಎಲ್ಲರನ್ನೂ ಒಳಗೊಳ್ಳುವ ಬಜೆಟ್ ಮಂಡಿಸಿದ್ದಾರೆ. ಕೃಷಿ, ಮಹಿಳೆ ಹಾಗೂ ಯುವಜನರನ್ನು ಉತ್ತೇಜಿಸುವ ಆಶಾದಾಯಕ ಬಜೆಟ್ ಇದಾಗಿದೆ. ಅದರಲ್ಲೂ ಮೈಸೂರಿಗೆ 22 ಕೊಡುಗೆಗಳನ್ನು ನೀಡಿರುವುದು ಹೆಮ್ಮೆಯ ಸಂಗತಿ. ಕೆ.ಆರ್.ಆಸ್ಪತ್ರೆ ಆವರಣದಲ್ಲಿ 75 ಕೋಟಿ ವೆಚ್ಚದಲ್ಲಿ ಹೊರ ರೋಗಿ ವಿಭಾಗದ ಕಟ್ಟಡ ನಿರ್ಮಾಣ. ಆಧುನಿಕ ಕ್ರಿಟಿಕಲ್ ಕೇರ್ ಬ್ಲಾಕ್ ಸ್ಥಾಪನೆ, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜಿನ ಕಟ್ಟಡ ನಿರ್ಮಾಣ, ಮಹಾರಾಣಿ ಕಲಾ ಮತ್ತು ವಾಣಿಜ್ಯ ಕಾಲೇಜಿನ ಹಾಸ್ಟೆಲ್ ಕಟ್ಟಡ ನಿರ್ಮಾಣಕ್ಕೆ 116 ಕೋಟಿ ರೂ. ಸೇರಿದಂತೆ ಮೈಸೂರಿಗೆ ಅಭಿವೃದ್ಧಿಯ ಸರಮಾಲೆಯನ್ನು ನೀಡುವ ಮೂಲಕ ತಾವು ಅಭಿವೃದ್ಧಿ ಹರಿಕಾರ ಎಂಬುದನ್ನು ಮತ್ತೊಮ್ಮೆ ಸಾಬೀತು ಮಾಡಿದ್ದಾರೆ.

-ಮಹೇಶ್, ಕಾಂಗ್ರೆಸ್ ಮಾಧ್ಯಮ ವಕ್ತಾರ

ಲೋಕಸಭಾ ಚುನಾವಣಾ ಗಿಮಿಕ್ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯನವರು ಲೋಕಸಭಾ ಚುನಾವಣಾ ಗಿಮಿಕ್ ಬಜೆಟ್ ಮಂಡಿಸಿದ್ದಾರೆ. ಗ್ಯಾರಂಟಿಗಳ ಮೂಲಕ ರಾಜ್ಯದ ಜನರ ಮೂಗಿಗೆ ತುಪ್ಪ ಸವರಿ, ಮತ್ತೊಂದು ಕಡೆಯಿಂದ ತೆರಿಗೆ ಮೂಲಕ ಅವರನ್ನು ಸುಲಿಗೆ ಮಾಡುವ ತಂತ್ರ ಮಾಡಿದ್ದಾರೆ. ಬಜೆಟ್‌ನಲ್ಲಿ ಘೋಷಣೆಯಾಗಿರುವ ಯೋಜನೆಗಳು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿಲ್ಲ. ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಜನ ಯೋಚಿಸಿ, ನಿರ್ಧರಿಸುತ್ತಾರೆ.

-ಆರ್.ಲಿಂಗಪ್ಪ, ಮಾಜಿ ಮೇಯರ್

ಸಿದ್ದರಾಮಯ್ಯರ ಬಜೆಟ್‌ಗೆ ಮಿಶ್ರ ಪ್ರತಿಕ್ರಿಯೆ

ಕಾಂಗ್ರೆಸ್ ನಾಯಕರಿಂದ ಗುಣಗಾನ; ಬಿಜೆಪಿ ನಾಯಕರಿಂದ ಭಿನ್ನರಾಗ

ಮೈಸೂರು, ಫೆ.16(ಬಿಎಲ್‌ಯು/ಎಂಕೆ)– ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಮಂಡಿಸಿದ ಆಯ–ವ್ಯಯದ ಬಗ್ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಆಡಳಿತರೂಢ ಕಾಂಗ್ರೆಸ್ ನಾಯಕರು ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಅನ್ನು ಹಾಡಿ ಹೊಗಳಿದ್ದರೆ, ವಿರೋಧ ಪಕ್ಷದವರು ಲೇವಡಿ ಜೊತೆಗೆ ಟೀಕೆ ಮಾಡಿದ್ದಾರೆ.

ಮೈಸೂರಿನ ಫಿಲಂ ಸಿಟಿ ಬಗ್ಗೆ ಚಕಾರ ಎತ್ತಿಲ್ಲ



ಸಿದ್ದರಾಮಯ್ಯ ತಮ್ಮ ತವರು ಜಿಲ್ಲೆಗೆ ಏನನ್ನೂ ನೀಡದೆ ತೀವ್ರ ನಿರಾಶೆ ಮೂಡಿಸಿದ್ದು, ಕೇಂದ್ರ ಸರ್ಕಾರವನ್ನು ಟೀಕಿಸುವುದಕ್ಕಷ್ಟೆ ಮೀಸಲಾದ ಬಜೆಟ್ ಪ್ರತಿಯಾಗಿದೆ. ಮೈಸೂರಿನ ಫಿಲಂ ಸಿಟಿ ನಿರ್ಮಾಣ ಮಾಡುವ ಬಗ್ಗೆ ಚಕಾರ ಎತ್ತಿಲ್ಲ. ಪಾರಂಪರಿಕ ಕಟ್ಟಡಗಳ ಸಂರಕ್ಷಣೆಗೆ ಅನುದಾನ ನೀಡದೆ ಮೈಸೂರು ಜನರ ಮೂಗಿಗೆ ತುಪ್ಪ ಸವರಿದ್ದಾರೆ. ಯೋಜನೆಗಳಿಗೆ ಅನುದಾನ ಹೊಂದಿಸಲು ಪರದಾಡುತ್ತಿರುವ ಸಿದ್ದರಾಮಯ್ಯ, ನೀರಾವರಿ, ಗ್ರಾಮೀಣಾಭಿವೃದ್ಧಿ ಸೇರಿದಂತೆ ಹಲವು ಕ್ಷೇತ್ರಗಳನ್ನು ಸಂಪೂರ್ಣವಾಗಿ ಕಡೆಗಣಿಸಿದ್ದಾರೆ. ಬರೀ ಪುಸ್ತಕದಲ್ಲಿ ಯೋಜನೆಗಳನ್ನು ಪ್ರಕಟಿಸಿದ್ದಾರೆಯೇ ಹೊರತು, ಘೋಷಣೆ ಮಾಡಿರುವ ಯೋಜನೆಗಳು ಕಾರ್ಯರೂಪಕ್ಕೆ ಬರುವುದಿಲ್ಲ.

- ಟಿ.ಎಸ್.ಶ್ರೀವತ್ಸ, ಶಾಸಕರು, ಕೆ.ಆರ್.ಕ್ಷೇತ್ರ

ಸಿದ್ದರಾಮಯ್ಯ ಆರ್ಥಿಕ ಮುತ್ಸದ್ದಿ ಎಂಬುದು ಮತ್ತೆ ಸಾಬೀತು



ಸಿದ್ದರಾಮಯ್ಯ ಅವರು ಈ ವಯಸ್ಸಿನಲ್ಲೂ ಮೂರೂ ಕಾಲು ಗಂಟೆ ನಿಂತು ಬಜೆಟ್ ಓದುವುದರ ಮೂಲಕ ಆಯವ್ಯಯದಲ್ಲಿ ರಾಜ್ಯದ ಜನತೆಗೆ ಮಹಾ ಕೊಡುಗೆ ನೀಡಿದ್ದಾರೆ. 15ನೇ ಬಾರಿ ಬಜೆಟ್ ಮಂಡಿಸಿರುವ ಸಿದ್ದರಾಮಯ್ಯ, ದೇಶ ಕಂಡ ಮುತ್ಸದ್ದಿ ಆರ್ಥಿಕ ತಜ್ಞ, ಸಂಕಷ್ಟದ ಪರಿಸ್ಥಿತಿಯಲ್ಲೂ ಆರ್ಥಿಕ ಶಿಸ್ತು ಕಾಯ್ದುಕೊಳ್ಳಲು ಹಲವು ಪರಿಣಾಮಕಾರಿ ಸುಧಾರಣಾ ಕ್ರಮ ಕೈಗೊಂಡಿದ್ದಾರೆ. ಇದರ ಫಲವಾಗಿ ಕರ್ನಾಟಕ ದೇಶದ ಅಭಿವೃದ್ಧಿ ಪಥದಲ್ಲಿ ಸಾಗುತ್ತದೆ ಎಂಬುದರಲ್ಲಿ ಸಂದೇಹವೇ ಇಲ್ಲ.

- ಕೆ.ಮರಿಗೌಡ, ಮಾಜಿ ಅಧ್ಯಕ್ಷ, ಮೈಸೂರು ಜಿಲ್ಲಾ ಪಂಚಾಯತ್


ಶಿಕ್ಷಣದ ಪ್ರಗತಿಗೆ ಪೂರಕ



ಶಾಲಾ ಮತ್ತು ಕಾಲೇಜುಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳಾದ ಕೊಠಡಿ, ಶೌಚಾಲಯ ಹಾಗೂ ಗುಣಾತ್ಮಕ ಶಿಕ್ಷಣಕ್ಕೆ ಇಂಟರ್ ನೆಟ್, ಕಂಪ್ಯೂಟರ್ ಲ್ಯಾಬ್ ಹಾಗೂ ವಿಜ್ಞಾನ ಪ್ರಯೋಗಾಲಯ ಸ್ಥಾಪಿಸಲು ಸಿದ್ದರಾಮಯ್ಯ ತಮ್ಮ ಬಜೆಟ್‌ನಲ್ಲಿ 900 ಕೋಟಿ ನೀಡಿರುವುದು ದೂರದೃಷ್ಟಿ ಯೋಜನೆಯಾಗಿದೆ. ಕನ್ನಡ ಮತ್ತು ಇಂಗ್ಲಿಷ್ ದ್ವಿಭಾಷಾ ಮಾಧ್ಯಮದ ಮೂಲಕ 2 ಸಾವಿರ ಸರ್ಕಾರಿ ಶಾಲೆಗಳಲ್ಲಿ ಬೋಧಿಸುವುದು, ಉತ್ತಮ ಶಿಕ್ಷಣ ಮತ್ತು ಫಲಿತಾಂಶ ನೀಡುವ 74 ಆದರ್ಶ ವಿದ್ಯಾಲಯಗಳಲ್ಲಿ ವಾಣಿಜ್ಯ ಮತ್ತು ವಿಜ್ಞಾನ ಪದವಿ ಪೂರ್ವ ಕಾಲೇಜುಗಳಾಗಿ ಉನ್ನತೀಕರಣಗೊಳಿಸುವುದು ಸೇರಿದಂತೆ ಹಲವು ಯೋಜನೆ ಘೋಷಣೆ ಮಾಡಿರುವುದು ಶಿಕ್ಷಣದ ಪ್ರಗತಿಗೆ ಪೂರಕವಾಗಲಿದೆ.

- ಪ್ರೊ. ಬಿ.ಸದಾಶಿವೇಗೌಡ, ವಿದ್ಯಾವರ್ಧಕ ತಾಂತ್ರಿಕ ಮಹಾವಿದ್ಯಾನಿಲಯದ ಪ್ರಿನ್ಸಿಪಾಲ್, ಮೈಸೂರು

ಸಂತೃಪ್ತ ಐತಿಹಾಸಿಕ ಬಜೆಟ್



ಸಿದ್ದರಾಮಯ್ಯ ಮಂಡಿಸಿದ ಜನಪರ ಬಜೆಟ್ ಅನ್ನು ಆರ್ಥಿಕ ತಜ್ಞರು, ಉದ್ಯಮಿಗಳು ಮಾತ್ರವಲ್ಲದೆ ವಿರೋಧ ಪಕ್ಷದವರು ಒಪ್ಪಿದ್ದಾರೆ. ಕೇವಲ ಒಂದು ಪ್ರದೇಶಕ್ಕೆ ಸೀಮಿತವಾಗದೆ ಇಡೀ ರಾಜ್ಯದ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಿದ್ದಾರೆ.

ಮಹಿಳೆಯರು, ಕಾರ್ಮಿಕರು, ವಿದ್ಯಾರ್ಥಿಗಳು, ಶೋಷಿತ ವರ್ಗಗಳು, ಹಿಂದುಳಿದವರು ಹಾಗೂ ಅಲ್ಪ ಸಂಖ್ಯಾತರ ಬೆಳವಣಿಗೆಗೆ ಸಿದ್ದರಾಮಯ್ಯ ಪೂರಕ ಬಜೆಟ್ ಮಂಡಿಸಿದ್ದಾರೆ. ಈ ಮೂಲಕ ಇದು ಸಂತೃಪ್ತ ಐತಿಹಾಸಿಕ ಬಜೆಟ್ ಆಗಿದೆ.

- ಎಂ.ಕೆ.ಸೋಮಶೇಖರ್, ಮಾಜಿ ಶಾಸಕ

ದೂರದೃಷ್ಟಿಯುಳ್ಳ ಬಜೆಟ್



ದೂರದೃಷ್ಟಿಯುಳ್ಳ ಬಜೆಟ್ ಇದಾಗಿದೆ, ರೈತರಿಗೆ ಅನುಕೂಲಕರವಾಗಿದ್ದು, ಹೆದ್ದಾರಿ ಯೋಜನೆಗಳಿಗೆ ಹಣ ನಿಯೋಜಿಸಲಾಗಿದೆ. ಶತಮಾನೋತ್ಸವ ಸಂಭ್ರಮದಲ್ಲಿರುವ ಕೆ.ಆರ್ ಆಸ್ಪತ್ರೆಗೆ ಅನುದಾನ ಹಾಗೂ ಹೊಸದಾಗಿ ನೆಫ್ರೋ ಯುರಾಲಜಿ ನಿರ್ಮಾಣಕ್ಕೆ ಆದ್ಯತೆ ನೀಡಿರುವುದು ಅಭಿನಂದನಾರ್ಹ. ಕೈಗಾರಿಕೆಗಳಿಗೆ ಒತ್ತು ನೀಡದಿದ್ದರೂ ಹೊಸ ಕೈಗಾರಿಕಾ ನೀತಿ ಅನುಷ್ಠಾನ ಮಾಡುತ್ತೇವೆ ಎಂದಿರುವುದು ಸಮಾಧಾನ ತಂದಿದೆ.

- ಕೆ.ಬಿ.ಲಿಂಗರಾಜು, ಅಧ್ಯಕ್ಷರು, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ


ಮೈಸೂರಿನ ಪಾರಂಪರಿಕ ಕಟ್ಟಡಗಳಿಗೆ ಅನುದಾನ ನೀಡಿಲ್ಲ



ಮೈಸೂರಿನ ಪಾರಂಪರಿಕ ಕಟ್ಟಡಗಳ ಅಭಿವೃದ್ಧಿಗೆ ಅನುದಾನ ನಿರೀಕ್ಷಿಸಲಾಗಿತ್ತು. ಅದು ಕೂಡ ಹುಸಿಯಾಗಿದೆ. ಯಾವುದೇ ಪರಿಣಾಮಕಾರಿ ಯೋಜನೆಗಳಿಲ್ಲದ ಪೊಳ್ಳು ಬಜೆಟ್ ಇದಾಗಿದೆ. ಮುಂಬರುವ ಲೋಕಸಭಾ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಸಿದ್ದರಾಮಯ್ಯ ಬಜೆಟ್ ಮಂಡಿಸಿದ್ದಾರೆ ಎಂಬುವುದರಲ್ಲಿ ಯಾವುದೇ ಅನುಮಾನವಿಲ್ಲ. ಇದು ಪ್ರಗತಿ ಪರ ಬಜೆಟ್ ಆಗದೆ, ಶೂನ್ಯ ಆಯವ್ಯಯವಾಗಿದೆ. ಯುವಕರಿಗೆ, ಮಹಿಳೆಯರಿಗೆ, ಕಾರ್ಮಿಕರಿಗೆ ಅನುಕೂಲವಾಗುವ ಯಾವುದೇ ಕಾರ್ಯಕ್ರಮವಿಲ್ಲದ ಪ್ರಗತಿ ಅಂಶಗಳಿಲ್ಲದ ಬಜೆಟ್ ಇದಾಗಿದೆ.

- ಸಿ.ಎನ್.ಮಂಜೇಗೌಡ, ವಿಧಾನ ಪರಿಷತ್ ಸದಸ್ಯ

ಏತ ನೀರಾವರಿ ಯೋಜನೆ ಮಂಜೂರು ಸ್ವಾಗತಾರ್ಹ



ಹುಣಸೂರು ತಾಲೂಕಿನ ಮರದೂರು ಏತ ನೀರಾವರಿ ಯೋಜನೆ ಮಂಜೂರು ಮಾಡಿದ್ದು ಸ್ವಾಗತಾರ್ಹ. ಈ ಜನೋಪಯೋಗಿ ಯೋಜನೆಯನ್ನು ಕೈಗೆತ್ತಿಕೊಳ್ಳುವಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದೆ. ಮನವಿಗೆ ಸ್ಪಂದಿಸಿರುವ ಸಿಎಂ ಹಾಗೂ ಡಿಸಿಎಂಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಗ್ರಾಮೀಣ ಭಾಗದ ಅಭಿವೃದ್ಧಿ ದೃಷ್ಟಿಯಿಂದ ಸಾಕಷ್ಟು ನಿರೀಕ್ಷೆಗಳಿದ್ದವು.

-ಜಿ.ಡಿ.ಹರೀಶ್ ಗೌಡ, ಹುಣಸೂರು ಶಾಸಕ

ಬೆಳವಣಿಗೆಗೆ ಪೂರಕ ಬಜೆಟ್



ಸಿದ್ದರಾಮಯ್ಯ ಇಂದು ಮಂಡಿಸಿದ ಬಜೆಟ್‌ನಲ್ಲಿ ಮಹಾರಾಣಿ ಕಾಲೇಜು ಕಟ್ಟಡ, ಕೆ.ಆರ್.ಆಸ್ಪತ್ರೆ ಸೇರಿದಂತೆ ಮೈಸೂರಿನ ಹಲವು ಅಭಿವೃದ್ಧಿ ಕಾರ್ಯಗಳಿಗೆ ಒತ್ತು ನೀಡಿದ್ದಾರೆ. ಹೋಟೆಲ್ ಉದ್ಯಮ ರಾತ್ರಿ 1 ಗಂಟೆ ತನಕ ತೆರೆಯಲು ಅವಕಾಶ ನೀಡಿರುವುದು ಒಳ್ಳೆಯ ವಿಚಾರವಾಗಿದೆ. ಈ ಮೂಲಕ ಅಭಿವೃದ್ಧಿಗೆ ಪೂರಕ ಆಯವ್ಯಯ ಮಂಡಿಸಿದ್ದಾರೆ.

- ಸಿ.ನಾರಾಯಣಗೌಡ, ಅಧ್ಯಕ್ಷರು, ಮೈಸೂರು ಹೋಟೆಲ್ ಮಾಲೀಕರ ಸಂಘ

ಸುಳ್ಳಿನ ಸರಮಾಲೆ ಜೋಡಿಸಿದ್ದಾರೆ



ಲೋಕಸಭಾ ಚುನಾವಣೆ ಹಿನ್ನೆಲೆ ಮತದಾರರ ಓಲೈಕೆಗಾಗಿ ಸಿದ್ದರಾಮಯ್ಯ ಬಜೆಟ್‌ನಲ್ಲಿ ಸುಳ್ಳು ಆಶ್ವಾಸನೆ ನೀಡಿದ್ದಾರೆ. ಸರ್ಕಾರದ ವೈಫಲ್ಯತೆ ಮುಚ್ಚಿಕೊಳ್ಳಲು ಬಜೆಟ್‌ನಲ್ಲಿ ಸುಳ್ಳಿನ ಸರಮಾಲೆ ಜೋಡಿಸಿದ್ದಾರೆ. ಕಳೆದ ಬಾರಿ ಮಂಡಿಸಿದ ಬಜೆಟ್‌ನಲ್ಲಿ ಮೈಸೂರು ಭಾಗದ ಅಭಿವೃದ್ಧಿಗೆ ಘೋಷಣೆ ಮಾಡಿದ ಯೋಜನೆಗಳೇ ಇನ್ನು ಜಾರಿಯಾಗಿಲ್ಲ. ಹೀಗಿರುವಾಗ ಮತ್ತೆ ಸುಳ್ಳಿನ ಭರವಸೆ ನೀಡಿದ್ದಾರೆ. ಇದು ರಾಜ್ಯದ ಅಭಿವೃದ್ಧಿಗೆ ಪೂರಕವಲ್ಲದ ಶೂನ್ಯ ಬಜೆಟ್.

- ಎಲ್.ಆರ್.ಮಹದೇವಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ, ಮೈಸೂರು.

ಬಿಸಿಯೂಟ ಕಾರ್ಯಕರ್ತೆಯರಿಗೆ ನಿರಾಶಾದಾಯಕ ಬಜೆಟ್

ಕಳೆದ 21 ವರ್ಷಗಳಿಂದ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಅಕ್ಷರ ದಾಸೋಹ ಯೋಜನೆಯಡಿ ಬಿಸಿ ಊಟ ಕಾರ್ಯಕರ್ತೆ ಯರಾಗಿ ಕೆಲಸ ಮಾಡುತ್ತಿರುವ ಲಕ್ಷಕ್ಕೂ ಅಧಿಕ ಹೆಣ್ಣು ಮಕ್ಕಳಿಗೆ ಈ ಬಾರಿಯ ಬಜೆಟ್ ನಿರಾಶದಾಯಕವಾಗಿದೆ. ಬೆಲೆ ಏರಿಕೆ ತೀವ್ರವಾಗಿದ್ದು, ನಾವು ಗಳಿಸುತ್ತಿರುವ ಗೌರವಧನ ರೂ 3,600. ಇದರಲ್ಲಿ ಸಂಸಾರ ನಿರ್ವಹಿಸುವುದೇ ಕಡುಕಷ್ಟ, ಗೌರವ ಧನದ ಹೆಸರಿನಲ್ಲಿ ಯಾವುದೇ ಕಾರ್ಮಿಕ ಕಾಯ್ದೆಗಳಿಗೂ ಒಳಪಡದೆ ಕನಿಷ್ಠ ವೇತನವು ನೀಡದೆ ಬಿಸಿಯೂಟ ಕಾರ್ಯಕರ್ತೆಯರು ಅನೇಕ ವರ್ಷಗಳಿಂದ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಎಲ್ಲಾ ಸರ್ಕಾರಗಳಂತೆ ಈ ಸರಕಾರವು ಕೂಡ ದುಡಿಯುವ ವರ್ಗದ ಹಿತಾಸಕ್ತಿಯನ್ನು ಎತ್ತಿ ಹಿಡಿಯುವುದಿಲ್ಲ ಎಂಬುದನ್ನು ಈ ಬಾರಿಯೂ ಸಾಬೀತುಪಡಿಸಿದೆ.

-ಪಿ.ಎಸ್.ಸಂಧ್ಯಾ, ರಾಜ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಮಿಕರ ಸಂಘ

ಎನ್.ಆರ್.ಕ್ಷೇತ್ರದ ಜನರ ಸಂಕಷ್ಟ...



ಮೈಸೂರು ಎನ್.ಆರ್.ಕ್ಷೇತ್ರ ಅತ್ಯಂತ ಹಿಂದುಳಿದ ಕ್ಷೇತ್ರವಾಗಿದೆ. ಇದರ ಅರಿವು ಮುಖ್ಯಮಂತ್ರಿಗಳಿಗಿದ್ದರೂ ಯಾವುದೇ ಅಭಿವೃದ್ಧಿ ಕಾರ್ಯಕ್ರಮವನ್ನು ನೀಡದೇ ಇರುವುದು ಅತ್ಯಂತ ವಿಷಾದಕಾರಿ ಸಂಗತಿ. ಕ್ಷೇತ್ರದ ಜನ ಸಂಕಷ್ಟ ಪರಿಸ್ಥಿತಿಯಲ್ಲಿ ದಿನದೂಡುತ್ತಿದ್ದರೂ ಈ ಬಗ್ಗೆ ಗಂಭೀರವಾಗಿ ಚಿಂತಿಸಿ ತೀರ್ಮಾನ ಕೈಗೊಳ್ಳದೇ ಇರುವುದೂ ಸಹ ಈ ಸ್ಥಿತಿಗೆ ಕಾರಣ. - ಸಂದೇಶ ಸ್ವಾಮಿ, ಮಾಜಿ ಮೇಯರ್

ಸತ್ವವಿಲ್ಲದ, ಉಪ್ಪು–ಹುಳಿ, ಕಾರ ಇಲ್ಲದ ನಿರಾಶದಾಯಕ ಬಜೆಟ್



ರಾಜ್ಯ ಬಜೆಟ್‌ನಲ್ಲಿ ಯಾವುದೇ ಸತ್ವವಿಲ್ಲ. ಇದೊಂದು ಉಪ್ಪು, ಹುಳಿ ಕಾರವಿಲ್ಲದ ಬಜೆಟ್ ಆಗಿದ್ದು, ಜಿಲ್ಲೆಗೆ ಹೇಳಿಕೊಳ್ಳುವಂತಹ ಕೊಡುಗೆಗಳಿಲ್ಲ. ಮೇಲ್ನೋಟಕ್ಕೆ ಸರ್ವ ಜನಾಂಗದವರಿಗೂ ಒತ್ತು ನೀಡಲಾಗಿದೆ ಎಂದು ಹೇಳಿದ್ದರೂ ಒಳಹೊಕ್ಕಿ ನೋಡಿದಾಗ ಸುಳ್ಳು ಎಂದು ಗೊತ್ತಾಗುತ್ತದೆ. ಇದೊಂದು ರೈತ ವಿರೋಧಿ ಬಜೆಟ್ ಆಗಿದ್ದು, ಬುರುಡೆ ಬಿಡಲಾಗಿದೆ. ರೈತರು ಸಾಲ ಮನ್ನಾ ನಿರೀಕ್ಷೆಯಲ್ಲಿದ್ದರು. ಆದರೆ ಅದು ಹುಸಿಯಾಗಿದೆ. ನೀರಾವರಿ ಕ್ಷೇತ್ರಕ್ಕೆ ಹಿನ್ನಡೆ ಉಂಟಾಗಿದೆ. ಲೋಕಸಭಾ ಚುನಾವಣೆ ಮುಂದಿಟ್ಟುಕೊಂಡು ಅಲ್ಪಸಂಖ್ಯಾತ ಸಮುದಾಯವನ್ನು ಓಲೈಸುವ ಕೆಲಸ ಮಾಡಿದ್ದಾರೆ.


- ಎಲ್.ನಾಗೇಂದ್ರ, ಬಿಜೆಪಿ ನಗರಾಧ್ಯಕ್ಷ, ಮಾಜಿ ಶಾಸಕ

ಸಮತೋಲನ ಕಾಯ್ದುಕೊಂಡಿರುವ ಬಜೆಟ್

ಎಲ್ಲಾ ರಂಗಗಳನ್ನು ಒಳಗೊಂಡಿ ರುವ ಸಮತೋಲನ ಬಜೆಟ್ ಅನ್ನು ಸಿಎಂ ಸಿದ್ದರಾಮಯ್ಯ ಅವರು ಮಂಡಿಸಿದ್ದಾರೆ. ಕೃಷಿ ಅಭಿವೃದ್ಧಿ ಪ್ರಾಧಿಕಾರ ರಚನೆ ಸ್ವಾಗತಾರ್ಹ. ಬರಗಾಲದ ಸಂದರ್ಭದಲ್ಲಿ ಕೆರೆಗಳಿಗೆ ನೀರು ತುಂಬಿಸುವುದು, ಏತ ನೀರಾವರಿಗೆ ಒತ್ತು, ಸ್ಥಳೀಯ ಬೀಜ ಮತ್ತು ನಾಟಿ ರಾಸುಗಳ ಸಂರಕ್ಷಣೆಗೆ ಆದ್ಯತೆ, ಸಿರಿಧಾನ್ಯಗಳ ಉತ್ತೇಜನಕ್ಕಾಗಿ 'ನಮ್ಮ ಮಿಲ್ಲೆಟ್' ಹೊಸ ಕಾರ್ಯಕ್ರಮ ಪ್ರಶಂಸೆಗೆ ಅರ್ಹವಾಗಿದೆ. ಆದರೆ, ಕೃಷಿ ಬೆಲೆ ಆಯೋಗವನ್ನು ಸಬಲೀಕರಣ ಮಾಡಬೇಕಿತ್ತು. ಕೃಷಿ ಪಂಪ್‌ಸೆಟ್ ಸಂಪರ್ಕಕ್ಕೆದುಬಾರಿ ವೆಚ್ಚ ಬಹುಮುಖ್ಯ ವಾಗಿ ರೈತರ ಮಕ್ಕಳಿಗೆ ಹೆಣ್ಣು ಸಿಗದಿರುವ ವಿಚಾರವನ್ನು ಪ್ರಸ್ತಾಪಿಸಬೇಕಿತ್ತು. ಒಟ್ಟಾರೆ ಸಮತೋಲನ ಕಾಯ್ದು ಕೊಂಡಿರುವ ಬಜೆಟ್ ಇದಾಗಿದೆ.

- ಬಡಗಲಪುರ ನಾಗೇಂದ್ರ, ರಾಜ್ಯಾಧ್ಯಕ್ಷ, ಕರ್ನಾಟಕ ರಾಜ್ಯ ರೈತ ಸಂಘ

'ಸ್ಟಾರ್ ಆಫ್ ಮೈಸೂರ್' ವಾರ್ಷಿಕೋತ್ಸವ: ಶುಭ ಕೋರಿಕೆ



'ಸ್ಟಾರ್ ಆಫ್ ಮೈಸೂರ್' 47ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಪತ್ರಿಕೆಯ ವ್ಯವಸ್ಥಾಪಕ ಸಂಪಾದಕರಾದ ಕೆ.ಜಿ. ವಿಕ್ರಮ್ ಮುತ್ತಣ್ಣ ಅವರನ್ನು ಮಾಜಿ ಮೇಯರ್ ಬಿ.ಕೆ.ಪ್ರಕಾಶ್, ಕಾಂಗ್ರೆಸ್ ಮುಖಂಡರೂ ಆದ ಒಕ್ಕಲಿಗರ ನಾಯಕ ವಿಕ್ರಾಂತ್ ಪಿ.ದೇವೇಗೌಡ, ಉದ್ಯಮಿ ಕೆ.ಚಂದ್ರಶೇಖರ್, ಭೈರವ ಗ್ರೂಪ್ ಮಾಲೀಕರಾದ ಮಾದೇವ್, ಸಮಾಜ ಸೇವಕರಾದ ಚೆನ್ನಪ್ಪ ಮತ್ತು ನಾಗಣ್ಣ ಆತ್ಮೀಯವಾಗಿ ಅಭಿನಂದಿಸಿ, ಶುಭಾಶಯ ಕೋರಿದರು.

ಏನಿಲ್ಲ...ಏನಿಲ್ಲ...ಬಜೆಟ್‌ನಲ್ಲಿ ಏನೇನೂ ಇಲ್ಲ...

ವಿಧಾನಸೌಧ ಹೊರಗೆ ಬಿಜೆಪಿ ನಾಯಕರ ಪ್ರತಿಭಟನೆ

ಬೆಂಗಳೂರು, ಫೆ.16– 2024–25ನೇ ಸಾಲಿನ ಬಜೆಟ್ ಮಂಡಿಸಲು ಆರಂಭಿಸಿದ ಕೆಲವೇ ಹೊತ್ತಿನಲ್ಲಿ ವಿರೋಧ ಪಕ್ಷದ ನಾಯಕರು ಸದನದಲ್ಲಿ ಗಲಾಟೆ, ಗದ್ದಲ ಆರಂಭಿಸಿದರು. ಏನಿಲ್ಲ.. ಏನಿಲ್ಲ ಎಂದು ಹಾಡು ಹೇಳಿ ಪ್ರತಿಭಟನೆ ಆರಂಭಿಸಿದ ಬಿಜೆಪಿ ನಾಯಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಬಜೆಟ್‌ನಲ್ಲಿ ಸಿಎಂ ಸಿದ್ದರಾಮಯ್ಯ ಕೇಂದ್ರ ಸರ್ಕಾರ ಕಡಿಮೆ ಜಿಎಸ್‌ಟಿ ಹಣ ಕೊಟ್ಟಿದೆ ಎಂದು ಆರೋಪ ಮಾಡಿದರು. ಆಗ ಸದನದಲ್ಲಿ ಪ್ರತಿಪಕ್ಷ ಬಿಜೆಪಿ ಸದಸ್ಯರು ಕೇಂದ್ರ ಸರ್ಕಾರದ ವಿರುದ್ಧ ಸುಳ್ಳು ಹೇಳಲು ವೇದಿಕೆ ಮಾಡಿಕೊಂಡಿದ್ದೀರಿ ಎಂದು ಕೆಂಡಾಮಂಡಲರಾಗಿ ಸಿಎಂ ಬಜೆಟ್ ಮಂಡನೆ ವೇಳೆ ಬುರುಡೆ, ಬುರುಡೆ ಎಂದು ಭಿತ್ತಿ ಪತ್ರಪ್ರದರ್ಶನ ಮಾಡಿ ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿದರು.

ವಿಧಾನಸೌಧ ಬಳಿ ಪ್ರತಿಭಟನೆ: ಬಜೆಟ್‌ನಲ್ಲಿ ಏನಿಲ್ಲ, ಓಳು ಬರೀ ಓಳು ಎಂದು ಘೋಷಣೆ ಕೂಗುತ್ತಾ ವಿಧಾನ ಸೌಧದ ಹೊರಗೆ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿದರು.

ಏನಿಲ್ಲ... ಏನಿಲ್ಲ... ಎಂದ ಪ್ರತಿಪಕ್ಷಗಳಿಗೆ ಸಿದ್ದರಾಮಯ್ಯ ತಿರುಗೇಟು!

ಬಿಜೆಪಿಯವರ ತಲೆಯಲ್ಲಿ ಏನಿಲ್ಲ.. ಏನೂ ಇಲ್ಲ

ಬೆಂಗಳೂರು, ಫೆ.16– ಬಿಜೆಪಿಯವರ ತಲೆಯಲ್ಲಿ ಏನಿಲ್ಲ.. ಏನೂ ಇಲ್ಲ. ಅವರು ಸಂಸದರಾಗುವುದಕ್ಕೆ ನಾಲಾಯಕ್ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಬಜೆಟ್ ಬಗ್ಗೆ ಏನಿಲ್ಲ... ಏನಿಲ್ಲ... ಎಂದು ಟೀಕಿಸಿದ ಪ್ರತಿಪಕ್ಷಗಳಿಗೆ ಶುಕ್ರವಾರ ತಿರುಗೇಟು ನೀಡಿದ್ದಾರೆ.

ಇಂದು ವಿಧಾನಸಭೆಯಲ್ಲಿ 2024–25ನೇ ಸಾಲಿನ ಬಜೆಟ್ ಮಂಡಿಸಿದ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಈ ಬಾರಿ 3,71,383 ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಲಾಗಿದೆ. ಇದು ಕಳೆದ ಬಜೆಟ್‌ಗಿಂತ 46,630 ಕೋಟಿ ರೂ. ಹೆಚ್ಚು ಗಾತ್ರದ ಬಜೆಟ್ ಎಂದರು.

ಗ್ಯಾರಂಟಿಗಳಿಂದ ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಹೇಳುತ್ತಿದ್ದಾರೆ. ಬಿಟ್ಟಿ ಗ್ಯಾರಂಟಿ ಕೊಟ್ಟಿದ್ದರಿಂದ ಆರ್ಥಿಕ ದಿವಾಳಿ ಅಂತಿದ್ದಾರೆ. ಆದರೆ, ಅಭಿವೃದ್ಧಿ ಕೆಲಸಗಳಿಗೂ ನಾವು ಅನುದಾನವನ್ನು ಕೊಟ್ಟಿದ್ದೇವೆ. ಬರ ಹಿನ್ನೆಲೆಯಲ್ಲಿ ಕೇಂದ್ರದ ಬಳಿ 18,171 ಕೋಟಿ ರೂ. ಕೇಳಿದ್ದೇವೆ. ಇದುವರೆಗೂ ಕೇಂದ್ರದಿಂದ ಒಂದು ರೂಪಾಯಿ ಸಹ ಬಂದಿಲ್ಲ. ಇದುವರೆಗೂ ಒಂದು ಮೀಟಿಂಗ್ ಕೂಡ ಮಾಡಿಲ್ಲ. ರಾಜ್ಯದಲ್ಲಿ ಬಿಜೆಪಿಯವರು ಬಾಯಿಗೆ ಬಂದಂತೆ ಮಾತನಾಡುತ್ತಾರೆ ಎಂದು ಕಿಡಿಕಾರಿದರು.

ಕೇಂದ್ರ ಸರ್ಕಾರ ರಾಜ್ಯಕ್ಕೆ ಇಲ್ಲಿವರೆಗೆ 1 ರೂಪಾಯಿ ಕೊಟ್ಟಿಲ್ಲ. ನಾವು ಸುಳ್ಳು ಹೇಳಿದ್ದರೆ ಅದನ್ನು ರಾಜ್ಯಪಾಲರು ಓದುತ್ತಿದ್ದರಾ? ಬಜೆಟ್ ಕೇಳುವುದಕ್ಕೆ ಆಗದೇ ವಿಲವಿಲ ಒದ್ದಾಡಿ ಎದ್ದೋದ್ರು. ಕೋಲೆ ಬಸವನ ತರ ತಲೆ ಅಲ್ಲಾಡಿಸುತ್ತಾರೆ. ಆದರೆ ಕರ್ನಾಟಕಕ್ಕೆ ಅನ್ಯಾಯ ಆಗಿದೆ ಎಂದು ಕೇಂದ್ರಕ್ಕೆ ಕೇಳಲ್ಲ. ಪಾರ್ಲಿಮೆಂಟ್‌ನಲ್ಲಿ ಬಿಜೆಪಿಯವರು ಯಾವತ್ತಾದರೂ ಮಾತನಾಡಿದ್ದಾರಾ? ಇವರು ಸಂಸದರಾಗುವುದಕ್ಕೆ ನಾಲಾಯಕ್ ಎಂದು ಬಿಜೆಪಿ ಸಂಸದರ ವಿರುದ್ಧ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಇಂದು ಪಾಲಿಕೆ ಬಜೆಟ್ ಮಂಡನೆ

ಮೈಸೂರು, ಫೆ. 16(ಆರ್‌ಕೆ)– ರಾಜ್ಯ ಬಜೆಟ್ ಮಂಡನೆಯಾದ ಬೆನ್ನಲ್ಲೇ ನಾಳೆ (ಫೆ. 17) ಮಧ್ಯಾಹ್ನ 3 ಗಂಟೆಗೆ ಮೈಸೂರು ಮಹಾನಗರ ಪಾಲಿಕೆಯ 2024–25ನೇ ಸಾಲಿನ ಆಯ–ವ್ಯಯ ಮಂಡನೆಯಾಗಿದೆ.

ಸಯ್ಯಾಜಿರಾವ್ ರಸ್ತೆಯ ಪಾಲಿಕೆ ಪ್ರಧಾನ ಕಚೇರಿಯ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಮುಖ್ಯ ಲೆಕ್ಕಾಧಿಕಾರಿಗಳು ಆಯ–ವ್ಯಯ ಮಂಡಿಸುವರು. ಚುನಾಯಿತ ಜನಪ್ರತಿನಿಧಿಗಳ ಅವಧಿ ಮುಕ್ತಾಯಗೊಂಡಿರುವುದರಿಂದ ಅಧಿಕಾರಿಗಳೇ ಪಾಲಿಕೆಯ ಬಜೆಟ್ ಮಂಡಿಸಲಿದ್ದಾರೆ. ಆಯುಕ್ತರು, ಕೌನ್ಸಿಲ್ ಕಾರ್ಯದರ್ಶಿ ಸೇರಿದಂತೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿರುವರು.

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 9ರಲ್ಲಿ

ಮುಂಬರುವ ಲೋಕಸಭಾ ಚುನಾವಣೆಯಲ್ಲಿ

27 ಸ್ಥಾನಗಳಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿಗೆ ಜಯ

ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ವಿಶ್ವಾಸ



ನಂಜನಗೂಡಿನ ಚಾಮಲಾಪುರ ಬೀದಿಯಲ್ಲಿ 'ಮತ್ತೊಮ್ಮೆ ಮೋದಿ ಸರ್ಕಾರ' ಗೋಡೆ ಬರಹ ಕಾರ್ಯಕ್ರಮಕ್ಕೆ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಚಾಲನೆ ನೀಡಿದರು.

ನಂಜನಗೂಡು, ಫೆ.16– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 27 ಸ್ಥಾನಗಳಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಅಭ್ಯರ್ಥಿಗಳು ಜಯ ಗಳಿಸಲಿದ್ದು, ಮೋದಿ ಅವರು ಮತ್ತೊಮ್ಮೆ ಪ್ರಧಾನಿಯಾಗಲಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ತಿಳಿಸಿದರು.

ಇಲ್ಲಿನ ಶ್ರೀಕಂಠೇಶ್ವರ ದೇವಾಲಯಕ್ಕೆ ಆಗಮಿಸಿ ದೇವರ ದರ್ಶನ ಪಡೆದು ನಗರದ ಚಾಮಲಾಪುರ ಬೀದಿಯಲ್ಲಿ 'ಮತ್ತೊಮ್ಮೆ ಮೋದಿ ಸರ್ಕಾರ' ಎಂಬ ಗೋಡೆ ಬರಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಳೆದ 10 ವರ್ಷಗಳಲ್ಲಿ ಪ್ರಧಾನಿ ಮೋದಿ ಅವರು ಬಡವರಿಗಾಗಿ ಹಲವು ವಿಶೇಷ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಆದ್ದರಿಂದ ಪ್ರಧಾನಿ ಮೋದಿ ಮತ್ತೊಮ್ಮೆ ಪ್ರಧಾನಿಯಾಗಬೇಕು ಎಂಬುದು ದೇಶದ ಕೋಟ್ಯಾಂತರ ಜನರ ಆಶಯವಾಗಿದೆ. ಆ ನಿಟ್ಟಿನಲ್ಲಿ ಮೋದಿ ಅವರ ಕೈ ಬಲಪಡಿಸಲು ನಾವೆಲ್ಲರೂ ಕೆಲಸ ಮಾಡುತ್ತಿದ್ದೇವೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ 25 ಕ್ಷೇತ್ರಗಳಲ್ಲಿ ಜಯ ಸಾಧಿಸಿತ್ತು. ಈ ಬಾರಿ ಖಾಸಗಿ ಸಂಸ್ಥೆ ನಡೆಸಿದ ಸಮೀಕ್ಷೆಯಲ್ಲಿ 22 ಸ್ಥಾನಗಳಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ವರದಿ ಬಂದಿದೆ. ಆದರೆ ಕಳೆದ ಬಾರಿಗಿಂದ 2 ಸ್ಥಾನ ಹೆಚ್ಚು ಸ್ಥಾನ ಗೆಲ್ಲುವ ವಾತಾವರಣವಿದೆ ಎಂದರು.

ಮರಳಿ ಮನೆಗೆ ಬಂದಿದ್ದೇನೆ: ನನಗೂ ಬಿಜೆಪಿ ಪಕ್ಷಕ್ಕೂ ಆತ್ಮೀಯ ಸಂಬಂಧವಿದೆ. ನಾನು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದಾಗ ರಾಜ್ಯದ ಸಾವಿರಾರು ಕಾರ್ಯಕರ್ತರು, ಮಾಜಿ ಶಾಸಕರು, ಮುಖಂಡರು ಮತ್ತೆ ಬಿಜೆಪಿಗೆ ವಾಪಾಸ್ಸಾಗುವಂತೆ ನನ್ನ ಮೇಲೆ ಒತ್ತಡ ಹಾಕುತ್ತಿದ್ದರು. ಅವರ ಒತ್ತಡಕ್ಕೆ ಮಣಿದು ಬಿಜೆಪಿ ಸೇರ್ಪಡೆಗೊಳ್ಳುವ ಮೂಲಕ ನಾನು ಮರಳಿ ಮನೆಗೆ ವಾಪಸ್ ಬಂದಿದ್ದೇನೆ. ನಮ್ಮ ಮನೆಗೆ ಬರಲು ನನಗೆ ಯಾವುದೇ ವಿಶೇಷ ಸ್ವಾಗತ ಬೇಕಿಲ್ಲ. ಜೊತೆಗೆ ನಾನು ಕಾಂಗ್ರೆಸ್ ಬಿಟ್ಟು ಬಹಳ ದಿನ ಕಳೆದಿದೆ. ಆ ಬಗ್ಗೆ ಚರ್ಚೆ ಬೇಕಿಲ್ಲ ಎಂದರು.

ವರಿಷ್ಠರು ಬಯಸಿದರೆ ಸ್ಪರ್ಧೆ: ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಬಗ್ಗೆ ವರಿಷ್ಠರೊಂದಿಗೆ ಚರ್ಚೆ ನಡೆಸಿಲ್ಲ. ಪಕ್ಷದ ವರಿಷ್ಠರು ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವಂತೆ ಸೂಚನೆ ನೀಡಿದರೆ ಸ್ಪರ್ಧಿಸುತ್ತೇನೆ ಎಂದು ಸ್ಪಷ್ಟಪಡಿಸಿದರು.

ಈ ವೇಳೆ ಮಾಜಿ ಶಾಸಕ ಬಿ.ಹರ್ಷವರ್ಧನ್, ಬಿಜೆಪಿ ಮಂಡಲ ಅಧ್ಯಕ್ಷ ಪಿ.ಮಹೇಶ್, ನಗರಾಧ್ಯಕ್ಷ ಶ್ರೀನಿವಾಸರೆಡ್ಡಿ, ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗ ನಾಯಕ, ಮುಖಂಡರಾದ ಬಾಲಚಂದ್ರು, ಮಹೇಶ್, ಉಮೇಶ್ ಮೋದಿ, ಸಿದ್ದರಾಜು, ನಗರಸಭಾ ಸದಸ್ಯ ಮಹದೇವಪ್ರಸಾದ್ ಸೇರಿದಂತೆ ಹಲವರಿದ್ದರು.

ಕುಟುಂಬ ಸಮೇತ ಶ್ರೀಕಂಠೇಶ್ವರನ ದರ್ಶನ ಪಡೆದ ಶೆಟ್ಟರ್

ಇದಕ್ಕೂ ಮುನ್ನ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಪತ್ನಿ ಶಿಲ್ಪ ಶೆಟ್ಟರ್ ಜೊತೆಗೂಡಿ ಶ್ರೀಕಂಠೇಶ್ವರನ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ದೇವಾಲಯದ ಗರ್ಭಗುಡಿಯಲ್ಲಿ ಕೆಲಕಾಲ ಧ್ಯಾನಸಕ್ತರಾದರು. ನಂತರ ಪಾರ್ವತಿ ದೇವಿ, ನಾರಾಯಣಸ್ವಾಮಿ, ಚಂಡಿಕೇಶ್ವರ ದೇವರ ದರ್ಶನ ಪಡೆದರು. ದೇವಾಲಯದ ವತಿಯಿಂದ ಅವರಿಗೆ ಶೇಷವಸ್ತ್ರ, ಫಲ, ತಾಂಬೂಲ ನೀಡಿ ಗೌರವಿಸಲಾಯಿತು.

ಹುಣಸೂರು ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಸ್ವಾಗತ



ಹುಣಸೂರು ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾವನ್ನು ಸ್ವಾಗತಿಸಲಾಯಿತು.

ತಿ.ನರಸೀಪುರ, ಫೆ.16– ಭಾರತದ ಸಂವಿಧಾನ ಅತೀ ದೊಡ್ಡ ಹಾಗೂ ಲಿಖಿತ ಸಂವಿಧಾನವಾಗಿದೆ. ಸಂವಿಧಾನದ ಬಗ್ಗೆ ಅರಿವು ಮೂಡಿಸಲು ಸಂವಿಧಾನ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಬಿಳಿಗೆರೆ ಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಮಹದೇವಪ್ಪ ತಿಳಿಸಿದರು.

ತಾಲೂಕಿನ ಹುಣಸೂರು ಗ್ರಾಮದಲ್ಲಿ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಸಂವಿಧಾನ ಜಾಗೃತಿ ಜಾಥಾವನ್ನು ಮೆರವಣಿಗೆ ಮೂಲಕ ಅದ್ಧೂರಿಯಾಗಿ ಬರಮಾಡಿಕೊಂಡು ಮಾತನಾಡಿದ ಅವರು, ವಿದ್ಯಾರ್ಥಿಗಳು ನವ ರಾಷ್ಟ್ರ ನಿರ್ಮಾಣ ಮಾಡಲು ಈ ರಥ ಸಹಕಾರಿಯಾಗಲಿದೆ ಎಂದರು.

ಡಾ.ಬಾಬು ಜಗಜೀವನರಾಂ ಸಂಘದ ಅಧ್ಯಕ್ಷ ಪುಟ್ಟಯ್ಯ ಮಾತನಾಡಿ, ಸಂವಿಧಾನವು ಸಮಾನತೆ, ಭ್ರಾತೃತ್ವ, ಏಕತೆ ತರುವಲ್ಲಿ ತನ್ನದೇ ಆದ ಪಾತ್ರ ವಹಿಸಿದೆ. ಸಂವಿಧಾನದ ಮಹತ್ವವನ್ನು ಮನೆ ಮನೆಗೆ ತಲುಪಿಸುವ ಪ್ರಯತ್ನವನ್ನು ರಾಜ್ಯ ಸರ್ಕಾರ ಜಾಗೃತಿ ಜಾಥಾ ಮೂಲಕ ಮಾಡುತ್ತಿದೆ. ಸಂವಿಧಾನ ಜಾಗೃತಿ ಜಾಥಾ ಕೇವಲ ಒಂದು ಸೀಮಿತ ಸಮುದಾಯಕ್ಕೆ ಮೀಸಲಾಗಿಲ್ಲ. ಎಲ್ಲ ವರ್ಗಕ್ಕೂ ಇದು ಅನುಕೂಲ ಕಲ್ಪಿಸಿದೆ ಎಂದರು.

ಸಂವಿಧಾನ ಪೀಠಿಕೆ, ಜವಾಬ್ದಾರಿ ಮತ್ತು ಅದರ ಮಹತ್ವ ಸಾರುವ ಸಂವಿಧಾನ ಜಾಗೃತಿ ಜಾಥಾವನ್ನು ಗ್ರಾಪಂ ಅಧ್ಯಕ್ಷೆ ಚಂದ್ರಮ್ಮ, ಡೈರಿ ಅಧ್ಯಕ್ಷ ಮಹದೇವಪ್ಪ, ಉಪಾಧ್ಯಕ್ಷ ಏಳುಮಲೆ ಮಂಜು ಸೇರಿದಂತೆ ಗ್ರಾಮಸ್ಥರು ಬರಮಾಡಿಕೊಂಡರು.

ಈ ವೇಳೆ ಕಿರಗಸೂರು ಗ್ರಾಪಂ ಉಪಾಧ್ಯಕ್ಷೆ ಚಿನ್ನತಾಯಮ್ಮ, ಪಿಡಿಓ ಧರಣೇಶ್, ಕಾರ್ಯದರ್ಶಿ ಮೀನಾಕ್ಷಿ, ಸದಸ್ಯರಾದ ಶಿವರಾಜು, ಸಿ.ನಿಂಗರಾಜು, ನಾಗರಾಜು, ಭಾಗ್ಯ, ಎಂ.ಮಹೇಶ್, ರಾಜೇಶ್ವರಿ, ಗಿರಿಜಮ್ಮ, ಸರೋಜಮ್ಮ, ಜ್ಯೋತಿ, ಮಹದೇವಸ್ವಾಮಿ, ಪಿ.ನಾಗರಾಜು, ಮಂಗಳಮ್ಮ, ನಾಗರತ್ನಮ್ಮ, ಕಾಮಿನಿ, ಗಿರೀಶ್, ಗುತ್ತಿಗೆದಾರ ಬಸವರಾಜ್ ಸೇರಿದಂತೆ ಗ್ರಾಮಸ್ಥರು, ಅಧಿಕಾರಿ ವರ್ಗದವರು ಹಾಜರಿದ್ದರು.

ಕಾರಿಗೆ ಟಿಪ್ಪರ್ ಡಿಕ್ಕಿ: ನಾಲ್ವರಿಗೆ ಗಂಭೀರ ಗಾಯ



ಅಪಘಾತದಲ್ಲಿ ನಜ್ಜುಗುಜ್ಜಾಗಿರುವ ಕಾರು, ಪಲ್ಟಿಯಾಗಿರುವ ಟಿಪ್ಪರ್.

ನಂಜನಗೂಡು, ಫೆ16– ಕಾರಿಗೆ ಟಿಪ್ಪರ್ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಮೈಸೂರು–ಊಟಿ ರಾಷ್ಟ್ರೀಯ ಹೆದ್ದಾರಿಯ ತಾಲೂಕಿನ ಎಲಚಗೆರೆ ಬಳಿ ನಡೆದಿದೆ. ಬಿಜೆಪಿ ರಾಜ್ಯ ಎಸ್ಸಿ ಯುವ ಮೋರ್ಚಾ ಅಧ್ಯಕ್ಷರೂ ಆದ ಬೆಂಗಳೂರಿನ ಯಲಹಂಕ ನಿವಾಸಿ ಜಗದೀಶ್(40), ಜಾನ್ (40), ಅಲಸೂರು ಬಡಾವಣೆಯ ಸುಜಯ್ (29) ಮತ್ತು ಸತೀಶ್(34) ಗಾಯಗೊಂಡವರು. ಈ ಪೈಕಿ ಜಗದೀಶ್ ಮತ್ತು ಜಾನ್ ಅವರ ಸ್ಥಿತಿ ಗಂಭೀರವಾಗಿದ್ದು, ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ. ಸುಜಯ್ ಮತ್ತು ಸತೀಶ್ ಗಂಭೀರವಾಗಿ ಗಾಯಗೊಂಡಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ನಾಲ್ವರನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಬಂಡೀಪುರಕ್ಕೆ ಪ್ರವಾಸ ಬಂದಿದ್ದ ಜಗದೀಶ್ ಮತ್ತು ಸ್ನೇಹಿತರು ವಾಪಸ್ ಬೆಂಗಳೂರಿಗೆ ತೆರಳುತ್ತಿದ್ದ ವೇಳೆ ತಾಲೂಕಿನ ಎಲಚಗೆರೆ ಬೋರೆ ಬಳಿ ಡಸ್ಟ್ ತುಂಬಿದ ಟಿಪ್ಪರ್ ವೇಗವಾಗಿ ಬಂದು ಕಾರಿಗೆ ಡಿಕ್ಕಿ ಹೊಡೆದ ಪರಿಣಾಮ ಕಾರು ನಜ್ಜುಗುಜ್ಜಾಗಿ ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕಾರಿಗೆ ಡಿಕ್ಕಿ ಹೊಡೆದ ರಭಸಕ್ಕೆ ಟಿಪ್ಪರ್ ಪಲ್ಟಿಯಾಗಿದ್ದು, ಚಾಲಕನ ನಿರ್ಲಕ್ಷ್ಯ ಹಾಗೂ ಅತಿ ವೇಗ ಘಟನೆಗೆ ಕಾರಣ ಎನ್ನಲಾಗಿದೆ. ಅಪಘಾತದ ಬಳಿಕ ಟಿಪ್ಪರ್ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ಈ ಸಂಬಂಧ ನಂಜನಗೂಡು ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವೈಭವದ ಅರ್ಕೇಶ್ವರಸ್ವಾಮಿ ಬ್ರಹ್ಮ ರಥೋತ್ಸವ



ಕೆ.ಆರ್.ನಗರ, ಫೆ.16– ಪಟ್ಟಣದ ಹೊರ ವಲಯದ ಹಳೆ ಎಡತೊರೆಯಲ್ಲಿ ರಥಸಪ್ತಮಿ ಅಂಗವಾಗಿ ಮೀನಾಕ್ಷಿ ಸಮೇತ ಅರ್ಕೇಶ್ವರಸ್ವಾಮಿ ಬ್ರಹ್ಮ ರಥೋತ್ಸವ ಶುಕ್ರವಾರ ವೈಭವದಿಂದ ನಡೆಯಿತು.

ಬೆಳಗ್ಗೆ 10.05 ರಿಂದ 10.30ರವರೆಗೆ ಸಲ್ಲುವ ಮೇಷ ಲಗ್ನದಲ್ಲಿ ರಥೋತ್ಸವಕ್ಕೆ ಶಾಸಕ ಡಿ.ರವಿಶಂಕರ್ ತಮ್ಮ ಪತ್ನಿ ಸುನೀತಾ ಅವರೊಂದಿಗೆ ಚಾಲನೆ ನೀಡಿದರು. ಈ ವೇಳೆ ಕೆ.ಆರ್.ನಗರ, ಸಾಲಿಗ್ರಾಮ ತಾಲೂಕಿನ ಸಾವಿರಾರು ಭಕ್ತರು ರಥಕ್ಕೆ ಹಣ್ಣು ಜವನ ಎಸೆದು ಹರಕೆ ತೀರಿಸಿ, ಜಯಘೋಷ ಕೂಗಿ ದೇವಾಲಯದ ಸುತ್ತ ಒಂದು ಸುತ್ತು ರಥವನ್ನು ಎಳೆದು ಪುನೀತರಾದರು.

ರಥೋತ್ಸವ ಅಂಗವಾಗಿ ಬೆಳಗ್ಗೆಯಿಂದಲೇ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯ ನಡೆಯಿತು. ಅಲ್ಲದೇ ದೇವರಿಗೆ ವಿಶಿಷ್ಟ ಅಲಂಕಾರ ಮಾಡಿ, ಮಹಾ ಮಂಗಳಾರತಿ ನೆರವೇರಿಸಿ ಭಕ್ತರ ದರ್ಶನಕ್ಕೆ ಅನುವು ಮಾಡಿ ಕೊಡಲಾಯಿತು. ಸರತಿ ಸಾಲಿನಲ್ಲಿ ನಿಂತು ಭಕ್ತರು ಸ್ವಾಮಿಯ ದರ್ಶನ ಪಡೆದರು. ಇನ್ನು ಕೆಲವು ಭಕ್ತರು ಕಾವೇರಿ ನದಿಯಲ್ಲಿ ಪುಣ್ಯ ಸ್ನಾನ ಮಾಡಿದರು.

ಇದೇ ಮೊದಲ ಬಾರಿಗೆ ಪಟ್ಟಣದ ತೋಪಮ್ಮನವರ ದೇವಾಲಯದಿಂದ ಅರ್ಕೇಶ್ವರ ದೇವಾಲಯದವರೆಗೆ ದೀಪಾಲಂಕಾರ ಮಾಡಿದ್ದು ವಿಶೇಷವಾಗಿತ್ತು. ಭಕ್ತರಿಗೆ ಕೆಪಿಸಿಸಿ ಕಾರ್ಯಕಾರಿಣಿ ಸದಸ್ಯ ದೊಡ್ಡಸ್ವಾಮೇಗೌಡ ಮತ್ತು ವನಜಾಕ್ಷಮ್ಮ ದೊಡ್ಡಸ್ವಾಮೇಗೌಡ, ಪುರಸಭೆ ಸದಸ್ಯರಾದ ಪ್ರಕಾಶ್, ನಟರಾಜು, ಶಿವಕುಮಾರ್, ಶಂಕರ್, ಅಶ್ವಿನಿ, ಶಂಕರ್ ಸ್ವಾಮಿ, ಮುಖಂಡರಾದ ನೇತ್ರಾವತಿ, ಸುನೀತಾ, ಸರಿತಾ, ಲತಾ, ವಂದನ ಮತ್ತು ಇತರರು ಲಾಡು ಪ್ರಸಾದ ವಿತರಿಸಿದರು. ರಥೋತ್ಸವದಲ್ಲಿ ಎಪಿಸಿಎಂಸಿ ಮಾಜಿ ಉಪಾಧ್ಯಕ್ಷ ಹೆಚ್.ಹೆಚ್.ನಾಗೇಂದ್ರ ಟಿಎಪಿಸಿಎಂಎಸ್ ನಿರ್ದೇಶಕ ರಾದ ಹೆಚ್.ಪಿ.ಪ್ರಶಾಂತ್, ರವಿ, ತೋಟಪ್ಪ ನಾಯಕ, ಪುರಸಭೆ ಮಾಜಿ ಸದಸ್ಯ ಕೆ.ವಿನಯ್, ನಗರ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ವೈ.ಎಸ್.ಕುಮಾರ್, ಮಾಜಿ ನಿರ್ದೇಶಕರಾದ ಮಹೇಶ್, ಕೆ.ಎನ್.ಪ್ರಸನ್ನ, ತಹಸೀಲ್ದಾರ್ ಸಿ.ಎಸ್.ಪೂರ್ಣಿಮಾ ಸೇರಿದಂತೆ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು.

ಸವಿತಾ ಸಮಾಜಕ್ಕೆ ಒಳಮೀಸಲಾತಿ ಜಾರಿಗೊಳಿಸಿ



ಟಿ.ದೊಡ್ಡಪುರದಲ್ಲಿ ಶ್ರೀ ಸವಿತಾ ಮಹರ್ಷಿ ಜಯಂತಿ ನಡೆಯಿತು

ತಿ.ನರಸೀಪುರ, ಫೆ.16– ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕವಾಗಿ ತೀರಾ ಹಿಂದುಳಿದಿರುವ ಸವಿತಾ ಸಮಾಜಕ್ಕೆ ಒಳ ಮೀಸಲಾತಿ ಜಾರಿಗೊಳಿಸುವ ಮೂಲಕ ಸಾಮಾಜಿಕ ನ್ಯಾಯ ದೊರಕಿಸಿ ಕೊಡಬೇಕು ಎಂದು ಸವಿತಾ ಸಮಾಜದ ತಾಲೂಕು ಅಧ್ಯಕ್ಷ ನಾಗೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ತಾಲೂಕಿನ ಟಿ.ದೊಡ್ಡಪುರದಲ್ಲಿ ಸವಿತಾ ಸಮಾಜ ಕ್ಷೇಮಾಭಿವೃದ್ಧಿ ಸಂಘದಿಂದ ಆಯೋಜಿಸಿದ್ದ ಶ್ರೀ ಸವಿತಾ ಮಹರ್ಷಿ ಜಯಂತಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ನಾವು ಕಡಿಮೆ ಜನಸಂಖ್ಯೆಯುಳ್ಳ ಸಮುದಾಯವಾಗಿದ್ದು, ಯಾವುದೇ ಕ್ಷೇತ್ರದಲ್ಲೂ ಮುಂದುವರೆಯಲು ಆಗುತ್ತಿಲ್ಲ. ಹೀಗಾಗಿ ಒಳ ಮೀಸಲಾತಿ ಕಲ್ಪಿಸುವಂತೆ ಅನೇಕ ವರ್ಷಗಳಿಂದ ಸರ್ಕಾರವನ್ನು ಒತ್ತಾಯಿಸುತ್ತಾ ಬಂದಿದ್ದೇವೆ. ಬೆಳಗಾವಿ ಅಧಿವೇಶನದ ವೇಳೆ ನಮ್ಮ ಸಮುದಾಯದ ಸ್ವಾಮಿಗಳು ಹುಬ್ಬಳ್ಳಿಯಿಂದ ಬೆಳಗಾವಿಗೆ ಪಾದಯಾತ್ರೆ ಮಾಡಿ ಸರ್ಕಾರದ ಗಮನ ಸೆಳೆದಿದ್ದಾರೆ. ಮೈಸೂರು ಭಾಗದಿಂದಲೂ ಅನೇಕರು ಪಾದಯಾತ್ರೆಯಲ್ಲಿ ಭಾಗವಹಿಸಿ ಒಳ ಮೀಸಲಾತಿಗೆ ಒತ್ತಾಯಿಸಿದ್ದಾರೆ. ಆದರೆ ಈವರೆಗೆ ಒಳ ಮೀಸಲಾತಿ ಕಲ್ಪಿಸಿಲ್ಲ. ಒಳಮೀಸಲಾತಿ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಟಿ.ದೊಡ್ಡಪುರ ಸವಿತಾ ಸಮಾಜದ ಅಧ್ಯಕ್ಷ ಚಿಕ್ಕಣ್ಣಸ್ವಾಮಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷ ಪುಟ್ಟಸ್ವಾಮಿ, ಖಜಾಂಚಿ ನಾಗರಾಜು, ಸವಿತಾ ಸಮಾಜದ ಖಜಾಂಚಿ ಸಿದ್ದೇಶ್, ಕಾರ್ಯದರ್ಶಿ ಚೇತನ್, ಉಪಾಧ್ಯಕ್ಷ ನಂಜುಂಡಶೆಟ್ಟಿ, ಎಸ್.ಅನಿಲ್ ಕುಮಾರ್, ಮಂಜೇಶ್, ಎಸ್.ಸಿದ್ದೇಶ್, ಅಭಿಷೇಕ್, ನಾಗೇಂದ್ರ ಪ್ರಸಾದ್, ಸಿ.ಡಿ.ಸಿದ್ದಯ್ಯ, ನವೀನ್, ಮಲ್ಲೇಶ್, ಶಾರದಮ್ಮ, ನಂಜುಂಡಮ್ಮ, ಸಿದ್ದಪ್ಪಾಜಿ, ಮಹದೇವಶೆಟ್ಟಿ, ರಾಜೇಗೌಡ ಇನ್ನಿತರರಿದ್ದರು.

ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಹುಣಸೂರು, ನಂಜನಗೂಡಿನಲ್ಲಿ ಪ್ರತಿಭಟನೆ



ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಹುಣಸೂರಿನಲ್ಲಿ ವಿವಿಧ ಸಂಘಟನೆಗಳ ಕಾರ್ಯಕರ್ತರು ಹಾಗೂ ನಂಜನಗೂಡಿನಲ್ಲಿ ಅಂಗನವಾಡಿ ಕಾರ್ಯಕರ್ತರು ಧರಣಿ ನಡೆಸಿದರು.

ಹುಣಸೂರು/ನಂಜನಗೂಡು, ಫೆ.16– ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಹುಣಸೂರಲ್ಲಿ ವಿವಿಧ ಸಂಘಟನೆಗಳ ಕಾರ್ಯಕರ್ತರು ಹಾಗೂ ನಂಜನಗೂಡಲ್ಲಿ ಅಂಗನವಾಡಿ ಕಾರ್ಯಕರ್ತರು ಶುಕ್ರವಾರ ಪ್ರತಿಭಟನೆ ನಡೆಸಿದರು.

ಹುಣಸೂರು: ದೆಹಲಿಗೆ ತೆರಳುತ್ತಿದ್ದ ರೈತರ ಮೇಲಿನ ದೌರ್ಜನ್ಯ ಖಂಡಿಸಿ ಹಾಗೂ ರೈತ, ಕೂಲಿಕಾರರು ಮತ್ತು ಕಾರ್ಮಿಕರ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಸಿಐಟಿಯು ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಸಂವಿಧಾನ ಸರ್ಕಲ್‌ನಲ್ಲಿ ಜಮಾಯಿಸಿದ ದಲಿತ ಹಕ್ಕುಗಳ ಸಮಿತಿ, ರಾಜ್ಯ ರೈತ ಸಂಘ, ನಗರ ಕಾರ್ಮಿಕರ ಸಂಘ ಮತ್ತು ಡಿಎಸ್ಎಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸಿಐಟಿಯು ತಾಲೂಕು ಸಂಚಾಲಕ ವಿ.ಬಸವರಾಜು ಮಾತನಾಡಿ, ರೈತ ಹಾಗೂ ಕಾರ್ಮಿಕರ ಪರ ನಿಲ್ಲಬೇಕಾದ ಸರ್ಕಾರಗಳು ವಿರೋಧಿ ಧೋರಣೆ ಅನುಸರಿಸಿ ಅವರ ಬದುಕನ್ನು ಕಿತ್ತುಕೊಳ್ಳಲು ಹೊರಟಿವೆ. ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ದೆಹಲಿಗೆ ತೆರಳುತ್ತಿದ್ದ ರೈತರ ಮೇಲೆ ಕೇಂದ್ರ ಸರ್ಕಾರ ಹಲ್ಲೆ ನಡೆಸಿದೆ. ಅಲ್ಲದೇ ರೈತರ ಪ್ರತಿಭಟನೆ ಹತ್ತಿಕ್ಕಲು ಹೊರಟಿದೆ. ಅದರ ಬದಲಿಗೆ ರೈತರೊಂದಿಗೆ ಮಾತುಕತೆ ನಡೆಸಿ ಬೇಡಿಕೆ ಈಡೇರಿಕೆಗೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಕುಮಾರ್ ಮಾತನಾಡಿ, ರೈತ ತಾನು ಬೆಳೆದ ಬೆಳೆಗೆ ಕನಿಷ್ಠ ಬೆಂಬಲ ಬೆಲೆ ನೀಡುವಂತೆ ಕೇಳುವುದೇ ತಪ್ಪಾಗಿದೆ ಇದರ ವಿರುದ್ಧ ದೇಶದ ಎಲ್ಲಾ ಸಂಘಟನೆಗಳು ಒಗ್ಗೂಡಿ ಕೇಂದ್ರ ಸರ್ಕಾರಕ್ಕೆ ಬುದ್ಧಿ ಕಲಿಸುವ ಕೆಲಸ ಮಾಡಬೇಕಾಗಿದೆ ಎಂದರು.

ಅಂಗನವಾಡಿ ತಾಲೂಕು ಕಾರ್ಯದರ್ಶಿ ಕಾಮ್ರೇಡ್ ಪುಷ್ಪ ಮಾತನಾಡಿದರು. ಪ್ರತಿಭಟನೆಯಲ್ಲಿ ಸಿಐಟಿಯು ತಾಲೂಕು ಸಹ ಸಂಚಾಲಕ ಶಿವರಾಮು, ಡಿಎಸ್ಎಸ್ ಜಿಲ್ಲಾ ಸಂಚಾಲಕ ವೆಂಕಟೇಶ್, ತಾಲೂಕು ಅಂಗನವಾಡಿ ನೌಕರ ಸಂಘದ ತಾಲೂಕು ಅಧ್ಯಕ್ಷೆ ಮಂಗಳ ಗೌರಮ್ಮ, ಖಜಾಂಚಿ ಕಲಾವತಿ, ಉಪಾಧ್ಯಕ್ಷ ನಾಗಮ್ಮ, ನಗರ ಕಾರ್ಮಿಕ ಸಂಘದ ಅಧ್ಯಕ್ಷ ಚಂದ್ರೇಗೌಡ, ಗೌರವಾಧ್ಯಕ್ಷ ಹೆಚ್.ಎಂ ಶ್ರೀಧರ್, ಮುಖಂಡರಾದ ಪ್ರೇಮ, ರೇಖಾ, ಮಣಿ, ಡಿಎಸ್ಎಸ್ ತಾಲೂಕು ಅಧ್ಯಕ್ಷ ಮಹದೇವು, ರಾಜ್ಯ ರೈತ ಸಂಘದ ತಾಲೂಕು ಅಧ್ಯಕ್ಷ ಚಿಕ್ಕಣ್ಣ, ಕಾರ್ಯದರ್ಶಿ ರಾಮೇಗೌಡ, ದಸಂಸ ನಗರ ಸಂಚಾಲಕ ರಾಜು, ನಗರ ಕಾರ್ಮಿಕರ ಸಂಘದ ಮಹದೇವು, ಲಕ್ಷ್ಮಣ, ಚೆಲುವರಾಜು, ಕೆಂಪರಾಮಯ್ಯ, ಮುದಾಸೀರ್ ಸೇರಿದಂತೆ ಇನ್ನಿತರರಿದ್ದರು.

ನಂಜನಗೂಡು: ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಅಂಗನವಾಡಿ ಕಾರ್ಯಕರ್ತರು ಕಾರ್ಮಿಕ ಸಂಘಟನೆಗಳ ನೇತೃತ್ವದಲ್ಲಿ ಶುಕ್ರವಾರ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ವಿಶ್ವೇಶ್ವರಯ್ಯ ವೃತ್ತದ ಬಳಿ ಜಮಾಯಿಸಿದ ಪ್ರತಿಭಟನಾಕಾರರು ಪಾದಯಾತ್ರೆ ಮೂಲಕ ಮಿನಿ ವಿಧಾನಸೌಧಕ್ಕೆ ತೆರಳಿ ಮುಖ್ಯದ್ವಾರದಲ್ಲಿ ಧರಣಿ ನಡೆಸಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸಿಐಟಿಯು ತಾಲೂಕು ಪ್ರಧಾನ ಕಾರ್ಯದರ್ಶಿ ಧನಂಜಯ ಮಾತನಾಡಿ, ದೇಶಾದ್ಯಂತ ರೈತರು ಮತ್ತು ಕಾರ್ಮಿಕ ಸಂಘಟನೆಗಳು ಹೋರಾಟಕ್ಕೆ ಕರೆ ನೀಡಿದ್ದು, ಕಾರ್ಮಿಕ ತಿದ್ದುಪಡಿ ಮಸೂದೆ ಜಾರಿ ವಿರೋಧಿಸಿ ಹೋರಾಟ ನಡೆಸಲಾಗುತ್ತಿದೆ. ಕಾರ್ಮಿಕರಿಗೆ ಸಮಾನ ವೇತನ ನೀಡಬೇಕು. ಅಂಗನವಾಡಿ ಕಾರ್ಯಕರ್ತೆಯರಿಗೆ ವೇತನ ಹೆಚ್ಚಳ ಮಾಡಬೇಕು. ಈ ಸಂಬಂಧ ರಾಜ್ಯದಲ್ಲಿ 2 ಕೋಟಿ ಸಹಿ ಸಂಗ್ರಹ ಮಾಡಲಾಗಿದೆ. ಕೃಷಿ ಕ್ಷೇತ್ರವನ್ನು ಬಲಗೊಳಿಸಲು ಸ್ವಾಮಿನಾಥನ್ ಆಯೋಗದ ವರದಿ ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಅಂಗನವಾಡಿ ನೌಕರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನಂದ ಮಾತನಾಡಿ, ದೆಹಲಿಯಲ್ಲಿ ನಡೆಯುತ್ತಿರುವ ರೈತ ಮತ್ತು ಕಾರ್ಮಿಕರ ಹೋರಾಟವನ್ನು ನಾವು ಬೆಂಬಲಿಸುತ್ತೇವೆ. ಕೇಂದ್ರ ಸರ್ಕಾರ ಅಂಗನವಾಡಿ ಕಾರ್ಯಕರ್ತೆಯರಿಗೆ ಬಜೆಟ್ ನಲ್ಲಿ ಯಾವುದೇ ಅನುದಾನ ನೀಡಿಲ್ಲ. ಹಸಿವು ಸೂಚ್ಯಂಕದಲ್ಲಿ ಭಾರತ 111ನೇ ಸ್ಥಾನಕ್ಕೆ ಬಂದಿದ್ದು ಇದು ಕಳವಳಕಾರಿ ಸಂಗತಿ. ದೇಶದಲ್ಲಿ ಬೆಲೆ ಏರಿಕೆ ಹೆಚ್ಚಾಗಿದೆ. ಇನ್ನು ರಾಜ್ಯ ಸರ್ಕಾರದ ಬಜೆಟ್ ದುಡಿಯುವ ವರ್ಗಕ್ಕೆ ನಿರಾಸೆ ಮೂಡಿಸಿದ್ದು, ನಿವೃತ್ತ ಅಂಗನವಾಡಿ ಕಾರ್ಯಕರ್ತೆಯರಿಗೆ 5 ಲಕ್ಷ, ಸಹಾಯಕಿಯರಿಗೆ ಕನಿಷ್ಠ 2 ಲಕ್ಷ ಪಿಂಚಣಿ ಸೌಲಭ್ಯ ನೀಡಬೇಕು ಎಂದು ಆಗ್ರಹಿಸಿದರು.

ಬಳಿಕ ತಹಸೀಲ್ದಾರ್ ಶಿವಕುಮಾರ್ ಕಾಸನೂರು ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಅಂಗನವಾಡಿ ನೌಕರರ ಸಂಘದ ತಾಲೂಕು ಅಧ್ಯಕ್ಷೆ ಕಮಲಾಕ್ಷಿ, ಬಿಳಿಗೆರೆ ಯೋಜನೆ ಅಂಗನವಾಡಿ ನೌಕರರ ಸಂಘದ ಅಧ್ಯಕ್ಷೆ ಲೀಲಾವತಿ, ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಚಂದ್ರಿಕಾ, ಹೇಮಾವತಿ, ಉಪಾಧ್ಯಕ್ಷೆ ಪುಷ್ಪಲತಾ, ಖಜಾಂಚಿ ಮಹದೇವಮ್ಮ ಸೇರಿದಂತೆ ಜೆನಿತ್ ಟೆಕ್ಸ್‌ಟೈಲ್ಸ್ ಎಂಪ್ಲಾಯಿಸ್ ಅಸೋಸಿಯೇಷನ್, ಸಂಯುಕ್ತ ಹೋರಾಟ ಕರ್ನಾಟಕ ಹಾಗೂ ವಿವಿಧ ಕಾರ್ಮಿಕ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	**(ದೂ: 2521923)**
5ಡಿ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಕಾಟೇರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
5ಡಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಒಂದು ಸರಳ ಪ್ರೇಮಕಥೆ (ಕ)	4 ಪ್ರದರ್ಶನಗಳು
ರಾಜಕಮಲ್	
ಸೈರನ್ (ತ)	4 ಪ್ರದರ್ಶನಗಳು
ಸಂಗಂ	
ಉಪಾಧ್ಯಕ್ಷ (ಕ)	4 ಪ್ರದರ್ಶನಗಳು
ಲಿಡೋ	
5ಡಿ (ಕ)	2 ಪ್ರದರ್ಶನಗಳು
ಕೆಟಿಎಂ (ಕ)	2 ಪ್ರದರ್ಶನಗಳು
ತಿಬ್ಬಾದೇವಿ	
5ಡಿ (ಕ)	4 ಪ್ರದರ್ಶನಗಳು
ಪ್ರಭಾ	
ಇ–ಮೇಲ್ (ಕ)	2 ಪ್ರದರ್ಶನಗಳು
ಲೇಡಿಸ್ ಬಾರ್ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಶಾಖಾಹಾರಿ (ಕ): ಬೆ.10.15ಕ್ಕೆ, ಕೆಟಿಎಂ (ಕ): ಮ.1.10ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಸಂ.4.15ಕ್ಕೆ, ಅಬ್ಬಬ್ಬ (ಕ): ರಾ.7.05ಕ್ಕೆ, ಭ್ರಮಯುಗಂ (ಮ): ರಾ.10ಕ್ಕೆ.
ಸ್ಕ್ರೀನ್ 2	ತುಂಡು (ಮ): ಬೆ.10.50ಕ್ಕೆ, ಬಾಬ್ ಮಾರ್ಲೆ: ಒನ್ ಲವ್ (ಇಂ): ಮ.1.40ಕ್ಕೆ, ರಾ.10.10ಕ್ಕೆ, ಕುಚ್ ಖಟ್ಟಾ ಹೋ ಜಾಯ್ (ಹಿಂ): ಸಂ.4.20ಕ್ಕೆ, ಪ್ರೇಮಲು (ಮ): ರಾ.7ಕ್ಕೆ.
ಸ್ಕ್ರೀನ್ 3	ಮಂಡ್ಯ ಹೈದ (ಕ): ಬೆ.10.15ಕ್ಕೆ, ಸೈರನ್ (ತ): ಮ.1.15ಕ್ಕೆ, ಮೇಡಮ್ ವೆಬ್ (ಇಂ): ಸಂ.4.35ಕ್ಕೆ, ರಾ.10ಕ್ಕೆ, ಭ್ರಮಯುಗಂ (ಮ): ರಾ.7.10ಕ್ಕೆ.
ಸ್ಕ್ರೀನ್ 4	ಸಾರಾಂಶ (ಕ): ರಾ.10.20ಕ್ಕೆ, ಉಪಾಧ್ಯಕ್ಷ (ಕ): ಮ.1.05ಕ್ಕೆ, ಫೈಟರ್ (ಹಿಂ): ಸಂ.4.10ಕ್ಕೆ, ಒಂದು ಸರಳ ಪ್ರೇಮಕಥೆ (ಕ): ರಾ.7.20ಕ್ಕೆ, ಊರು ಪೇರು ಭೈರವಕೋಣ (ತೆ): ರಾ.10.15ಕ್ಕೆ.

ಐನಾಕ್ಸ್ ಮೂವೀಸ್

ದೂ : 2533444 / 2433456

ಸ್ಕ್ರೀನ್ 1	ಉಪಾಧ್ಯಕ್ಷ (ಕ): ಬೆ.10.05ಕ್ಕೆ, ಮೇಡಮ್ ವೆಬ್ (ಇಂ): ಮ.1.20ಕ್ಕೆ, ರಾ.7.05ಕ್ಕೆ, ರಾ.9.40ಕ್ಕೆ, ಊರು ಪೇರು ಭೈರವಕೋಣ (ತೆ): ಮ.3.55ಕ್ಕೆ.
ಸ್ಕ್ರೀನ್ 2	ಮೇಡಮ್ ವೆಬ್ (ಇಂ): ಬೆ.9.55ಕ್ಕೆ, ಸೈರನ್ 108 (ತ): ಸಂ.4ಕ್ಕೆ, ರಾ.10.30ಕ್ಕೆ, ಉಪಾಧ್ಯಕ್ಷ (ಕ): ರಾ.7.15ಕ್ಕೆ.
ಸ್ಕ್ರೀನ್ 3	ಸೈರನ್ 108 (ತ): ಮ.12.15ಕ್ಕೆ, ಬಾಬ್ ಮಾರ್ಲೆ: ಒನ್ ಲವ್ (ಇಂ): ಸಂ.4.10ಕ್ಕೆ, ಪ್ರೇಮಲು (ಮ): ಸಂ.6.45ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ರಾ.10ಕ್ಕೆ.
ಸ್ಕ್ರೀನ್ 4	ಒಂದು ಸರಳ ಪ್ರೇಮಕಥೆ (ಕ): ಬೆ.10.05ಕ್ಕೆ, ಸಂ.4.20ಕ್ಕೆ, ಅಬ್ಬಬ್ಬ (ಕ): ಮ.1.15ಕ್ಕೆ, ತುಂಡು (ಮ): ರಾ.7.30ಕ್ಕೆ, ಭ್ರಮಯುಗಂ (ಮ): ರಾ.10.20ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್


ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಫೈಟರ್ (2ಡಿ)(ಹಿಂ): ಸಂ.6.35ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಬೆ.9.30ಕ್ಕೆ, ಮ.3.55ಕ್ಕೆ, ರಾ.7.10ಕ್ಕೆ, ರಾ.10.20ಕ್ಕೆ, ಉಪಾಧ್ಯಕ್ಷ (ಕ): ಮ.3.25ಕ್ಕೆ, ಅನ್ವೇಶಿಪಿನ್ ಕಂಡೆತುಂ (ಮ): ಸಂ.4.05ಕ್ಕೆ, ಸಾರಾಂಶ (ಕ): ಮ.1.15ಕ್ಕೆ, ಒಂದು ಸರಳ ಪ್ರೇಮಕಥೆ (ಕ): ಮ.12.15ಕ್ಕೆ, ಸೈರನ್ 108 (ತ): ಬೆ.10.10ಕ್ಕೆ, ಸಂ.4.20ಕ್ಕೆ, ರಾ.10.30ಕ್ಕೆ, ಮೇಡಮ್ ವೆಬ್ (ಇಂ): ಬೆ.10.50ಕ್ಕೆ, ಮ.1.25ಕ್ಕೆ, ಸಂ.4.35ಕ್ಕೆ, ರಾ.7.10ಕ್ಕೆ, ರಾ.9.45ಕ್ಕೆ, ಪ್ರೇಮಲು (ಮ): ಮ.12.40ಕ್ಕೆ, ರಾ.7.05ಕ್ಕೆ, ರಾ.10.20ಕ್ಕೆ, ಭ್ರಮಯುಗಂ (ಮ): ರಾ.10ಕ್ಕೆ, ಅಬ್ಬಬ್ಬ (ಕ): ಮ.2.55ಕ್ಕೆ, ವಾರನಂ ಆಯಿರಂ (ತ): ಸಂ.6ಕ್ಕೆ, ರವಿಕೆ ಪ್ರಸಂಗ (ಕ): ರಾ.9.50ಕ್ಕೆ


ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಯಜಮಾನ್ ಸಣ್ಣಮರಯ್ಯ ನಿಧನ




ಸುತ್ತೂರು, ಫೆ16– ಇಲ್ಲಿಗೆ ಸಮೀಪದ ರಂಗನಾಥಪುರ ಗ್ರಾಮದ ಹಿರಿಯ ಮುಖಂಡ ಸಣ್ಣಮರಯ್ಯ(95) ಶುಕ್ರವಾರ ನಿಧನರಾದರು. ಮೃತರು ತಾಪಂ ಮಾಜಿ ಅಧ್ಯಕ್ಷ ಪುಟ್ಟಣ್ಣ ಹಾಗೂ ಮೂವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಮಧ್ಯಾಹ್ನ 12 ಗಂಟೆಗೆ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ

ವೆಂಕಟೇಶ್ ಬಾಬು



ಹುಣಸೂರು, ಫೆ.16– ಪಟ್ಟಣದ ನಿವಾಸಿ ವೆಂಕಟೇಶ್ ಬಾಬು(51) ಶುಕ್ರವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಗರದ ತಾಲೂಕು ಕಚೇರಿ ಪಕ್ಕದಲ್ಲಿರುವ ಸ್ಮಶಾನದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವೆಂಕಟೇಶ್



ಸರಗೂರು, ಫೆ.16– ಪಟ್ಟಣದ ನಿವಾಸಿ ಟೈಲರ್ ವೆಂಕಟೇಶ್ (57) ಶುಕ್ರವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಪಟ್ಟಣದ ತೋಟವೀರ ಸಮಾಜದ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಹದೇವಪ್ಪ



ಹುಣಸೂರು, ಫೆ16– ನಗರದ ಸೇತುವೆ ನಿವಾಸಿ ಲೇ.ವೀರಪ್ಪಶೆಟ್ಟಿ ಅವರ ಪುತ್ರ ಮಹದೇವಪ್ಪ(58) ಬುಧವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಗರದ ತಾಲೂಕು ಕಚೇರಿ ಪಕ್ಕದಲ್ಲಿರುವ ಸ್ಮಶಾನದಲ್ಲಿ ನೆರವೇರಿತು.

ವೈಕುಂಠ ಸಮಾರಾಧನೆ ಆಹ್ವಾನ ಪತ್ರಿಕೆ



ಶ್ರೀಮತಿ ಹೆಚ್.ಎಂ. ಜಯಮ್ಮನವರು

(ದಿವಂಗತ ಡಾ. ಬಿ. ಮಲ್ಲಪ್ಪನವರ ಧರ್ಮಪತ್ನಿ)

ಇವರು ತಾ|| 08-02-2024ನೇ ಗುರುವಾರ ಮಧ್ಯಾಹ್ನ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧ ದಿನಾಂಕ 18-02-2024ನೇ ಭಾನುವಾರ, ಬೆಳಗ್ಗೆ 9.00 ಕ್ಕೆ ಹಾಲು ತುಪ್ಪ, ಹಾಗೂ ವೈಕುಂಠ ಸಮಾರಾಧನೆಯನ್ನು ಹೊಸಹಳ್ಳಿ, ಬೆಳಕವಾಡಿ ಹೋಬಳಿ, ಮಳವಳ್ಳಿ ತಾಲ್ಲೂಕು ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತರು: ಶ್ರೀಮತಿ ಬಿ.ಎಂ. ಅನುಸೂಯ ಅನಂತರಾಮು, ಶ್ರೀ ಬಿ.ಎಂ. ರವಿಶಂಕರ್, ಶ್ರೀಮತಿ ಬಿ.ಎಂ. ವಾಣಿ ಶಿವರಾಮು, ಶ್ರೀ ಬಿ.ಎಂ. ಶಿವಶಂಕರ್ ಹಾಗೂ ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಬೋರಿಮಾದಯ್ಯನವರ ಕುಟುಂಬಸ್ಥರು

ಭೋಜನ : ಮಧ್ಯಾಹ್ನ 12.30 ಘಂಟೆಗೆ

ಮೈಸೂರು ಮಿತ್ರ — ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

6ನೇ ವರ್ಷದ ಸವಿನೆನಪು



ಶ್ರೀಮಾನ್ ಮರಿಸ್ವಾಮಿರವರು

(ನಿವೃತ್ತರು ಪೊಲೀಸ್ ಇಲಾಖೆ)

ನಿಧನ: 17-02-2018

ಸದಾ ನಿಮ್ಮ ನೆನಪಿನಲ್ಲಿರುವ
ಪತ್ನಿ ಜಯಲಕ್ಷ್ಮಿ ಮತ್ತು ಮಕ್ಕಳು, ಮೊಮ್ಮಕ್ಕಳು

ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀಮತಿ ವಿಜಯ (ವಿಜಯಮ್ಮ) ನವರು

ಜನನ : 20-01-1966 ಮರಣ : 06-02-2024

#8883, 2ಮತ್ತು3ನೇ ಘಟ್ಟ, 4ನೇ ಹಂತ, ವಿಜಯನಗರ, ಮೈಸೂರು ಇಲ್ಲಿ ವಾಸವಾಗಿರುವ ಶ್ರೀ ಶಿವಣ್ಣ ಮಾಡುವ ವಿಜ್ಞಾಪನೆಗಳು. ನನ್ನ ಧರ್ಮಪತ್ನಿಯಾದ **ಶ್ರೀಮತಿ ವಿಜಯ (ವಿಜಯಮ್ಮನವರು)** ದಿನಾಂಕ 06-02-2024ನೇ ಮಂಗಳವಾರದಂದು ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧವಾಗಿ ದಿನಾಂಕ : 17-02-2024ನೇ ಶನಿವಾರ ಬೆಳಿಗ್ಗೆ 11-00 ಗಂಟೆಗೆ ಉತ್ತರ ಕ್ರಿಯಾದಿ ಕಾರ್ಯವನ್ನು ನಮ್ಮ ಸ್ವಗೃಹದಲ್ಲಿ ಏರ್ಪಡಿಸಿದ್ದು, ಆಹ್ವಾನ ಪತ್ರಿಕೆ ತಲುಪದಿದ್ದವರು ಇದನ್ನೇ ಆಹ್ವಾನ ಪತ್ರಿಕೆ ಎಂದು ಪರಿಗಣಿಸಿ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು

ಮೃತರ ಮಗ ಮಂಜುನಾಥ್ ಎಸ್. (ಲೇಔಟ್ ಮಂಜು) ಸ್ನೇಹಿತರು ಹಾಗೂ ಕುಟುಂಬವರ್ಗದವರು

ಭೋಜನ ಮಧ್ಯಾಹ್ನ 12:00 ಕ್ಕೆ

ಮೈಸೂರು ಮಹಾನಗರಪಾಲಿಕೆ

ಕಾರ್ಯಪಾಲಕ ಅಭಿಯಂತರವರ ಕಛೇರಿ,
ನೀಸ&ಒಚ (ಪಶ್ಚಿಮ) ವಿಭಾಗ, ವಾವಿನೀಸ ಆವರಣ, ಯಾದವಗಿರಿ, ಮೈಸೂರು.

ಟೆಂಡರ್ ಪ್ರಕಟಣೆ ಸಂಖ್ಯೆ: ಮೈನಪಾ/ಕಾಇಂ/ನೀಸ&ಒಚ(ಪಶ್ಚಿಮ)/ಟಿಎನ್–15/1828/2023–24 ದಿನಾಂಕ:16.02.2024

ಅಲ್ಪಾವಧಿ/ದೀರ್ಘಾವಧಿ ಟೆಂಡರ್ ಪ್ರಕಟಣೆ
ಕರ್ನಾಟಕ ಸರ್ಕಾರದ ಕೆಪಿಪಿ ಪೋರ್ಟಲ್ ಮುಖಾಂತರ ಮಾತ್ರ

ಮೈಸೂರು ಮಹಾನಗರ ಪಾಲಿಕೆಯ ವಿವಿಧ ಅನುದಾನಗಳಲ್ಲಿ KTPP ನಿಯಮಗಳಿಗೆ ಒಳಪಟ್ಟಂತೆ ಟೆಂಡರ್‌ಗಳಿಗೆ ಕರ್ನಾಟಕ ಸರ್ಕಾರದ ಕೆಪಿಪಿ ಪೋರ್ಟಲ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ವಿವರ ಈ ಕೆಳಕಂಡಂತಿರುತ್ತದೆ.

ಕ್ರ ಸಂ	ವಿವರ	ಕಾಮಗಾರಿಗಳು	ಟೆಂಡರ್ ಮೊತ್ತ (ರೂ.ಲಕ್ಷಗಳಲ್ಲಿ)	ಸಂಜೆ 5.30 ಗಂಟೆ ನಂತರ ಕೆಪಿಪಿ ಪೋರ್ಟಲ್ ನಲ್ಲಿ ಟೆಂಡರ್ ಚಾಲ್ತಿಗೆ ಬರುವ ದಿನಾಂಕ	ಸಂಜೆ 4.30 ಗಂಟೆ ಒಳಗೆ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ	ಸಂಜೆ 4.30 ಗಂಟೆ ನಂತರ ಟೆಂಡರ್/ತಾಂತ್ರಿಕ ಬಿಡ್ ತೆರೆಯುವ ದಿನಾಂಕ
1	Kw-1	04 ಸಂಖ್ಯೆ	27.10	19.02.2024	05.03.2024	06.03.2024
2	Service Tender	01 ಸಂಖ್ಯೆ	37.70	19.02.2024	05.03.2024	06.03.2024
3	Kw-1 (ಅಲ್ಪಾವಧಿ ಟೆಂಡರ್)	01 ಸಂಖ್ಯೆ	10.00	19.02.2024	26.02.2024	27.02.2024
4	Kw-2 (ಅಲ್ಪಾವಧಿ ಟೆಂಡರ್)	03 ಸಂಖ್ಯೆ	90.15	17.02.2024	26.02.2024	27.02.2024

ವಿಶೇಷ ಸೂಚನೆ: ಮುಂದೆ ಯಾವುದೇ ಸೂಚನೆ/ಬದಲಾವಣೆ/ತಿದ್ದುಪಡಿಗಳಿದ್ದಲ್ಲಿ ಕರ್ನಾಟಕ ಸರ್ಕಾರದ ಕೆಪಿಪಿ ಪೋರ್ಟಲ್‌ನಲ್ಲಿ ಅಥವಾ ಪತ್ರಿಕಾ ಪ್ರಕಟಣೆ ಹೊರಡಿಸಲಾಗುವುದು.

ಸಹಿ/–ಕಾರ್ಯಪಾಲಕ ಅಭಿಯಂತರರು, ನೀಸ&ಒಚ (ಪಶ್ಚಿಮ) ವಿಭಾಗ, ಮೈಸೂರು ಮಹಾನಗರ ಪಾಲಿಕೆ, ಮೈಸೂರು